ಸಂಪುಟ: 21, ಸಂಚಿಕೆ: 134, ಪುಟಗಳು: 8, ಶುಕ್ರವಾರ, 23 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಶುಕ್ರವಾರ 23, ಫೆಬ್ರವರಿ -2024)

- ಶ್ರೀ ಶೋಭಕೃತನಾಮ ಸಂವತ್ಸರ
- ಉತ್ತರಾಯಣ, ಶಿಶಿರ ಋತು,
- ಮಾಘ ಮಾಸ, ಶುಕ್ಲ ಪಕ್ಷ,
- ಚತುರ್ದಶಿ / ಪೌರ್ಣಮಿ,
- ಶುಕ್ರವಾರ, ಆಶ್ಲೇಷ ನಕ್ಷತ್ರ.
- ರಾಹುಕಾಲ: 11:09 ರಿಂದ 12:37
- ಗುಳಿಕಕಾಲ: 08:12 ರಿಂದ 09:40
- ಯಮಗಂಡಕಾಲ: 03:34 ರಿಂದ 05:03

# ಬೆಂಗಳೂರಿನಲ್ಲಿ 2ನೇ ಹೈಟೆಕ್ ನಿಮ್ಹಾನ್ಸ್ ಆಸ್ಪತ್ರೆ

## ಶುಭ ಸುದ್ದಿ ನೀಡಿದ ಸಚಿವ ಶರಣ ಪ್ರಕಾಶ್ ಪಾಟೀಲ್

**ಬೆಂಗಳೂರು:** ಸಿಲಿಕಾನ್ ಸಿಟಿ ಬೆಂಗಳೂರಿಗರಿಗೆ ವೈದ್ಯಕೀಯ ಶಿಕ್ಷಣ ಸಚಿವ ಶರಣ ಪ್ರಕಾಶ್ ಪಾಟೀಲ್ ಶುಭ ಸುದ್ದಿ ನೀಡಿದ್ದಾರೆ. ಉತ್ತರ ಬೆಂಗಳೂರಿನಲ್ಲಿ ಎರಡನೇ ಹೈಟೆಕ್ ನಿಮ್ಹಾನ್ಸ್ ಆಸ್ಪತ್ರೆತಲೆ ಎತ್ತುತ್ತಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. 40 ಎಕರೆ ಜಾಗದಲ್ಲಿ ಮಲ್ಟಿ ಸೂಪರ್ ಸ್ಪೆಷಾಲಿಟಿ ನಿಮ್ಹಾನ್ಸ್ ಆಸ್ಪತ್ರೆ ನಿರ್ಮಾಣವಾಗುತ್ತಿದೆ. ನಗರದಲ್ಲಿ ರಸ್ತೆ ಅಪಘಾತದಿಂದ ನರ ಹಾಗೂ ಬ್ರೈನ್ ಸಮಸ್ಯೆಯಿಂದ ಬಳಲುತ್ತಿರುವವರ ಸಂಖ್ಯೆ ಹೆಚ್ಚಾಗುತ್ತಿದೆ. ಇದುವೇ ಸಾವಿರಾರು ಜನರು ಸಾವಿಗೆ ಕಾಣವಾಗುತ್ತಿದೆ ಎಂದು ಸಚಿವರು ತಿಳಿಸಿದರು.

ಮಾನಸಿಕ ಆರೋಗ್ಯ ಮತ್ತು ನರ ಸಮಸ್ಯೆಗಳಿಂದ ಜನರು ಜೀವ ಕಳೆದುಕೊಳ್ಳುತ್ತಿದ್ದಾರೆ. ಹೀಗಾಗಿ ಬೆಂಗಳೂರಿನಲ್ಲಿ ದೇಶದ ಅತ್ಯಂತ ಪ್ರತಿಷ್ಠಿತ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆಯಾಗಿರುವ ನಿಮ್ಹಾನ್ಸ್ ಎರಡನೇ ಘಟಕ ಸ್ಥಾಪನೆ ಮಾಡುತ್ತಿದ್ದೇವೆ ಎಂದು ಅವರು ತಿಳಿಸಿದ್ದಾರೆ.

ಸದ್ಯ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿರುವ ನಿಮ್ಹಾನ್ಸ್



ಆಸ್ಪತ್ರೆಯ ಮೇಲೆ ಒತ್ತಡ ಸಾಕಷ್ಟು ಹೆಚ್ಚಾಗಿದೆ. ಬೆಡ್ ಸಮಸ್ಯೆಗಳು ಸೇರಿದಂತೆ ನಾನಾ ರೀತಿಯ ಸಮಸ್ಯೆಗಳು ಶುರುವಾಗಿವೆ. ಸದ್ಯ ಇರುವ ನಿಮ್ಹಾನ್ಸ್ ಆಸ್ಪತ್ರೆಗೆ ರಾಜ್ಯದ ಜನರು ಮಾತ್ರವಲ್ಲದೆ, ಕೇರಳ, ಆಂಧ್ರಪ್ರದೇಶ, ತಮಿಳನಾಡಿನ ಸಾಕಷ್ಟು ಜನ ಚಿಕಿತ್ಸೆಗಾಗಿ ಬರುತ್ತಿದ್ದಾರೆ. ಇದರಿಂದ ಒತ್ತಡ ವಿಪರೀತ ಹೆಚ್ಚಾಗಿ ಸಾಕಷ್ಟು ಸಮಸ್ಯೆಗಳು ಎದುರಾಗಿವೆ ಎಂದು ಸಚಿವರು ಹೇಳಿದ್ದಾರೆ.

**ಕೇಂದ್ರ, ಸರ್ಕಾರದಿಂದ ಹಸಿರು ನಿಶಾನೆ:** ಉತ್ತರ ಬೆಂಗಳೂರಿನ ಜನರಿಗೆ ಆ ಭಾಗದಲ್ಲಿ ಯಾವುದೇ ಮಲ್ಟಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಇಲ್ಲ. ಆ ಭಾಗದಲ್ಲಿ ಉತ್ತಮ ಆಸ್ಪತ್ರೆಯ ಕೊರತೆಯಿದೆ. ಪರಿಣಾಮವಾಗಿ ರೋಗಿಗಳು ಪರದಾಟ ಪಡುವಂತಾಗಿದೆ. ಹೀಗಾಗಿ ವೈದ್ಯಕೀಯ ಶಿಕ್ಷಣ ಸಂಸ್ಥೆಯು ಕೇಂದ್ರ, ಆರೋಗ್ಯ ಇಲಾಖೆಗೆ ನಿಮ್ಹಾನ್ಸ್ ಎರಡನೇ ಮಲ್ಟಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಬೇಡಿಕೆ ಇಟ್ಟಿತ್ತು. ಇದಕ್ಕೆ ಕೇಂದ್ರ, ಆರೋಗ್ಯ ಇಲಾಖೆ ಹಸಿರು ನಿಶಾನೆ ತೋರಿದೆ.

**ಎಲ್ಲಿ ನಿರ್ಮಾಣವಾಗುತ್ತಿದೆ ನಿಮ್ಹಾನ್ಸ್ ಎರಡನೇ ಘಟಕ:** ನಿಮ್ಹಾನ್ಸ್ ಎರಡನೇ ಘಟಕಕ್ಕೆ ರಾಜ್ಯ ಸರ್ಕಾರ ಈಗಾಗಲೇ ಭೂಮಿ ನೀಡಿದೆ. ಬೆಂಗಳೂರಿನ ಕ್ಯಾನ್ಸನಹಳ್ಳಿಯಲ್ಲಿ ಸರ್ಕಾರ ಒದಗಿಸಿರುವ ಸುಮಾರು 40 ಎಕರೆ ಪ್ರದೇಶದಲ್ಲಿ ನಿಮ್ಹಾನ್ಸ್ ಆಸ್ಪತ್ರೆ ತಲೆ ಎತ್ತುತ್ತಿದೆ ಎಂದು ಅವರು ತಿಳಿಸಿದ್ದಾರೆ. ನಿಮ್ಹಾನ್ಸ್ ಆಸ್ಪತ್ರೆ ದೇಶದಲ್ಲಿಯೇ ಸಾಕಷ್ಟು ಅತ್ಯಾಧುನಿಕ ತಂತ್ರಜ್ಞಾನಗಳನ್ನು ಒಳಗೊಂಡ ವಿಶೇಷ ಆಸ್ಪತ್ರೆಯಾಗಿದೆ. ನರ ವಿಭಾಗ, ಮೆದುಳಿನ ಶಸ್ತ್ರಚಿಕಿತ್ಸೆಗೆ ದೇಶದಲ್ಲೇ ಪ್ರಸಿದ್ಧವಾಗಿದೆ.

# ಸರ್ಕಾರದ ವಿರುದ್ಧ ಸಿಡಿದೆದ್ದ ಮಂಗಳಮುಖಿಯರು!



**ಬೆಂಗಳೂರು:** ಕಾಂಗ್ರೆಸ್ ಸರ್ಕಾರವು 5 ಗ್ಯಾರಂಟಿಗಳನ್ನು ಜಾರಿ ಮಾಡಿದ್ದೇವೆ ಎಂದು ಹೇಳುತ್ತಿದೆ. ಆದರೆ ಪಂಚಗ್ಯಾರಂಟಿಗಳಲ್ಲಿ ಒಂದಾದ ಈ ಗೃಹಲಕ್ಷ್ಮಿ ಯೋಜನೆ ಮಂಗಳಮುಖಿಯರಿಗೆ ಇದುವರೆಗೂ ತಲುಪಿಲ್ಲ. ಇದರಿಂದಾಗಿ ಸರ್ಕಾರದ ವಿರುದ್ಧ ಮಂಗಳಮುಖಿಯರು ಸಿಡಿದೆದ್ದಿದ್ದಾರೆ.

ಹೌದು. ಸರ್ಕಾರದ ಪ್ರಮುಖ ಗ್ಯಾರಂಟಿಗಳಲ್ಲಿ ಒಂದಾದಂತ ಗೃಹಲಕ್ಷ್ಮಿ ಯೋಜನೆ ಜುಲೈ ತಿಂಗಳಲ್ಲಿ ಆರಂಭವಾದ್ರೂ ಇನ್ನೂ ಸಾವಿರಾರು ಮಹಿಳೆಯರ ಖಾತೆಗೆ ಒಂದು ತಿಂಗಳ ಹಣವೂ ಜಮೆಯಾಗಿಲ್ಲ.

ಪುಟ 2

## ಸಂಕ್ಷಿಪ್ತ ಸುದ್ದಿ

### ರಾಮಭಕ್ತರಿದ್ದ ರೈಲಿಗೆ ಬೆಂಕಿ ಹಚ್ಚೇನಿ ಓರ್ವ ವಶಕ್ಕೆ



**ಗದಗ:** ಅಯೋಧ್ಯೆ ಧಾಮ ರೈಲಿಗೆ ಬೆಂಕಿ ಹಚ್ಚುತ್ತೇನೆ ಎಂದು ಬೆದರಿಕೆ ಒಡ್ಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅನುಮಾನದ ಮೇರೆಗೆ ಗದಗ ನಿಲ್ದಾಣದಲ್ಲಿ ಓರ್ವನನ್ನು ರೈಲ್ವೆ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಪ್ರಕರಣ ಸಂಬಂಧ ಅನ್ಯಕೋಮಿನ ನಾಲ್ವರು ಯುವಕರು ಪರಾರಿಯಾಗಿದ್ದು, ಅವರ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ.

ಪುಟ 2

### ಪ್ಲಾಸ್ಟಿಕ್ ಗೋಡೌನ್‌ಗೆ ಬೆಂಕಿ 30ಕ್ಕೂ ಹೆಚ್ಚು ಆಟೋಗಳು ಭಸ್ಮ



**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಮತ್ತೊಂದು ಭಾರಿ ಬೆಂಕಿ ಅವಘಡ ಸಂಭವಿಸಿದೆ. ನಾಯಂಡಹಳ್ಳಿಯ ಗಂಗೋಂಡನಹಳ್ಳಿ ಯಲ್ಲಿದ್ದ ಪ್ಲಾಸ್ಟಿಕ್ ಗೋಡೌನ್ ಹೊತ್ತಿ ಉರಿದಿದೆ. ಬೆಂಕಿಯ ತೀವ್ರತೆಗೆ ಮೂವತ್ತಕ್ಕೂ ಹೆಚ್ಚು ಆಟೋಗಳು, ಸರಕುಗಳನ್ನು ಸಾಗಿಸುವ ವಾಹನಗಳು ಸುಟ್ಟು ಹೋಗಿದೆ. ಅಕ್ಕಪಕ್ಕದ ಗೋಡೌನ್‌ಗಳಿಗೂ ಬೆಂಕಿ ಆವರಿಸುವ ಸಾಧ್ಯತೆ ಇದ್ದ ಕಾರಣ ಸುಮಾರು ಹತ್ತಕ್ಕೂ ಹೆಚ್ಚು ಅಗ್ನಿಶಾಮಕ ವಾಹನಗಳು ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸಿವೆ. ರಿಜ್ವಾನ್ ಮಾಲೀಕತ್ವದ ಗೋಡೌನ್‌ನ ಒಂದು ಭಾಗದ ಖಾಲಿ ಜಾಗದಲ್ಲಿ ವಾಹನಗಳನ್ನು ಪಾರ್ಕ್ ಮಾಡಲಾಗಿತ್ತು. ಇದರಿಂದಾಗಿ ವಾಹನಗಳು ಸುಟ್ಟು ಹೋಗಿವೆ. ಅಕ್ಕಪಕ್ಕದಲ್ಲೂ ಹತ್ತಾರು ಪ್ಲಾಸ್ಟಿಕ್ ಗೋಡೌನ್ ಇದ್ದ ಕಾರಣ ಅಗ್ನಿಶಾಮಕ ದಳದ ಸಿಬ್ಬಂದಿ ಚುರುಕಿನ ಕಾರ್ಯಾಚರಣೆ ನಡೆಸಿ ಬೆಂಕಿಯನ್ನು ನಂದಿಸಿದ್ದಾರೆ.

## ದೇವಸ್ಥಾನಗಳ ಹುಂಡಿ ಹಣ ಹಿಂದೂ ಧಾರ್ಮಿಕ ಆಚರಣೆಗೆ ಮಾತ್ರ ಬಳಕೆ

# ಸಿದ್ದರಾಮಯ್ಯ ಸ್ಪಷ್ಟನೆ

**ಬೆಂಗಳೂರು:** ಹಿಂದೂಯೇತರ ಸಮುದಾಯಗಳಿಗೆ ಹಿಂದೂ ದೇವಸ್ಥಾನಗಳ ಹಣವನ್ನು ಬಳಸಲಾಗುತ್ತದೆ ಮತ್ತು ಹಿಂದೂ ದೇವಸ್ಥಾನಗಳ ಮೇಲೆ ಅನ್ಯಾಯಯುತ ತೆರಿಗೆ ಹಾಕಲಾಗುತ್ತಿದೆ ಎನ್ನುವ ಬಿಜೆಪಿ ನಾಯಕರ ಆರೋಪ ಸಂಪೂರ್ಣ ಕಪೋಲಕಲ್ಪಿತವಾಗಿದ್ದು ಅಮಾಯಕ ಹಿಂದೂಗಳನ್ನು ನಮ್ಮ ಸರ್ಕಾರದ ವಿರುದ್ಧ ಎತ್ತಿಕಟ್ಟುವ ದುರುದ್ದೇಶದಿಂದ ಬಿಜೆಪಿ ನಾಯಕರು ಇಂತಹ ಕ್ಷುಲಕ ಪ್ರಯತ್ನ ಮಾಡುತ್ತಿದ್ದಾರೆ'' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಾಗ್ದಾಳಿ ಮಾಡಿದ್ದಾರೆ. ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕ ವಿಚಾರವಾಗಿ ಬಿಜೆಪಿ ನಾಯಕ ಆರೋಪಕ್ಕೆ ತಿರುಗೇಟು ನೀಡಿದ ಅವರು, ''ದೇವಸ್ಥಾನಗಳ ಹುಂಡಿಗಳಲ್ಲಿ ಸಂಗ್ರಹವಾಗುವ ಹಣವನ್ನು ಹಿಂದೂ ಧರ್ಮದ ಧಾರ್ಮಿಕ ಆಚರಣೆಗಳಿಗೆ ಸಂಬಂಧಪಟ್ಟಂತೆ ಮಾತ್ರವೇ ಬಳಸಲಾಗುತ್ತದೆ'' ಎಂದು ಸ್ಪಷ್ಟನೆ ನೀಡಿದ್ದಾರೆ.

''ಈ ನಿಧಿಯು 2003ರಲ್ಲಿ ಕಾಯಿದೆಯು ಜಾರಿಗೆ ಬಂದಾಗಿನಿಂದ ಧಾರ್ಮಿಕ ಕಾರ್ಯಗಳಿಗೆ ಮಾತ್ರವೇ ಬಳಕೆಯಾಗುತ್ತಿದ್ದು ಭವಿಷ್ಯದಲ್ಲಿಯೂ ಅದಕ್ಕೆ ಮಾತ್ರವೇ ಬಳಕೆಯಾಗಲಿದೆ. ಬೇರೆ ಯಾವುದೇ ಧರ್ಮದ ಜನರ ಅನುಕೂಲಕ್ಕಾಗಿ ಈ ಹಣವನ್ನು ಬಳಸಲಾಗುವುದಿಲ್ಲ. ದೇವಸ್ಥಾನಗಳ ಹಣವನ್ನು ಕೇವಲ ಹಿಂದೂ ಸಮುದಾಯದ ಏಳಿಗೆ ಮತ್ತು ಕಲ್ಯಾಣಕ್ಕೆ ಮಾತ್ರವೇ ಬಳಸಬೇಕೆನ್ನುವ ಬಾಧ್ಯತೆಯನ್ನು ಈ ನಿಧಿಯ ನಿಬಂಧನೆಗಳಲ್ಲಿ ಒತ್ತಿ ಹೇಳಲಾಗಿದೆ.'' ಎಂದು ಕಿಡಿ ಕಾರಿದ್ದಾರೆ.

''ವಿಧಾನಸಭೆಯಲ್ಲಿ ಅಂಗೀಕರಿಸಲಾದ ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕವನ್ನು ರಾಜಕೀಯ ಕಾರಣಗಳಿಗಾಗಿ ತಪ್ಪಾಗಿ ಜನತೆಯ ಮುಂದಿರಿಸುವ ಪ್ರಯತ್ನವನ್ನು ಬಿಜೆಪಿ ಇಂದು ಮಾಡುತ್ತಿದೆ.

ಪುಟ 2



**ತಿದ್ದುಪಡಿಗೂ ಮುನ್ನ**

- » ನಿವ್ವಳ ಆದಾಯ ಹತ್ತು ಲಕ್ಷ ರೂ. ಮೀರುವ ದೇವಸ್ಥಾನಗಳ ಒಟ್ಟು ವಾರ್ಷಿಕ ಆದಾಯದಿಂದ ಶೇ.10
- » ನಿವ್ವಳ ವಾರ್ಷಿಕ ಆದಾಯ ಐದು ಲಕ್ಷ ರೂ. ಗಿಂತ ಹೆಚ್ಚಿದ್ದು ಹತ್ತು ಲಕ್ಷ ರೂ. ಮೀರದ ದೇವಸ್ಥಾನಗಳ ವಾರ್ಷಿಕ ಆದಾಯದಿಂದ ಶೇ.5 ಹಾಗೂ
- » ರಾಜ್ಯ ಸರ್ಕಾರದಿಂದ ದೊರೆಯುತ್ತಿದ್ದ ಅನುದಾನ.

**ತಿದ್ದುಪಡಿಯ ನಂತರ**

- » ಒಂದು ಕೋಟಿ ರೂ. ನಿವ್ವಳ ಆದಾಯ ಮೀರುವ ದೇವಸ್ಥಾನಗಳ ಒಟ್ಟು ವಾರ್ಷಿಕ ಆದಾಯದಿಂದ ಶೇ.10
- » ಹತ್ತು ಲಕ್ಷ ರೂ ನಿವ್ವಳ ಆದಾಯಕ್ಕಿಂತ ಹೆಚ್ಚಿದ್ದು ರೂ. 1 ಕೋಟಿ ಮೀರದ ಸಂಸ್ಥೆಗಳಿಂದ ಶೇ.5 ಹಾಗೂ
- » ರಾಜ್ಯ ಸರ್ಕಾರದಿಂದ ದೊರೆಯುವ ಅನುದಾನ.

# ಡಿಸಿಎಂ ಡಿನ್ನರ್ ಮೀಟಿಂಗ್‌ನಲ್ಲಿ ಪರಿಷತ್ ಸದಸ್ಯರ ಅಸಮಾಧಾನ

**ಬೆಂಗಳೂರು:** ನಗರದ ಖಾಸಗಿ ಹೋಟೆಲ್‌ನಲ್ಲಿ ನಿನ್ನೆ ವಿಧಾನಪರಿಷತ್‌ನ ಕಾಂಗ್ರೆಸ್ ಸದಸ್ಯರ ಜೊತೆ ಡಿಸಿಎಂ ಡಿಕೆ ಶಿವಕುಮಾರ್ ಡಿನ್ನರ್ ಮೀಟಿಂಗ್ ಮಾಡಿದ್ದಾರೆ. ಈ ವೇಳೆ ಪರಿಷತ್ ಸದಸ್ಯರು ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ಅಹವಾಲುಗಳ ದೊಡ್ಡ ಪಟ್ಟಿಯನ್ನೇ ಪರಿಷತ್ ಸದಸ್ಯರು ಮುಂದಿಟ್ಟಿದ್ದಾರೆ. ರಾಜಕೀಯವಾಗಿ ಸ್ಥಾನಮಾನ ನೀಡದೆ ಕಡೆಗಣಿಸಲಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ನಿಗಮ ಮಂಡಳಿ ನೀಡದೆ, ಅನುದಾನವನ್ನೂ ನೀಡದಿದ್ದಕ್ಕೆ ತೀವ್ರ ಆಕ್ಷೇಪ ಹೊರಹಾಕಿದ್ದು, ರಾಜಕೀಯವಾಗಿ ಎಂಎಲ್‌ಸಿಗಳನ್ನು ಮೂಲೆಗುಂಪು ಮಾಡಲಾಗುತ್ತಿದೆ ಎಂದು ಕಿಡಿಕಾರಿದ್ದಾರೆ.

ಲೋಕಸಭೆ ಚುನಾವಣೆ ಟಿಕೆಟ್ ಬಗ್ಗೆಯೂ ಎಂಎಲ್‌ಸಿಗಳು ಚರ್ಚೆ ಮಾಡಿದ್ದಾರೆ. ಪಕ್ಷದ ನಿಷ್ಠಾವಂತರಿಗೆ ಟಿಕೆಟ್ ನೀಡುವಂತೆ ಪರಿಷತ್ ಸದಸ್ಯರು ಒತ್ತಾಯ ಮಾಡಿದ್ದು, ಸಚಿವರ ಮಕ್ಕಳಿಗೆ ಟಿಕೆಟ್ ನೀಡುವ ಬಗ್ಗೆ ಗಮನ ಹರಿಸಬೇಡಿ ಎಂದು ಮನವಿ ಕೂಡ ಮಾಡಿದ್ದಾರೆ.

ಗಂಭೀರವಾಗಿ ಕೆಲಸ ಮಾಡುವ ಅಭ್ಯರ್ಥಿಗಳನ್ನೇ ಕಣಕ್ಕಿಳಿಸಿ. ಶಾಸಕರಿಗೆ ಅನುದಾನ ನೀಡುವಂತೆ ತಮಗೂ ಅನುದಾನ ನೀಡಿ ಎಂದು ಆಗ್ರಹಿಸಿದ್ದಾರೆ. ಈ ಎಲ್ಲಾ



ವಿಚಾರಗಳನ್ನು ಸಿಎಂ ಸಿದ್ದರಾಮಯ್ಯ ಗಮನಕ್ಕೆ ತರುವುದಾಗಿ ಡಿಸಿಎಂ ಡಿ.ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ.

**ಡಿ.ಕೆ.ಶಿವಕುಮಾರ್ ಎಚ್ಚರಿಕೆ:** ವಿಧೇಯಕ ಮಂಡಿಸುವಾಗ ಆಡಳಿತ ಪಕ್ಷದ ಸದಸ್ಯರ ಗೈರುಹಾಜರಿ ಬಗ್ಗೆ ಚರ್ಚೆ ಮಾಡಲಾಗಿದ್ದು, ಗೈರಾಗುತ್ತಿರುವ ಪರಿಷತ್ ಸದಸ್ಯರಿಗೆ ಡಿ.ಕೆ.ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ. ಇನ್ನು ವಿಧಾನಪರಿಷತ್‌ನಲ್ಲಿ ವಿಧೇಯಕಗಳಿಗೆ ಹಿನ್ನಡೆ ಆಗುತ್ತಿರುವ ಬಗ್ಗೆ ಆಕ್ಷೇಪ ವ್ಯಕ್ತಪಡಿಸಲಾಗಿದೆ. ಶಾಸಕರಂತೆ ಟಾರ್ಗೆಟ್ 20ಗೆ ಶ್ರಮಿಸುತ್ತಿರುವುದಾಗಿ ಎಂಎಲ್‌ಸಿಗಳು ಮನವರಿಕೆ ಮಾಡಿದ್ದಾರೆ.

ಪುಟ 2

## ರಾಜ್ಯಸಭೆಗೆ ಮತಹಾಕಲು ಬಿಜೆಪಿಯಿಂದ

# ಮೂರು ಶಾಸಕರ ಬ್ಯಾಚ್

**ಬೆಂಗಳೂರು:** ಕರ್ನಾಟಕದ 4 ರಾಜ್ಯಸಭಾ ಸ್ಥಾನಗಳಿಗೆ ಐದನೇ ಅಭ್ಯರ್ಥಿ ಸ್ಪರ್ಧಿಸಿರುವುದರಿಂದ ರಾಜ್ಯ ರಾಜಕಾರಣದಲ್ಲಿ ಲೆಕ್ಕಾಚಾರಗಳು ಗರಿಗೆದರಿವೆ. ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಕುಪೇಂದ್ರ ರೆಡ್ಡಿ ಅವರನ್ನು ಹೇಗಾದರೂ ಮಾಡಿ ಗೆಲ್ಲಿಸಿಕೊಳ್ಳಬೇಕೆಂದು ಉಭಯ ಪಕ್ಷಗಳು ಕಸರತ್ತು ನಡೆಸಿವೆ. ಈ ಸಂಬಂಧ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಗುರುವಾರ ಸಂಜೆ ಲೋಕಸಭಾ ಚುನಾವಣಾ ರಾಜ್ಯ ಉಸ್ತುವಾರಿ ರಾಧಾಮೋಹನ್ ದಾಸ್ ನೇತೃತ್ವದಲ್ಲಿ ಬಿಜೆಪಿ ಶಾಸಕಾಂಗ ಸಭೆ ನಡೆಯಿತು. ರಾಜ್ಯಸಭೆ ಹಾಗೂ



ಲೋಕಸಭಾ ಚುನಾವಣೆಗೆ ಪಕ್ಷ ಸಂಘಟನೆ ಸೇರಿದಂತೆ ಹಲವು ರಣತಂತ್ರಗಳ ಬಗ್ಗೆ ಚರ್ಚಿಸಲಾಯ್ತು.

ಬಿಜೆಪಿ ಶಾಸಕಾಂಗ ಪಕ್ಷದ ನಾಯಕ ಆರ್. ಅಶೋಕ್, ಬಿಜೆಪಿ ಲೋಕಸಭಾ ಚುನಾವಣಾ ಉಸ್ತುವಾರಿ ರಾಧಾ ಮೋಹನ್ ದಾಸ್ ಅಗರವಾಲ್, ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಸೇರಿದಂತೆ ಶಾಸಕರು ಸಭೆಯಲ್ಲಿ ಭಾಗವಹಿಸಿದ್ದರು.

ಪುಟ 2

## ಪೊಲೀಸರಿಂದಲೇ ಪೊಲೀಸ್ ಕಾನ್ಸ್‌ಟೇಬಲ್ ಬಂಧನ

# ಮನೆ ಕಳ್ಳರಿಗೆ ಸಹಕಾರ

**ಮಂಡ್ಯ:** ಮನೆ ಕಳ್ಳರಿಗೆ ಸಹಕಾರ ನೀಡುತ್ತಿದ್ದ ಪೊಲೀಸ್ ಕಾನ್ಸ್ ಟೇಬಲ್ ಸೇರಿದಂತೆ ಒಟ್ಟು 8 ಜನ ಆರೋಪಿಗಳನ್ನು ಜಿಲ್ಲೆಯ ಮದ್ದೂರು ಠಾಣೆ ಪೊಲೀಸರು ಬಂಧಿಸಿದ್ದಾರೆ. ಮದ್ದೂರು ತಾಲೂಕಿನ ಕೊಪ್ಪ ಠಾಣೆಯ ಕಾನ್ಸ್ ಟೇಬಲ್ ಕೆಂಡಗಣ್ಣಯ್ಯ, ಡಾಲಿ, ಭವನ್, ಸಾದನ್, ಅಯೂಬ್, ಮುನ್ನಾ, ಪ್ರಸಾದ್, ಫಯಾಜ್ ಅರೆಸ್ಟ್ ಮಾಡಲಾಗಿದೆ. ಬಂಧಿತರಿಂದ 1 ಕೆಜಿ 486 ಗ್ರಾಂ ಚಿನ್ನಾಭರಣ, 1.70 ಲಕ್ಷ ರೂ. ನಗದು ಜಪ್ತಿ ಮಾಡಲಾಗಿದೆ. ಮನೆಗಳ್ಳತನ ಆರೋಪಿಗಳಿಗೆ



ಪಿಸಿ ಕೆಂಡಗಣ್ಣಯ್ಯ ಸಹಾಯ ಮಾಡುತ್ತಿದ್ದರು. ಕಳೆದ ತಿಂಗಳು ಮದ್ದೂರಿನಲ್ಲಿ ವೈದ್ಯ ಚಂದ್ರು ಮನೆಯಲ್ಲಿ ಕಳ್ಳತನ ನಡೆದಿದ್ದು, ಆರೋಪಿಗಳು 1 ಕೆಜಿ ಚಿನ್ನಾಭರಣ ಹಾಗೂ 8 ಲಕ್ಷ ರೂ. ನಗದು ದೋಚಿದ್ದರು.

ಪುಟ 2

## ಧಾರವಾಡದಲ್ಲಿ ನರೇಗಾ ಕಾರ್ಮಿಕರಿಗೆ ರಾಜ್ಯ ಸರ್ಕಾರ ಒಂದು ಪೈಸೆ ಕೂಲಿಯನ್ನೂ ನೀಡಿಲ್ಲ!

# 6.51 ಕೋಟಿ ಬಾಕಿ!

**ಧಾರವಾಡ:** ರಾಜ್ಯದಲ್ಲಿ ಈ ಬಾರಿ ಭಾರೀ ಬರ ಬಂದಿದೆ. ಈ ಬರ ಇದೀಗ ಬಡವರ ಜೀವ ಹಿಂಡುತ್ತಿದೆ. ತುತ್ತು ಕೂಳಿಗೂ ಬಡ ಜನರು ಪರದಾಡುತ್ತಿದ್ದಾರೆ. ಬರದಿಂದಾಗಿ ಕೃಷಿ ಕಾರ್ಮಿಕರಿಗೆ ಕೆಲಸ ಸಿಗುತ್ತಿಲ್ಲ. ಇನ್ನೊಂದು ಕಡೆ ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಸಿಗಬೇಕಾಗಿರೋ



ಕೂಲಿಯೇ ಸಿಗುತ್ತಿಲ್ಲ. ಧಾರವಾಡ ಜಿಲ್ಲೆಯಲ್ಲಿ ಕಳೆದ ಎರಡು ತಿಂಗಳಿಂದ ಈ ಯೋಜನೆಯಡಿ ಕೆಲಸ ಮಾಡಿದ ಕಾರ್ಮಿಕರಿಗೆ ಕೂಲಿಯೇ ಪಾವತಿಯಾಗಿಲ್ಲ.

ಪುಟ 2



## ಆಸ್ತಿ ತೆರಿಗೆ ಬಾಕಿದಾರರಿಗೆ ಒಟಿಎಸ್ ಜಾರಿ

# ಶೇ.50ರಷ್ಟು ದಂಡ, ಬಡ್ಡಿ ಮನ್ನಾ!

**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡ ಆಸ್ತಿ ಮಾಲೀಕರಿಗೆ ಶೇ.50ರಷ್ಟು ದಂಡ ಹಾಗೂ ಬಡ್ಡಿ ಮನ್ನಾ ಮಾಡಿ 'ಒನ್ ಟೈಮ್ ಸೆಟ್ಲ್‌ಮೆಂಟ್' (ಒಟಿಎಸ್) ಯೋಜನೆಯನ್ನು ಜಾರಿಗೊಳಿಸಿ ರಾಜ್ಯ ಸರ್ಕಾರ ಗುರುವಾರ ರಾಜ್ಯಪತ್ರ ಪ್ರಕಟಿಸಿದೆ.

ಈ ಯೋಜನೆಯಿಂದ ನಗರ ಸುಮಾರು 5.51 ಲಕ್ಷ ತೆರಿಗೆ ಬಾಕಿದಾರರು, 5- 7 ಲಕ್ಷ ತೆರಿಗೆ ವ್ಯಾಪ್ತಿಗೆ ಬಾರದವರು ಸೇರಿದಂತೆ 13-15 ಲಕ್ಷ ಜನರಿಗೆ ಅನುಕೂಲವಾಗಲಿದೆ. ಈ ಯೋಜನೆ ಅನುಕೂಲ ಪಡೆಯುವುದಕ್ಕೆ ಜುಲೈ 31ರವರೆಗೆ ಗಡುವು ನೀಡಲಾಗಿದೆ.

ತಪ್ಪು ಮಾಹಿತಿ ನೀಡಿ ಕಡಿಮೆ ಆಸ್ತಿ ತೆರಿಗೆ ಪಾವತಿ ಮಾಡಿದ




ಆಸ್ತಿ ಮಾಲೀಕರಿಗೆ ಎರಡು ಪಟ್ಟು ದಂಡ ವಿಧಿಸಲಾಗುತ್ತಿತ್ತು. ಇದೀಗ ದಂಡ ಮೊತ್ತವನ್ನು ಒಂದು ಪಟ್ಟಿಗೆ (ಶೇ.50ರಷ್ಟು) ಇಳಿಕೆ ಮಾಡಲಾಗಿದೆ. ಈ ಅಂಶವೂ ವಸತಿ ಮತ್ತು ವಾಣಿಜ್ಯ ಸೇರಿದಂತೆ ಎಲ್ಲಾ ಮಾದರಿಯ ಆಸ್ತಿ ಮಾಲೀಕರಿಗೆ ಅನ್ವಯವಾಗಲಿದೆ.

ಉಳಿದಂತೆ ಸ್ವಂತ ಉಪಯೋಗಕ್ಕೆ ಬಳಕೆ ಮಾಡುವ ಒಂದು ಸಾವಿರ ಚದರಡಿಗಿಂತ ಕಡಿಮೆ ಇರುವ ಹಾಗೂ ಕೇವಲ ನೆಲ ಮಹಡಿ ಹೊಂದಿರುವ ಟೈಲ್ಡ್ ಅಥವಾ ಶೀಟ್ ಚಾವಣಿ ವಸತಿ ಆಸ್ತಿಗಳಿಗೆ (ಆರ್‌ಸಿಸಿ ಅಲ್ಲದ) ಶೇ.75ರಷ್ಟು ವಿನಾಯಿತಿ ನೀಡಿ, ವಂಚಿಸಿದ ಮೊತ್ತಕ್ಕೆ ಶೇ.25ರಷ್ಟು ದಂಡ ಪಾವತಿಸುವುದಕ್ಕೆ ಸೂಚಿಸಲಾಗಿದೆ.

**ಬಡವರಿಗೆ ದಂಡ ವಿನಾಯಿತಿ:** ಇನ್ನು ಗುಡಿಸಲು, ಬಡವರಿಗಾಗಿ ಸರ್ಕಾರಿ ವಸತಿ ಸೌಲಭ್ಯ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಥವಾ ಬಿಬಿಎಂಪಿಯಿಂದ ಕೊಳಗೇರಿ ಎಂದು ಘೋಷಿಸಿದ ಪ್ರದೇಶದಲ್ಲಿ ವಸತಿ ಆಸ್ತಿಗಳಲ್ಲಿ ಸ್ವಂತ ಉಪಯೋಗಕ್ಕೆ ಬಳಕೆ ಮಾಡುತ್ತಿರುವ 300 ಚದರಡಿಗಿಂತ ಕಡಿಮೆ ವಿಸ್ತೀರ್ಣ

ಪುಟ 2

# ಡಿಪೋಗಳಿಗೆ ಬರಲಿದೆ ಬಿಎಂಟಿಸಿ 'ಭೋಜನ ಬಂಡಿ'

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ (ಬಿಎಂಟಿಸಿ) ಕೆಲವು ನೌಕರರು ಹಳೆಯ ಸ್ಕ್ರ್ಯಾಪ್ ಆದ ಬಸ್ ಅನ್ನು ತಮ್ಮ ಸಹೋದ್ಯೋಗಿಗಳಿಗಾಗಿ ಮೊಬೈಲ್ ಕ್ಯಾಂಟೀನ್ ಆಗಿ ನವೀಕರಿಸಿದ್ದಾರೆ. ಪೀಣ್ಯ ಮತ್ತು ಯಶವಂತಪುರ ಬಸ್ ಡಿಪೋಗಳಲ್ಲಿ ಈ ಬಸ್ ಕ್ಯಾಂಟೀನ್ ಸದ್ಯ ಚಾಲ್ತಿಯಲ್ಲಿ ಎನ್ನಲಾಗುತ್ತಿದೆ. ಬಸ್ ನಿಲ್ದಾಣಗಳು ಸೇರಿದಂತೆ ವಿವಿಧ ಸ್ಥಳಗಳಲ್ಲಿ ಬಿಎಂಟಿಸಿ ನೌಕರರಿಗೆ ಉಪಹಾರ ಮತ್ತು ಮಧ್ಯಾಹ್ನದ ಊಟ ಮಾಡುವುದಕ್ಕೆ ಈ ಕ್ಯಾಂಟೀನ್ ಸಹಕಾರಿಯಾಗಲಿದೆ.




ಪುಟ 2

# ಹ್ಯಾರಿಸ್‌ಗೆ ಸಂಕಷ್ಟ ? ಚುನಾವಣಾ ತಕರಾರು ಅರ್ಜಿ ವಿಚಾರಣೆಗೆ ಹೈಕೋರ್ಟ್ ಅಸ್ತು



**ಬೆಂಗಳೂರು:** ತನ್ನ ವಿರುದ್ಧದ ಚುನಾವಣಾ ತಕರಾರು ಅರ್ಜಿಯನ್ನು ವಜಾ ಮಾಡುವಂತೆ ಶಾಸಕ ಎನ್.ಎ ಹ್ಯಾರಿಸ್ ಸಲ್ಲಿಸಿದ್ದ ಅರ್ಜಿಯನ್ನು ಕರ್ನಾಟಕ ಹೈಕೋರ್ಟ್ ವಜಾಗೊಳಿಸಿದೆ. ಚುನಾವಣೆ ವೇಳೆ ತಪ್ಪು ಪ್ರಮಾಣ ಪತ್ರ ಸಲ್ಲಿಕೆ ಹಿನ್ನಲೆ ಪರಾಜಿತ ಬಿಜೆಪಿ ಅಭ್ಯರ್ಥಿ ಶಿವಕುಮಾರ್ ಚುನಾವಣಾ ತಕರಾರು ಅರ್ಜಿ ಸಲ್ಲಿಸಿದ್ದರು. ಅರ್ಜಿಯಲ್ಲಿ ಪತ್ನಿಯ ಹೆಸರಲ್ಲಿದ್ದ ಆಸ್ತಿಗಳನ್ನ ಹ್ಯಾರಿಸ್ ಘೋಷಿಸಿಲ್ಲ. ಅಲ್ಲದೇ ತಮ್ಮ ಹೆಸರಲ್ಲಿರುವ ಆಸ್ತಿಗಳ ಕಡಿಮೆ ಮೌಲ್ಯಮಾಪನ ಮಾಹಿತಿ ಸಲ್ಲಿಕೆ ಮಾಡಿದ್ದಾರೆ ಎಂದು ಆರೋಪಿಸಿದ್ದರು. ಈ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್‌ನ ಏಕಸದಸ್ಯ ಪೀಠ ನಡೆಸುತ್ತಿದೆ. ಅಸಮರ್ಪಕ ನಾಮಪತ್ರದಿಂದ ಪ್ರತಿಸ್ಪರ್ಧಿಗೆ ಹೇಗೆ ತೊಂದರೆ ಆಗಿದೆ ಎಂದು ವಿವರಿಸಿಲ್ಲ. ಪ್ರತಿಸ್ಪರ್ಧಿ ಸೋಲಿಗೆ ಹೇಗೆ ಕಾರಣವಾಯಿತು ಎಂಬ ನಿಖರ ಅಂಶವನ್ನು ಅರ್ಜಿದಾರರು ಅರ್ಜಿಯಲ್ಲಿ ಉಲ್ಲೇಖಿಸಿಲ್ಲ. ಹೀಗಾಗಿ ಶಿವಕುಮಾರ್ ಸಲ್ಲಿಸಿರುವ ಅರ್ಜಿ ವಜಾ ಮಾಡುವಂತೆ ಹ್ಯಾರಿಸ್ ಕೋರ್ಟ್‌ಗೆ ಮನವಿ ಮಾಡಿದ್ದರು. ಈಗ ಹ್ಯಾರೀಸ್ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ನ್ಯಾ. ಸೂರಜ್ ಗೋವಿಂದ್ ರಾಜ್ ಅವರಿದ್ದ ಏಕಸದಸ್ಯ ಪೀಠ ವಜಾಗೊಳಿಸಿದೆ. ಅಲ್ಲದೇ ಪರಾಜಿತ ಅಭ್ಯರ್ಥಿ ಶಿವಕುಮಾರ್ ಸಲ್ಲಿಸಿದ್ದ ಅರ್ಜಿ ವಿಚಾರಣಾ ಯೋಗ್ಯವಾಗಿದೆ ಎಂದು ಅಭಿಪ್ರಾಯಪಟ್ಟ ಕೋರ್ಟ್ ವಿಚಾರಣೆಯನ್ನು ಫೆ.27ಕ್ಕೆ ಮುಂದೂಡಿದೆ.

**ಅರ್ಜಿಯಲ್ಲಿ ಏನಿದೆ?:** 2023ರ ಚುನಾವಣೆಯಲ್ಲಿ ಎನ್.ಎ ಹ್ಯಾರಿಸ್ ತಮ್ಮ ಚರ ಮತ್ತು ಸ್ಥಿರಾಸ್ತಿಗಳ ಮಾಹಿತಿಯನ್ನು ಸಮರ್ಪಕವಾಗಿ ಒದಗಿಸಿಲ್ಲ. ಸುಳ್ಳು ಘೋಷಣೆಯ ಪ್ರಮಾಣ ಪತ್ರ ಸಲ್ಲಿಸಿದ್ದಾರೆ. ಚರ ಮತ್ತು ಸ್ಥಿರಾಸ್ತಿಗಳನ್ನು ವಾಸ್ತವಕ್ಕಿಂತಲೂ ಕಡಿಮೆ ಅಂದಾಜಿನಲ್ಲಿ ದಾಖಲಿಸಿದ್ದಾರೆ. ಅಸಮರ್ಪಕ ನಾಮಪತ್ರ ಸ್ವೀಕಾರದ ಕಾರಣದಿಂದಾಗಿ ಅದು ಚುನಾವಣಾ ಫಲಿತಾಂಶದ ಮೇಲೆ ಪರಿಣಾಮ ಬೀರಿ ನನ್ನ ಸೋಲಿಗೆ ಕಾರಣವಾಗಿದೆ. ಹೀಗಾಗಿ ಹ್ಯಾರಿಸ್ ಅವರನ್ನು ಅನರ್ಹಗೊಳಿಸಿ ನನ್ನನ್ನೇ ವಿಜೇತ ಅಭ್ಯರ್ಥಿ ಎಂದು ಘೋಷಿಸಬೇಕು ಎಂದು ಪರಾಜಿತ ಬಿಜೆಪಿ ಅಭ್ಯರ್ಥಿ ಶಿವಕುಮಾರ್ ಅರ್ಜಿಯಲ್ಲಿ ಮನವಿ ಮಾಡಿದ್ದರು.

## ಕಾರು ಡಿಕ್ಕಿ: ಇಬ್ಬರು ಬೈಕ್ ಸವಾರರು ಸಾವು

**ಮೈಸೂರು:** ಕಾರು ಡಿಕ್ಕಿಯಾಗಿ ಇಬ್ಬರು ಬೈಕ್ ಸವಾರರು ಸಾವನ್ನಪ್ಪಿರುವಂತಹ ಘಟನೆ ಮೈಸೂರು ತಾಲೂಕಿನ ಹೊಸಹುಂಡಿ ಬಳಿ ನಡೆದಿದೆ. ಮಂಜುನಾಥ್(50), ವೆಂಕಟೇಶ್(48) ದುರ್ಮರಣ. ಕಾರು ಚಾಲಕನನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಮೈಸೂರು ಗ್ರಾಮಾಂತರ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

# ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಪರೀಕ್ಷೆಗೆ ಉತ್ತರ ಪತ್ರಿಕೆ ನೀಡದ ದರಿದ್ರ ಸರ್ಕಾರ

**ಬೆಂಗಳೂರು:** ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಪರೀಕ್ಷೆಗೆ ಉತ್ತರ ಪತ್ರಿಕೆಯನ್ನು ಮನೆಯಿಂದಲೇ ತರುವಂತೆ ವಿದ್ಯಾರ್ಥಿಗಳಿಗೆ ಶಿಕ್ಷಣ ಇಲಾಖೆ ಸೂಚಿಸಿದ ವಿಚಾರವಾಗಿ ಪ್ರತಿಪಕ್ಷ ನಾಯಕ ಆರ್ ಅಶೋಕ್ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಉತ್ತರ ಪತ್ರಿಕೆಗಳನ್ನೂ ಕೊಡಲಾಗದ ಬರಗೆಟ್ಟ ದರಿದ್ರ ಸರ್ಕಾರ ವಿದ್ಯಾರ್ಥಿಗಳಿಂದ 50 ರೂ. ವಸೂಲಿ ಮಾಡಿದ್ದೇಕೆ ಎಂದು ಅವರು ಪ್ರಶ್ನಿಸಿದ್ದಾರೆ. ಈ ವಿಚಾರವಾಗಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿ, ಸರ್ಕಾರದ ವಿರುದ್ಧ ಕಿಡಿಕಾರಿದ್ದಾರೆ.



ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಪೂರ್ವಸಿದ್ಧತಾ ಪರೀಕ್ಷೆಗೆ ಉತ್ತರ ಪತ್ರಿಕೆಗಳನ್ನೂ ಕೂಡ ಸರಬರಾಜು ಮಾಡಲಾಗದಷ್ಟು ಬರಗೆಟ್ಟು ಹೋಗಿದೆ ಈ ದರಿದ್ರ ಕಾಂಗ್ರೆಸ್ ಸರ್ಕಾರ. ಉತ್ತರ ಪತ್ರಿಕೆಗಳನ್ನ ಕೊಡಲಾಗದ ಮೇಲೆ ವಿದ್ಯಾರ್ಥಿಗಳಿಂದ 50 ರೂಪಾಯಿ ಪರೀಕ್ಷಾ ಶುಲ್ಕವನ್ನ ವಸೂಲಿ ಮಾಡಿದ್ದು ಯಾವ ಪುರುಷಾರ್ಥಕ್ಕಾಗಿ ಶಿಕ್ಷಣ ಸಚಿವ ಮಧು ಬಂಗಾರಪ್ಪ ಅವರೇ? ಸಿಎಂ ಸಿದ್ದರಾಮಯ್ಯ ಅವರೇ, ನಿಮ್ಮ ಶಿಕ್ಷಣ ಸಚಿವರಿಗೆ ಇಲಾಖೆ ನಡೆಸಲು ಕೈಲಾಗದಿದ್ದರೆ, ಅವರಿಂದ ರಾಜೀನಾಮೆ ಪಡೆದುಕೊಂಡು ಯಾರಾದರೂ ಸಮರ್ಥರಿಗೆ ಶಿಕ್ಷಣ ಇಲಾಖೆ ನೀಡಿ. ಅದು ಬಿಟ್ಟು ಮಕ್ಕಳ ಭವಿಷ್ಯದ ಜೊತೆ ಚೆಲ್ಲಾಟವಾಡಬೇಡಿ' ಎಂದು ಅಶೋಕ್ ವಾಗ್ದಾಳಿ ನಡೆಸಿದ್ದಾರೆ.

ಫೆಬ್ರವರಿ 26ರಿಂದ ಮಾರ್ಚ್ 2ರ ತನಕ ಎಸ್‌ಎಸ್‌ಎಲ್‌ಸಿ ಪೂರ್ವಸಿದ್ಧತಾ ಪರೀಕ್ಷೆಗಳು ನಡೆಯಲಿವೆ. ಈ ಪರೀಕ್ಷೆಗಳಿಗೆ ಉತ್ತರ ಪತ್ರಿಕೆ ತರುವ ಜವಾಬ್ದಾರಿ ವಿದ್ಯಾರ್ಥಿಗಳದ್ದು ಅಥವಾ ಆಯಾ ಶಾಲೆಗಳದ್ದು ಎಂದು ಶಿಕ್ಷಣ ಇಲಾಖೆ ಹೇಳಿರುವ ಬಗ್ಗೆ ಪತ್ರಿಕೆಯೊಂದು ವರದಿ ಮಾಡಿತ್ತು.

ಪ್ರಶ್ನೆ ಪತ್ರಿಕೆಗೆಂದು ಸರ್ಕಾರ ಈಗಾಗಲೇ 50 ರೂ. ವಸೂಲಿ ಮಾಡಿದೆ. ಇದೀಗ ಉತ್ತರ ಪತ್ರಿಕೆಯನ್ನು ವಿದ್ಯಾರ್ಥಿಗಳೇ ತರಲು ಹೇಳಿರುವುದು ವಿದ್ಯಾರ್ಥಿಗಳ ಹಾಗೂ ಪೋಷಕರ ಆಕ್ರೋಶಕ್ಕೆ ಕಾರಣವಾಗಿದೆ.

**ಶಿಕ್ಷಣ ಇಲಾಖೆ ಸಾಲು ಸಾಲು ಎಡವಟ್ಟು:** ಉತ್ತರ ಪತ್ರಿಕೆಗಳನ್ನು ವಿದ್ಯಾರ್ಥಿಗಳೇ ತರಬೇಕೆಂದು ಸೂಚಿಸುವ ಮೂಲಕ ಶಿಕ್ಷಣ ಇಲಾಖೆ ಮತ್ತೊಂದು ಎಡವಟ್ಟು ಮಾಡಿಕೊಂಡಿದೆ. ಇದರೊಂದಿಗೆ, ಈಗಾಗಲೇ ಕೆಲವು ಪ್ರಮಾದಗಳನ್ನು ಎಸಗಿರುವ ಇಲಾಖೆ ಪ್ರತಿಪಕ್ಷಗಳ, ವಿದ್ಯಾರ್ಥಿಗಳ ಹಾಗೂ ಪೋಷಕರ ಕೆಂಗಣ್ಣಿಗೆ ಗುರಿಯಾಗಿದೆ.

ಸರ್ಕಾರಿ ವಸತಿ ಶಾಲೆಗಳಲ್ಲಿ ಧಾರ್ಮಿಕ ಹಬ್ಬಗಳನ್ನು ಆಚರಿಸಬಾರದು ಎಂದು ಸುತ್ತೋಲೆ ಹೊರಡಿಸಿ ವಿವಾದಕ್ಕೆ ಈಡಾಗುತ್ತಿದ್ದಂತೆಯೇ ಅದನ್ನು ಹಿಂಪಡೆಯಲಾಗಿತ್ತು. ಆನಂತರ ವಸತಿ ಶಾಲೆಗಳ ಪ್ರವೇಶ ದ್ವಾರದಲ್ಲಿ ಕುವೆಂಪು ಕವನದ ಬರಹವನ್ನು ಬದಲಾಯಿಸುವ ಮೂಲಕ ವಿವಾದಕ್ಕೆ ಗುರಿಯಾಗಿತ್ತು. ನಂತರ ಸುತ್ತೋಲೆಯನ್ನು ವಾಪಸ್ ಪಡೆಯಲಾಗಿತ್ತು. ಇದೀಗ ಉತ್ತರ ಪತ್ರಿಕೆಗಳನ್ನು ವಿದ್ಯಾರ್ಥಿಗಳೇ ತರಬೇಕೆನ್ನುವ ಮೂಲಕ ಮತ್ತೆ ಆಕ್ರೋಶಕ್ಕೆ ಗುರಿಯಾಗಿದೆ.

# ಹೈಕೋರ್ಟ್ ಆದೇಶದಂತೆ ಮಂಡ್ಯದ ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟಿಂಗ್

**ಮಂಡ್ಯ:** ಮಂಡ್ಯದ ಬೇಬಿ ಬೆಟ್ಟದಲ್ಲಿ ಟ್ರಯಲ್ ಬ್ಲಾಸ್ಟಿಂಗ್‌ಗೆ ಕರ್ನಾಟಕ ಹೈಕೋರ್ಟ್ ಆದೇಶ ಮಾಡಿದೆ ಎಂದು ಸಚಿವ ಎನ್ ಚಲುವರಾಯಸ್ವಾಮಿ ಹೇಳಿದರು.



ಮಂಡ್ಯದಲ್ಲಿ ಮಾತನಾಡಿದ ಅವರು, ಟ್ರಯಲ್ ಬ್ಲಾಸ್ಟಿಂಗ್‌ಗೆ ವಿರೋಧ ವ್ಯಕ್ತವಾಗಿರುವ ಬಗ್ಗೆ ಪ್ರತಿಕ್ರಿಯಿಸಿದರು. 6 ತಿಂಗಳ ಒಳಗೆ ಟ್ರಯಲ್ ಬ್ಲಾಸ್ಟ್ ಮಾಡಬೇಕು ಎಂದು ಹೈಕೋರ್ಟ್ ಸೂಚಿಸಿದೆ. ಟ್ರಯಲ್ ಬ್ಲಾಸ್ಟ್ ಮಾಡಿಸಿ ನಂತರ ಕಲ್ಲು ಗಣಿಗಾರಿಕೆಗೆ ಅನುಮತಿ ಕೊಡುತ್ತಾರೆ ಎಂಬ ಆತಂಕ ಕೆಲವರಲ್ಲಿ ಇದೆ. ರೈತರು ಹೈಕೋರ್ಟ್ ಆದೇಶವನ್ನು ಮನ್ನಿಸಬೇಕು ಎಂಬುದಾಗಿ ಮನವಿ ಮಾಡುತ್ತಿದ್ದೇನೆ ಎಂದು ಚಲುವರಾಯಸ್ವಾಮಿ ಹೇಳಿದರು.

ರೈತರನ್ನು ವಿಶ್ವಾಸಕ್ಕೆ ತೆಗದುಕೊಂಡು ಟ್ರಯಲ್ ಬ್ಲಾಸ್ಟ್ ಮಾಡಲಿದ್ದೇವೆ. ಯಾವುದಕ್ಕೂ, ಯಾರಿಗೂ ತೊಂದರೆ ಆಗದಂತೆ ನಾವು ನೋಡಿಕೊಳ್ಳುತ್ತೇವೆ. ರೈತರನ್ನು ಕರೆದು ಈ ಬಗ್ಗೆ ಮಾತಾಡುತ್ತೇವೆ ಎಂದು ಅವರು ತಿಳಿಸಿದರು.

ಕೆಆರ್‌ಎಸ್‌ನಿಂದ ನಾಲೆಗಳಿಗೆ ಇನ್ನೊಂದು ಕಟ್ಟು ನೀಡಬೇಕೆಂಬ ರೈತರ ಬೇಡಿಕೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಕಳೆದ ಬೆಳೆಗೆ ಆಗಲ್ಲ ಎಂದಿದ್ದರೂ ನೀರು ಬಿಟ್ಟು ರಕ್ಷಣೆ ಮಾಡಿದ್ದೇವೆ. ಸಂಕ್ರಾಂತಿ ವೇಳೆ ಅವಕಾಶವಿಲ್ಲದಿದ್ದರೂ 10 ದಿನ ನೀರು ಬಿಟ್ಟಿದ್ದೇವೆ. ಕುಡಿಯೋ ನೀರಿಗೆ ಇರುವುದನ್ನು ಬಿಟ್ಟು ಮಿಕ್ಕ ಒಂದು ಟಿಎಂಸಿ ನೀರನ್ನು ರೈತರಿಗೆ ಕೊಡುತ್ತೇವೆ ಎಂದು ಸಚಿವರು ಹೇಳಿದರು.

ರೈತರ ಪರಿಸ್ಥಿತಿ ನಮಗೆ ಅರಿವಿದೆ. ರೈತರು ನೀರು ಬಿಡಿ ಎಂದು ಮನವಿ ಮಾಡುತ್ತಾ ಇದ್ದಾರೆ. ಈ ಬಗ್ಗೆ ಅಧಿಕಾರಿಗಳ ಜೊತೆ ಮಾತನಾಡುತ್ತೇನೆ. ಸದ್ಯ ಕೆಆರ್‌ಎಸ್ ನೀರಿನ ಪರಿಸ್ಥಿತಿ ಬಹಳ ಕೆಟ್ಟ ಪರಿಸ್ಥಿತಿಯಲ್ಲಿದೆ. ಮಳೆಗಾಲ ಬರುವವರೆಗೆ ಇನ್ನೂ 2 ಟಿಎಂಸಿ ಕೊರತೆ ಆಗಬಹುದು ಎಂದು ಹೇಳಲಾಗುತ್ತಿದೆ. ಬೆಳೆಗಳಿಗೆ ನೀರು ಬಿಡುವ ಅವಕಾಶ ಇದೆಯೇ ಎಂಬುದಾಗಿ ಪರಿಶೀಲಿಸುತ್ತೇನೆ ಎಂದು ಅವರು ತಿಳಿಸಿದರು.

ನಾಟಿ ಎಲ್ಲ ಅಡುಗೆ ಮನೆಗೆ ಸೀಮಿತವಾಗಿರಬೇಕು ಎಂಬ ಮಂಡ್ಯ ಸಂಸದೆ ಸುಮಲತಾ ತಿರುಗೇಟಿಗೆ ಪ್ರತಿಕ್ರಿಯಿಸಿದ ಚಲುವರಾಯಸ್ವಾಮಿ, ಅವರು ಹೇಳಿರುವುದನ್ನು ಕೇಳಿದ್ದೇನೆ. ಯಾರ ಜತೆಗೂ ಜಗಳ ಮಾಡುವ ಅವಶ್ಯಕತೆ ನನಗೆ ಇಲ್ಲ. ಸುಮಲತಾರಷ್ಟು ಬುದ್ಧಿವಂತ ನಾನಲ್ಲ, ಅವರು ಬುದ್ಧಿವಂತರು ಎಂದು ವ್ಯಂಗ್ಯವಾಡಿದರು.

ನಮ್ಮ ಜಿಲ್ಲೆಯ ಮಣ್ಣಿನ ಒಬ್ಬರನ್ನು ಅಭ್ಯರ್ಥಿ ಮಾಡುತ್ತೇವೆ ಎಂದಿದ್ದೆ. ಸುಮಲತಾ ಅಂಬರೀಶ್ ಅದಕ್ಕೆ ಏನು ವಿವರಣೆ ಕೊಡುತ್ತಾರೆಯೋ ಕೊಡಲಿ. ಅವರು ರಾಷ್ಟ್ರೀಯ ಪಕ್ಷದಲ್ಲಿ ಟಿಕೆಟ್‌ಗೆ ಫೈಟ್ ಮಾಡುತ್ತಿದ್ದಾರೆ, ಒಳ್ಳೆಯದಾಗಲಿ. ಯಾರು ಯಾವಾಗ ಸೂಟ್ ಹಾಕ್ತಾರೆ ಎಂದು ನಿರ್ಧರಿಸುವುದು ಜನ. ಸಂಸತ್‌ಗೆ ಯಾರು ಹೋಗಬೇಕೆಂದು ಜನರು ತೀರ್ಮಾನ ಮಾಡುತ್ತಾರೆ. ಜನರು ತೀರ್ಮಾನ ಮಾಡುವವರೆಗೆ ತಡೆದುಕೊಂಡು ಇರಬೇಕು ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದರು.

# ವೃದ್ಧ ದಂಪತಿ ನೇಣಿಗೆ ಶರಣು



**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ವೃದ್ಧ ದಂಪತಿ ನೇಣಿಗೆ ಶರಣಾದ ಘಟನೆ ನಡೆದಿದೆ. ಕೃಷ್ಣ ನಾಯ್ಡು (88) ಮತ್ತು ಸರೋಜಮ್ಮ(72) ಆತ್ಮಹತ್ಯೆ ಮಾಡಿಕೊಂಡ ವೃದ್ಧ ದಂಪತಿ. ಬೆಳಗ್ಗೆ 5.30ರ ಸುಮಾರಿಗೆ ಸ್ಥಳೀಯರು ಬಂದು ಬಾಗಿಲು ಬಡಿದಾಗ ಘಟನೆ ಬೆಳಕಿಗೆ ಬಂದಿದೆ. ಆಂಧ್ರ ಮೂಲದ ದಂಪತಿ ಹಲವು ವರ್ಷಗಳಿಂದ ಬೆಂಗಳೂರಿನಲ್ಲಿ ವಾಸವಾಗಿದ್ದರು. ಕಟ್ಟಡದ ಮಾಲೀಕರಾಗಿರೋ ದಂಪತಿ ಮೂರು ಅಂತಸ್ತಿನ ಕಟ್ಟಡದ ಟೆರೇಸ್ ನಲ್ಲಿರುವ ರೂಂನಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ದಂಪತಿಗೆ ಅಶೋಕ್ ಎಂಬ ಓರ್ವ ಮಗನಿದ್ದು ಪತ್ನಿ ಜೊತೆ ಬೇರೆ ಕಡೆ ವಾಸವಿದ್ದರು. ಸದ್ಯ ಆತ್ಮಹತ್ಯೆಗೆ ಯಾವುದೇ ಕಾರಣ ತಿಳಿದು ಬಂದಿಲ್ಲ. ಘಟನಾ ಸ್ಥಳಕ್ಕೆ ಭೇಟಿ ನೀಡಿ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ. ಸಿಕೆ ಅಚ್ಚುಕಟ್ಟು ಪೊಲೀಸರಿಂದ ತನಿಖೆ ನಡೆಯುತ್ತಿದೆ.

# ಅರುಣ್ ಕುಮಾರ್ ಪುತ್ತಿಲ ಭೇಟಿಯಾಗಿದ್ದು ನಿಜ

**ಮೈಸೂರು:** ದಕ್ಷಿಣ ಕನ್ನಡ ಜಿಲ್ಲೆಯ ಹಿಂದೂ ಮುಖಂಡ, ಪುತ್ತಿಲ ಪರಿವಾರದ ಮುಖ್ಯಸ್ಥ ಅರುಣ್ ಕುಮಾರ್ ಪುತ್ತಿಲ ಅವರು ಭೇಟಿಯಾಗಿರುವುದು ನಿಜ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ಹೇಳಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಅವರು, ಪುತ್ತಿಲ ನನ್ನನ್ನು ಭೇಟಿ ಮಾಡಿದ್ದು ಸತ್ಯ. ಬೇಷರತ್ ಆಗಿ ಬಿಜೆಪಿ ಸೇರ್ಪಡೆಯಾಗಿ ಎಂದು ಅವರಿಗೆ ಸೂಚಿಸಿದ್ದೇನೆ. ಯಾವುದೇ ಷರತ್ತುಗಳು ಬೇಡ. ಪ್ರಧಾನಿ ಮೋದಿ ನಾಯಕತ್ವಕ್ಕಾಗಿ ಎಲ್ಲರೂ ಒಂದಾಗಬೇಕು ಎಂದು ಹೇಳಿದ್ದೇನೆ ಎಂದು ತಿಳಿಸಿದ್ದಾರೆ.





ಪುತ್ತಿಲ ವಿಚಾರವಾಗಿ ದಕ್ಷಿಣ ಕನ್ನಡದ ಸ್ಥಳೀಯ ಮುಖಂಡರ ಜೊತೆ ಚರ್ಚೆ ಮಾಡುತ್ತೇನೆ. ಎಲ್ಲಾ ಕ್ಷೇತ್ರಕ್ಕೂ ನಮಗೆ ಬಿಜೆಪಿ, ಕಮಲ ಚಿಹ್ನೆಯಷ್ಟೇ ಅಭ್ಯರ್ಥಿ. ಬೇರೆ ಯಾವ ಭಿನ್ನಾಭಿಪ್ರಾಯಗಳೂ ನಮ್ಮ ನಡುವೆ ಇಲ್ಲ ಎಂದು ಅವರು ತಿಳಿಸಿದ್ದಾರೆ.

**ಬಿಜೆಪಿಗೇ ಗಡುವು ನೀಡಿದ್ದ ಪುತ್ತಿಲ ಪರಿವಾರ:** ಪುತ್ತಿಲ ಪರಿವಾರವನ್ನು ಬಿಜೆಪಿ ಜತೆ ವಿಲೀನಗೊಳಿಸಿ ಪಕ್ಷ ಸೇರ್ಪಡೆಯಾಗುವುದಾದರೆ ಸ್ವಾಗತ ಎಂದು ಬಿಜೆಪಿ ನಾಯಕರು ಹೇಳಿದ್ದರು. ಇದರ ಬೆನ್ನಲ್ಲೇ ಪುತ್ತೂರಿನಲ್ಲಿ ಪರಿವಾರದ ಕಾರ್ಯಕರ್ತರ ಸಮಾಲೋಚನಾ ಸಭೆ ನಡೆಸಿದ್ದ ಪುತ್ತಿಲ, ಲೋಕಸಭಾ ಚುನಾವಣೆಗೂ ಮುನ್ನ ಪುತ್ತೂರು ಬಿಜೆಪಿ ಮಂಡಲದ ಅಧ್ಯಕ್ಷ ಸ್ಥಾನ ನೀಡಿದರೆ ಮಾತ್ರ ಬಿಜೆಪಿಗೆ ಸೇರ್ಪಡೆಯಾಗುವುದಾಗಿ ಹೇಳಿದ್ದರು. ಅಲ್ಲದೆ, ಈ ವಿಚಾರವಾಗಿ 3 ದಿನಗಳ ಒಳಗಾಗಿ ನಿರ್ಧಾರ ತಿಳಿಸಬೇಕು ಎಂದೂ ಬಿಜೆಪಿಗೆ ಗಡುವು ನೀಡಿದ್ದರು. ಇದಾಗಿ ಹಲವು ದಿನಗಳೂ ಕಳೆದೂ ಈ ವಿಚಾರವಾಗಿ ಯಾವುದೇ ಬೆಳವಣಿಗೆ ಆಗಿಲ್ಲ ಎಂಬುದು ಗಮನಾರ್ಹ. ಇದೀಗ ಪುತ್ತಿಲ ಮಾತುಕತೆ ನಡೆಸಿರುವ ಬಗ್ಗೆ ವಿಜಯೇಂದ್ರ ಹೇಳಿಕೆ ನೀಡಿದ್ದಾರೆ. ಜೆಡಿಎಸ್ ಮತ್ತು ಬಿಜೆಪಿ ನಡುವೆ ಸೀಟ್ ಹಂಚಿಕೆಗೆ ಯಾವ ಗೊಂದಲಗಳೂ ಇಲ್ಲ, ಮುಂದೆಯೂ ಕೂಡ ಅದು ಉದ್ಭವ ಆಗುವುದಿಲ್ಲ. ಅಮಿತ್ ಶಾ ಅರನ್ನು ಕುಮಾರಸ್ವಾಮಿ ಯಾಕೆ ಭೇಟಿಯಾಗಿದ್ದಾರೆ ಎಂಬುದು ತಿಳಿದಿಲ್ಲ. ಮಾರ್ಚ್ ಮೊದಲ ವಾರದಲ್ಲಿ ದೆಹಲಿಗೆ ತೆರಳಿ ಹೈಕಮಾಂಡ್ ನಾಯಕರನ್ನು ಭೇಟಿ ಮಾಡುತ್ತೇನೆ ಎಂದು ವಿಜಯೇಂದ್ರ ಹೇಳಿದರು.

ಶಿಕ್ಷಕರ ಕ್ಷೇತ್ರದ ಉಪ ಚುನಾವಣೆ ಫಲಿತಾಂಶ ಮುಂದಿನ ದಿಕ್ಸೂಚಿಯಲ್ಲ. ನಂಜನಗೂಡು ಉಪ ಚುನಾವಣೆ ನಡೆದ ಮೇಲೆ ಕಳೆದ ಬಾರಿ ಸಿದ್ದರಾಮಯ್ಯ ಸರ್ಕಾರ ಹೇಗೆ ಸೋತಿದೆ ಎಂಬುದು ಜನರಿಗೆ ಗೊತ್ತಿದೆ. ಸರ್ಕಾರ ಇದ್ದಾಗ ಉಪ ಚುನಾವಣೆಗಳು ಹೇಗೆ ನಡೆಯುತ್ತವೆ ಎಂಬುದೂ ಜನರಿಗೆ ಗೊತ್ತಿದೆ ಎಂದು ಅವರು ಹೇಳಿದ್ದಾರೆ.

## ರಷ್ಯಾ ಸೇನೆಯಲ್ಲಿ ಕರ್ನಾಟಕದ ಯುವಕರು ಕೇಂದ್ರ ಸರ್ಕಾರ ರಕ್ಷಿಸಬೇಕಿದೆ

**ಬೆಂಗಳೂರು:** ಉದ್ಯೋಗಕ್ಕಾಗಿ ರಷ್ಯಾಕ್ಕೆ ತೆರಳಿದ್ದ ಕರ್ನಾಟಕದ ಯುವಕರನ್ನು ಯುದ್ಧಕ್ಕೆ ಬಳಸಿಕೊಂಡ ಆರೋಪ ಕೇಳಿಬಂದಿದೆ. ಈ ಬಗ್ಗೆ ಮಾತನಾಡಿದ ಸಚಿವ ಪ್ರಿಯಾಂಕ್ ಖರ್ಗೆ, ನಮ್ಮ ಜಿಲ್ಲಾಧಿಕಾರಿ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಕಲಬುರಗಿ ಜಿಲ್ಲೆಯ ಮೂವರು ಯುವಕರು ರಷ್ಯಾಕ್ಕೆ ಹೋಗಿದ್ದ ಮಾಹಿತಿ ಇದೆ ಎಂದು ಹೇಳಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ರಷ್ಯಾ ಸೇನೆ ಅಮಾಯಕ ಯುವಕರನ್ನು ಯುದ್ಧಕ್ಕೆ ಬಳಸಿದ ಮಾಹಿತಿ ಇದೆ. ರಷ್ಯಾದಲ್ಲಿ ನಮ್ಮ ಯುವಕರನ್ನು ಸೇನೆಗೆ ಬಳಸಿಕೊಂಡ ಮಾಹಿತಿ ನಮ್ಮ ಜಿಲ್ಲಾಧಿಕಾರಿ ನೀಡಿದ್ದಾರೆ. ಕಲಬುರಗಿ ಜಿಲ್ಲೆಯ ಮೂವರು ಯುವಕರು ರಷ್ಯಾಕ್ಕೆ ಹೋಗಿದ್ದ ಮಾಹಿತಿ ನೀಡಿದ್ದಾರೆ ಎಂದರು.

ಉದ್ಯೋಗಕ್ಕಾಗಿ ತೆರಳಿದ್ದ ಯುವಕರನ್ನು ಯುದ್ಧಕ್ಕೆ ಬಳಸಿಕೊಂಡ ಮಾಹಿತಿ ಇದೆ. ರಷ್ಯಾದ ವ್ಯಾಗ್ನರ್ ಗ್ರೂಪ್‌ಗೆ ಸೇರ್ಪಡೆ ಮಾಡಿಕೊಂಡ ಮಾಹಿತಿ ಇದೆ. ಕರ್ನಾಟಕ ಮಾತ್ರವಲ್ಲದೆ, ತೆಲಂಗಾಣ, ಉತ್ತರಭಾರತದ ಯುವಕರು ಸಿಲುಕಿರುವ ಮಾಹಿತಿ ಇದೆ. ಈ ವಿಚಾರವನ್ನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗಮನಕ್ಕೆ ತಂದಿದ್ದು, ವಿದೇಶಾಂಗ ಸಚಿವರ ಜೊತೆ ಮಾತನಾಡುವಂತೆ ಮನವಿ ಮಾಡಿದ್ದೇನೆ ಎಂದರು.

ವಿದೇಶಾಂಗ ಸಚಿವರ ಬಳಿ ಮಾತನಾಡುವಂತೆ ಮಲ್ಲಿಕಾರ್ಜುನ ಖರ್ಗೆ ಅವರಲ್ಲಿ ಮನವಿ ಮಾಡಿದ್ದಾನೆ. ಅವರು ಕೂಡ ಪತ್ರ ಬರೆಯುವುದಾಗಿ ತಿಳಿಸಿದ್ದಾರೆ. ಉತ್ತರ ಭಾರತದಲ್ಲಿ ಇಂಥದ್ದು ಜಾಸ್ತಿ ಆಗಿದೆ. ಕೇಂದ್ರ ಸರ್ಕಾರ ಅವರನ್ನ ರಕ್ಷಣೆ ಮಾಡಬೇಕಿದೆ ಎಂದರು.

## ಮಂಗಳಮುಖಿಯರು!

ಮೊದಲಿಗೆ ರಾಜ್ಯದ ಮಹಿಳೆಯರಿಗೆ ಅಂತಿದ್ದ ಯೋಜನೆಯನ್ನು ಲಿಂಗತ್ವ ಅಲ್ಪಸಂಖ್ಯಾತರಿಗೂ ವಿಸ್ತರಣೆ ಮಾಡುವ ಭರವಸೆ ನೀಡಿತ್ತು. ಆದರೆ ಇಂದಿಗೂ ಯೋಜನೆಗೆ ನೋಂದಣಿಯಾಗಲಿ ಯೋಜನೆಯ ಲಾಭವೇ ಆಗಲಿ ಮಂಗಳಮುಖಿಯರಿಗೆ ತಲುಪಿಲ್ಲ. ಬೆಂಗಳೂರು ಒನ್, ಗ್ರಾಂ ಒನ್ ಗಳತ್ತ ಭೇಟಿ ಮಾಡಿದ ಮಂಗಳಮುಖಿಯರು ಯೋಜನೆಗೆ ನೋಂದಣಿ ಮಾಡಿಸಲಾಗದೆ ಮತ್ತೆ ವಾಪಸ್ ಆಗುತ್ತಿದ್ದಾರೆ. ಹೀಗಾಗಿ ಶೀಘ್ರ ಲಿಂಕ್ ಬಿಡುಗಡೆ ಮಾಡಿ ಅಂತ ಮಂಗಳಮುಖಿಯರು ಮನವಿ ಮಾಡ್ತಿದ್ದಾರೆ.

ಮಂಗಳಮುಖಿಯರ ಆಯ್ಕೆಯಲ್ಲಿ ನೋಂದಣಿ ಮಾಡಿಸಲು ಹೇಳಿದ್ದ ಸರ್ಕಾರ ಇದುವರೆಗೂ ಈ ಬಗ್ಗೆ ಗಮನಹರಿಸಿಲ್ಲ. ರೇಷನ್ ಕಾರ್ಡ್ ಪಡೆಯುವಲ್ಲಿ ನಾವು ಹಿಂದೆ ಉಳಿದಿದ್ದೇವೆ. 44 ಸಾವಿರ ಮತದಾರರು ಇರುವ ನಮಗೆ ಸರ್ಕಾರದ ಸೌಲಭ್ಯ ಸಿಗ್ತಿಲ್ಲ ಅಂತಾ ಅಸಹಾಯಕತೆ ತೋಡಿಕೊಂಡಿದ್ದಾರೆ

ಒಟ್ಟಿನಲ್ಲಿ ಎಲ್ಲರಲ್ಲೂ ಒಬ್ಬರಂತಾದ ಮಂಗಳಮುಖಿಯರಿಗೆ ಸರ್ಕಾರದ ಯೋಜನೆಗಳು ತಲುಪುವಂತೆ ಸರ್ಕಾರ ಈ ಕೂಡಲೇ ಕ್ರಮವಹಿಸಿ ಸಮಸ್ಯೆಯನ್ನು ಬಗೆಹರಿಸಬೇಕಿದೆ.

## ಸಿದ್ದರಾಮಯ್ಯ ಸ್ಪಷ್ಟನೆ

1997ರಲ್ಲಿ ಕಾಯಿದೆಯನ್ನು ಜಾರಿಗೊಳಿಸಿದಾಗಿನಿಂದಲೂ ಸಾಮಾನ್ಯ ಸಂಗ್ರಹಣಾ ನಿಧಿಯನ್ನು ಸೃಜಿಸಬೇಕು ಎನ್ನುವ ನಿಬಂಧನೆ ಕಾಯಿದೆಯಲ್ಲಿಯೇ ಅಡಕವಾಗಿದೆ. ಹೀಗಿದ್ದರೂ ಸಾಮಾನ್ಯ ಸಂಗ್ರಹಣಾ ನಿಧಿಯ ನಿಯಮಾವಳಿಗಳಲ್ಲಿ ಅಡಕವಾಗಿರುವ ಅಂಶಗಳಿಗೆ ವಿರುದ್ಧವಾಗಿ ಇಂತಹ ಆಪಾದನೆಗಳನ್ನು ಮಾಡಲಾಗುತ್ತಿದೆ''.

''ನೂತನ ತಿದ್ದುಪಡಿಯನ್ನು ಸಾಮಾನ್ಯ ಸಂಗ್ರಹಣಾ ನಿಧಿಯನ್ನು ಹೆಚ್ಚಿಸುವ ಏಕೈಕ ಉದ್ದೇಶದಿಂದ ಮಾಡಲಾಗಿದೆ. ಚುನಾವಣಾ ದೃಷ್ಟಿಯಿಂದ ಕೇವಲ ಕೋಮು ಧ್ರುವೀಕರಣದತ್ತಲೇ ಗಮನಹರಿಸುತ್ತಿರುವ ಬಿಜೆಪಿ ನಾಯಕರು ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಸಲುವಾಗಿ ಸಮಾಜದಲ್ಲಿನ ಶಾಂತಿ, ಸಾಮರಸ್ಯವನ್ನು ಕದಡಲು ಇಂತಹ ಆಧಾರ ರಹಿತ ಆರೋಪಗಳನ್ನು ಮಾಡುತ್ತಿದ್ದಾರೆ. ಸಾಮಾಜಿಕ ಸ್ವಾಸ್ಥ್ಯವನ್ನು ಹಾಳು ಮಾಡುವಂತಹ ಅನೈತಿಕ ಹಾದಿ ತುಳಿದಿರುವ ಬಿಜೆಪಿ ನಾಯಕರು ತಮ್ಮ ಸಾರ್ವಜನಿಕ ವರ್ತನೆಗೆ ತಾವೇ ನಾಚಿಕೆಪಡಬೇಕಿದೆ.''

''ಕರ್ನಾಟಕದ ಸಾಮರಸ್ಯವನ್ನು ಕದಡುವ ದ್ರೋಹದ ಕೆಲಸವನ್ನು ಬಿಜೆಪಿ ನಾಯಕರು ಮಾಡುತ್ತಿದ್ದು ಇವರ ಈ ಸಂಚನ್ನು ಕನ್ನಡಿಗರು ನಿಷ್ಕ್ರಿಯಗೊಳಿಸಬೇಕಿದೆ. ಚುನಾವಣಾ ದೃಷ್ಟಿಯಿಂದ ಕೇವಲ ಕೋಮು ಧ್ರುವೀಕರಣದತ್ತಲೇ ಗಮನಹರಿಸುತ್ತಿರುವ ಬಿಜೆಪಿ ನಾಯಕರು ತಮ್ಮ ರಾಜಕೀಯ ಬೇಳೆ ಬೇಯಿಸಿಕೊಳ್ಳುವ ಸಲುವಾಗಿ ಸಮಾಜದಲ್ಲಿನ ಶಾಂತಿ, ಸಾಮರಸ್ಯವನ್ನು ಕದಡಲು ಇಂತಹ ಆಧಾರ ರಹಿತ ಆರೋಪಗಳನ್ನು ಮಾಡುತ್ತಿದ್ದಾರೆ. ಸಾಮಾಜಿಕ ಸ್ವಾಸ್ಥ್ಯವನ್ನು ಹಾಳು ಮಾಡುವಂತಹ ಅನೈತಿಕ ಹಾದಿ ತುಳಿದಿರುವ ಬಿಜೆಪಿ ನಾಯಕರು ತಮ್ಮ ಸಾರ್ವಜನಿಕ ವರ್ತನೆಗೆ ತಾವೇ ನಾಚಿಕೆಪಡಬೇಕಿದೆ.''

''ಪಕ್ಷದ ರಾಜ್ಯಾಧ್ಯಕ್ಷರಾಗಲು ತಪ್ಪು ಮಾಹಿತಿ, ಸುಳ್ಳು ಸುದ್ದಿಗಳನ್ನು ವ್ಯಾಪಕವಾಗಿ ಹರುಡುವ ಸಾಮರ್ಥ್ಯ ಹೊಂದಿರಬೇಕು ಎನ್ನುವಂತಹ ಅಸ್ವಸ್ಥ ನಿಲುವಿಗೆ ಬಿಜೆಪಿ ಇಂದು ಬಂದಿರುವುದು ಸ್ಪಷ್ಟವಾಗಿ ಗೋಚರಿಸುತ್ತಿದೆ. ಇದೇ ಕಾರಣಕ್ಕಾಗಿ ಬಿವೈ ವಿಜಯೇಂದ್ರ ಅವರನ್ನು ಪಕ್ಷದ ಅಧ್ಯಕ್ಷರನ್ನಾಗಿ ಮಾಡಿದಂತೆ ಕಾಣುತ್ತಿದೆ. ಅವರ ಜೊತೆ ಇತರ ನಾಯಕರು ಕೂಡಾ ಸುಳ್ಳಿನಲ್ಲಿ ಪೈಪೋಟಿ ನೀಡುತ್ತಿರುವಂತೆ ವರ್ತಿಸುತ್ತಿರುವುದು ಕರ್ನಾಟಕದ ದುರಂತವೇ ಸರಿ'' ಎಂದು ಟ್ವೀಟ್ ಮೂಲಕ ಕಿಡಿ ಕಾರಿದ್ದಾರೆ

ಇಂತಹ ದುಷ್ಟತನದ ಹುನ್ನಾರಗಳನ್ನು ಅರ್ಥಮಾಡಿಕೊಳ ಳುವಷ್ಟು ಕನ್ನಡಿಗರು ಪ್ರಬುದ್ಧರಾಗಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಆಳ್ವಿಕೆಯಲ್ಲಿ ಡಾಲರ್ ಎದುರು ರೂಪಾಯಿ ಕುಸಿಯುತ್ತಿರುವಂತೆ ಓರ್ವ ನಾಯಕನಾಗಿ ವಿಜಯೇಂದ್ರ ಅವರ ವಿಶ್ವಾಸಾರ್ಹತೆಯೂ ಕುಸಿಯುತ್ತಿರುವುದು ಸ್ಪಷ್ಟವಾಗಿದೆ ಎಂದರು.

ಇನ್ನು ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ತಿದ್ದುಪಡಿ ವಿಧೇಯಕವನ್ನು ಪರಿಷತ್‌ನಲ್ಲಿ ವಿರೋಧಿಸಲು ಬಿಜೆಪಿ ಸದಸ್ಯರ ತೀರ್ಮಾನಿಸಿದ್ದಾರೆ. ದೇವಸ್ಥಾನಗಳ ಸಾಮಾನ್ಯ ಸಂಗ್ರಹಣಾ ನಿಧಿಯ ಮೊತ್ತವನ್ನು ಹೆಚ್ಚಿಸಲು ರಾಜ್ಯ ಸರ್ಕಾರ ವಿಧೇಯಕಕ್ಕೆ ತಿದ್ದುಪಡಿ ತಂದಿದೆ. ಆದರೆ ಸಾಮಾನ್ಯ ಸಂಗ್ರಹಣ ನಿಧಿಯ ಹೆಚ್ಚಳಕ್ಕೆ ಬಿಜೆಪಿ ತೀವ್ರ ವಿರೋಧ ವ್ಯಕ್ತಪಡಿಸಿದೆ.

## ಪರಿಷತ್ ಸದಸ್ಯರ ಅಸಮಾಧಾನ

ಲೋಕಸಭಾ ಚುನಾವಣೆಯಲ್ಲಿ ಪಕ್ಷ 20 ಸ್ಥಾನ ಗೆಲುವಿಗೆ ಶ್ರಮಿಸುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಹೆಚ್ಚಿನ ರಾಜಕೀಯ ಸ್ಥಾನಮಾನ ನೀಡುವಂತೆ ಡಿನ್ನರ್ ಮೀಟಿಂಗ್‌ನಲ್ಲಿ ಡಿ.ಕೆ. ಶಿವಕುಮಾರ್‌ಗೆ ಎಂಎಲ್‌ಸಿಗಳು ಆಗ್ರಹಿಸಿದ್ದಾರೆ.

ಲೋಕಸಭಾ ಚುನಾವಣೆ ಅಭ್ಯರ್ಥಿ ಆಯ್ಕೆ ವಿಚಾರವಾಗಿ ಕಾಂಗ್ರೆಸ್, ಬಿಜೆಪಿ ಹಾಗೂ ಜೆಡಿಎಸ್‌ನಲ್ಲಿ ಭಾರೀ ಕಸರತ್ತು ನಡೆಯುತ್ತಿದೆ. ಈ ಬಾರಿ ರಾಜ್ಯದಲ್ಲಿ ಲೋಕಸಭಾ ಚುನಾವಣೆಗೆ ಭಾರೀ ಹಣಾಹಣಿ ನಡೆಯಲಿದ್ದು, ಗೆಲ್ಲುವ ಅಭ್ಯರ್ಥಿಗಳನ್ನು ಮೂರೂ ಪಕ್ಷಗಳು ಹುಡುಕಾಟ ನಡೆಸುತ್ತಿವೆ.

28 ಕ್ಷೇತ್ರಗಳ ಪೈಕಿ ಅತಿಹೆಚ್ಚು ಕ್ಷೇತ್ರ ಗೆಲ್ಲಲು ತಂತ್ರಗಾರಿಕೆ ರೂಪಿಸುತ್ತಿವೆ. ಅದರಲ್ಲೂ ಆಡಳಿತಾರೂಢ ಕಾಂಗ್ರೆಸ್ ಕಳೆದ ಬಾರಿ ಆದ ಹೀನಾಯ ಸೋಲಿನಿಂದ ಪುಟಿದೇಳುವ ನಿಟ್ಟಿನಲ್ಲಿ ಅಳೆದು ತೂಗಿ ಅಭ್ಯರ್ಥಿ ಆಯ್ಕೆಗೆ ಮೀಟಿಂಗ್ ಮೇಲೆ ಮೀಟಿಂಗ್ ಮಾಡುತ್ತಿದೆ.

## ಮೂರು ಶಾಸಕರ ಬ್ಯಾಚ್

ಫೆಬ್ರವರಿ 28ರಂದು ನಡೆಯಲಿರುವ ರಾಜ್ಯಸಭಾ ಚುನಾವಣೆಗೆ ಬಿಜೆಪಿ ತನ್ನದೇ ಆದ ತಂತ್ರಗಾರಿಕೆ ಹೆಣೆದಿದೆ. ಮತ ಹಾಕಲು ಮೂರು ಶಾಸಕರ ಬ್ಯಾಚ್ ಮಾಡಿದೆ. ಒಂದು ಬ್ಯಾಚ್ ಗೆ ಒಬ್ಬ ಹಿರಿಯ ಶಾಸಕನನ್ನು ಲೀಡರ್ ಆಗಿ ನೇಮಕ ಮಾಡಲಾಗಿದೆ. 27ರಂದು ಬೆಳಗ್ಗೆ 8.30ಕ್ಕೆ ವಿಧಾನಸೌಧದಲ್ಲಿ ವಿಪಕ್ಷ ನಾಯಕರ ಕೊಠಡಿಯಲ್ಲಿ ಉಪಹಾರಕ್ಕೆ ಹಾಜರಾಗುವಂತೆ ಎಲ್ಲಾ ಶಾಸಕರಿಗೆ ಸೂಚನೆ ನೀಡಲಾಗಿದೆ.

**ಸಭೆಗೆ ಎಸ್.ಟಿ. ಸೋಮಶೇಖರ್, ಯತ್ನಾಳ್, ಬೆಲ್ಲದ್ ಗೈರು:** ಬಿಜೆಪಿ ಶಾಸಕಾಂಗ ಸಭೆಗೆ ಬಸನಗೌಡ ಪಾಟೀಲ್ ಯತ್ನಾಳ್, ಎಸ್‌ಟಿ.ಸೋಮಶೇಖರ್, ಅರವಿಂದ್ ಬೆಲ್ಲದ್ ಗೈರಾಗಿದ್ದಾರೆ. ಸಭೆ ಬಳಿಕ ಮಾತನಾಡಿದ ಆರ್.ಅಶೋಕ್, ವಿಧಾನಸಭೆಗೆ ಯಾರು ಆಗಮಿಸಿದ್ದರೋ ಅವರು ಮಾತ್ರ ಬಂದಿದ್ದಾರೆ. ಕೆಲವರು ಊರಿಗೆ ಹೋಗಿರುವುದರಿಂದ ಸಭೆಗೆ ಬರಲಾಗಿಲ್ಲ. ಮೂರು ಜನರ ಬ್ಯಾಚ್ ಮಾಡಿದ್ದೇವೆ. ಅವರ ಮೂಲಕ ಮತದಾನ ಪ್ರಕ್ರಿಯೆಯಲ್ಲಿ ಭಾಗಿಯಾಗಿಸುವ ಕ್ರಮ ನಡೆಯಲಿದೆ ಅಂತ ಹೇಳಿದ್ದಾರೆ.

## ಮನೆ ಕಳ್ಳರಿಗೆ ಸಹಕಾರ

ಬಂಧಿತ 8 ಆರೋಪಿಗಳಿಂದ 5 ಮನೆಗಳ್ಳತನ ಪ್ರಕರಣಗಳು ಬಯಲಾಗಿದೆ. ಮನೆಗಳ್ಳತನ ಮಾಡುತ್ತಿದ್ದ ಆರೋಪಿಗಳಿಗೆ ಪಿಸಿ ಕೆಂಡಗಣ್ಣಯ್ಯ ಸಾಥ್ ನೀಡುತ್ತಿದ್ದರು. ಆರೋಪಿಗಳು ಕದ್ದ ಚಿನ್ನಾಭರಣವನ್ನು ಕೆಂಡಗಣ್ಣಯ್ಯ ಅಡವಿಟ್ಟುಕೊಡುತ್ತಿದ್ದರು. ಆರೋಪಿಗಳ ಬಂಧನಕ್ಕೆ ವಿಶೇಷ ತಂಡ ರಚನೆ ಮಾಡಲಾಗಿತ್ತು.

ಹಣ ಡಬ್ಲಿಂಗ್ ಮಾಡಿಕೊಡೋದಾಗಿ ಹೇಳಿ ವಂಚಿಸಿದ್ದ ಆರೋಪಿ ಬಂಧನ

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ಬೆಳಕವಾಡಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಹಣ ಡಬ್ಲಿಂಗ್ ಮಾಡಿಕೊಡುವುದಾಗಿ ಹೇಳಿ ವಂಚಿಸಿದ್ದ ಆರೋಪಿಯನ್ನು ಅರೆಸ್ಟ್ ಮಾಡಲಾಗಿದೆ. ಬಂಧಿತ ಆರೋಪಿ ಸೂರ್ಯನಿಂದ 44 ಲಕ್ಷ ರೂ. ಹಣ ಹಾಗೂ ಕಾರು ಜಪ್ತಿ ಮಾಡಲಾಗಿದೆ. ಆಂಧ್ರ ಮೂಲದ ಸೂರ್ಯ(42)ನನ್ನು ಬೆಳಕವಾಡಿ ಪೊಲೀಸರು ಬಂಧಿಸಿದ್ದಾರೆ. 1 ಕೋಟಿ ರೂ. ಹಣ ಕೊಟ್ಟರೆ 25 ಕೋಟಿ ರೂ. ಕೊಡುವುದಾಗಿ ನಂಬಿಸಿ ಶ್ಯಾಲೋಮ್ ಎಜುಕೇಶನಲ್ ಆ ಯಂಡ್ ಚಾರಿಟೇಬಲ್ ಟ್ರಸ್ಟ್ ಗೆ ವಂಚನೆ ಮಾಡಲಾಗಿದೆ.

ಮಳವಳ್ಳಿ ತಾಲೂಕಿನ ಶಿಂಷಾಪುರ ಗ್ರಾಮದಲ್ಲಿರುವ ಚಾರಿಟೇಬಲ್ ಟ್ರಸ್ಟ್ ನ ಎಸ್.ಮೇರಿ ಎಂಬುವವರು ಆರೋಪಿ ಮಾತು ಕೇಳಿ ಪೇಪರ್ ನೋಟ್ ಗಳನ್ನು ಹಣವೆಂದು ನಂಬಿ 70 ಲಕ್ಷ ರೂ. ನೀಡಿದ್ದರು. ಬಳಿಕ ಜ್ಯೂಸ್ ನಲ್ಲಿ ಮತ್ತುಬರುವ ಔಷಧಿ ನೀಡಿ ಸೂರ್ಯ ಪರಾರಿಯಾಗಿದ್ದ.

## ಮೊದಲ ಪುಟದಿಂದ...

ಹೆಬ್ಬಣಿ ಗ್ರಾಮದ ವಿರಕ್ತ ಮಠದ ಸ್ವಾಮೀಜಿಯೊಬ್ಬರ ಮೂಲಕ ಮೇರಿ ಪರಿಚಯ ಮಾಡಿಕೊಂಡಿದ್ದ ಸೂರ್ಯ ಪರಿಚಯವಾಗಿದ್ದರು. ಹಣ ದುಪ್ಪಟ್ಟು ಮಾಡಿಕೊಡೋದಾಗಿ ನಂಬಿಸಿ ಆರೋಪಿ ಸೂರ್ಯ ವಂಚಿಸಿದ್ದಾನೆ. ಈ ಹಿಂದೆ ಹಲವು ಪ್ರಕರಣದಲ್ಲಿ ಆರೋಪಿ ಸೂರ್ಯ ವಂಚಿಸಿದ್ದಾನೆ. ಜೈಲಿನಿಂದ ಬೇಲ್ ಮೇಲೆ ಹೊರ ಬಂದು ಮತ್ತೆ ವಂಚನೆಗಿಳಿದಿದ್ದ.

## 'ಭೋಜನ ಬಂಡಿ'

ಕ್ಯಾಂಟಿನ್‌ಗಳು ಇಲ್ಲದ ಬಿಎಂಟಿಸಿ ಡಿಪೋಗಳಿಗೆ ಈ ಮೊಬೈಲ್ ಕ್ಯಾಂಟೀನ್ ಸಿದ್ಧಪಡಿಸಲಾಗಿದೆ. ಹಳೆ ಬಿಎಂಟಿಸಿ ಬಸ್‌ಗಳನ್ನೇ ಕ್ಯಾಂಟೀನ್‌ಗಳಾಗಿ ಮಾಡಿದ್ದು, ಡಿಪೋಗಳಿಗೆ ಬರಲಿದೆ. ಭೋಜನ ಬಂಡಿ ಹೆಸರಿನ ಈ ಬಸ್ ಕ್ಯಾಂಟೀನ್‌ನ್ನು ಹೋಟೆಲ್ ಮಾದರಿಯಲ್ಲೇ ನಿರ್ಮಿಸಲಾಗಿದೆ.

ಈ ಕುರಿತಾಗಿ ಬಿಎಂಟಿಸಿ ಟ್ವಿಟರ್ ಖಾತೆಯಲ್ಲಿ ಮಾಹಿತಿ ಹಂಚಿಕೊಳ್ಳಲಾಗಿದೆ. ನೋಡಿ ಭೋಜನ ಬಂಡಿ. ಸ್ಕ್ರಾಪ್ ವಾಹನದಿಂದ ಮೊಬೈಲ್ ಕ್ಯಾಂಟೀನ್‌ವರೆಗೆ ರೂಪಾಂತರಗೊಂಡಿದೆ. ನಮ್ಮ ನುರಿತ ತಾಂತ್ರಿಕ ಸಿಬ್ಬಂದಿ ಮತ್ತು ಅಧಿಕಾರಿಗಳಿಂದ ಉತ್ಸಾಹ ಮತ್ತು ಹೆಮ್ಮೆಯಿಂದ ರಚಿಸಲಾಗಿದೆ. ನಾವೀನ್ಯತೆ ಮತ್ತು ಪಾಕಶಾಲೆಯ ಆನಂದವನ್ನು ಒಟ್ಟಿಗೆ ಆಚರಿಸೋಣ. ಭೋಜನ ಬಂಡಿ ಹೆಮ್ಮೆಯ ಪರಿವರ್ತನೆ ಎಂದು ಹೇಳಿದೆ. ಬಿಎಂಟಿಸಿಯ ವ್ಯವಸ್ಥಾಪಕ ನಿರ್ದೇಶಕರ ಸೂಚನೆಯಂತೆ ಬಸ್ ಅನ್ನು ನವೀಕರಣ ಮಾಡಲಾಗಿದೆ. ಮೊಬೈಲ್ ಕ್ಯಾಂಟೀನ್ ಆಗಿ ಪರಿವರ್ತನೆಯಾಗುವ ಮೊದಲು ಬಸ್ 10,64,298 ಕಿಲೋಮೀಟರ್ ದೂರ ಕ್ರಮಿಸಿತ್ತು.

ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ರಾಮಚಂದ್ರನ್ ಆರ್ ಅವರು ಹೊಸ ಕ್ಯಾಂಟೀನ್ ವೀಕ್ಷಣೆ ಮಾಡಿದ್ದು, ತಾಂತ್ರಿಕ ಸಿಬ್ಬಂದಿಯನ್ನು ಶ್ಲಾಘಿಸಿದರು. ಈ ಮೊಬೈಲ್ ಕ್ಯಾಂಟೀನ್ ಊಟ ಸೇವನೆ ಮಾಡುವುದರೊಂದಿಗೆ ಅನೇಕ ಹೊಸ ವೈಶಿಷ್ಟ್ಯಗಳನ್ನು ಹೊಂದಿದೆ.

ಮೊಬೈಲ್ ಕ್ಯಾಂಟೀನ್‌ನಲ್ಲಿ ಆಸನ, ಟೇಬಲ್, ಫ್ಯಾನ್ ಮತ್ತು ವಾಶ್ ಬೇಸಿನ್ ಇದೆ. ಇದಲ್ಲದೆ, ಇದು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಸಹ ಹೊಂದಿದೆ. ಕ್ಯಾಂಟೀನ್‌ನ ಮೇಲ್ಭಾಗದಲ್ಲಿ ಗಾಜಿನ ಕಿಟಕಿ ಹೊಂದಿದ್ದು, ಗಾಳಿ ಮತ್ತು ಬೆಳಕು ಬರುವಂತೆ ವಿನ್ಯಾಸಗೊಳಿಸಲಾಗಿದೆ.

## ಬಡ್ಡಿ ಮನ್ನಾ!

ಇರುವ ಮನೆಗಳಿಗೆ ದಂಡ ಮೊತ್ತವನ್ನು ಸಂಪೂರ್ಣವಾಗಿ ವಿನಾಯಿತಿ ನೀಡಲಾಗಿದೆ.

ಆಸ್ತಿ ತೆರಿಗೆ ವಿಳಂಬ ಪಾವತಿ ಮೇಲಿನ ಬಡ್ಡಿ, ವಂಚಿಸಿದ ತೆರಿಗೆ ಮೇಲಿನ ಬಡ್ಡಿ, ಆಸ್ತಿ ತೆರಿಗೆ ವ್ಯಾಪ್ತಿಯಿಂದ ಹೊರಗೆ ಉಳಿದ ಆಸ್ತಿಗೆ ವಿಧಿಸುವ ಬಡ್ಡಿ ಮೊತ್ತವನ್ನು ಸಂಪೂರ್ಣ ಮನ್ನಾ ಮಾಡಲಾಗಿದೆ.

ಈ ಹಿಂದೆ ಆಸ್ತಿ ತೆರಿಗೆ ವಂಚಿಸಿದ ಪ್ರಕರಣದಲ್ಲಿ ವಿಧಿಸುವ ದಂಡ ಮತ್ತು ಬಡ್ಡಿಗೆ ಇಷ್ಟು ವರ್ಷಗಳು ಎಂಬ ಮಿತಿ ಇರಲ್ಲ. ಹೀಗಾಗಿ, ಬಿಬಿಎಂಪಿ ರಚನೆಯಾದಾಗಿನಿಂದ ವಂಚಿಸಿದ ಮೊತ್ತಕ್ಕೆ ಬಡ್ಡಿ ವಿಧಿಸಲಾಗುತ್ತಿತ್ತು. ಇದೀಗ ವಸತಿ ಹಾಗೂ ಭಾಗಶಃ ವಸತಿಯೇತರ (ಸಣ್ಣ ವ್ಯಾಪಾರಿ) ಬಳಕೆ ಮಾಡಿಕೊಂಡ ಆಸ್ತಿಗಳಿಗೆ ವಿಧಿಸುವ ಬಡ್ಡಿ ಅಥವಾ ದಂಡವನ್ನು ಗರಿಷ್ಠ 5 ವರ್ಷಕ್ಕೆ ಮಿತಿಗೊಳಿಸಲಾಗಿದೆ. ಈ ವಿನಾಯಿತಿ ಉದ್ಯಮಿಗಳು, ಕೈಗಾರಿಕೆಗಳಿಗೆ ಅನ್ವಯವಾಗುವುದಿಲ್ಲ.

**ಮರು ಪಾವತಿ ಇಲ್ಲ:** ಈ ರೀತಿ ಪ್ರಕರಣದಲ್ಲಿ ಆಸ್ತಿ ತೆರಿಗೆ, ದಂಡ ಮತ್ತು ಬಡ್ಡಿ ಪಾವತಿ ಮಾಡಿದವರಿಗೆ ಮರು ಪಾವತಿ ಹಾಗೂ ಮುಂದಿನ ಸಾಲಿನಲ್ಲಿ ಹೊಂದಾಣಿಕೆ ಇರುವುದಿಲ್ಲ. ಸದ್ಯ ನೋಟಿಸ್ ನೋಡಿದವರಿಗೆ ಹಾಗೂ ಸಂಪೂರ್ಣವಾಗಿ ಆಸ್ತಿ ತೆರಿಗೆ ಪಾವತಿ ಮಾಡದವರಿಗೆ ಈ ವಿನಾಯಿತಿ ದೊರೆಯಲಿದೆ ಎಂದು ರಾಜ್ಯಪತ್ರದಲ್ಲಿ ಸ್ಪಷ್ಟಪಡಿಸಲಾಗಿದೆ.500ರಿಂದ 800 ಕೋಟಿ ರು. ವಸೂಲಿ

ರಾಜ್ಯ ಸರ್ಕಾರ ಪ್ರಕಟ ಪಡಿಸಿರುವ ಒಟಿಎಸ್ ಯೋಜನೆಯಿಂದ ಬಿಬಿಎಂಪಿಗೆ ಹಲವಾರು ವರ್ಷದಿಂದ ಬಾಕಿ ಇರುವ ಪ್ರಕರಣಗಳಿಂದ 500 ರಿಂದ 800 ಕೋಟಿ ರು. ವಸೂಲಿಯಾಗುವ ಸಾಧ್ಯತೆ ಇದೆ ಎಂದು ಬಿಬಿಎಂಪಿ ಕಂದಾಯ ವಿಭಾಗದ ಅಧಿಕಾರಿಗಳು ಅಂದಾಜಿಸಿದ್ದಾರೆ.

## 6.51 ಕೋಟಿ ಬಾಕಿ!

ನರೇಗಾ ಅಡಿ ಕೆಲಸ ಮಾಡುತ್ತಿರುವ ಸಾವಿರಾರು ಕಾರ್ಮಿಕರನ್ನು ಸಂಕಷ್ಟಕ್ಕೆ ದೂಡಿದ ನಿರ್ಲಕ್ಷ್ಯದ ಪರಮಾವಧಿ ಧಾರವಾಡದಲ್ಲಿ ಕಂಡು ಬಂದಿದೆ. ಜಿಲ್ಲೆಯ ಎಲ್ಲ ಎಂಟು ತಾಲೂಕುಗಳನ್ನು ಸರಕಾರ ಬರಪೀಡಿತ ಅಂತಾ ಘೋಷಿಸಿದೆ. ಇಂಥ ಸಂದರ್ಭದಲ್ಲಿ ತಮಗೆ ಕೆಲಸ ಸಿಕ್ತಿಲ್ಲ ಎಂದು ಹುಮ್ಮಸ್ಸಿನಿಂದ ನರೇಗಾದಡಿ ಸಾವಿರಾರು ಕಾರ್ಮಿಕರು ಕೆಲಸ ಮಾಡಿದ್ದಾರೆ. ಆದರೆ ಈ ಯೋಜನೆಯಡಿ ದುಡಿದ ಕಾರ್ಮಿಕರಿಗೆ ಸರಕಾರ 2023 ರ ಡಿ. 6 ರಿಂದ ಇಲ್ಲಿಯವರೆಗೆ ಒಂದು ಪೈಸೆಯ ಕೂಲಿಯನ್ನೇ ನೀಡಿಲ್ಲ. ಇದರಿಂದಾಗಿ ಕಾರ್ಮಿಕರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಧಾರವಾಡ ಜಿಲ್ಲೆಯಲ್ಲಿ ಬರೋಬ್ಬರಿ 6.51 ಕೋಟಿ ರೂಪಾಯಿ ಕೂಲಿ ಹಣವನ್ನು ಬಾಕಿ ಉಳಿಸಿಕೊಳ್ಳಲಾಗಿದೆ. ಹೀಗಾಗಿ ಕುಟುಂಬ ನಿರ್ವಹಣೆಗೆ ಕೂಲಿ ಮಾಡಿದರೂ ಕಾರ್ಮಿಕ ವರ್ಗ ಸಾಲದ ಸುಳಿಗೆ ಸಿಲುಕುವಂತಾಗಿದೆ. ಇನ್ನು 122 ವರ್ಷಗಳಲ್ಲಿ ಮೂರು ಭೀಕರ ಬರಗಳ ಪೈಕಿ ಈ ವರ್ಷದ್ದೂ ಒಂದಾಗಿದೆ. ಇಂಥ ಸಂದರ್ಭದಲ್ಲಿ ಬಡ ಕೂಲಿ ಕಾರ್ಮಿಕರ ಸಹಾಯಕ್ಕೆ ಸರಕಾರಗಳು ಮುಂದೆ ಬರದಿದ್ದರೆ ಅವರ ಬದುಕಿನ ಕಥೆ ಏನು ಅನ್ನೋದು ಕಾರ್ಮಿಕ ಮುಖಂಡರ ಪ್ರಶ್ನೆ. ಬರಗಾಲದಲ್ಲಿ ದುಡಿಯುವ ವರ್ಗಕ್ಕೆ ಕನಿಷ್ಠ 150 ದಿನ ಕೆಲಸ ನೀಡಬೇಕೆಂದು ಘೋಷಿಸಿರೋ ಕೇಂದ್ರ ಹಾಗೂ ರಾಜ್ಯ ಸರಕಾರಗಳು ನರೇಗಾ ಕೆಲಸಕ್ಕೆ ದಿನಕ್ಕೆ ಒಬ್ಬರಿಗೆ 316 ರೂಪಾಯಿ ಕೂಲಿ ನಿಗದಿಪಡಿಸಿವೆ. ಇದಕ್ಕೆ ಪೂರಕವಾಗಿ ಬದು, ಶೆಡ್ ನಿರ್ಮಾಣ, ನಾಲೆ, ಕೆರೆ ಹೂಳೆತ್ತುವುದು ಸೇರಿದಂತೆ ನಾನಾ ಕಾಮಗಾರಿಗಳನ್ನು ಕೈಗೆತ್ತಿಕೊಂಡಿವೆ. ಆರಂಭದಲ್ಲಿ ಜನ ಉತ್ಸಾಹದ ಜತೆಗೆ ಅನಿವಾರ್ಯವಾಗಿ ಕೆಲಸ ಮಾಡಿ ದ್ದಾರೆ. ಆದರೆ 2 ತಿಂಗಳಿಂದ ಕೂಲಿ ಸಿಗದೇ ಕೆಲಸಕ್ಕೆ ಬರಲು ಹಿಂದೇಟು ಹಾಕುತ್ತಿದ್ದಾರೆ.

ಇನ್ನು ಕೇಂದ್ರ ಸರಕಾರ ನಾವು ರಾಜ್ಯಕ್ಕೆ ಅನುದಾನ ಕೊಟ್ಟಿದ್ದೇವೆ ಎಂದು ಪ್ರತಿಪಾದಿಸುತ್ತಿದ್ದರೆ, ರಾಜ್ಯ ಸರಕಾರ ತಮಗೆ ಹಣ ನೀಡದ ಕೇಂದ್ರ ಅನ್ಯಾಯ ಮಾಡುತ್ತಿದೆ ಎಂದು ವಾದಿಸುತ್ತಿದೆ. ಆದರೆ ಇಲ್ಲಿ ನರೇಗಾದಲ್ಲಿ ದುಡಿದ ಕಾರ್ಮಿಕರಿಗೆ ಗರಿಷ್ಠ 15 ದಿನದೊಳಗೆ ಕೂಲಿ ಪಾವತಿಸಬೇಕೆಂಬ ನಿಯಮ ಇದ್ದರೂ ಪಾಲನೆ ಆಗುತ್ತಿಲ್ಲ, ಇಲ್ಲಿ ನಿಜವಾಗಿ ಅನ್ಯಾಯ ಆಗುತ್ತಿರುವುದು ನಮಗೆ ಅನ್ನೋದು ಕಾರ್ಮಿಕರ ನೋವಿನ ಮಾತು.

ಇನ್ನು ಈ ಬಗ್ಗೆ ಧಾರವಾಡ ಜಿಲ್ಲಾ ಪಂಚಾಯತ್ ಸಿಇಒ ಸ್ವರೂಪ ಟಿ.ಕೆ. ಅವರನ್ನು ಕೇಳಿದರೆ, ಈಗಾಗಲೇ ಅನುದಾನ ಬಿಡುಗಡೆಯಾಗಿದೆ ಅನ್ನೋ ಮಾಹಿತಿ ಇದೆ. ಅದು ಬರುತ್ತಲೇ ಎಲ್ಲರಿಗೂ ಕೂಲಿ ನೀಡಲಾಗುವುದು ಅನ್ನುತ್ತಾರೆ.

ಕೇಂದ್ರ ಸರಕಾರ ರಾಜ್ಯಕ್ಕೆ ನರೇಗಾ ಅನುದಾನ ಬಿಡುಗಡೆ ಮಾಡುವಲ್ಲಿ ವಿಳಂಬ ಮಾಡಿದ್ದರಿಂದ ಈ ಸಮಸ್ಯೆ ಆಗಿದೆ ಎಂದು ರಾಜ್ಯ ಸರಕಾರ ಹೇಳುತ್ತಿದೆ. ಆದರೆ ಅಂಥದ್ದ್ಯಾವುದೂ ನಡೆದಿಲ್ಲ, ಎಲ್ಲ ಅನುದಾನವನ್ನು ಬಿಡುಗಡೆ ಮಾಡಲಾಗಿದೆ ಅನ್ನೋದು ಕೇಂದ್ರದ ವಾದ. ಅಪ್ಪ-ಅಮ್ಮನ ಜಗಳದಲ್ಲಿ ಕೂಸು ಬಡವಾದಂತೆ ಕೇಂದ್ರ-ರಾಜ್ಯ ಸರಕಾರಗಳ ನಡುವೆ ಈ ಕೂಲಿ ಕಾರ್ಮಿಕರು ಅನಾಥರಾಗಿದ್ದು ಮಾತ್ರ ವಿಪರ್ಯಾಸವೇ ಸರಿ.

## ಓರ್ವ ವಶಕ್ಕೆ

**ನಡೆದಿದ್ದೇನು..:** ಅಯೋಧ್ಯೆ ಧಾಮ ಟ್ರೈನ್ ವಿಜಯನಗರ ಜಿಲ್ಲೆಯ ಹೊಸಪೇಟೆಯಲ್ಲಿ ಅನ್ಯಕೋಮಿನ ಯುವಕನೊಬ್ಬ ಟ್ರೈನ್‌ಗೆ ಬೆಂಕಿ ಹಚ್ಚುತ್ತೇನೆ ಎಂದು ಬೆದರಿಕೆ ಹಾಕಿದ ಹಿನ್ನೆಲೆಯಲ್ಲಿ ಚೈನ್ ಎಳೆದ ಕಾರಣ ರೈಲು ಸುಮಾರು 2 ಗಂಟೆಗಳ ಕಾಲ ತಡವಾಗಿ ಚಲಿಸಿದೆ.

ಮೈಸೂರು- ಅಯೋಧ್ಯೆ ಧಾಮ ರೈಲಿನಲ್ಲಿ 1500 ರಾಮ ಭಕ್ತರು ಪ್ರಯಾಣ ಮಾಡುತ್ತಿದ್ದರು. ಈ ವೇಳೆಯಲ್ಲಿ ರಾಮ ಭಕ್ತರು ಮಾರ್ಗದುದ್ದಕ್ಕೂ 'ಜೈ ಶ್ರೀರಾಮ್' ಎಂದು ಘೋಷಣೆ ಕೂಗಿದ್ದಾರೆ. ಇದರಿಂದ ರೈಲಿನಲ್ಲಿ ಪ್ರಯಾಣ ಮಾಡುತ್ತಿದ್ದ, ಸುಮಾರು 4 ಜನ ಅನ್ಯ ಕೋಮಿನ ಯುವಕರು ರಾಮ ಭಕ್ತರ ಜೊತೆಯಲ್ಲಿ ವಾಗ್ವಾದ ಆರಂಭ ಮಾಡಿದ್ದಾರೆ. ಈ ವೇಳೆಯಲ್ಲಿ ಹಿಂದೂ ಹಾಗೂ ಅನ್ಯಕೋಮಿನ ಯುವಕನ ಜೊತೆಯಲ್ಲಿ ವಾಗ್ವಾದ ಆರಂಭವಾಗಿದೆ. ಹಿಂದೂ ಕಾರ್ಯಕರ್ತರು ಹಾಗೂ ಅನ್ಯಕೋಮಿನ ಯುವಕರು ಪದೇ ಪದೇ ಚೈನ್ ಎಳೆದ ಕಾರಣ ಟ್ರೈನ್ ಮುಂದೆ ಸಾಗಲು ತೊಂದರೆಯಾಗಿದೆ.

ಹಿಂದೂಪರ ಕಾರ್ಯಕರ್ತರು ರೈಲು ನಿಲ್ದಾಣದಲ್ಲಿ ಪ್ರತಿಭಟನೆ ಆರಂಭ ಮಾಡುತ್ತಿದ್ದಂತೆಯೇ ಅಲ್ಲಿಂದ ಅನ್ಯಕೋಮಿನ ಯುವಕರು ಪರಾರಿಯಾಗಿದ್ದಾರೆ. ಇದರಿಂದ ಕೆರಳಿದ ರಾಮ ಭಕ್ತರು ರೈಲು ನಿಲ್ದಾಣದಲ್ಲಿ ಪ್ರತಿಭಟನೆ ಮಾಡಲು ಆರಂಭ ಮಾಡಿದ್ದಾರೆ. ಪರಿಸ್ಥಿತಿ ವಿಕೋಪಕ್ಕೆ ತೆರಳುವ ಮುನ್ನವೇ ಸ್ಥಳಕ್ಕೆ ಆಗಮಿಸಿದ ಎಸ್‌ಪಿ ಶ್ರೀಹರಿಬಾಬು ಹಾಗೂ ಸಿಬ್ಬಂದಿ ಎಲ್ಲರ ಮನವೊಲಿಸಿ, ರೈಲು ಚಲಿಸುವಂತೆ ಮಾಡಿದ್ದಾರೆ. ಈ ನಡುವೆ ರೈಲು ನಿಲ್ದಾಣದಲ್ಲಿ ಹಿಂದೂ ಕಾರ್ಯಕರ್ತರು ಪ್ರತಿಭಟನೆ ಮಾಡುತ್ತಿದ್ದಂತೆ ಗಲಾಟೆ ಮಾಡಿದ ಅನ್ಯಕೋಮಿನ ನಾಲ್ವರು ಯುವಕರು ಪರಾರಿಯಾಗಿದ್ದಾರೆ.

## ಸಿಎಂ ನಿವಾಸದ ಕೂಗಳತೆ ದೂರದಲ್ಲೇ ಕೆಜಿಗಟ್ಟಲೇ ಚಿನ್ನಾಭರಣ ಕಳ್ಳತನ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ನಿವಾಸದ ಕೂಗಳತೆ ದೂರದಲ್ಲೇ ಕೆಜಿಗಟ್ಟಲೇ ಚಿನ್ನಾಭರಣ ಕಳ್ಳತನ ಮಾಡಿದ್ದ ಓರ್ವ ಆರೋಪಿಯನ್ನು ಶೇಷಾದ್ರಿಪುರಂ ಪೊಲೀಸರು ಬಂಧಿಸಿದ್ದಾರೆ. ಪ್ರದೀಪ್ ಬಂಧಿತ ಆರೋಪಿ. ಅಸ್ಸಾಂನಿಂದ ಬರಿಗೈಲಿ ಬಂದು ಮನೆಗಳ್ಳತನ ಮಾಡುತ್ತಿದ್ದ. ಮಾರ್ವಾಡಿ ಮನೆಗಳನ್ನೇ ಟಾರ್ಗೆಟ್ ಮಾಡಿ ಆಸಾಮಿ ಚಿನ್ನಾಭರಣ ಎಗರಿಸುತ್ತಿದ್ದ. ಸದ್ಯ ಆರೋಪಿ ಕಳ್ಳತನದ ಸ್ಟೋರಿ ಕೇಳಿ ಪೊಲೀಸರೇ ಶಾಕ್ ಆಗಿದ್ದಾರೆ. ಆಗಾಗ ರೈಲಿನಲ್ಲಿ ಅಸ್ಸಾಂನಿಂದ ಬೆಂಗಳೂರಿಗೆ ಬಂದು ಕಳ್ಳತನಕ್ಕೆ ಯತ್ನಿಸುತ್ತಿದ್ದ.

ಇತ್ತೀಚೆಗೆ ಕಳ್ಳತನ ಮಾಡಲೇಬೇಕು ಅಂತ ನಿರ್ಧರಿಸಿ ಬಂದಿದ್ದ. ಮೆಜೆಸ್ಟಿಕ್ ಲಾಡ್ಜ್?ನಲ್ಲೇ ವಾಸ್ತವ್ಯ ಹೂಡಿ ಹಗಲೊತ್ತಲ್ಲಿ ಮಾರ್ವಾಡಿಗಳ ಮನೆಗಳ ರೌಂಡ್ಸ್? ಹಾಕಿದ್ದಾನೆ. ಬಳಿಕ ರಾತ್ರಿ ವೇಳೆ ಸಿಎಂ ಮನೆಯ ಪಕ್ಕದಲ್ಲೇ ಶೇಷಾದ್ರಿಪುರಂ ಠಾಣಾ ವ್ಯಾಪ್ತಿಯ ಮಾರ್ವಾಡಿ ಮನೆಯೊಂದರ ಕಿಟಕಿಯಿಂದ ಎಂಟ್ರಿಯಾಗಿ 2.1 ಕೆಜಿ ಚಿನ್ನಾಭರಣ ಕಳ್ಳತನ ಮಾಡಿದ್ದಾನೆ.

ಚಿನ್ನಾಭರಣ ಕದ್ದ ದುಡ್ಡಲ್ಲೇ ಅಸ್ಸಾಂಗೆ ಹೋಗಿ ಕಾರು ಖರೀದಿಸಿದ್ದಾನೆ. 250 ಸಿಸಿಟಿವಿ ಪರಿಶೀಲನೆ ನಡೆಸಿದಾಗ ಖತರ್ನಾಕ್ ಆಸಾಮಿ ಸಿಕ್ಕಿಬಿದ್ದಿದ್ದಾನೆ. ಲಾಡ್ಜ್? ನ ಲೆಡ್ಜರ್ ಬುಕ್ ?ನಲ್ಲೂ ಎಂಟ್ರಿ ಮಾಡದೆ ಕಳ್ಳಾಟ ಮಾಡಿದ್ದಾನೆ. ಕೇವಲ ಒಂದು ನಂಬರ್ ಮೂಲಕ ಸವಾಲಾಗಿದ್ದ ಕೇಸ್ ಪತ್ತೆ ಆಗಿದೆ.

ಶೇಷಾದ್ರಿಪುರಂನಲ್ಲಿ ಕಳ್ಳತನ ಮಾಡುವುದಕ್ಕೂ ಮೊದಲು ಸದಾಶಿವನಗರದಲ್ಲಿ ಕೈಚಳಕ ತೋರಿಸಿದ್ದ. ಸದಾಶಿವನಗರ ಮನೆಯಲ್ಲಿ ಕಳ್ಳತನಕ್ಕೆ ಹೋದಾಗ ಏನು ಸಿಕ್ಕಿರಲಿಲ್ಲ, ಹಾಗಾಗಿ ಶೇಷಾದ್ರಿಪುರಂನ ಮನೆಯನ್ನ ಟಾರ್ಗೆಟ್ ಮಾಡಿ ಕಳ್ಳತನ ಮಾಡಿದ್ದ. ಸದ್ಯ ಆರೋಪಿಯನ್ನ ಬಂಧಿಸಿರುವ ಶೇಷಾದ್ರಿಪುರಂ ಪೊಲೀಸರು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

## ಗೃಹಿಣಿ ಅನುಮಾನಾಸ್ಪದವಾಗಿ ಸಾವು: ಪತಿಯೇ ಕೊಲೆ ಮಾಡಿದ್ದಾನೆಂದು ಆರೋಪ

**ಹಾಸನ:** ಗೃಹಿಣಿ ಅನುಮಾನಾಸ್ಪದವಾಗಿ ಸಾವನ್ನಪ್ಪಿರುವಂತಹ ಘಟನೆ ಜಿಲ್ಲೆಯ ಚನ್ನರಾಯಪಟ್ಟಣ ತಾಲ್ಲೂಕಿನ ನಾಗಯ್ಯನಕೊಪ್ಪಲು ಗ್ರಾಮದಲ್ಲಿ ನಡೆದಿದೆ. ಪತಿಯೇ ಕೊಲೆ ಮಾಡಿದ್ದಾನೆಂದು ಪೋಷಕರು ಆರೋಪ ಮಾಡಿದ್ದಾರೆ. ಸುರಭಿ (24) ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಮಹಿಳೆ. ಮೂರು ವರ್ಷದ ಹಿಂದೆ ನಾಗಯ್ಯನಕೊಪ್ಪಲು ಗ್ರಾಮದ ದರ್ಶನ್ ಜೊತೆ ವಿವಾಹವಾಗಿದ್ದರು. ನಿನ್ನೆ ಮನೆಯಲ್ಲಿ ಸಾವನ್ನಪ್ಪಿದ್ದು, ನಿಮ್ಮ ಮಗಳು ಲೋ ಬಿಪಿಯಾಗಿ ಸಾವನ್ನಪ್ಪಿದ್ದಾರೆ ಎಂದು ಸುರಭಿ ಪೋಷಕರಿಗೆ ದರ್ಶನ್ ಕರೆ ಮಾಡಿದ್ದಾರೆ. ಸುರಭಿಯನ್ನು ಕೊಲೆ ಮಾಡಿದ್ದಾರೆ ಎಂದು ಪೋಕಷರ ಆರೋಪ ಮಾಡಿದ್ದಾರೆ. ಇದನ್ನು ಪ್ರಶ್ನಿಸುತ್ತಿದ್ದ ಸುರಭಿಯನ್ನು ನೇಣುಬಿಗಿದು ಕೊಲೆ ಮಾಡಿ ನಾಟಕವಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ. ಶ್ರವಣಬೆಳಗೊಳ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ರಾಮಲಿಂಗಾರೆಡ್ಡಿಗೆ ಸನ್ಮಾನ



**ಬೆಂಗಳೂರು:** ರಾಜ್ಯ ಬಜೆಟ್ ನಲ್ಲಿ ರಾಜ್ಯದ ಪತ್ರಕರ್ತರಿಗೆ ಉಚಿತ ಗ್ರಾಮೀಣ ಬಸ್

ಘೋಷಣೆ ಮಾಡಿರುವ ಹಿನ್ನೆಲೆಯಲ್ಲಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರನ್ನು ವಿಧಾನಸೌಧದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ (ಕೆಯುಡಬ್ಲ್ಯೂಜೆ) ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸನ್ಮಾನಿಸಿ, ಧನ್ಯವಾದ ತಿಳಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ, ಬೆಂಗಳೂರು ನಗರ ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ನರೇಂದ್ರ ಪಾರೆಕಟ್, ಜಿಲ್ಲಾ ಘಟಕದ ಉಪಾಧ್ಯಕ್ಷರಾದ ಕೆ.ಎಂ. ಜಿಕ್ರಿಯಾ ಉಪಸ್ಥಿತರಿದ್ದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ದಾವಣಗೆರೆಯಲ್ಲಿ ಹಮ್ಮಿಕೊಂಡಿದ್ದ 38 ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಸಾರಿಗೆ ಸಚಿವರಾದ ರಾಮಲಿಂಗಾ ರೆಡ್ಡಿಯವರು ಕೆಯುಡಬ್ಲ್ಯೂಜೆ ಬೇಡಿಕೆಗೆ ಸ್ಪಂದಿಸಿ ಭರವಸೆ ನೀಡಿದ್ದರು. ಅದರಂತೆ ಮುಖ್ಯಮಂತ್ರಿಯವರು ಮಂಡಿಸಲಿರುವ ಬಜೆಟ್ ನಲ್ಲಿ ಅದಕ್ಕೆ ಶಿಫಾರಸು ಮಾಡುವುದಾಗಿ ಅಂದು ಸಾರಿಗೆ ಸಚಿವರು ಸಂಘದ ಪದಾಧಿಕಾರಿಗಳಿಗೆ ಭರವಸೆಯನ್ನು ನೀಡಿದ್ದನ್ನು ಸ್ಮರಿಸಬಹುದು. ಸನ್ಮಾನ ಸಂದರ್ಭದಲ್ಲಿಯೂ ಸಚಿವರು ಅಂದಿನ ಘಟನೆ ಮತ್ತು ಬೇಡಿಕೆ ಈಡೇರಿದ ಸಂದರ್ಭವನ್ನು ಮೆಲುಕು ಹಾಕಿದರು.

# ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸಿ



**ಕೋಲಾರ:** ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮವು ಮಾರ್ಚ್ 03 ರಿಂದ 6 ರವರೆಗೆ ನಡೆಯಲಿದ್ದು, ಪೋಷಕರು 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪೋಲಿಯೋ ಲಸಿಕೆ ಹಾಕಿಸುವಂತೆ ಜಿಲ್ಲಾಧಿಕಾರಿಗಳು ಸಾರ್ವಜನಿಕರಲ್ಲಿ ಮನವಿ ಮಾಡಿದರು. ಇಂದು ಜಿಲ್ಲಾಧಿಕಾರಿಗಳ ಕಛೇರಿ ನ್ಯಾಯಾಂಗ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ, 2023-24ನೇ ಸಾಲಿನ ಪಲ್ಸ್ ಪೋಲೀಯೋಕಾರ್ಯಕ್ರಮಕುರಿತುಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ ಪಲ್ಸ್ ಪೋಲಿಯೋ ಲಸಿಕೆಯಿಂದ ಹೊರಗುಳಿಯದಂತೆ ಹೆಚ್ಚೆಚ್ಚು ಪ್ರಚಾರ ಮಾಡುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದರು. ಜಿಲ್ಲೆಯಲ್ಲಿ ಈ ವರ್ಷ 161868 ಮಕ್ಕಳಿಗೆ 787 ಬೂತ್ ಗಳಲ್ಲಿ ಪಲ್ಸ್ ಪೋಲಿಯೋ ಲಸಿಕೆಯನ್ನು ಹಾಕಲಾಗುವುದು. ಮೊದಲನೇ ದಿನ ಪೋಲಿಯೋ ಬೂತ್‌ಗಳಲ್ಲಿ ಮತ್ತು ಆನಂತರದ ಎರಡು ಮೂರು ದಿನಗಳಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳ ವ್ಯಾಪ್ತಿಯಲ್ಲಿ ಮನೆಗಳಿಗೆ ಭೇಟಿ ನೀಡಿ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಹನಿ ಹಾಕಲಾಗುವುದು. ಪೋಲಿಯೋ ಲಸಿಕೆ ಅಭಿಯಾನದಲ್ಲಿ ಅಂಗನವಾಡಿ ಕಾರ್ಯಕರ್ತೆಯರು, ನರ್ಸಿಂಗ್ ವಿದ್ಯಾರ್ಥಿಗಳು ಮತ್ತು ಆರೋಗ್ಯ ಸಿಬ್ಬಂದಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಕಾರದೊಂದಿಗೆ ಅಂಗನವಾಡಿ ಕೇಂದ್ರಗಳಲ್ಲಿ ಬೂತ್‌ಗಳನ್ನು ತೆರೆಯಲು ಅನುವು ಮಾಡಿಕೊಡಬೇಕು. ಜಿಲ್ಲಾ ಮಟ್ಟದ ಇಲಾಖಾ ಅಧಿಕಾರಿಗಳಾದ ಶಿಶು ಅಭಿವೃದ್ಧಿ ಕಾರ್ಯಕ್ರಮ ಅಧಿಕಾರಿ ಮತ್ತು ಮೇಲ್ವಿಚಾರಕರಿಗೆ ಪಲ್ಸ್ ಪೋಲಿಯೋ ಕಾರ್ಯಕ್ರಮದ ಬಗ್ಗೆ ಮಾಹಿತಿ ನೀಡುವುದು ಹಾಗೂ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅವಧಿಯಲ್ಲಿ ಎಲ್ಲಾ ಅಂಗನಾವಾಡಿ ಕೇಂದ್ರಗಳ ಮೇಲ್ವಿಚಾರಣೆ ನಡೆಸುವುದು. ಅಂಗನವಾಡಿ ವ್ಯಾಪ್ತಿಯಲ್ಲಿ ಬರುವ ತಾಯಂದಿರಿಗೆ ಅಭಿಯಾನದ ಬಗ್ಗೆ ಮಾಹಿತಿ ನೀಡಬೇಕು ಎಂದರು. ಶಿಕ್ಷಣ ಇಲಾಖೆಯ ಸಹಕಾರದಿಂದ ಶಾಲಾ ಮುಖ್ಯೋಪಾಧ್ಯಾಯರು ಶಾಲಾ ಅಸೆಂಬ್ಲಿಯಲ್ಲಿ ಮಕ್ಕಳಿಗೆ ತಮ್ಮ ಮನೆಯ ಮತ್ತು ಅಕ್ಕ ಪಕ್ಕದ ಮನೆಯವರ ಮಕ್ಕಳನ್ನು ಹತ್ತಿರದ ಪೋಲಿಯೋ ಬೂತ್‌ಗೆ ಕರೆದುಕೊಂಡು ಹೋಗಿ ಪೋಲಿಯೋ ಹನಿ ಹಾಕಿಸಿ ತಮ್ಮ ಮಕ್ಕಳನ್ನು ಮಾರಕ ರೋಗದಿಂದ ರಕ್ಷಿಸುವಂತೆ ತಿಳಿಸಬೇಕು ಎಂದು ಅವರು ತಿಳಿಸಿದರು.

## ಸಂವಿಧಾನ ಜಾಗೃತಿ ಜಾಥಾ

**ರಾಮನಗರ:** ಹಾರೋಹಳ್ಳಿ ತಾಲೂಕಿನ ತೋಕಸಂದ್ರ, ಗ್ರಾಮ ಪಂಚಾಯಿತಿಯಲ್ಲಿ ಫೆ. 22ರ ಗುರುವಾರ ಸಂವಿಧಾನ ಜಾಗೃತಿ ಜಾಥಾವನ್ನು ಅದ್ದೂರಿಯಾಗಿ ಸ್ವಾಗತಿಸಲಾಯಿತು. ತಾಲ್ಲೂಕು ಮಟ್ಟದ ಅಧಿಕಾರಿಗಳು, ಜಿಲ್ಲಾ ಜಾಗೃತಿ ಸಮಿತಿಯ ಸದಸ್ಯರುಗಳು ಹಾಗೂ ಸಮುದಾಯದ ಮುಖಂಡರು, ಸಂಘ-ಸಂಸ್ಥೆಯ ಪದಾಧಿಕಾರಿಗಳಿದ್ದರು. ಸಂವಿಧಾನ ಜಾಗೃತಿ ಜಾಥಾವು ಟಿ. ಹೊಸಹಳ್ಳಿ ಹಾಗೂ ಮರಳವಾಡಿ ಗ್ರಾಮ ಪಂಚಾಯಿತಿಯಲ್ಲಿ ಸಂಚರಿಸಿ, ಜಾಗೃತಿ ಮೂಡಿಸಿತು.

## ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಗೆ ಅರ್ಜಿ ಆಹ್ವಾನ

**ರಾಮನಗರ:** ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸಲು ಕೃಷಿ ಯಂತ್ರಧಾರೆ ಕೇಂದ್ರಗಳನ್ನು ಬಲಪಡಿಸಲು ಹಾಗೂ ಕೃಷಿ ಯಂತ್ರಧಾರೆ ಕೇಂದ್ರಗಳೊಂದಿಗೆ ಇತರೆ ಸಂಘಸಂಸ್ಥೆಗಳು (ಎಫ್‌ಪಿಓಗಳನ್ನೊಳಗೊಂಡಂತೆ) ಹಾಗೂ ವೈಯಕ್ತಿಕ ಫಲಾನುಭವಿಗಳಿಗೂ ಸಹ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಅವಕಾಶ ನೀಡಲಾಗಿದೆ. ಹೈಟೆಕ್ ಹಾರ್ವೆಸ್ಟರ್ ಹಬ್‌ಗಳನ್ನು ಬೆಳೆಯ ವಿಧ ಮತ್ತು ಕಟಾವು ಅವಧಿಯ ಆಧಾರದ ಮೇಲೆ ಕಾರಿಡಾರ್ ಮಾದರಿಯಲ್ಲಿ

**ಅರ್ಜಿ ಸಲ್ಲಿಸಲು ಫೆ. 27 ಕೊನೆಯ ದಿನ**

ಸ್ಥಾಪಿಸಲಾಗುವುದು. ಈ ಹಬ್ ಗಳನ್ನು ಅನುಷ್ಠಾನ ಮಾಡಲು ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳು, ಸೇವಾಧಾರ ಸಂಸ್ಥೆಗಳು, ವೈಯಕ್ತಿಕ ಫಲಾನುಭವಿಗಳು ಹಾಗೂ ನೋಂದಾಯಿತ ಸಂಘಸಂಸ್ಥೆಗಳು ಭಾಗವಹಿಸಬಹುದಾಗಿದೆ.

ಸಾಮಾನ್ಯ ವರ್ಗದ ರೈತರಿಗೆ ಗರಿಷ್ಠ ಶೇ. 50 ರಂತೆ ಪ.ಜಾತಿ/ಪ.ಪಂಗಡದ ರೈತರಿಗೆ ಗರಿಷ್ಠ ಶೇ. 70 ಹಾಗೂ ಸಂಘಸಂಸ್ಥೆಗಳಿಗೆ ಗರಿಷ್ಠ ಶೇ. 70 ರಂತೆ ಸಹಾಯಧನ ನೀಡಲಾಗುವುದು. ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಜಿಯನ್ನು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಗೆ ಸಲ್ಲಿಸುವುದು. ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸಿ ಕೃಷಿ ಇಲಾಖೆಯ ಉಪ ನಿರ್ದೇಶಕರ ಮೂಲಕ ಕೃಷಿ ಇಲಾಖೆಯ ಜಂಟಿ ನಿರ್ದೇಶಕರಿಗೆ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಫೆ. 27 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ಹತ್ತಿರದ ರೈತ ಸಂಪರ್ಕ ಕೇಂದ್ರ/ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿನ ಅಧಿಕಾರಿಗಳನ್ನು ಸಂಪರ್ಕಿಸುವಂತೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳೆ ವಿಮೆ ಯೋಜನೆ: ರೈತರು ನೋಂದಣಿ ಮಾಡಿಸಿಕೊಳ್ಳಿ

**ಕೋಲಾರ:** 2022-23ನೇ ಸಾಲಿನ ಮುಂಗಾರು ಮತ್ತು ಹಿಂಗಾರು ಹಂಗಾಮಿನಲ್ಲಿ ಬೆಳೆ ವಿಮೆ ಯೋಜನೆಯಡಿ ಬೆಳೆ ಸಮೀಕ್ಷೆ ಮಾಹಿತಿಯೊಂದಿಗೆ ಹೊಂದಾಣಿಕೆಯಾಗದೇ ವಿಮಾ ಸಂಸ್ಥೆಯವರಿಂದ ತಿರಸ್ಕೃತಗೊಂಡ ಪ್ರಕರಣಗಳನ್ನು ಕೋಲಾರ ತಾಲ್ಲೂಕಿನ ಕೃಷಿ ಇಲಾಖೆಗೆ ಸಂಬಂಧಿಸಿದ ಹೋಬಳಿ ರೈತ ಸಂಪರ್ಕ ಕೇಂದ್ರ, ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ತಿಳಿಸಲಾಗಿದೆ. ರೈತರಿಂದ ಆಕ್ಷೇಪಣೆಗಳಿದ್ದಲ್ಲಿ ಪಹಣಿಯಲ್ಲಿ ವಿಮೆಗೆ ನೋಂದಾಯಿಸಿದ ಬೆಳೆ ನಮೂದಾಗಿರಬೇಕು. ಬೆಂಬಲ ಬೆಲೆ ಪ್ರಯೋಜನ ಪಡೆದಿದಲ್ಲಿ ರಶೀದಿ ಸಲ್ಲಿಸುವುದು. ವಿಮೆಗೆ ನೋಂದಾಯಿತ ಬೆಳೆದ ಉತ್ಪನ್ನವನ್ನು ಎ.ಪಿ.ಎಮ್.ಸಿ ಮಾರುಕಟ್ಟೆಗೆ ಮಾರಾಟ ಮಾಡಿದಲ್ಲಿ ಈ ದಾಖಲಾತಿಗಳನ್ನು ಮಾರ್ಚ್ 06, 2024 ರೊಳಗೆ ಸಲ್ಲಿಸಬಹುದು. ನಮೂದಿಸಿರುವ ಯಾವುದಾದರೂ ದಾಖಲಾತಿಗಳಿದ್ದಲ್ಲಿ ರೈತ ಸಂಪರ್ಕ ಕೇಂದ್ರಗಳಲ್ಲಿ ನೀಡಬಹುದುಯೆಂದು ಕೋಲಾರ ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮೈಸೂರಿನ ಐಶ್‌ನಲ್ಲಿ ಕಾರ್ಯಾಗಾರ

# ವಾಕ್-ಭಾಷಾ ತಜ್ಞರು, ವಿದ್ಯಾರ್ಥಿಗಳು ಸೇರಿ ಹಲವರು ಭಾಗಿ



**ಮೈಸೂರು:** ಮೈಸೂರಿನ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆಯ ವಾಕ್-ಭಾಷಾ ದೋಷ ವಿಭಾಗವು ವ್ಯಕ್ತಿಯ ಜೀವಿತಾವಧಿಯಲ್ಲಿ ಮೆದುಳು, ಗ್ರಹಿಕೆ ಹಾಗೂ ವರ್ತನೆಯ ನಡುವಿನ ಸಂಬಂಧದ ವ್ಯಾಖ್ಯಾನ: ವಾಕ್-ಭಾಷಾ ತಜ್ಞರ ದೃಷ್ಟಿಕೋನದ ಕುರಿತು ಎರಡು ದಿನಗಳ ಕಾರ್ಯಾಗಾರವನ್ನು ಆಯೋಜಿಸಿತ್ತು.

ಮೆದುಳಿನ ನರಗಳು ಹಾಗೂ ಗ್ರಹಿಕೆ, ವರ್ತನೆ, ವಾಕ್-ಭಾಷಾ ಸಾಮರ್ಥ್ಯಗಳ ಮೇಲೆ ಅವುಗಳ ಪ್ರಭಾವದ ಕುರಿತು ವಾಕ್-ಭಾಷಾ ತಜ್ಞರ ಜ್ಞಾನವನ್ನು ಹೆಚ್ಚಿಸುವುದು ಕಾರ್ಯಾಗಾರದ ಮೂಲ ಉದ್ದೇಶವಾಗಿತ್ತು.

ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಯ ನರರೋಗ ವಿಭಾಗದ ಮುಖ್ಯಸ್ಥರಾದ ಡಾ ಹರ್ಷ ಎಸ್. ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಸಮಾರಂಭವನ್ನು ಉದ್ಘಾಟಿಸಿದರು. ಐಶ್ ಸಂಸ್ಥೆಯ ನಿರ್ದೇಶಕರಾದ ಡಾ. ಎಂ. ಪುಷ್ಪಾವತಿ ಅವರು ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಸಂಸ್ಥೆಯ ವಾಕ್-ಭಾಷಾ ದೋಷ ವಿಭಾಗದ ಮುಖ್ಯಸ್ಥರು ಹಾಗೂ ಕಾರ್ಯಾಗಾರದ ಸಮನ್ವಯಕಾರರಾದ ಡಾ.ಜಯಶ್ರೀ ಸಿ ಶಾನ್ಬಾಲ್ ಅವರು ದೇಶದ ವಿವಿಧೆಡೆಯಿಂಧ ಆಗಮಿಸಿದ್ದ ವಾಕ್-ಭಾಷಾ ತಜ್ಞರನ್ನು ಕಾರ್ಯಕ್ರಮಕ್ಕೆ ಸ್ವಾಗತಿಸಿದರು.

ಕಾರ್ಯಾಗಾರದಲ್ಲಿ ವಾಕ್-ಭಾಷಾ ತಜ್ಞರು, ಮಕ್ಕಳ ನರರೋಗ ತಜ್ಞರು ಸೇರಿದಂತೆ ನರವಿಜ್ಞಾನ ಕ್ಷೇತ್ರದ ಹಲವಾರು ಸಂಪನ್ಮೂಲ ವ್ಯಕ್ತಿಗಳು ಭಾಗವಹಿಸಿದ್ದರು.

ಗ್ರಹಿಕೆ, ವರ್ತನೆ ಮತ್ತು ವಾಕ್-ಭಾಷಾ ಸಾಮರ್ಥ್ಯಗಳ ಮೇಲೆ ಮೆದುಳಿನ ಪ್ರಭಾದ ಕುರಿತು ಚರ್ಚಿಸಲಾಯಿತು. ದೇಶದ ವಿವಿಧ ಸಂಸ್ಥೆಗಳು ಮತ್ತು ಕೇಂದ್ರಗಳ 200 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಮತ್ತು ವಾಕ್-ಭಾಷಾ ತಜ್ಞರು ಕಾರ್ಯಾಗಾರದಲ್ಲಿ ಭಾಗಹಿಸಿದ್ದರು.

### ಸಾಹಿತಿ ಬನ್ನೂರು ರಾಜು

# ಸರ್ವಜ್ಞನೆಂದರೆ ಸುಜ್ಞಾನದ ಮಹಾಬೆಳಕು



**ಮೈಸೂರು:** ಜಾತಿ ಹೀನರ ಮನೆಯ ಜ್ಯೋತಿ ತಾ ಹೀನವೇ? ಜಾತಿ ವಿಜಾತಿ ಎನಬೇಡ ದೇವನೊಲಿದಾತನೇ ಜಾತಿ ಸರ್ವಜ್ಞ ಎಂದು ಜಗತ್ತಿಗೆ ಸಾರುತ್ತಾ ತಮ್ಮ ತ್ರಿಪದಿಗಳ ಮೂಲಕ ಸಮಾಜವನ್ನು ತಿದ್ದುವ ಕೆಲಸ ಮಾಡಿದವರು ತ್ರಿಪದಿಗಳಬ್ರಹ್ಮ ಸರ್ವಜ್ಞನೆಂದು ಪತ್ರಕರ್ತರೂ ಆದ ಸಾಹಿತಿ ಬನ್ನೂರು ಕೆ.ರಾಜು ಹೇಳಿದರು.

ನಗರದ ಕೆ.ಆರ್.ಮೊಹಲ್ಲಾದ ಅಗ್ರಹಾರದ ಮಾಧವರಾವ್ ವೃತ್ತದಲ್ಲಿ ಮೈಸೂರು ಜಿಲ್ಲಾ ಕುಂಬಾರರ ಜಾಗೃತಿ ವೇದಿಕೆ ವತಿ ಯಿಂದ ಏರ್ಪಡಿಸಿದ್ದ ತ್ರಿಪದಿಗಳ ಬ್ರಹ್ಮ ಸರ್ವಜ್ಞ ಜಯಂತಿಯಲ್ಲಿ ಭಾಗವಹಿಸಿ ಮುಖ್ಯ ಭಾಷಣ ಮಾಡುತ್ತಿದ್ದ ಅವರು, ಸಂತ ಕವಿ, ಆಶುಕವಿ, ದೇವಕವಿ, ಸರ್ವಜ್ಞನು ಕಾಯಕ ಸಮಾಜವಾದ ಕುಂಬಾರ ಕುಲದಂತಹ ತಳ ಸಮುದಾಯ ದಲ್ಲಿ ಜನಿಸಿ ತಮ್ಮ ಮೇಲ್ಮಟ್ಟದ ಚಿಂತನೆಗಳಿಂದ ಸರ್ವಮಾನವ ಕುಲಕ್ಕೆ ಇಂದಿಗೂ ಸರ್ವಜ್ಞ ದಾರಿ ದೀಪವಾಗಿದ್ದಾರೆಂದರು.

ತೆಲುಗಿಗೆ ವೇಮನಕವಿ ಮತ್ತು ತಮಿಳಿಗೆ ತಿರುವಳ್ಳುವರ್ ಕವಿ ಹಾಗೂ ಹಿಂದಿಗೆ ಕವಿ ಕಬೀರರು ಹೇಗೋ ಹಾಗೆ ಕನ್ನಡಕ್ಕೆ ಸರ್ವಜ್ಞ ಕವಿಯಾಗಿದ್ದು ತಮ್ಮ ಪ್ರಕಾಂಡ ಜ್ಞಾನ ಪಾಂಡಿತ್ಯದಿಂದ ಅತ್ಯಂತ ಸರಳವೂ, ಸುಲಲಿತವೂ, ಅರ್ಥಪೂರ್ಣವೂ ಆದ ತ್ರಿಪದಿಗಳ ರಚನೆಗಳ ಮೂಲಕ ಕನ್ನಡ ಕಾವ್ಯ ಜಗತ್ತನ್ನು ಜ್ಞಾನ ಸೂರ್ಯನಾಗಿ ಬೆಳಗಿದ್ದಾರೆ. ಅಷ್ಟೇ ಅಲ್ಲದೆ ಜಗತ್ತಿಗೊಬ್ಬರೇ ಸರ್ವಜ್ಞನೆಂಬ ಕೀರ್ತಿಗೂ ಭಾಜನರಾಗಿದ್ದಾರೆ. ತಮ್ಮ ಸಹಸ್ರಾರು ತ್ರಿಪದಿಗಳಲ್ಲಿ ಜಗತ್ತಿಗೆ ಜ್ಞಾನಾಮೃತವನ್ನು ಉಣ ಬಡಿಸಿರುವ ಸರ್ವಜ್ಞ ಬಹು ದೊಡ್ಡ ಸಮಾಜ ಸುಧಾರಕರೂ ಹೌದು. ಹತ್ತನೇ ಶತಮಾನದಲ್ಲಿ ನಮ್ಮ ಆದಿ ಕವಿ ಪಂಪ ಮನುಷ್ಯ ಕುಲ ತಾನೊಂದೇ ವಲಂ ಎಂದರೆ, ಹನ್ನೆರಡನೇ ಶತಮಾನದಲ್ಲಿ ಬಸವಣ್ಣ ಇವನಾರವ ಇವನಾರವ ನೆನ್ನದೆ ಇವ ನಮ್ಮವ ಇವ ನಮ್ಮವನೆಂದೆಣಿ ಸಯ್ಯ ಎಂದರೆ, ಹದಿನಾರನೇ ಶತಮಾನದಲ್ಲಿ ಸರ್ವಜ್ಞನು ನಡೆವುದೊಂದೇ ಭೂಮಿ, ಕುಡಿವುದೊಂದೇ ನೀರು, ಸುಡುವಗ್ನಿಯೊಂದೇ ಇರುತಿರಲು ಕುಲ ಗೋತ್ರ ನಡುವೆ ಎತ್ತಣದು ಎಂದು ಇವರೂ ಸಹ ನಾವೆಲ್ಲರೂ ಒಂದೇ ಎಂಬ ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿದರೆಂದ ಅವರು, ಇಂಥ ಮಹಾ ಮಹಿಮನ ಬಗ್ಗೆ ಅಸ್ಪಷ್ಟತೆಗಳೇ ಹೆಚ್ಚಾಗಿರುವುದರಿಂದ ಸರ್ವಜ್ಞನ ಕುರಿತಂತೆ ಇನ್ನೂ ಹೆಚ್ಚಿನ ಸಂಶೋಧನೆಗಳು ನಡೆಯಬೇಕಾಗಿದೆ ಎಂದರು.

ಇದಕ್ಕೂ ಮುನ್ನ ಮಾಜಿ ಶಾಸಕ ಎಂ.ಕೆ.ಸೋಮಶೇಖರ್ ಅವರು ಸರ್ವಜ್ಞನ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಸರ್ವಜ್ಞ ಜಯಂತಿಯನ್ನು ಉದ್ಘಾಟನೆ ಮಾಡಿದರು. ಆ ನಂತರ ಮಾತನಾಡಿದ ಅವರು ಸರ್ವಜ್ಞ ನೆಂಬುವನು ಗರ್ವದಿಂದಾಗದೆ ಸರ್ವರೊಳಗೊಂದೊಂದು ನುಡಿ ಕಲಿತು ವಿದ್ಯೆಯ ಪರ್ವತವೇ ತಾನಾದ ಎನ್ನುವ ಹಾಗೆ ಸರ್ವಜ್ಞ ನಾಡು ಕಂಡ ಮಹಾ ಜ್ಞಾನಿ,ಮಹಾದಾರ್ಶನಿಕ, ಎಲ್ಲಕ್ಕಿಂತ ಮುಖ್ಯವಾಗಿ ಮಹಾನ್ ಮಾನವತಾವಾದಿ ಆಗಿದ್ದು ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿ ಕೊಳ್ಳಬೇಕೆಂದರು. ಇದೇ ವೇಳೆ ಸಾಹಿತಿ ಬನ್ನೂರು ರಾಜು, ಮಾಜಿ ಶಾಸಕ ಎಂ.ಕೆ. ಸೋಮಶೇಖರ್, ವಾಣಿಜ್ಯ ತೆರಿಗೆ ಇಲಾಖೆಯ ಆಯುಕ್ತೆ ಡಾ.ರಮ್ಯಾ, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಬಾಲಕೃಷ್ಣ, ಕರ್ನಾಟಕ ಕಾವಲು ಪಡೆ ಅಧ್ಯಕ್ಷ ಮೋಹನ್ ಕುಮಾರ್ ಗೌಡ, ನಗರ ಪಾಲಿಕೆ ಮಾಜಿ ಸದಸ್ಯ ಪಾರ್ಥ ಸಾರಥಿ ಮುಂತಾದವರನ್ನು ಗೌರವಿಸಲಾಯಿತು.

ಮಡಿಕೇರಿಯ ಗ್ರಾಹಕ ಆಯೋಗದ ಅಧ್ಯಕ್ಷೆಯೂ ಆದ ಮೈಸೂರು ಜಿಲ್ಲಾ ಕುಂಬಾರರ ಜಾಗೃತಿ ವೇದಿಕೆಯ ಗೌರವಾಧ್ಯಕ್ಷೆ ಸಿ.ರೇಣುಕಾಂಬಾ ಅವರು ಅಧ್ಯಕ್ಷತೆ ವಹಿಸಿದ್ದರು. ವಾಣಿಜ್ಯ ತೆರಿಗೆ ಆಯುಕ್ತೆ ಡಾ.ರಮ್ಯಾ, ಮೈಸೂರು ಕನ್ನಡ ವೇದಿಕೆ ಅಧ್ಯಕ್ಷ ಎಸ್.ಬಾಲಕೃಷ್ಣ, ಮೈಸೂರು ಜಿಲ್ಲಾ ಕುಂಬಾರರ ಜಾಗೃತಿ ವೇದಿಕೆ ಅಧ್ಯಕ್ಷ ಮಹೇಶ್, ಉಪಾಧ್ಯಕ್ಷರಾದ ಉತ್ತನಹಳ್ಳಿ ಕೆ.ಶಂಕರ್, ವೆಂಕಟಾಚಲ, ಪ್ರಧಾನ ಕಾರ್ಯದರ್ಶಿ ನಾಗರಾಜ್, ಸಹ ಕಾರ್ಯದರ್ಶಿ ಮಹದೇವಸ್ವಾಮಿ, ಖಜಾಂಚಿ ಯಶವಂತ ಕುಮಾರ್, ಸಂಘಟನಾ ಕಾರ್ಯದರ್ಶಿಗಳಾದ ಎಂ. ಎಂ. ಯೋಗೇಶ್, ಶಿವರಾಜ್, ಲಕ್ಷ್ಮೀ ನಾರಾಯಣ, ವೆಂಕಟೇಶ್, ಬ್ಯಾಂಕ್ ಉಪಾಧ್ಯಕ್ಷ ಬಸಪ್ಪ , ಶ್ಯಾಮಸುಂದರ್ ಮುಂತಾದವರು ಭಾಗವಹಿಸಿದ್ದರು.



ಬೆಂಗಳೂರು ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ತಿನ ಚುನಾವಣೆಯಲ್ಲಿ ಜಯಶೀಲರಾಗಿ, ಸತತವಾಗಿ 5 ನೇ ಬಾರಿಗೆ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾದ ಶಿಕ್ಷಕರ ಹಿತಚಿಂತಕರಾದ ಪುಟ್ಟಣ್ಣನವರಿಗೆ ವಿಜಯಪುರದ ಪ್ರಗತಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಎಂ.ಸತೀಶಕುಮಾರ್ ಅವರ ನಿವಾಸಕ್ಕೆ ತೆರಳಿ, ಅಭಿನಂಧನೆ ಸಲ್ಲಿಸಿದರು. ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ಕೃಪಾಶಂಕರ್, ಪ್ರೌಢಶಾಲೆಯ ಮುಖ್ಯಶಿಕ್ಷಕರಾದ ವಿ.ಬಸವರಾಜು, ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕರಾದ ಜೆ.ಎನ್.ಪ್ರಕಾಶ್ ಉಪಸ್ಥಿತರಿದ್ದರು.

# ಮಾತೃಭಾಷೆ ಮರೆತರೆ ಹೆತ್ತವ್ವನ ಮರೆತಂತೆ: ಸಾಹಿತಿ ಬನ್ನೂರು ರಾಜು

**ಮೈಸೂರು:** ಮಾತೃಭಾಷೆ ಎಂಬುದು ಪ್ರತಿಯೊಬ್ಬರ ಬದುಕಿನಲ್ಲೂ ಹುಟ್ಟಿನೊಡನೆ ಯೇ ಕರುಳ ಸಂಬಂಧಿಯಾಗಿ ಬೆಸೆದು ಕೊಂಡು ರಕ್ತಗತವಾಗಿ ಹರಿದು ಬಂದಿರುವ ಜೀವ- ಜೀವನದ ಭಾಷೆಯಾಗಿದ್ದು ಇದನ್ನು ಮರೆತರೆ ಹೆತ್ತವ್ವನನ್ನು ಮರೆತಂತೆ ಎಂದು ಸಾಹಿತಿ ಬನ್ನೂರು ಕೆ.ರಾಜು ಹೇಳಿದರು.

ನಗರದ ಕೃಷ್ಣರಾಜ ಮೊಹಲ್ಲಾದ ಅಗ್ರಹಾರ ದಲ್ಲಿರುವ ಶ್ರೀಕಾಂತ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪ್ರತಿಷ್ಠಿತ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸೇವಾ ಸಂಸ್ಥೆಗಳಲ್ಲೊಂದಾದ ಮೈಸೂರಿನ ಹಿರಣ್ಮಯಿ ಪ್ರತಿಷ್ಠಾನವು ಇಂದು ಬುಧವಾರ ಏರ್ಪಡಿಸಿದ್ದ ವಿಶ್ವ ಮಾತೃ ಭಾಷಾ ದಿನ ಆಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಜಗತ್ತಿನಲ್ಲಿ ಸಾವಿರಾರು ಭಾಷೆಗಳು ಇರಬಹುದಾದರೂ ಮಾತೃ ಭಾಷೆಗೆ ಸಮ ಮತ್ತೊಂದಿಲ್ಲವೆಂದರು.

ಹುಟ್ಟಿನಿಂದ ಸಾವಿನ ತನಕವೂ ಮಾತೃಭಾಷೆ ನಮ್ಮ ಜೊತೆಯಲ್ಲಿ ಇದ್ದೇ ಇರುತ್ತದೆ.ಇಂತಹ ತಾಯಿ ನುಡಿಯನ್ನು ಯಾರೂ ಕೂಡ ಮರೆಯುವಂತಿಲ್ಲ. ಒಂದು ಪಕ್ಷ ಮರೆತರೆ ಹೆತ್ತವ್ವನನ್ನು ಮರೆತಂತೆ. ಆದ್ದರಿಂದ ಪ್ರತಿಯೊಬ್ಬರೂ ಮಾತೃ ಭಾಷೆಗೆ ಆದ್ಯತೆ ಕೊಟ್ಟು ಅದನ್ನು ತಾಯಿಯಂತೆ ಪ್ರೀತಿಸಿ ಪೋಷಿಸಬೇಕು.ಇಂದು ವಾಯು ಮಾಲಿನ್ಯ,



ಜಲ ಮಾಲಿನ್ಯ, ಶಬ್ದ ಮಾಲಿನ್ಯ, ಭೂಮಾಲಿನ್ಯ, ಪರಿಸರ ಮಾಲಿನ್ಯದಂತೆ ಮನುಷ್ಯನ ಮನೋಮಾಲಿನ್ಯದಿಂದಾಗಿ ಭಾಷಾ ಮಾಲಿನ್ಯವೂ ಆಗುತ್ತಿದೆ. ಹಾಗಾಗಿ ನಮ್ಮ ಮಾತೃಭಾಷೆ ಕನ್ನಡ ಮಾಲಿನ್ಯ ವಾಗದಂತೆ ಪರಿಶುದ್ಧ ಕನ್ನಡವನ್ನು ಕಾಪಾಡಿ ಕೊಳ್ಳಬೇಕು ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕಾಂಗ್ರೆಸ್ ಪಕ್ಷದ ಜಿಲ್ಲಾ ಮಾಧ್ಯಮ ವಕ್ತಾರ ಕೆ.ಮಹೇಶ್ ಮಾತನಾಡಿ , ಪ್ರತಿಯೊಬ್ಬರಿಗೂ ಮಾತೃ ಭಾಷೆಯೇ ಹೃದಯದ ಭಾಷೆಯಾಗಿದ್ದು ಯಾರು ಮಾತೃ ಭಾಷೆಯನ್ನು ಚೆನ್ನಾಗಿ ಕಲಿಯುತ್ತಾರೋ ಅವರಿಗೆ ಇತರೇ ಭಾಷೆಗಳನ್ನು ಕಲಿಯಲು ಸುಲಭವಾಗುತ್ತದೆ ಎಂದು ತಿಳಿಸಿದರು.

ವಿಶ್ವ ಮಾತೃ ಭಾಷಾ ದಿನದ ಅಂಗವಾಗಿ ಶಾಲಾ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಾದ ನಿಖಿತ್, ಜಿ.ವಿ.ಕವನ, ರಾಜು, ಸಂಜನಾ, ರಕ್ಷಿತಾ, ನಿರಂಜನ್, ಲಿಖಿತ, ಅಭಿಜ್ಞ, ಭವಾನಿ, ಅವರುಗಳಿಗೆ ಹಿರಣ್ಮಯಿ ಪ್ರತಿಷ್ಠಾನದ ಅಧ್ಯಕ್ಷ ಎ.ಸಂಗಪ್ಪ ಅವರು ಬಹುಮಾನ ವಿತರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯ ಶಿಕ್ಷಕ ಟಿ.ಎಸ್. ಪ್ರಭುಸ್ವಾಮಿ ಅವರು ವಿಶ್ವಮಾತೃಭಾಷಾ ದಿನದ ಮಹತ್ವ ಹಾಗೂ ಮಾತೃಭಾಷೆಯ ಮಹತ್ತಿನ ಬಗ್ಗೆ ಮಾತನಾಡಿ ಪ್ರತಿಯೊಬ್ಬರಿಗೂ ಅವರವರ ಮಾತೃ ಭಾಷೆಯೇ ದೊಡ್ಡದು. ನಾವು ಕನ್ನಡಿಗರು. ನಮ್ಮ ಮಾತೃಭಾಷೆ ಕನ್ನಡವೇ ನಮಗೆ ಸರ್ವಸ್ವ. ಹಾಗಾಗಿ ಹೆತ್ತ ತಾಯಿಯಂತೆ ನಾವು ಕನ್ನಡವನ್ನು ಪ್ರೀತಿಸಿ ಸಲಹಬೇ ಕೆಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಪ್ರಾರಂಭದಲ್ಲಿ ಶಿಕ್ಷಕ ವಿ.ನಾರಾಯಣರಾವ್ ಪ್ರಾಸ್ತಾವಿಕವಾಗಿ ಮಾತನಾಡಿ ಎಲ್ಲರನ್ನೂ ಸ್ವಾಗತಿಸಿದರು. ಶಿಕ್ಷಕಿಯರಾದ ಶಿವಮ್ಮ , ಶೀಲಾ ಮುಂತಾದವರಿದ್ದರು.

# ಕಡಿಮೆ ನೀರಿನಲ್ಲಿ ಬೆಳೆಗಳನ್ನು ಬೆಳೆಯಲು ರೈತರು ಮುಂದಾಗಬೇಕು: ಯೋಗೇಶ್



**ಮೈಸೂರು:**ಕಡಿಮೆ ನೀರಿನ್ನು ಬಳಸಿಕೊಂಡು ಹೆಚ್ಚು ಪ್ರದೇಶದಲ್ಲಿ ನೀರಾವರಿ ಬೆಳೆಗಳನ್ನು ಬೆಳೆಯಲು ರೈತರು ಮುಂದಾಗಬೇಕು ಎಂದು ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಉಪ ಕೃಷಿ ನಿರ್ದೇಶಕರಾದ ಡಾ.ಜಿ.ಹೆಚ್ ಯೋಗೇಶ್ ಅವರು ಹೇಳಿದರು.

ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆಯಡಿ ನಂಜನಗೂಡು ತಾಲ್ಲೂಕಿನ, ಬಿಳಿಗೆರೆ ಹೋಬಳಿಯ ಸರಗೂರು ಗ್ರಾಮದಲ್ಲಿ ಜಿಲ್ಲಾ ಕೃಷಿ ತರಬೇತಿ ಕೇಂದ್ರ ನಾಗನಹಳ್ಳಿ ವತಿಯಿಂದ ನಡೆದ ?ಕೃಷಿ ಮತ್ತು ತೋಟಗಾರಿಕೆ ಬೆಳೆಗಳಲ್ಲಿ ಹನಿ ತುಂತುರು ನೀರಾವರಿ ಹಾಗೂ ರಸಾವರಿ ಪದ್ದತಿಗಳ ಅಳವಡಿಕೆ? ಎಂಬ ವಿಷಯದ ಕುರಿತು ಒಂದು ದಿನದ ಹೊರಾಂಗಣ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಒಂದೆಡೆ ಮಳೆ ಕೊರತೆಯಿಂದ ತೊಂದರೆಯಾದರೆ ಇನ್ನೊಂದೆಡೆ ಅಂತರ್ಜಲ ಕುಸಿಯುತ್ತಿದೆ. ಇಂತಹ ಸಂದರ್ಭಗಳಲ್ಲಿ ಇಲಾಖೆಯಿಂದ ಶೇಕಡ 90 ರ ಸಹಾಯಧನದಲ್ಲಿ ನೀಡಲಾಗುವ ಹನಿ ಮತ್ತು ತುಂತುರು ನೀರಾವರಿ ಘಟಕಗಳನ್ನು ಅಳವಡಿಸಿಕೊಂಡು ರೈತರು ಬೆಳೆಗಳನ್ನು ಬೆಳೆಯಬೇಕು ಎಂದು ರೈತರಿಗೆ ಕಿವಿ ಮಾತು ಹೇಳಿದರು.

ಸುತ್ತೂರಿನ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಯಾದ ಡಾ.ಪ್ರಸಾದ್ ರವರು ಮಾತನಾಡಿ ಭತ್ತದ ಬೆಳೆಯಲ್ಲಿ ಕಂಡುಬರುವ ರೋಗ ಮತ್ತು ಕೀಟಗಳ ಬಗ್ಗೆ ಹಾಗೂ ಅವುಗಳ ಹತೋಟಿ ಕ್ರಮಗಳು ಮತ್ತು ವಿಧಾನಗಳ ಕುರಿತು ಮಾಹಿತಿ ನೀಡಿದರು. ಇತ್ತೀಚಿನ ದಿನಗಳಲ್ಲಿ ಬೆಂಕಿ ರೋಗಕ್ಕೆ ಬೇಗನೆ ತುತ್ತಾಗುವ ಜ್ಯೋತಿ ಭತ್ತದ ಬದಲಾಗಿ ಕೆ.ಎಂ.ಪಿ-220 ತಳಿಯನ್ನು ಬೆಳೆಯುವಂತೆ ತಿಳಿಸಿದರು. ಅದೇ ರೀತಿ ಪೂರ್ವ ಮುಂಗಾರಿನ ಉದ್ದು ಬೆಳೆಗೆ ಕಾಣಿಸಿಕೊಳ್ಳುವ ಹಳದಿ ನಂಜಾಣು ರೋಗಕ್ಕೆ ನಿರೋದಕತೆ ಹೊಂದಿರುವ ಎಲ್ .ಬಿ.ಜಿ.-791 ತಳಿಯ ಬೀಜಗಳನ್ನು ರೈತರು ಬಳಸಬೇಕು ಎಂದರು.

ವಿಸ್ತರಣಾ ಶಿಕ್ಷಣ ಘಟಕದ ಸಹಾಯಕ ಪ್ರಾಧ್ಯಾಪಕರಾದ ಡಾ.ರಾಹುಲ್‌ದಾಸ್ ರವರ ಮಾತನಾಡಿ ಕೃಷಿ ಮತ್ತು ತೋಟಗಾರಿಕೆ ಬೆಳೆಯಲ್ಲಿ ಹನಿ ನೀರಾವರಿ ಹಾಗೂ ರಸಾವರಿ ಪದ್ದತಿಗಳ ಅಳವಡಿಕೆ ಕುರಿತು ಮಾಹಿತಿ ನೀಡಿದರು.

ಬಿಳಿಗೆರೆ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ವಿರೂಪಾಕ್ಷ ಅವರು ಕೃಷಿ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು. ಸಹಾಯಕ ತಾಂತ್ರಿಕ ವ್ಯವಸ್ಥಾಪಕಿಯಾದ ಶೃತಿ ಅವರು ಪಿ ಎಂ ಕಿಸಾನ್ ಇಕೆವೈಸಿ ನೋಂದಣಿ, ಬೆಳೆ ಸಮೀಕ್ಷೆ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ನಗರ್ಲೆ ಗ್ರಾಮ ಪಂಚಾಯಿತಿ ಸದಸ್ಯರಾದ ನಾಗರಾಜು ಹಾಗೂ ನಟರಾಜು, ರೈತ ಮುಖಂಡರಾದ ವಿಜಯ್, ಶಿವಣ್ಣ, ಸೋಮಣ್ಣ, ಪ್ರಗತಿಪರ ರೈತಮಹಿಳೆ ರಾಧಾಮಣಿ ಇನ್ನಿತರರು ಉಪಸ್ಥಿತರಿದ್ದರು.

# ಬೃಹತ್ ಕ್ಯಾನ್ವಾಸ್ ಮೇಲೆ ಚಿತ್ರ ಬಿಡಿಸುವ ಮೂಲಕ ಸಂವಿಧಾನ ಜಾಗೃತಿ

**ಮೈಸೂರು:** ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು(ಕಾ.ವ) ವಿದ್ಯಾರ್ಥಿಗಳಿಂದ ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗ ಆಯೋಜಿಸಲಾಗಿದ್ದ ಬೃಹತ್ ಕ್ಯಾನ್ವಾಸ್ ಮೇಲೆ ಸಂವಿಧಾನ ಸಂಬಂಧಿ ಚಿತ್ರಗಳನ್ನು ಬಿಡಿಸುವ ಮೂಲಕ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳಾದ ಡಾ.ಕೆ.ವಿ ರಾಜೇಂದ್ರ ಅವರು ಚಾಲನೆ ನೀಡಿದರು.

ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿವಿಧ ರೀತಿಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದರ ಮೂಲಕ ಸಾರ್ವಜನಿಕರಿಗೆ ಸಂವಿಧಾನ ಪೀಠಿಕೆ ಹಾಗೂ ನಿರ್ದೇಶಕ ತತ್ವಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಪ್ರತಿಯೊಬ್ಬರೂ ಸಂವಿಧಾನದ ಬಗ್ಗೆ ತಿಳಿಯಬೇಕು ಎಂದು ಅವರು ತಿಳಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕರಾದ ರಂಗೇಗೌಡ ಅವರು ಮಾತನಾಡಿ ಭಾರತದ ಸಂವಿಧಾನದ ಬಗ್ಗೆ ಇಂದಿನ ಯುವಕರು ಹಾಗೂ ಸಾರ್ವಜನಿಕರು ಕಡಿಮೆ ಜ್ಞಾನವನ್ನು ಹೊಂದಿದ್ದಾರೆ. ಹಾಗಾಗಿ ಇದರ ಬಗ್ಗೆ ಜಾಗೃತಿಯನ್ನು ಮೂಡಿಸಿ ಅರಿವನ್ನು ತುಂಬುವುದೇ ಕಾರ್ಯಕ್ರಮದ ಮುಖ್ಯ ಉದ್ದೇಶ ಎಂದರು. ಸಂವಿಧಾನ ಎಂಬುದು ಅವಿರತ ಶಕ್ತಿಯಾಗಿ ನಮ್ಮ ಹಿಂದೆ ಕೆಲಸ ಮಾಡುತ್ತಿದೆ. ಅದರ ಬಗ್ಗೆ ಇನ್ನು ಹೆಚ್ಚಿನ ಮಾಹಿತಿ ತಿಳಿದು ಅದರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಈಗಿರುವ ಸಮಸ್ಯೆಗಳು ನಿವಾರಣೆಯಾಗಿ ಶಾಂತಿ ನೆಲಸುತ್ತದೆ ಎಂದರು.

ಈ ಸಂದರ್ಭದಲ್ಲಿ ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ಇಲಾಖೆಯ ಆಯುಕ್ತರಾದ ದೇವರಾಜ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಸಿದ್ಧಲಿಂಗು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.



**ಕರ್ನಾಟಕ ಸರ್ಕಾರ**
**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ**
**ಕಾರ್ಯಪಾಲಕ ಇಂಜಿನಿಯರ್ ರವರ ಕಛೇರಿ,**
**ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ವಿಭಾಗ, ಮೈಸೂರು**

**ಅಲ್ಪಾವಧಿ ಟೆಂಡರ್ ಅಧಿಸೂಚನೆ ಸಂಖ್ಯೆ: 05/2023-24, ದಿ: 20.02.2024**

ಕರ್ನಾಟಕ ಸರ್ಕಾರದ ರಾಜ್ಯಪಾಲರ ಪರವಾಗಿ ಕಾರ್ಯಪಾಲಕ ಇಂಜಿನಿಯರ್ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ವಿಭಾಗ, ನಜರ್‌ಬಾದ್, ಮೈಸೂರು-570010 ರವರು ಕೆ.ಡಬ್ಲ್ಯು-2, 3 ಮತ್ತು 4ರ ರೀತ್ಯ ಟೆಂಡರ್ ಆಹ್ವಾನಿಸಲಾಗಿದ್ದು, ಇದರಲ್ಲಿ ಒಟ್ಟು 14 ಕಾಮಗಾರಿಗಳು ಇದ್ದು ಇವುಗಳ ಟೆಂಡರ್‌ಗಿಟ್ಟ ಕನಿಷ್ಠ ಮೊತ್ತ ರೂ.50.00 ಲಕ್ಷಗಳು, ಗರಿಷ್ಠ ಟೆಂಡರ್‌ಗಿಟ್ಟ ಮೊತ್ತ ರೂ.150.00 ಲಕ್ಷಗಳಾಗಿದ್ದು, ಕನಿಷ್ಠ ಇ.ಎಂ.ಡಿ ಮೊತ್ತ ರೂ.0.50 ಲಕ್ಷಗಳು, ಗರಿಷ್ಠ 2.25 ಲಕ್ಷಗಳಾಗಿರುತ್ತದೆ. ಈ ಕಾಮಗಾರಿಗಳಿಗೆ ಐಟಂವಾರು ಟೆಂಡರನ್ನು "ಸ್ಟ್ಯಾಂಡರ್ಡ್ ಟೆಂಡರ್ ಡಾಕ್ಯುಮೆಂಟ್"ನಲ್ಲಿನ ಷರತ್ತುಗಳಿಗನು ಗುಣವಾಗಿ ಕರೆಯಲಾಗಿದ್ದು, ಇ-ಪ್ರೊಕ್ಯೂರ್‌ಮೆಂಟ್" ಮೂಲಕ ನೋಂದಾಯಿತ ಗುತ್ತಿಗೆದಾರರಿಂದ ಬಿಡ್ಡನ್ನು ಆಹ್ವಾನಿಸಲಾಗಿದೆ. ಸದರಿ ಟೆಂಡರ್‌ಗೆ ಸಂಬಂದಿಸಿದ ಮಾಹಿತಿಗಳು ಈ ಕೆಳಕಂಡಂತಿರುತ್ತವೆ. ಟೆಂಡರ್‌ಗೆ ಸಂಬಂಧಿಸಿದ ಮಾಹಿತಿಗಳನ್ನು ಕಛೇರಿಯ ವೇಳೆಯಲ್ಲಿ ಈ ದಿನಾಂಕದೊಳಗೆ ಪಡೆಯಬಹುದಾಗಿರುತ್ತದೆ. ದಿ: 21.02.2024. ಭರ್ತಿಮಾಡಿದ ಟೆಂಡರ್ ದಾಖಲೆಗಳು ಮತ್ತು ಬಿಡ್ಡನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಸಲ್ಲಿಸಲು ಕಡೆಯ ದಿ: 22.02.2024 ರಿಂದ 28.02.2024-17-00 ಗಂಟೆ. ತಾಂತ್ರಿಕ ಬಿಡ್ ತೆರೆಯುವ ದಿ: 01.03.2024 ರ-11-00 ಗಂಟೆ ನಂತರ. ಆರ್ಥಿಕ ಬಿಡ್ಡ್ ತೆರೆಯುವ ದಿ: 04.03.2024ರ-11-00 ಗಂಟೆ ನಂತರ. ಟೆಂಡರ್ ದಾಖಲಾತಿಗಳನ್ನು ವೆಬ್‌ಸೈಟ್ www.eproc.karnataka.gov.in" ರಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು ಹೆಚ್ಚಿನ ಮಾಹಿತಿಯನ್ನು ಈ ಕೆಳಗೆ ಸಹಿ ಮಾಡಿರುವವರ ಕಛೇರಿಯಲ್ಲಿ ಕೆಲಸದ ವೇಳೆಯಲ್ಲಿ ಪಡೆಯಬಹುದು.

**ವಿ.ಸೂ:** ಸದರಿ ಕಾಮಗಾರಿಗಳ ಟೆಂಡರ್‌ಗಳನ್ನು ಮುಂದೂಡುವ ಅಥವಾ ತಿರಸ್ಕರಿಸುವ ಹಕ್ಕನ್ನು ಹಾಗೂ ಯಾವುದೇ ಬಿಡ್ಡನ್ನು ತಿರಸ್ಕರಿಸುವ ಹಕ್ಕನ್ನು ಕಾರ್ಯಪಾಲಕ ಇಂಜಿನಿಯರ್, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ವಿಭಾಗ, ಮೈಸೂರು ಇವರಿಗೆ ಕಾಯ್ದಿರಿಸಲಾಗಿದೆ. ಹಾಗೂ ಈ ಪ್ರಕಟಣೆಗೆ ಸಂಬಂಧಿಸಿದಂತೆ, ಯಾವುದೇ ತಿದ್ದುಪಡಿಗಳನ್ನು ಇ-ಪ್ರೊಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಪ್ರಕಟಿಸಲಾಗುವುದು.

ಸಹಿ/- ಕಾರ್ಯಪಾಲಕ ಇಂಜಿನಿಯರ್

DIPR/DDMYS/KSMCA/1132/2023-24

## ಬಹಿರಂಗ ಹರಾಜು

**ಮಂಡ್ಯ:** ಮಂಡ್ಯ ಜಿಲ್ಲೆಯ ವ್ಯಾಪ್ತಿಯಲ್ಲಿ ದಾಖಲಾದ ವಿವಿಧ ಅಬಕಾರಿ ಪ್ರಕರಣಗಳಲ್ಲಿ ಜಪ್ತಿಪಡಿಸಿಕೊಂಡು ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಂಡಿರುವ ಮಂಡ್ಯ, ಮದ್ದೂರು, ಮಳವಳ್ಳಿ, ಶ್ರೀರಂಗಪಟ್ಟಣ, ನಾಗಮಂಗಲ, ಕೆ.ಆರ್ ಪೇಟೆ ವಲಯದ ವಿವಿಧ ಮಾದರಿಯ ವಾಹನಗಳನ್ನು ಆಯಾಯ ವಲಯ ಕಚೇರಿಯ ಆವರಣದಲ್ಲಿ ಟೆಂಡರ್ ಕಂ ಬಹಿರಂಗ ಹರಾಜು ಮಾಡಲಾಗುವುದು. ಸದರಿ ವಾಹನಗಳು ಹೇಗಿದೆಯೋ ಯಥಾಸ್ಥಿತಿಯಲ್ಲಿ ಷರತ್ತಿಗೊಳಪಟ್ಟು ಪ್ರಕಟಣೆಯನ್ನು ಹೊರಡಿಸಲಾಗಿದೆ. ಆಸಕ್ತಿಯುಳ್ಳ ಬಿಡ್ಡುದಾರರು ಫೆಬ್ರವರಿ 29 ರಂದು ಬೆಳಿಗ್ಗೆ 11 ಗಂಟೆಗೆ ಮಂಡ್ಯ ವಲಯದಲ್ಲಿ, ಮಾರ್ಚ್ 1 ರಂದು ಬೆಳಿಗ್ಗೆ 11 ಗಂಟೆಗೆ ಮದ್ದೂರು ವಲಯದಲ್ಲಿ, ಮಾರ್ಚ್ 2 ರಂದು ಬೆಳಿಗ್ಗೆ 11 ಗಂಟೆಗೆ ಮಳವಳ್ಳಿ ವಲಯದಲ್ಲಿ, ಫೆಬ್ರವರಿ 29 ರಂದು ಬೆಳಿಗ್ಗೆ 11 ಗಂಟೆಗೆ ಶ್ರೀರಂಗಪಟ್ಟಣ ವಲಯದಲ್ಲಿ, ಮಾರ್ಚ್ 2 ಬೆಳಿಗ್ಗೆ 11 ಗಂಟೆಗೆ ನಾಗಮಂಗಲ ವಲಯದಲ್ಲಿ, ಮಾರ್ಚ್ ಒಂದು ಬೆಳಿಗ್ಗೆ 11 ಗಂಟೆಗೆ ಕೆ.ಆರ್. ಪೇಟೆ ವಲಯದಲ್ಲಿ ಬಹಿರಂಗ ರಾಜು ಮಾಡುವುದಾಗಿ ಮಂಡ್ಯ ಡೆಪ್ಯೂಟಿ ಕಮಿಷನರ್ ಆಫ್ ಎಕ್ಸೈಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಮಂಡ್ಯ ನಗರಸಭೆ ವ್ಯಾಪ್ತಿಯಲ್ಲಿ 202324ನೇ ಸಾಲಿಗೆ ಎಫ್. ಎಫ್. ಸಿ ಶೇ. 24.10% ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಕಲ್ಯಾಣ ಕಾರ್ಯಕ್ರಮಗಳ ಅಡಿಯಲ್ಲಿ ಪ್ರೋತ್ಸಾಹ ಧನ ಪಡೆಯಲು ಪರಿಶಿಷ್ಟ ಪಂಗಡದ ಜನಾಂಗಕ್ಕೆ ಸೇರಿದ ಅರ್ಹ ಅಭ್ಯರ್ಥಿಗಳಿಂದ ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಹ ಅಭ್ಯರ್ಥಿಗಳು ನಗರಸಭೆಯಿಂದ ಅರ್ಜಿಯನ್ನು ಪಡೆದು ಹಿಂದಿನ ಸಾಲಿನ ಉತ್ತೀರ್ಣಗೊಂಡ ಅಂಕಪಟ್ಟಿ, ಪರಿಶಿಷ್ಟ ಪಂಗಡದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬಿಪಿಎಲ್ ಪಡಿತರ ಚೀಟಿ ಪ್ರತಿ, ಪ್ರಸತ್ತ ಸಾಲಿನ ವ್ಯಾಸಂಗ ಮಾಡುತ್ತಿರುವ ದೃಡೀಕರಣ ಪತ್ರ, ಚಾಲ್ತಿಯಲ್ಲಿರುವ ಬ್ಯಾಂಕ್ ಪಾಸ್ ಪುಸ್ತಕ, ಪಾಸ್ ಪೋರ್ಟ್ ಸೈಜ್ ಫೋಟೋ ಹಾಗೂ ಆಧಾರ್ ಕಾರ್ಡ್ ಅನ್ನು ಒಳಗೊಂಡಂತೆ ಅಗತ್ಯ ದಾಖಲೆಗಳೊಂದಿಗೆ ನಗರ ಸಭೆಗೆ ಸಲ್ಲಿಸಲು ಮಾರ್ಚ್ 7 ಕೊನೆಯ ದಿನಾಂಕವಾಗಿದೆ. ಮೊದಲು ಬಂದ ಅರ್ಜಿಗಳಿಗೆ ಆದ್ಯತೆ ನೀಡಲಾಗುವುದು ಹಾಗೂ ಅವಧಿ ಮೀರಿ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಳಿಗಾಗಿ ನಗರ ಸಭೆಯ ನಲ್ಮ್ ಶಾಖೆಯನ್ನು ಸಂಪರ್ಕಿಸಬಹುದು ಎಂದು ಮಂಡ್ಯ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೃಹತ್ ಉದ್ಯೋಗ ಮೇಳ

ಚಿಕ್ಕಬಳ್ಳಾಪುರ: ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ ನಿರ್ದೇಶಕರ ಆದೇಶದನ್ವಯ ಫೆಬ್ರವರಿ 26 ಮತ್ತು 27 ರಂದು ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದವತಿಯಿಂದ ಆಯೋಜಿಸಲಾಗಿದ್ದು, ವಿಕಲಚೇತನ ಉದ್ಯೋಗಾಕಾಂಕ್ಷಿಗಳು https://udyoga.skillconnet.kaushalkar.com ಲಿಂಕ್ ನಲ್ಲಿ ನೋಂದಾಯಿಸುವಂತೆ ಸೂಚಿಸಲಾಗಿದೆ. ಆದ್ದರಿಂದ ಜಿಲ್ಲೆಯಲ್ಲಿರುವ ವಿಕಲಚೇತನ ಉದ್ಯೋಗಾಕಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ರಾಜ್ಯ ಮಟ್ಟದ ಬೃಹತ್ ಉದ್ಯೋಗ ಮೇಳದಲ್ಲಿ ಭಾಗವಹಿಸುವಂತೆ ನಾಗರಿಕರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 25ಕ್ಕೆ ಐಕ್ಯಾತಾ ಸಮಾವೇಶ

**ಚಿಕ್ಕಬಳ್ಳಾಪುರ:** ''ಸಂವಿಧಾನ ಜಾಗೃತಿ ಜಾಥ'' ಅಂಗವಾಗಿ ಐಕ್ಯಾತಾ ಸಮಾವೇಶ ಕಾರ್ಯಕ್ರಮವು ಬೆಂಗಳೂರು ಅರಮನೆ ಮೈದಾನದಲ್ಲಿ ದಿನಾಂಕ:25-02-2024 ರಂದು ಮದ್ಯಾಹ್ನ 3.00 ಗಂಟೆಗೆ ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಮಾರೋಪ ಸಮಾರಂಭವನ್ನು ಏರ್ಪಡಿಸಿದ್ದು, ಸದರಿ ದಿನದಂದು ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಿಂದ ಹಾಗೂ ತಾಲ್ಲೂಕು ಕೇಂದ್ರ ಸ್ಥಾನಗಳಿಂದ ಕಾರ್ಯಕ್ರಮಕ್ಕೆ ತೆರಳಲು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ವತಿಯಿಂದ ಬಸ್‌ಗಳನ್ನು ವ್ಯವಸ್ಥೆ ಮಾಡಲಾಗಿದ್ದು ಹಾಗೂ ಸಮಾರಂಭದಲ್ಲಿ ಭಾಗವಹಿಸುವ ಸಾರ್ವಜನಿಕರಿಗೆ ಊಟದ ವ್ಯವಸ್ಥೆಗೊಳಿಸಲಾಗಿದ್ದು, ಬಸ್‌ಗಳು ಎಲ್ಲಾ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನಗಳಿಂದ ಹಾಗೂ ತಾಲ್ಲೂಕು ಕೇಂದ್ರ ಸ್ಥಾನಗಳಿಂದ ಬೆಳಿಗ್ಗೆ 10.00 ಗಂಟೆಗೆ ಹೊರಡುತ್ತಿದ್ದು ಸಂಘ ಸಂಸ್ಥೆಗಳ ಮುಖಂಡರು/ ಪದಾಧಿಕಾರಿಗಳು/ ಸಾರ್ವಜನಿಕರು ನಿಗಧಿತ ಸಮಯಕ್ಕೆ ಬಸ್‌ಗಳಲ್ಲಿ ಹೊರಡಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಸಮಾಜಕಲ್ಯಾಣ ಇಲಾಖೆಯ ಉಪ ನಿರ್ದೇಶಕ ತೇಜಾನಂದರೆಡ್ಡಿ ತಿಳಿಸಿದ್ದಾರೆ.

## ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗೆ ಅರ್ಜಿ ಆಹ್ವಾನ

**ರಾಮನಗರ:** ಕಂದಾಯ ಇಲಾಖೆಯಲ್ಲಿ ಖಾಲಿ ಇರುವ ಉಳಿಕೆ ಮೂಲ ವೃಂದ ಹಾಗೂ ಕಲ್ಯಾಣ ಕರ್ನಾಟಕ ವೃಂದದಲ್ಲಿರುವ ಒಟ್ಟು 1,000 ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ಭರ್ತಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅರ್ಜಿ ಆಹ್ವಾನಿಸಿದೆ. ದ್ವಿತೀಯ ಪಿ.ಯು.ಸಿ ಅಥವಾ ತತ್ಸಮಾನ ಪರೀಕ್ಷೆಗಳಲ್ಲಿ ಉತ್ತೀರ್ಣರಾದ ಆಸಕ್ತರು ಇದೇ ಮಾರ್ಚ್ 4 ರಿಂದ https://kea.kar.nic.inರ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ನೇರ ನೇಮಕಾತಿ ಮೂಲಕ ಆಯ್ಕೆ ಮಾಡಲಾಗುವುದು. ಅರ್ಜಿ ಸಲ್ಲಿಕೆಗೆ ಏಪ್ರಿಲ್ 3 ಕೊನೆಯ ದಿನವಾಗಿದ್ದು, ಏಪ್ರಿಲ್ 6ರ ವರೆಗೆ ಶುಲ್ಕ ಪಾವತಿಗೆ ಅವಕಾಶವಿದೆ. ಅಭ್ಯರ್ಥಿಗಳು ಒಂದು ಜಿಲ್ಲೆಗೆ ಆಯ್ಕೆ ಬಯಸಿ ಅಗತ್ಯ ದಾಖಲೆ ಜೊತೆಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗೆ 080-23460460 ಗೆ ಸಂಪರ್ಕಿಸುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಪ್ರಕಟಣೆ ತಿಳಿಸಿದೆ.

# ಪಾರ್ಶ್ವವಾಯು ಅಧ್ಯಯನ ಮತ್ತು ಸಮೀಕ್ಷೆಗೆ ಮುಳಬಾಗಲು ಆಯ್ಕೆ

**ಕೋಲಾರ:** ಸ್ಟ್ರೋಕ್ ಯೋಜನೆಯು ಸಮುದಾಯ ಆಧಾರಿತ ದೊಡ್ಡ ಮಟ್ಟದ ಸಂಶೋಧನ ಅಧ್ಯಯನವಾಗಿದ್ದು, ಈ ಅಧ್ಯಯನಕ್ಕೆ ಕೋಲಾರ ಜಿಲ್ಲೆಯ ಮುಳಬಾಗಿಲುನ್ನು ಆಯ್ಕೆ ಮಾಡಿಕೊಂಡಿರುವುದು ಸಂತಸವಾಗಿದೆಯೆಂದು ಅಕ್ರಂ ಪಾಷ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿ ಆಡಿಟೋರಿಯಂನಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ನಿಮಾನ್ಸ್ ಸಂಸ್ಥೆ ವತಿಯಿಂದ ನಿಮಾನ್ಸ್ ಸ್ಟ್ರೋಕ್ ಪ್ರಾಜೆಕ್ಟ್ ಉದ್ಘಾಟನೆ ಕಾರ್ಯಕ್ರಮ ಸಹಯೋಗದಲ್ಲಿ ಆಯೋಜಿಸಿದ್ದ, ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಚಂದ್ರಲೋಕ ಮಂಗಳಲೋಕವನ್ನು ಕಂಡಿದ್ದೇವೆ. ಆದರೆ ನಮ್ಮೊಳಗೆ ನಡೆಯುವ ಖಾಯಿಲೆಗಳ ಬಗ್ಗೆ ತಿಳಿದೇ ಇರುವುದಿಲ್ಲ. ಹಾಗಾಗಿ ಪಾರ್ಶ್ವವಾಯುವಿಗೆ ಕಾರಣವಾಗುವ ಅಪಾಯಕಾರಿ ಅಂಶಗಳು, ಆರಂಭ, ಚಿಕಿತ್ಸೆ ಹಾಗೂ ಫಲಿತಾಂಶಗಳನ್ನು ಪರೀಕ್ಷಿಸುವ ಗುರಿಯನ್ನು ಹೊಂದಿದೆ. ಸೂರ್ಯನ ಪ್ರಥಮ ಕಿರಣ ಬೀಳುವ ಮೂಡಲಬಾಗಿಲು ಊರಿಗೆ ಸ್ಟ್ರೋಕ್ ಯೋಜನೆ ಆಶಾಕಿರಣವಾಗಿ ಬಂದಿದೆ. ಇದಕ್ಕಾಗಿ ನಿಮ್ಹಾನ್ಸ್ ತಂಡಕ್ಕೆ ಜಿಲ್ಲಾಡಳಿತದಿಂದ ಧನ್ಯವಾದ ತಿಳಿಸಿದರು. ನಾಲ್ಕು ಜನರಲ್ಲಿ ಒಬ್ಬರಿಗೆ ಈ ರೋಗ ಬಿರುತ್ತಿದ್ದು, ನಮ್ಮ ಬದಲಾದ ಜೀವನ ಶೈಲಿಯೇ ಮುಖ್ಯಕಾರಣವಾಗಿದೆ. ಜನರ ಮೂಢ ನಂಬಿಕೆ ತೊಡೆದು ಹಾಕಿ ಅವರಲ್ಲಿ ಜಾಗೃತಿ ಮೂಡಿಸಲು ಆರೋಗ್ಯ ಸಿಬ್ಬಂದಿ, ಆಶಾಕಾರ್ಯಕರ್ತರು ಬಹಳ ಪ್ರಮುಖ ಪಾತ್ರ ವಹಿಸಬೇಕಾಗಿದೆ ಎಂದರು.

ನಿಮ್ಹಾನ್ಸ್ ಸಿಬ್ಬಂದಿಯವರು ಮನೆಗೆ ಭೇಟಿ ನೀಡಿದಾಗ ಅವರೊಂದಿಗೆ ಸಹಕರಿಸಿ ಅವರಿಗೆ ಬೇಕಾದ ಮಾಹಿತಿಯನ್ನು ನೀಡಿ ಇದರಿಂದ ಮುಂದೊಂದು ದಿನ ಲಕ್ವಾ ಔಷಧಿ ಕಂಡುಹಿಡಿಯುವಲ್ಲಿ ಹಲವು ವಿಶೇಷತೆಯುಳ್ಳ ಮುಳಬಾಗಿಲಿಗೆ ಮತ್ತೊಂದು ಗುರಿ ಮೂಡಿದಂತಾಗುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನರವಿಜ್ಞಾನ ಸಂಸ್ಥೆಯ ನಿರ್ದೇಶಕರಾದ ಡಾ. ಪ್ರತೀಮಾ ಮೂರ್ತಿ ಮಾತನಾಡಿ, ಪಾರ್ಶ್ವವಾಯು ಮತ್ತು ಅದರ ಪರಿಣಾಮವು ಜಾಗತಿಕ ಮಟ್ಟದಲ್ಲಿ ಕಾಡುತ್ತಿರುವ ಸಮಸ್ಯೆಯಾಗಿದೆ. ಅಧಿಕ ರಕ್ತದೊತ್ತಡ, ಸಕ್ಕರೆ ಖಾಯಿಲೆ, ಅಧಿಕ ತೂಕ ಮದ್ಯಪಾನ, ಧೂಮಪಾನ, ತಂಬಾಕು ಸೇವನೆಯಂತಹ ದುಶ್ಚಟಗಳಿಂದ ಈ ಲಕ್ವಾ ಸಂಭವಿಸುತ್ತದೆ. ಲಕ್ವಾ ಸಂಭವಿಸಿದ ಗೋಲ್ಡನ್ ಹವರ್ ಅಂದರೆ ಆರು ಗಂಟೆಯೊಳಗಾಗಿ ಆ ವ್ಯಕ್ತಿಗೆ ಚಿಕಿತ್ಸೆ ನೀಡಬೇಕಾಗಿರುವುದು ತುಂಬಾ ಅವಶ್ಯಕವಾಗಿರುತ್ತದೆ. ರಾಜ್ಯದ ಬೇರೆ-ಬೇರೆಕಡೆಯಿಂದ ಬೆಂಗಳೂರು ನಿಮ್ಹಾನ್ಸ್‌ಗೆ ಬರುವುದು ಸಾರ್ವಜನಿಕರಿಗೆ ತುಂಬಾ ತೊಂದರೆಯಾಗುತ್ತದೆ. ಹಾಗಾಗಿ ರೋಗಿಗಳಿರುವ ಜಾಗದಲ್ಲೇ ಚಿಕಿತ್ಸೆ ದೊರೆಯುವಂತೆ ಮಾಡಲು ಮೆದುಳು ಆರೋಗ್ಯಕ್ಕೆ ಒತ್ತು ನೀಡಲಾಗುತ್ತಿದೆ. ಖಾಯಿಲೆಗೆ ಔಷಧಿ ಕೊಡುವುದು ಒಂದೆಡೆಯಾದರೆ ಅದನ್ನು ಬಿರದಂತೆ ತಡೆಗಟ್ಟುವುದೇ ನಿಮ್ಹಾನ್ಸ್‌ನ ಉದ್ದೇಶವಾಗಿದೆ ಎಂದರು.

ಈ ಎಲ್ಲಾ ಕಾರಣಗಳ ಜೊತೆಗೆ ಸ್ಟ್ರೋಕ್‌ಗೆ ಕಾರಣವಾಗುವ ಹೊಸ ಅಂಶಗಳನ್ನು ಪತ್ತೆಹಚ್ಚುವುದು ಮತ್ತು ಪಾರ್ಶ್ವವಾಯುವಿನ ಪರಿಣಾಮಗಳಿಗೆ ಸಂಬಂಧಿಸಿದ ವಿವಿಧ ಅಂಶಗಳಾದ ಅಂಗವೈಕಲ್ಯತೆ, ಜೀವನದ ಗುಣಮಟ್ಟ ಹಾಗೂ ಸಾಮಾಜಿಕ ಆರ್ಥಿಕ ಗುಣಮಟ್ಟವನ್ನು ಅರ್ಥಮಾಡಿಕೊಂಡು ಪಾರ್ಶ್ವವಾಯು ತಡೆಗಟ್ಟುವ ಮಾರ್ಗಗಳನ್ನು ಪರಿಣಾಮಕಾರಿ ಚಿಕಿತ್ಸಾ ವಿಧಾನಗಳನ್ನು ಕಂಡುಕೊಳ್ಳುವುದು ತುಂಬಾ ಅವಶ್ಯವಾಗಿದೆ. ಹೀಗಾಗಿ ಕೋಲಾರ ಜಿಲ್ಲೆಯ ಮುಳಬಾಗಲು ತಾಲ್ಲೂಕಿನ ನಗರ ಮತ್ತು ಗ್ರಾಮೀಣ ಭಾಗದಲ್ಲಿ ಸಮೀಕ್ಷೆಯನ್ನು ಆರಂಭಿಸಲಾಗುವುದು ಎಂದರು. ಸಾರ್ವಜನಿಕ ಸಹಕಾರದೊಂದಿಗೆ ಈ ಸಮೀಕ್ಷೆಯನ್ನು ಮಾಡಲಾಗುವುದು ಎಂದರು. ಈ ಸ್ಟ್ರೋಕ್ ಯೋಜನೆಯನ್ನು ಎಪಿಡೀಮಿಯಾಲಜಿ ವಿಭಾಗ, ಜನ ಆರೋಗ್ಯ ಕೇಂದ್ರ, ನಿಮ್ಹಾನ್ಸ್‌ನಿಂದ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೋಲಾರ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಬೆಂಬಲದೊಂದಿಗೆ ಹಾಗೂ ಖಿಎಂಓ ರಿಸರ್ಚ್ ಟ್ರಸ್ಟ್‌ನ ಅನುದಾನದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ ಎಂದರು.

ಸ್ಟ್ರೋಕ್ ಕುರಿತು ಜನರಲ್ಲಿ ಜಾಗೃತಿ ಮತ್ತು ತಿಳುವಳಿಕೆಯನ್ನು ಮೂಡಿಸುವ ಗುರಿ ಹೊಂದಲಾಗಿದೆ. ಈ ಯೋಜನೆಯಿಂದ ಕೋಲಾರದ ಆರೋಗ್ಯ ಆರೈಕೆ ವ್ಯವಸ್ಥೆಯಲ್ಲಿ ಪಡೆಯುವ ಮಹತ್ವದ ಬಗ್ಗೆ ಬೆಳಕು ಚೆಲ್ಲಿದರು. ನಿಮ್ಹಾನ್ಸ್ ದೇಶದ ಸುಮಾರು 600ಕ್ಕೂ ಹೆಚ್ಚು ಹಳ್ಳಿಗಳಲ್ಲಿ ಮಾನಸಿಕ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಇದಕ್ಕಾಗಿ ಫಊಔ ವಿಶ್ವ ಆರೋಗ್ಯ ಸಂಸ್ಥೆಯಿಂದ ನೆಲ್ಸನ್ ಮಂಡೇಲಾ ಪ್ರಶಸ್ತಿ ಸಂದಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯುವಜನರ ಆರೋಗ್ಯ ಸಮೀಕ್ಷಾ ವರದಿ ಕೋಲಾರ ಇದನ್ನು ಬಿಡುಗಡೆ ಮಾಡಲಾಯಿತು. ಇದರಲ್ಲಿ ಆರೋಗ್ಯ ನೀತಿಗಳು ಮತ್ತು ಕಾರ್ಯಕ್ರಮಗಳನ್ನು ಬಲಪಡಿಸುವ ಅಗತ್ಯವನ್ನು ಸಮೀಕ್ಷೆ ಒತ್ತಿ ಹೇಳುತ್ತದೆ.

### ಜಿ.ಪಂ. ಉಪ ಕಾರ್ಯದರ್ಶಿ ಲಕ್ಷ್ಮೀ ಅನಿಸಿಕೆ

# ಪ್ರತಿಭೆ ಅನಾವರಣಕ್ಕೆ ಮಕ್ಕಳ ಸಾಹಿತ್ಯ ಸಂಭ್ರಮ ಉತ್ತಮ ವೇದಿಕೆ

**ಚಾಮರಾಜನಗರ:** ಮಕ್ಕಳಲ್ಲಿರುವ ಕಲಾತ್ಮಕ ಸುಪ್ತ ಪ್ರತಿಭೆಗಳ ಮೇಲೆ ಬೆಳಕು ಚೆಲ್ಲಲು ಮಕ್ಕಳ ಸಾಹಿತ್ಯ ಸಂಭ್ರಮ ಶಿಬಿರ ಉತ್ತಮ ವೇದಿಕೆಯಾಗಲಿದೆ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಪಿ. ಲಕ್ಷ್ಮೀ ಅವರು ತಿಳಿಸಿದರು.



ತಾಲೂಕಿನ ಮಂಗಲ ಗ್ರಾಮದ ಸರ್ಕಾರಿ ಪ್ರೌಢಶಾಲೆಯ ಅವರಣದಲ್ಲಿಂದು ಜಿಲ್ಲಾ, ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಮಂಗಲ ಗ್ರಾಮ ಪಂಚಾಯಿತಿ, ಭಾರತ ಜ್ಞಾನ ವಿಜ್ಞಾನ ಸಮಿತಿ ಕರ್ನಾಟಕದ ತಾಲೂಕು ಘಟಕ ಹಾಗೂ ಮೊಬಿಲಿಟಿ ಇಂಡಿಯಾ ಸಂಯುಕ್ತಾಶ್ರಯದಲ್ಲಿಂದು ಆಯೋಜಿಸಲಾಗಿದ್ದ ಚಾಮರಾಜನಗರ ತಾಲೂಕುಮಟ್ಟದ 3 ದಿನಗಳ ವಸತಿರಹಿತ ?ಮಕ್ಕಳ ಸಾಹಿತ್ಯ ಸಂಭ್ರಮ? ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳಿಗೆ ಶಾಲೆಗಳಲ್ಲಿ ದೈನಂದಿನ ಪಾಠ, ಪ್ರವಚನದ ಜೊತೆಗೆ ಕಥೆ ಕಟ್ಟುವುದು, ಕವಿತೆ ರಚನೆ, ನಾಟಕಗಳಲ್ಲಿ ಅಭಿನಯ, ಪ್ರಬಂಧ, ಚರ್ಚೆ, ವಾಚನ ಮಾಡುವುದು, ಬರಹ, ಅನುಭವ, ಕನಸು-ಕಲ್ಪನೆಗಳನ್ನು ವ್ಯಕ್ತಪಡಿಸುವುದು, ಸಾಹಿತ್ಯಾತ್ಮಕ ಚಟುವಟಿಕೆಗಳು ಸೇರಿದಂತೆ ಹಲವಾರು ಬಗೆಯ ಪ್ರತಿಭಾ ಕಲಾ ಪ್ರಾಕಾರಗಳನ್ನು ಹೊರಸೂಸಲು ಸಾಹಿತ್ಯ ಸಂಭ್ರಮ ಕಾರ್ಯಕ್ರಮವು ಸೂಕ್ತ ವೇದಿಕೆ ಒದಗಿಸಲಿದೆ. ಮಕ್ಕಳ ಉನ್ನತ ಸಾಧನೆಗೆ ಶಿಬಿರವು ಪ್ರೇರಣೆಯಾಗಬೇಕು ಎಂದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ರಾಜ್ಯಾದ್ಯಂತ ಮಕ್ಕಳ ಸಾಹಿತ್ಯ ಸಂಭ್ರಮ ಕಾರ್ಯಕ್ರಮ ಅನುಷ್ಠಾನಗೊಳ್ಳುತ್ತಿದ್ದು, ಮಕ್ಕಳ ಸಬಲೀಕರಣಕ್ಕಾಗಿ ಉತ್ತಮ ಹೆಜ್ಜೆ ಇಟ್ಟಿದೆ. ಶಿಬಿರಗಳ ನಿರ್ವಹಣೆಗಾಗಿ ನಿಯೋಜಿಸಿರುವ ಸಂಪನ್ಮೂಲ ಶಿಕ್ಷಕರು ಮಕ್ಕಳ ಪ್ರತಿಭೆ ಅನಾವರಣಕ್ಕಾಗಿ ಪೂರಕವಾಗಿ ಸ್ಪಂದಿಸಬೇಕು. ಮಕ್ಕಳು ಸಹ ತಮಗೆ ದೊರೆತಿರುವ ಸದಾವಕಾಶವನ್ನು ಸದ್ಬಳಕೆ ಮಾಡಕೊಳ್ಳಬೇಕು. ತಂದೆ ತಾಯಿ, ಗುರು ಹಿರಿಯರನ್ನು ಗೌರವದಿಂದ ಕಾಣಬೇಕು. ಸಮಾಜಕ್ಕೆ ಉತ್ತಮ ಕೊಡುಗೆ ನೀಡಬೇಕು ಎಂದು ಉಪ ಕಾರ್ಯದರ್ಶಿ ಲಕ್ಷ್ಮೀ ಅವರು ತಿಳಿಸಿದರು.

ಡಯಟ್ ಪ್ರಾಂಶುಪಾಲರಾದ ಕಾಶೀನಾಥ್ ಅವರು ಮಾತನಾಡಿ ಇಂದಿನ ಮಕ್ಕಳಲ್ಲಿ ಟಿ.ವಿ, ಮೊಬೈಲ್ ಬಳಕೆ ಅತಿಯಾಗಿದೆ. ಇದು ಸಲ್ಲದು. ನಿರಂತರ ಕಲಿಕೆಯ ಅಭ್ಯಾಸವನ್ನು ಹೆಚ್ಚಿಸಿಕೊಳ್ಳಬೇಕು. ಮಕ್ಕಳು ತಮ್ಮ ಊರಿನ ಸ್ಥಳೀಯ ಸಾಂಸ್ಕೃತಿಕ ಇತಿಹಾಸವನ್ನು ಅರಿಯಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಣ್ಣೆಗೌಡ ಅವರು ಮಾತನಾಡಿ ಮಕ್ಕಳು ಸಾಹಿತ್ಯಾತ್ಮಕ ಚಟುವಟಿಕೆಗಳ ಬಗ್ಗೆ ಹೆಚ್ಚು ಒಲವು ತೋರಬೇಕು. ಪುಸ್ತಕ ಓದುವ ಸಂಸ್ಕೃತಿಗೆ ಮಕ್ಕಳು ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿ ಉತ್ತಮ ಸಾಹಿತಿಗಳಿದ್ದಾರೆ. ಅವರನ್ನು ಮಾದರಿಯಾಗಿಸಿಕೊಂಡು ಮುನ್ನಡೆಯಬೇಕು ಎಂದರು. ಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಎಂ.ಎಸ್. ಅಣ್ಣಪ್ಪಸ್ವಾಮಿ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಮಕ್ಕಳು ಲಭ್ಯವಿರುವ ಸಾಹಿತ್ಯ ಗ್ರಂಥಗಳನ್ನು ಮನನ ಮಾಡಿ ಹೆಚ್ಚಿನ ಅನುಭವ ಪಡೆಯಬೇಕು. ಸಾಹಿತಿಗಳ ಹಾಗೂ ಉನ್ನತ ಸಾಧನೆ ಮಾಡಿರುವವರ ಜೀವನ ಚರಿತ್ರೆಗಳನ್ನು ಅರಿಯಬೇಕು ಎಂದು ತಿಳಿಸಿದರು. ಭಾರತ ಜ್ಞಾನ ವಿಜ್ಞಾನ ಸಮಿತಿ ಕರ್ನಾಟಕದ ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಶಾಂತ್ ಬಾಬು ಅವರು ಮಕ್ಕಳ ಸಾಹಿತ್ಯ ಸಂಭ್ರಮ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

# ಸಂವಿಧಾನ ಗೌರವಿಸುವುದು ನಮ್ಮೆಲರ ಆದ್ಯ ಕರ್ತವ್ಯ

**ಪಿರಿಯಾಪಟ್ಟಣ:** ಸಂವಿಧಾನದ ಆಶಯಗಳನ್ನು ಈಡೇರಿಸಲು ಪ್ರತಿಯೊಬ್ಬರು ಜಾಗೃತರಾಗಬೇಕು ಎಂದು ಮೊರಾರ್ಜಿ ದೇಸಾಯಿ ವಸತಿ ಶಾಲೆ ಪ್ರಾಂಶುಪಾಲರಾದ ಶಿವಣ್ಣ ತಿಳಿಸಿದರು.

ಪಟ್ಟಣದ ಸಮೀಪವಿರುವ ಕಗ್ಗುಂಡಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಿದ್ಯಾರ್ಥಿಗಳಿಂದ ಹಮ್ಮಿಕೊಂಡಿದ್ದ ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಸಂವಿಧಾನದಡಿಯಲ್ಲಿ ಪ್ರತಿಯೊಬ್ಬರು ರಕ್ಷಣೆಗೊಳಪಡುತ್ತಿದ್ದಾರೆ. ಸಂವಿಧಾನದ ಆಶಯಗಳ ಮೂಲಕ ಸಮ ಸಮಾಜದ ನಿರ್ಮಿಸಲು ಸಾಧ್ಯ. ವಿದ್ಯಾರ್ಥಿಗಳು ಬಾಲ್ಯದಿಂದಲೇ ಸಂವಿಧಾನದ ಅರಿವನ್ನು ಹೊಂದಬೇಕು ಆಗ ಮಾತ್ರ ಉತ್ತಮ ನಾಗರಿಕರಾಗಲು ಸಾಧ್ಯ. ಪ್ರಜಾಪ್ರಭುತ್ವ ಮತ್ತು ಸಹೋದರತೆಯ ಭಾವನೆಗಳನ್ನು ವಿಶ್ವಕ್ಕೆ ಸಾರಬೇಕಾಗಿದೆ.ಈ ನಿಟ್ಟಿನಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರು ಪ್ರತಿ ಸಮುದಾಯಕ್ಕೂ ಸಾಮಾಜಿಕ ನ್ಯಾಯ ಕಲ್ಪಿಸುವ ಸಂವಿಧಾನವನ್ನು ರಚಿಸಿದ್ದಾರೆ. ಆದ್ದರಿಂದ ಪ್ರತಿಯೊಬ್ಬರೂ ಸಂವಿಧಾನವನ್ನು ಗೌರವಿಸುವುದರ ಮೂಲಕ ಸಂವಿಧಾನದ ಆಶಯಗಳನ್ನು ಈಡೇರಿಸಲು ಶ್ರಮಿಸಬೇಕು ಎಂದು ತಿಳಿಸಿದರು. ವಿದ್ಯಾರ್ಥಿಗಳು ಕಗುಂಡಿ ಗ್ರಾಮದ ಸಮೀಪದ ವಿವಿಧ ಗ್ರಾಮಗಳಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರ ಮತ್ತು ಸಂವಿಧಾನ ಪೀಠಿಕೆಯನ್ನು ಹಿಡಿದು ಸಂವಿಧಾನ ಜಾಗೃತಿ ಜಾಥ ಹಮ್ಮಿಕೊಂಡಿದ್ದರು.



# 28 ರಂದು ನೇರ ಸಂದರ್ಶನ

**ಕೋಲಾರ:** ಸ್ವಯಂ ಸೇವಾ ಗೃಹರಕ್ಷಕ/ ಗೃಹರಕ್ಷಕಿಯರ ಆಯ್ಕೆ ಸಮಿತಿ, ಕೋಲಾರ ಇವರ ಅನುಮೋದನೆ ಮೇರೆಗೆ ಜಿಲ್ಲೆಯಲ್ಲಿ ಖಾಲಿ ಇರುವ 218 ಸ್ವಯಂ ಸೇವಾ ಗೃಹರಕ್ಷಕ/ಗೃಹರಕ್ಷಕಿಯರ ಹುದ್ದೆಗಳನ್ನು ಆಯ್ಕೆ ಮಾಡುವ ಸಲುವಾಗಿ ನೋಂದಣಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿದ್ದು, ಈಗಾಗಲೇ 127 ಅರ್ಜಿಗಳನ್ನು ಸಲ್ಲಿಸಿರುವ ಎಲ್ಲಾ ಅಭ್ಯರ್ಥಿಗಳಿಗೆ ಈ ಕಛೇರಿಯಿಂದ ಸಂದರ್ಶನ ಪತ್ರಗಳನ್ನು ರವಾನಿಸಲಾಗಿದೆ. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು ಸಂದರ್ಶನ ಪತ್ರ ಹಾಗೂ ಮೂಲ ದಾಖಲಾತಿಗಳೊಂದಿಗೆ ಫೆಬ್ರವರಿ 28 ರಂದು ರಂದು ಸಂದರ್ಶನಕ್ಕೆ ಹಾಜರಾಗಬೇಕೆಂದು ಕೋರಿದ್ದಾರೆ. ಈಗಾಗಲೇ ಅರ್ಜಿಯನ್ನು ಪಡೆದು ಹಿಂತಿರುಗಿಸದೇ ಇರುವ 61 ಅಭ್ಯರ್ಥಿಗಳು ಫೆಬ್ರವರಿ 28 ರಂದು ಸಂದರ್ಶನದ ಅವಧಿಯಲ್ಲಿ ಈ ಅರ್ಜಿಯನ್ನು ನೀಡಿ ನೇರವಾಗಿ ಸಂದರ್ಶನಕ್ಕೆ ಹಾಜರಾಗಬಹುದು. ಹೊಸದಾಗಿ ಅರ್ಜಿಯನ್ನು ಸಲ್ಲಿಸುವ ಅಭ್ಯರ್ಥಿಗಳು ಮೂಲ ದಾಖಲೆಗಳಾದ ಎಸ್.ಎಸ್.ಎಲ್.ಸಿ. ಅಂಕಪಟ್ಟಿ ಹಾಗೂ ಆಧಾರ್ ಕಾಡ್‌ನ್ನು ಫೆಬ್ರವರಿ 28 ರಂದು ಸಂದರ್ಶನದ ಅವಧಿಯಲ್ಲಿ ಕಡ್ಡಾಯವಾಗಿ ಹಾಜರುಪಡಿಸಿ ಅರ್ಜಿಯನ್ನು ಪಡೆಯಬಹುದು. ಅರ್ಜಿಯನ್ನು ಈ ಸಂದರ್ಶನದದಿನದಂದೆ ಪೂರ್ಣ ವಿವರಗಳನ್ನು ಭರ್ತಿ ಮಾಡಿ ಎಸ್.ಎಸ್.ಎಲ್.ಸಿ.ಅಂಕಪಟ್ಟಿ, ಟಿ.ಸಿ., ಆಧಾರ್, ವೋಟರ್ ಐಡಿ, ಪಾನ್ ಕಾರ್ಡ್, ಬ್ಯಾಂಕ್ ಪಾಸ್‌ಪುಸ್ತಕ, ರೇಷನ್‌ಕಾರ್ಡ್ ಜೆರಾಕ್ಸ್, ಭಾವಚಿತ್ರ ಪ್ರತಿಗಳನ್ನು ಲಗತ್ತಿಸಿ ನೀಡಬೇಕಾಗಿದೆ. ಸಂದರ್ಶನಕ್ಕೆ ನಿಗಧಿತ ಸಮಯದೊಳಗೆ ಹಾಜರಾಗದೆ ಇರುವಂತಹ ಅಭ್ಯರ್ಥಿಗಳನ್ನು ಪರಿಗಣಿಲಾಗುವುದಿಲ್ಲ. ಕೋಲಾರ, ಮಾಲೂರು, ಮುಳಬಾಗಿಲು, ಬಂಗಾರಪೇಟೆ, ಕೆ.ಜಿ.ಎಫ್, ಬೇತಮಂಗಲ, ಸುಂದರಪಾಳ್ಯ, ಕಾಮಸಮುದ್ರಂ ಹಾಗೂ ಬೂದಿಕೋಟೆ ಯವರು ಫೆಬ್ರವರಿ 28 ರಂದು ಬೆಳಿಗ್ಗೆ 8.00 ಗಂಟೆಗೆ ಡಿ.ಎ.ಆರ್. ಪೊಲೀಸ್ ಕವಾಯತು ಮೈದಾನದಲ್ಲಿ ನಡೆಯಲಿದೆ. ಮಾಹಿತಿಗಾಗಿ ಗೃಹರಕ್ಷಕದಳ ಸಹಾಯಕ ಬೋಧಕರು ರವಿಕುಮಾರ್ ಮೊ. ಸಂಖ್ಯೆ: 70904 40037 ಸಂಪರ್ಕಿಸಿ

# ಮದ್ದೂರಿನ 4 ತಡೆ ಗೋಡೆಗಳ ಕಾಮಗಾರಿ ಶುರು

**ಮಂಡ್ಯ:** ಮದ್ದೂರಿನ ಶ್ರೀ ಹೊಳೆ ಆಂಜನೇಯ ದೇವಾಲಯದ ಬಳಿ ತಡೆಗೋಡೆ ನಿರ್ಮಾಣ ಮಾಡಬೇಕೆಂದು ಬಹಳ ದಿನಗಳಿಂದ ಬೇಡಿಕೆ ಇತ್ತು. ಮದ್ದೂರಿನಲ್ಲಿ 4 ತಡೆಗೋಡೆಗಳ ಕಾಮಗಾರಿಗೆ ಸರ್ಕಾರದಿಂದ ಒಟ್ಟು 21 ಕೋಟಿ ರೂ ಹಣ ಮಂಜೂರಾಗಿದೆ ಎಂದು ಕೃಷಿ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್. ಚೆಲುವರಾಯಸ್ವಾಮಿ ಅವರು ತಿಳಿಸಿದರು. ಅವರು ಇಂದು ಮದ್ದೂರು ತಾಲ್ಲೂಕಿನಲ್ಲಿ ನಡೆದ ಶ್ರೀ ಹೊಳೆ ಆಂಜನೇಯ ದೇವಾಲಯದ ಬಳಿ ತಡೆಗೋಡೆ ನಿರ್ಮಾಣ ಕಾಮಗಾರಿ ಗುದ್ದಲಿ ಪೂಜೆ ಕಾರ್ಯಕ್ರಮವನ್ನು ನೆರವೇರಿಸಿ ಮಾತನಾಡಿದರು. ಹೊಳೆ ಆಂಜನೇಯ ದೇವಾಲಯದ ಬಳಿ 307 ಲಕ್ಷ ರೂ ಅಂದಾಜು ವೆಚ್ಚದಲ್ಲಿ ತಡೆಗೋಡೆ ನಿರ್ಮಾಣದ ಕಾಮಗಾರಿಯಾಗುತ್ತಿದೆ. ಮದ್ದೂರು ಪಟ್ಟಣದ ಕೊಳಚೆ ನೀರು ಶುದ್ಧೀಕರಣ ಘಟಕದ ಬಳಿ ಇರುವ ಶಿಂಷಾ ನದಿಗೆ ತಡೆಗೋಡೆ ನಿರ್ಮಾಣ ಕಾಮಗಾರಿಗೆ 499 ಲಕ್ಷ ರೂ ಮಂಜೂರಾಗಿದೆ ಎಂದರು. ನಾಡಿನ ಜನತೆಗೆ ಐದು ಗ್ಯಾರಂಟಿ ಯೋಜನೆಗಳ ಜೊತೆಗೆ ಸಬ್ಸಿಡಿ, ಸಹಾಯಧನ, ಪಿಂಚಣಿ ಸೇರಿದಂತೆ ಎಲ್ಲ ಇಲಾಖೆಗಳ ಸೌಲಭ್ಯವನ್ನು ನಿರಂತರವಾಗಿ ಜನರಿಗೆ ನೀಡುತ್ತಿದ್ದೇವೆ. ಶಾಸಕ ಉದಯ್ ಅಧಿಕಾರಕ್ಕೆ ಬಂದ 8- 10 ತಿಂಗಳ ಅವಧಿಯಲ್ಲಿಯೇ ಜನರಿಗೆ ಅನುಕೂಲವಾಗುವಂತಹ ಕಾರ್ಯವನ್ನು ಮಾಡಿದ್ದಾರೆ ಎಂದು ಶಾಸಕ ಕೆ. ಎಂ. ಉದಯ್ ಅವರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.



# ಅಲೆದಾಟ ತಪ್ಪಿಸಲು ಪಡಿತರ ಉಪಕೇಂದ್ರಗಳ ಸ್ಥಾಪನೆ

**ಪಿರಿಯಾಟ್ಟಣ:** ಜನರ ಅಲೆದಾಟವನ್ನು ತಪ್ಪಿಸಿ ಸ್ಥಳೀಯವಾಗಿ ಪಡಿತರ ಪದಾರ್ಥಗಳನ್ನು ಒದಗಿಸುವ ನಿಟ್ಟಿನಲ್ಲಿ ಪ್ರತಿ ಗ್ರಾಮದಲ್ಲೂ ಪಡಿತರ ಉಪಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ ಎಂದು ಆಶ್ರಯ ಸಮಿತಿ ಅಧ್ಯಕ್ಷ ನಿತಿನ್ ವೆಂಕಟೇಶ್ ತಿಳಿಸಿದರು. ತಾಲ್ಲೂಕಿನ ಪಿ.ಬಸವನಹಳ್ಳಿ ಗ್ರಾಮದಲ್ಲಿ ನೂತನ ಪಡಿತರ ಉಪಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕಿನ ಅನೇಕ ಗ್ರಾಮಗಳಲ್ಲಿ ಪಡಿತರ ಆಹಾರ ಪದಾರ್ಥಗಳನ್ನು ಪಡೆಯಲು ದೂರದ ಊರುಗಳಿಗೆ ಹೋಗುತ್ತಿದ್ದು, ಹಾಗಾಗಿ ಸ್ಥಳೀಯವಾಗಿ ಆಹಾರ ಪದಾರ್ಥಗಳನ್ನು ಒದಗಿಸುವ ನಿಟ್ಟಿನಲ್ಲಿ ಸ್ಥಳಗಳನ್ನು ಗುರುತಿಸಿ ಉಪಕೇಂದ್ರಗಳನ್ನು ಸ್ಥಾಪಿಸಲಾಗುತ್ತಿದೆ. ತಾಲ್ಲೂಕಿನ ಬಹುತೇಕ ಭಾಗಗಳಲ್ಲಿ ಜನರು ದೂರದ ಊರುಗಳಿಗೆ 3-4 ಕಿ.ಮೀ ಕಾಲ್ನಡಿಗೆಯಲ್ಲಿ ತೆರಳಿ ವಯೋವೃದ್ದರು, ಮಹಿಳೆಯರು ಆಹಾರ ಪದಾರ್ಥಗಳನ್ನು ಒತ್ತೊಯ್ಯಬೇಕಿತ್ತು ಇದನ್ನು ಮನಗಂಡ ಪಶುಪಾಲನಾ ಮತ್ತು ರೇಷ್ಮೆ ಖಾತೆ ಸಚಿವರಾದ ವೆಂಕಟೇಶ್ ರವರು ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅಧಿಕಾರಿಗಳಿಗೆ ಸ್ಥಳೀಯವಾಗಿ ಆಹಾರ ಪದಾರ್ಥಗಳನ್ನು ಒದಗಿಸಲು ಕ್ರಮವಹಿಸಲು ಸೂಚನೆ ನೀಡಿದ ಫಲವಾಗಿ ಇಂದು ತಾಲ್ಲೂಕಿನ ಬಹುತೇಕ ಗ್ರಾಮಗಳಲ್ಲಿ ಪಡಿತರ ಉಪಕೇಂದ್ರಗಳು ಸ್ಥಾಪನೆಯಾಗಿವೆ. ಪಿ.ಬಸವನಹಳ್ಳಿ ಗ್ರಾಮದಲ್ಲಿ 178 ಕುಟುಂಬಗಳಿದ್ದು ಇವರು ಆಹಾರ ಪದಾರ್ಥಗಳನ್ನು ಪಡೆಯಲು 4 ಕಿ.ಮೀ.ದೂರದ ಪುನಾಡಹಳ್ಳಿ ಗ್ರಾಮಕ್ಕೆ ಕಾಲ್ನಡಿಗೆಯಲ್ಲಿ ಹೋಗಬೇಕಿತ್ತು ಇದನ್ನು ತಪ್ಪಿಸಲು ಇಲ್ಲೇ ಉಪಕೇಂದ್ರ ಸ್ಥಾಪಿಸಲಾಗಿದೆ ಮುಂದಿನ ದಿನಗಳಲ್ಲಿ ಗ್ರಾಮದ ರಸ್ತೆ, ಶಾಲಾ ಕಾಂಪೌಂಡ್, ಚರಂಡಿ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗುವುದು ಎಂದರು. ಈ ಸಂದರ್ಭದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ಶಿರಸ್ತೆದಾರ್ ಸಣ್ಣಸ್ವಾಮಿ, ಸಹಾಯಕ ನಿರ್ದೇಶಕ ಮಂಜುನಾಥ್, ಪಿಡಿಒ ಪರಮೇಶ್, ಅಧ್ಯಕ್ಷೆ ಜಯಂತಿ, ಉಪಾಧ್ಯಕ್ಷ ಶಿವನಂಜುಂಡ, ಮುಖಂಡರಾದ ಪಿ.ಬಸವನಹಳ್ಳಿ ಪ್ರಕಾಶ್, ಬಿ.ಎನ್.ಕರೀಗೌಡ, ಬಿ.ಜೆ.ಜವರೇಗೌಡ, ರಾಮಮೂರ್ತಿ, ನಾಗೇಗೌಡ, ಶಂಕರೇಗೌಡ, ರಾಮನಾಯ್ಕ, ಬಸವಯ್ಯ ಇದ್ದರು.



# ಕನ್ನಡ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ಸರ್ವಜ್ಞ ಜಯಂತಿ

**ಚಾಮರಾಜನಗರ:** ಮಾನವ ಶ್ರೇಷ್ಠ ರೀತಿಯಲ್ಲಿ ಬದುಕಲು ಅಗತ್ಯವಾದ ಎಲ್ಲ ಸರಳ ಶ್ರೇಷ್ಠ ವಿಚಾರಧಾರೆಗಳನ್ನು ನೀಡಿರುವ ಸರ್ವಜ್ಞರ ಕೊಡುಗೆಯನ್ನು ಯಾರು ಮರೆಯಲು ಸಾಧ್ಯವಿಲ್ಲ. ಸರ್ವಜ್ಞರ ಚಿಂತನೆ ಮಾನವ ಬದುಕಿನ ಶ್ರೇಷ್ಠತೆಗೆ ಹಾಗೂ ಜೀವನ ಮೌಲ್ಯಗಳನ್ನು ಪ್ರೀತಿಸುವ ಮೂಲಕ ಸನ್ಮಾರ್ಗದಲ್ಲಿ ನಡೆಯಲು ದಾರಿದೀಪವಾಗಿದೆ ಎಂದು ಸಂಸ್ಕೃತಿ ಚಿಂತಕ , ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸುರೇಶ್ ಎನ್ ಋಗ್ವೇದಿ ತಿಳಿಸಿದರು.



ಅವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಆಶ್ರಯದಲ್ಲಿ ನಡೆದ ಸರ್ವಜ್ಞ ಜಯಂತಿ ಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡುತ್ತ ಸಾವಿರಕ್ಕೂ ಹೆಚ್ಚು ತ್ರಿಪದಿಗಳನ್ನು ರಚಿಸುವ ಮೂಲಕ ಪ್ರಾಸಬದ್ಧ, ಸರಳತೆಯ ಸಂದೇಶಗಳನ್ನು ನೀಡಿದವರು. ದೇವರು, ಧರ್ಮ, ಆಧ್ಯಾತ್ಮ ,ನೀತಿ, ಮೌಲ್ಯಗಳು , ಯೋಗ, ತತ್ವ ,ಕಲೆ, ಶಿಕ್ಷಣ ಸಂಗೀತ ,ಸುಖ ದುಃಖ ,ಸ್ವರ್ಗ ನರಕ, ಸಮಾಜದ ಅಸಮಾನತೆ ,ಮೌಢ್ಯ ಹಲವಾರು ಕ್ಷೇತ್ರಗಳ ವಿಷಯಗಳನ್ನು ಪರಿಪೂರ್ಣವಾಗಿ ತಿಳಿಸಿದವರು ಸರ್ವಜ್ಞರು. 16ನೇ ಶತಮಾನದಲ್ಲಿ ಕನ್ನಡ ಸಾಹಿತ್ಯಕ್ಕೆ ನೀಡಿರುವ ಕೊಡುಗೆಯನ್ನು ಅಧ್ಯಯನ ಮಾಡಬೇಕು. ಅವರ ಭಾಷಾ ಪ್ರಯೋಗ, ಅನುಭವ ,ಚಿಂತನೆ ಅತ್ಯಂತ ಸರಳವಾಗಿದೆ. ಸತ್ಯವನ್ನು ನೇರವಾಗಿ ನುಡಿದ ಮಹಾ ತತ್ವಜ್ಞಾನಿ ಹಾಗೂ ದಾರ್ಶನಿಕರು ಸರ್ವಜ್ಞರು ಎಂದು ತಿಳಿಸಿ, ಕನ್ನಡ ಸಾಹಿತ್ಯ ಪರಿಷತ್ತಿಗೆ ಹೊಸ ಸದಸ್ಯರಾಗಿ ಹಾಗೂ ತಮ್ಮ ದೂರವಾಣಿ ಸಂಖ್ಯೆಗಳನ್ನು ಕನ್ನಡ ಸಾಹಿತ್ಯ ಪರಿಷತ್ತಿನ ಕಚೇರಿಯಲ್ಲಿ ನೋಂದಾಯಿಸಿ ಕಾರ್ಯಕ್ರಮಗಳ ವಿವರಗಳನ್ನು ತಿಳಿದು ಭಾಗವಹಿಸುವಂತೆ ಸದಸ್ಯರಿಗೆ ಋಗ್ವೇದಿ ಮನವಿ ಮಾಡಿದರು. ಜನಪದ ಗಾಯಕರಾದ ಜೆ ಬಿ ಮಹೇಶ್ ರವರು ಸರ್ವಜ್ಞರು ತ್ರಿಪದಿಗಳನ್ನು ರಚಿಸಿ ಸಮಾಜದ ಅಂಕು ಡೊಂಕುಗಳನ್ನು ಸರಿಪಡಿಸುವ ದಿಕ್ಕಿನಲ್ಲಿ ಜನರಿಗೆ ಮನವರಿಕೆ ಮಾಡಿಕೊಟ್ಟರು . ಸರ್ವಜ್ಞರ ತ್ರಿಪದಿಗಳನ್ನು ವಾಚಿಸಿದರು. ಕನ್ನಡ ಚಳುವಳಿಯ ಹೋರಾಟಗಾರ ರಾಜಗೋಪಾಲ್ ರವರು ಸರ್ವಜ್ಞರ ಭಾವಚಿತ್ರಕ್ಕೆ ಪುಷ್ಪವನ್ನು ಅರ್ಪಿಸಿ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಕಲೆ ನಟರಾಜು, ರವಿಚಂದ್ರಪ್ರಸಾದ್, ಬಿಕೆ ಆರಾಧ್ಯ ಸರಸ್ವತಿ ,ಮೂರ್ತಿ, ಸ್ವಾಮಿ ಇದ್ದರು.

# ಯಶಸ್ವಿಯಾಗಿ ಮುಂದುವರೆದ ಸಂವಿಧಾನ ಜಾಗೃತಿ ಜಾಥಾ

**ಚಾಮರಾಜನಗರ:** ಗುಂಡ್ಲುಪೇಟೆ ತಾಲೂಕಿನ ವಿವಿಧೆಡೆ ಇಂದು ಸಂವಿಧಾನ ಜಾಗೃತಿ ಜಾಥಾ ಯಶಸ್ವಿಯಾಗಿ ಮುಂದುವರೆದಿದೆ.



ಅಗತ ಗೌಡನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಅದ್ದೂರಿಯಾಗಿ ಜಾಥಾ ನಡೆಯಿತು. ಸ್ತಬ್ದ ಚಿತ್ರದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್‌ರವರ ಪುತ್ಥಳಿಗೆ ಪು?ಪಾರ್ಚನೆ ಸಲ್ಲಿಸಲಾಯಿತು. ಪೂರ್ಣಕುಂಭ, ಡೊಳ್ಳು ಕುಣಿತ, ಕಂಸಾಳೆ, ಪೂಜೆ ಕುಣಿತ, ಆಟೋ, ಟ್ರ್ಯಾಕ್ಟರ್ ರ್‍ಯಾಲಿ ಮೂಲಕ ಮೆರವಣಿಗೆ ನಡೆಯಿತು. ಮಕ್ಕಳಿಂದ ರಾಷ್ಟ್ರ ನಾಯಕರ ವೇ? ಭೂಷಣ, ಗೊರವರ ಕುಣಿತ, ನಗಾರಿ, ತಮಟೆ ವಾದ್ಯ ಇನ್ನಿತರ ಕಲಾತಂಡಗಳು ವಿಶೇಷ ಗಮನ ಸೆಳೆದವು. ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಸುರೇಶ್, ಉಪಾಧ್ಯಕ್ಷರಾದ ಶಿವ ನಾಗಮ್ಮ, ಮಾಜಿ ಲೋಕಸಭಾ ಸದಸ್ಯರಾದ ಸಿದ್ದರಾಜು, ಇತರೆ ಗ್ರಾಮ ಪಂಚಾಯಿತಿ ಸದಸ್ಯರು, ಪಂಚಾಯತ್ ರಾಜ್ ಮತ್ತು ಇಂಜನಿಯರ್ ಇಲಾಖೆಯ ನೋಡಲ್ ಅಧಿಕಾರಿಯಾದ ಸಿಂಧೂ. ಎಸ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ನವೀನ್, ಇತರರು ಪಾಲ್ಗೊಂಡರು. ಶಿಕ್ಷಕರಾದ ರಾಘವೇಂದ್ರ ಸಂವಿಧಾನ ಕುರಿತು ಉಪನ್ಯಾಸ ನೀಡಿದರು. ರಾಘವಪುರಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾಗೆ ಡಾ.ಬಿ.ಆರ್. ಅಂಬೇಡ್ಕರ್‌ರವರ ಭಾವಚಿತ್ರಕ್ಕೆ ಪು?ಪಾರ್ಚನೆ ಸಲ್ಲಿಸಿ ಬರಮಾಡಿಕೊಳ್ಳಲಾಯಿತು. ನಂತರ ನಡೆದ ಮೆರವಣಿಗೆಯಲ್ಲಿ ಪೂರ್ಣಕುಂಭ, ಬ್ಯಾಂಡ್ ಸೆಟ್, ಡೊಳ್ಳು ಕುಣಿತ, ತಮಟೆ, ಇನ್ನಿತರ ವಾದ್ಯಗಳ ತಂಡಗಳು ಪಾಲ್ಗೊಂಡವು. ವೇದಿಕೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಮಹದೇವಪ್ಪ, ಉಪಾಧ್ಯಕ್ಷರಾದ ಸುಧಾರಾಣಿ, ಇತರೆ ಸದಸ್ಯರು, ಕೃಷಿ ಇಲಾಖೆ ಇಲಾಖೆಯ ನೋಡಲ್ ಅಧಿಕಾರಿಯಾದ ಶಶಿಧರ್ ಭಾಗವಹಿಸಿದ್ದರು. ಮುಖಂಡರಾದ ಶ್ರೀನಿವಾಸ್‌ಮೂರ್ತಿ, ಸಾಹಿತಿ ಕಾಳಿಂಗಸ್ವಾಮಿ, ಉಲ್ಲಾಸ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ರವಿ, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಮುಖಂಡರು, ಭಾಗವಹಿಸಿದ್ದರು. ರಾಘವಪುರ ಮುಖ್ಯ ಶಿಕ್ಷಕರಾದ ನಟರಾಜು ಉಪನ್ಯಾಸ ನೀಡಿದರು. ಬೇಗೂರಿನಲ್ಲಿಯೂ ಸಂವಿಧಾನ ಜಾಗೃತಿ ಜಾಥಾ ಅರ್ಥಪೂರ್ಣವಾಗಿ ನಡೆಯಿತು. ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ರವರ ಪುತ್ಥಳಿಗೆ ಪು?ಪಾರ್ಚನೆ ಸಲ್ಲಿಸುವುದರ ಮೂಲಕ ಅದ್ದೂರಿಯಾಗಿ ಜಾಥಾ ಸ್ವಾಗತಿಸಲಾಯಿತು. ಸತ್ತಿಗೆ ಸೂರಪಾನಿ, ವಿವಿಧ ಕಲಾತಂಡಗಳಿಂದ ಆಕರ್ಷಕ ಪ್ರದರ್ಶನ ನಡೆಯಿತು. ಗ್ರಾಮ ಪಂಚಾಯತಿ ಅಧ್ಯಕ್ಷರಾದ ಜಯಮ್ಮ, ಉಪಾಧ್ಯಕ್ಷರಾದ ಬಿ.ಆರ್. ಮಹದೇವಸ್ವಾಮಿ, ಗ್ರಾಮ ಪಂಚಾಯತಿ ಸದಸ್ಯರು, ತೋಟಗಾರಿಕೆ ಇಲಾಖೆ ನೋಡಲ್ ಅಧಿಕಾರಿ ಭಾಸ್ಕರ್, ಸಾಹಿತಿ ಕಾಳಿಂಗಸ್ವಾಮಿ, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಗುರುಪ್ರಸಾದ್ ಪಾಲ್ಗೊಂಡಿದ್ದರು.

ಬೀದಿ ಬದಿ ವ್ಯಾಪಾರಿಗಳಿಗೆ ಪೌರಾಯುಕ್ತ ರಾಮದಾಸ್ ಸಲಹೆ

# ಸರ್ಕಾರದ ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಿ

**ಚಾಮರಾಜನಗರ:** ನಗರದ ಬೀದಿ ಬದಿ ವ್ಯಾಪಾರಿಗಳನ್ನು ಜಾಗೃತಗೊಳಿಸಲು ನಗರಸಭೆ ಬಳಿ ಬೀದಿ ನಾಟಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ನಗರಸಭೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ , ಡೇ ನಲ್ಮ್ ಯೋಜನೆ, ಸಮಷ್ಠಿ ಸಮಗ್ರ ಅಭಿವೃದ್ಧಿ ಟ್ರಸ್ಟ್ ಇವರ ಸಹಯೋಗದಲ್ಲಿ ಬೀದಿ ಬದಿ ವ್ಯಾಪಾರಿಗಳನ್ನು ಜಾಗೃತಗೊಳಿಸುವ ಉದ್ದೇಶದಿಂದ ಬೀದಿ ನಾಟಕ ಕಾರ್ಯಕ್ರಮವನ್ನು ಬುಧವಾರ ಆಯೋಜಿಸಲಾಗಿತ್ತು.

ನಗರಸಭೆ ಪೌರಾಯುಕ್ತ ರಾಮದಾಸ್ ಅವರು ಕಾರ್ಯಕ್ರಮವನ್ನು ತಮಟೆ ಬಡಿಯುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ದೇಶ ಕೋವಿಡ್‌ನಿಂದ ಸಂಕಷ್ಟಕ್ಕೆ ಒಳಗಾಗಿದ್ದ ಸಂದರ್ಭದಲ್ಲಿ ಸಂಕಷ್ಟದಲ್ಲಿದ್ದ ಬೀದಿ ಬದಿ ವ್ಯಾಪಾರಿಗಳಿಗಾಗಿ ಪಿಎಂ ಸ್ವನಿಧಿ ಯೋಜನೆಯಡಿ ಮೊದಲನೆ ಹಂತದಲ್ಲಿ 10 ಸಾವಿರ, ಎರಡನೇ ಹಂತದಲ್ಲಿ 20 ಸಾವಿರ, 3ನೇ ಹಂತದಲ್ಲಿ 50 ಸಾವಿರ ಹೀಗೆ ಮೂರು ಹಂತಗಳಲ್ಲಿ ಸಾಲ ಸೌಲಭ್ಯದ ವ್ಯವಸ್ಥೆ ಮಾಡಲಾಗಿತ್ತು. ಈ ಯೋಜನೆಯನ್ನು ಪಡೆದುಕೊಳ್ಳುವ ಮೂಲಕ ಬೀದಿ ಬದಿ ವ್ಯಾಪಾರಿಗಳು ಸಂಕಷ್ಟದಿಂದ ಹೊರಬರಲು ಸಾಕಷ್ಟು ಅನುಕೂಲವಾಯಿತು ಎಂದರು.



ಹಾಗೆಯೇ ಬೀದಿ ಬದಿ ವ್ಯಾಪಾರಿಗಳ ಸುರಕ್ಷತೆಗಾಗಿ ಹಲವು ಯೋಜನೆಗಳನ್ನು ರೂಪಿಸಲಾಗಿದ್ದು, ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆ, ಪ್ರಧಾನಮಂತ್ರಿ ಜನ್‌ಧನ್ ಯೋಜನೆ, ಲೇಬರ್ ಕಾರ್ಡ್, ಪ್ರಧಾನಮಂತ್ರಿ ಜನನಿ ಸುರಕ್ಷಾ ಯೋಜನೆ, ಪ್ರಧಾನಮಂತ್ರಿ ಜೀವನ ಜ್ಯೋತಿ ವಿಮಾ ಯೋಜನೆ, ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ ಯೋಜನೆ, ಒಂದು ರಾಷ್ಟ್ರ ಒಂದು ಪಡಿತರ ಚೀಟಿ ಯೋಜನೆ, ಪ್ರಧಾನಮಂತ್ರಿ ಮಾತೃವಂದನಾ ಯೋಜನೆಗಳಿವೆ. ಈ ಯೋಜನೆಗಳು ಬೀದಿ ಬದಿ ವ್ಯಾಪಾರಿಗಳಿಗಷ್ಟೇ ಅಲ್ಲದೇ, ಆಟೋ ಚಾಲಕರು, ಹಾಲು ವಿತರಕರು, ಪೇಪರ್ ವಿತರಿಕರಿಗೂ ಕೂಡಾ ಈ ಯೋಜನೆ ಅನ್ವಯವಾಗಲಿದೆ. ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಿ ಎಂದರು.

ಬೇಸಿಗೆ ಎದುರಾಗುತ್ತಿರುವ ಹಿನ್ನೆಲೆಯಲ್ಲಿ ಜನರ ಆರೋಗ್ಯದ ದೃಷ್ಠಿಯಿಂದ ಬೀದಿ ಬದಿ ವ್ಯಾಪಾರಿಗಳು ತಮ್ಮ ವ್ಯಾಪಾರದ ಸ್ಥಳದಲ್ಲಿ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ತಾಜಾ ಹಣ್ಣು, ತರಕಾರಿಗಳನ್ನು ಮಾರಾಟ ಮಾಡಬೇಕು. ಜೊತೆಗೆ ಪ್ಲಾಸ್ಟಿಕ್ ಬಳಕೆ ನಿಷೇಧಿಸಬೇಕು, ಅದರ ಬದಲಾಗಿ ಅಡಿಕೆ ತಟ್ಟೆ, ಪೇಪರ್ ಪ್ಲೇಟ್‌ಗಳನ್ನು ಬಳಕೆ ಮಾಡುವ ಮೂಲಕ ನಗರದ ಸ್ವಚ್ಛತೆಗೆ ಕೈಜೋಡಿಸಬೇಕು ಎಂದು ತಿಳಿಸಿದರು.

ನಗರಸಭೆ ಯೋಜನಾಧಿಕಾರಿ ವೆಂಕಟನಾಯಕ್ ಮಾತನಾಡಿ, ಬೀದಿ ಬದಿ ವ್ಯಾಪಾರಸ್ಥರು ಜಾಗೃತರಾಗಿ ಸರ್ಕಾರದಿಂದ ದೊರೆಯುವ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳುವ ಮೂಲಕ ಉತ್ತಮ ಜೀವನ ನಿರ್ವಹಣೆ ಮಾಡಬೇಕು ಎಂದರು.

ನಗರದ ಮಾರಿಗುಡಿ ಮುಂಭಾಗ, ಮಹದೇವಪ್ಪ ಸರ್ಕಲ್, ಎಸ್ ಬಿಎಂ ಬ್ಯಾಂಕ್ ಸರ್ಕಲ್ ಸೇರಿದಂತೆ ಇನ್ನು ಹಲವೆಡೆ ಬೀದಿ ಬದಿ ವ್ಯಾಪಾರಿಗಳನ್ನು ಜಾಗೃತಿ ಗೊಳಿಸುವ ಉದ್ದೇಶದಿಂದ ನಾಟಕವನ್ನು ಆಯೋಜನೆ ಮಾಡಲಾಗಿತ್ತು ಎಂದರು.

ಕಾರ್ಯಕ್ರಮದಲ್ಲಿ ಅಭಿಯಾನದ ವ್ಯವಸ್ಥಾಪಕರಾದ ಅಮ್ಜದ್ ಪಾಷಾ, ಡಾ.ಪುಟ್ಟಸ್ವಾಮಿ, ಚಾಮರಾಜನಗರ ಜಿಲ್ಲಾ ನೆಟ್‌ಬಾಲ್ ಅಸೋಸಿಯೇಷನ್‌ನ ಅಧ್ಯಕ್ಷ ವಿ.ಶ್ರೀನಿವಾಸ ಪ್ರಸಾದ್, ನಗರಸಭೆ ಸಿಆರ್‌ಪಿಗಳಾದ ನರ್ಗೀಸ್ ಬಾನು, ರೂಪಾ, ಸಿಬ್ಬಂದಿಗಳಾದ ಜ್ಯೋತಿ, ನಿವೇದಿತಾ, ನವೀನ್, ಜಾಗೃತಿ ಕಲಾತಂಡದ ಮಹದೇವಸ್ವಾಮಿ ಬಾಗಳಿ, ಕೆ.ಆರ್ .ನಗರ ಕುಮಾರ್, ಕರಿಯಪ್ಪ, ಭಾಗ್ಯ, ಮಹದೇವು, ಜನ್ನೂರು ಶಿವಕುಮಾರ್, ಸಮಷ್ಠಿ ಸಮಗ್ರ ಅಭಿವೃದ್ಧಿ ಟ್ರಸ್ಟ್ನ ಕಾರ್ಯ ನಿರ್ವಾಹಕ ಗಂಗಾಧರ್ ಇನ್ನಿತರರಿದ್ದರು.

# ನೀತಿ ಸಂಹಿತೆ ಪಾಲನೆ ಸಂಬಂಧ ಜಿಲ್ಲಾಧಿಕಾರಿ ಸಭೆ



**ಚಾಮರಾಜನಗರ:** ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಅಂತರರಾಜ್ಯ ಗಡಿ ಜಿಲ್ಲೆಗಳ ಭಾಗಗಳಲ್ಲಿ ಕಟ್ಟುನಿಟ್ಟಾಗಿ ನೀತಿ ಸಂಹಿತೆ ಪಾಲನೆ ಮಾಡುವ ಸಂಬಂಧ ಇಂದು ಚಾಮರಾಜನಗರ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಹಾಗೂ ತಮಿಳುನಾಡು ರಾಜ್ಯದ ಈರೋಡ್ ಜಿಲ್ಲಾ ಕಲೆಕ್ಟರ್ ಎಸ್. ರಾಜಗೋಪಾಲ್ ಅವರ ಸಮ್ಮುಖದಲ್ಲಿ ಸಭೆ ನಡೆಯಿತು. ಚಾಮರಾಜನಗರ ತಾಲೂಕಿನ ಸುವರ್ಣಾವತಿಯ ಪ್ರವಾಸಿ ಮಂದಿರದಲ್ಲಿಂದು ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಪಾಲಿಸಬೇಕಿರುವ ಕಟ್ಟುನಿಟ್ಟಿನ ಕ್ರಮಗಳ ಕುರಿತು ನಡೆದ ಅಂತರರಾಜ್ಯ ಗಡಿ ಜಿಲ್ಲೆಗಳ ಹಿರಿಯ ಅಧಿಕಾರಿಗಳ ಜಂಟಿ ಸಮನ್ವಯ ಸಮಿತಿ ಸಭೆಯಲ್ಲಿ ವಿಸ್ತೃತವಾಗಿ ಚರ್ಚಿಸಲಾಯಿತು. ಚುನಾವಣಾ ಅಕ್ರಮಗಳಿಗೆ ಅವಕಾಶವಾಗದಂತೆ ಗಡಿಭಾಗಗಳಲ್ಲಿ ಕಟ್ಟೆಚ್ಚರ ವಹಿಸಬೇಕು. ಅಕ್ರಮ ಮದ್ಯ, ದಾಖಲೆ ಇಲ್ಲದ ಹಣ, ಆಮಿಷವೊಡ್ಡುವ ಉಡುಗೊರೆ, ವಸ್ತುಗಳ ಸಾಗಾಣಿಕೆ ಮೇಲೆ ನಿಗಾ ಇಡಬೇಕು. ಅಕ್ರಮಗಳು ಕಂಡು ಬಂದ ಕೂಡಲೇ ಜಪ್ತಿ ಮಾಡಿ ನಿಯಮಾನುಸಾರ ಕ್ರಮ ಜರುಗಿಸಬೇಕೆಂದು ಸೂಚಿಸಲಾಯಿತು.

ಗಡಿಭಾಗಗಳಲ್ಲಿ ಶಾಶ್ವತ ಚೆಕ್‌ಪೋಸ್ಟ್ ಗಳೊಂದಿಗೆ ತಾತ್ಕಾಲಿಕ ಚೆಕ್‌ಪೋಸ್ಟ್ ಗಳು ಸಕ್ರಿಯವಾಗಿ ಕಾರ್ಯ ನಿರ್ವಹಣೆ ಯಾಗಬೇಕು. ಗಡಿ ಭಾಗದಲ್ಲಿ ಸಂಚರಿಸುವ ವಾಹನಗಳನ್ನು ಕಟ್ಟುನಿಟ್ಟಾಗಿ ತಪಾಸಣೆಯಾಗಬೇಕು. ಯಾವುದೇ ರೀತಿಯ ಅಕ್ರಮಗಳು ನಡೆಯದಂತೆ ಕಣ್ಗಾವಲು ಇರಬೇಕು. ಪರಸ್ಪರ ಉಭಯ ಜಿಲ್ಲೆಗಳ ಅಧಿಕಾರಿಗಳ ಸಮನ್ವಯ ಸಹಕಾರದಿಂದ ಯಾವುದೇ ಲೋಪಗಳಿಗೆ ಅವಕಾಶವಾಗದಂತೆ ನೋಡಿಕೊಳ್ಳುವುದರ ಕುರಿತು ವಿವರವಾಗಿ ಚರ್ಚಿಸಲಾಯಿತು.

ಅರಣ್ಯದಂಚಿನ ಗ್ರಾಮಗಳ ಮೂಲಕ ಸಂಚರಿಸುವ ವಾಹನಗಳ ಮೇಲೂ ನಿಗಾ ಇರಿಸಬೇಕು. ಎಲ್ಲಿಯೇ ಆಗಲಿ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ತೀವ್ರವಾಗಿ ಪರಿಶೀಲಿಸಬೇಕು. ಉಭಯ ಜಿಲ್ಲೆಗಳಲ್ಲಿಯೂ ಕಂಟ್ರೋಲ್ ರೂಂ ಗೆ ಮಾಹಿತಿ ನೀಡುವ ವ್ಯವಸ್ಥೆಯಾಗಬೇಕು. ಸಂಪರ್ಕ ವ್ಯವಸ್ಥೆ ಅಲಭ್ಯವಾಗುವ ಕಡೆ ಹಾಟ್‌ಲೈನ್ ಸಂಪರ್ಕ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಗಡಿ ಗ್ರಾಮಗಳಲ್ಲಿ ಮದ್ಯ ಮಾರಾಟವಾಗದಂತೆ ಎಚ್ಚರಿಕೆ ವಹಿಸಬೇಕು. ಇದಕ್ಕಾಗಿಯೆ ಗಡಿ ಗ್ರಾಮಗಳ ಅಂಗಡಿಗಳಲ್ಲಿ ವ್ಯಾಪಕವಾಗಿ ತಪಾಸಣಾ ಕಾರ್ಯವನ್ನು ಅಬಕಾರಿ ಅಧಿಕಾರಿಗಳು ಚುರುಕುಗೊಳಿಸಬೇಕಾಗುತ್ತದೆ. ಮಾದಕ ವಸ್ತುಗಳ ಕಾರ್ಯಚಟುವಟಿಕೆಗಳ ಮೇಲೂ ಹೆಚ್ಚಿನ ನಿಗಾ ಇಡಬೇಕು. ಯಾವುದೇ ಅಕ್ರಮಗಳು ನಡೆಯದಂತೆ ಪಾರದರ್ಶಕವಾಗಿ ಚುನಾವಣೆ ನಡೆಯಲು ಅಗತ್ಯವಿರುವ ಎಲ್ಲ ಕ್ರಮಗಳನ್ನು ಅತ್ಯಂತ ಬಿಗಿಯಾಗಿ ಜಾರಿಗೊಳಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



## ಕ್ರಿಕೆಟ್ ಪಂದ್ಯಾವಳಿಯಲ್ಲಿ ಗೆಲುವು

**ಮೈಸೂರು:** ದಿ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್, ಮೈಸೂರು ಕ್ರಿಕೆಟ್ ಪುರುಷರ ತಂಡವು ಮಂಡ್ಯ ಕಇಖಅಇ ಕಾಲೇಜು ಆಯೋಜಿಸಿದ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯಗಳ ಅಂತರ ಕಾಲೇಜು ರಾಜ್ಯ ಮಟ್ಟದ ಕ್ರಿಕೆಟ್ ಪುರುಷರ ಪಂದ್ಯಾವಳಿ 2023-24 ನಲ್ಲಿ ದ್ವಿತೀಯ ಸ್ಥಾನವನ್ನು ಮತ್ತು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ ಅಂತರ ಕಾಲೇಜು ಮೈಸೂರು ವಲಯ ಮಟ್ಟದ ಪಂದ್ಯಾವಳಿ ಯಲ್ಲಿ ಪ್ರಥಮ ಸ್ಥಾನ ಪಡೆದು ಪಾರಿತೋಷಕವನ್ನು ತಮ್ಮದಾಗಿಸಿಕೊಂಡಿದೆ. ಎಡದಿಂದ ಬಲಕ್ಕೆ ಕುಳಿತವರು: ಶ್ರೀಮತಿ. ಕಾವ್ಯಾ.ಆರ್, ದೈಹಿಕ ಶಿಕ್ಷಣ ನಿರ್ದೇಶಕರು., ಹರ್ಷಿತ್ ಆರ್ ಕೆ (ತಂಡದ ಉಪ ನಾಯಕ)., ಡಾ. ರೋಹಿಣಿ ನಾಗಪದ್ಮ, ಪ್ರಾಂಶುಪಾಲರು, ಎನ್.ಐ.ಇ., ಡಾ. ಎಂ.ಎಸ್. ಗಣೇಶ್ ಪ್ರಸಾದ್, ಉಪ ಪ್ರಾಂಶುಪಾಲರು, ಓಖಇ., ಸ್ವರೂಪ್ ಕುಮಾರ್. ಕೆ (ತಂಡದ ನಾಯಕ) ಎಡದಿಂದ ಬಲಕ್ಕೆ ನಿಂತವರು: ಧನುಷ್.ಎಸ್., ಮಂಜುನಾಥ್ ಗೌಡ., ಕೀರ್ತನ್.ಸಿ., ಸೂರಜ್ ಎಂ ಗಾರ್ಗೆಯ., ಯಶವಂತ್ ಗೌಡ.ಎಂ., ರೋಹಿತ್ ಗೌತಮ್., ಅಮೃತ್ ರಾಜೂರ್., ಕೌಶಿಕ್ ಎಂ.ಸಿ.

ಸಂವಿಧಾನ ಪೀಠಿಕೆ ಭೋಧಿಸಿ ಗಮನ ಸೆಳೆದ ಪುಟಾಣಿ ಚಾರಿತ್ರ್ಯ

# ಸಂವಿಧಾನ ಆಶಯ ಅಳವಡಿಸಿಕೊಳ್ಳಿ

**ಚಾಮರಾಜನಗರ:** ಸಂವಿಧಾನದ ಆಶಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶಿಲ್ಪಾನಾಗ್ ಸಲಹೆ ನೀಡಿದರು.

ನಗರದ ಜಿಲ್ಲಾಡಳಿತ ಭವನದ ಮುಂಭಾಗದಲ್ಲಿ ಜಿಲ್ಲಾ ಚಿತ್ರಕಲಾವಿದರ ಸಂಘ, ಡಾ. ಬಿ.ಆರ್. ಅಂಬೇಡ್ಕರ್ ಸಂಘಗಳ ಒಕ್ಕೂಟ ಹಾಗೂ ಪವನ್ ಸೇವಾ ಟ್ರಸ್ಟ್ ಇವರ ವತಿಯಿಂದ ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ 2 ದಿನಗಳ ಕಾಲ ಹಮ್ಮಿಕೊಂಡಿರುವ ರಾಷ್ಟ್ರಮಟ್ಟದ ಚಿತ್ರಕಲಾ ಶಿಬಿರಕ್ಕೆ ಬುದ್ಧ, ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಚಿಪ್ಪು ಮಾದರಿ ಒಳಗಡೆ ಇಡಲಾಗಿದ್ದ ಸಂವಿಧಾನ ಪುಸ್ತಕ, ಅಂಬೇಡ್ಕರ್ ಪುತ್ಥಳಿ ತೆರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ನ. 26 ರಂದು ಸಂವಿಧಾನ ದಿನವನ್ನು ಆಚರಣೆ ಮಾಡಲಾಯಿತು. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ, ನಗರಸಭೆ ಹಾಗೂ ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿ ಮತ್ತು ಸರ್ಕಾರಿ ಕಚೇರಿಗಳಲ್ಲಿ, ಶಾಲಾ-ಕಾಲೇಜು, ವಿದ್ಯಾರ್ಥಿ ನಿಲಯಗಳಲ್ಲಿ ಸಂವಿಧಾನದ ಪೀಠಿಕೆ ಓದುವ ಮೂಲಕ ಅರಿವು ಮೂಡಿಸಲಾಯಿತು. ಅಂಬೇಡ್ಕರ್‌ರವರ ತುಂಬಾ ಹೆಮ್ಮೆಯ ಸಂವಿಧಾನವನ್ನು ರಚಿಸಿಕೊಟ್ಟಿರುವ ಕಾರಣದಿಂದ ದೇಶದಲ್ಲಿ ಎಲ್ಲರೂ ತಲೆಎತ್ತಿ ನೆಮ್ಮದಿಯಿಂದ ಸ್ವಾತಂತ್ರ್ಯ ವಾಗಿ ಬದುಕುತ್ತಿದ್ದೇವೆ. ಎಂದರು. ಜ. 26 ರಂದು ಗಣರಾಜ್ಯೋತ್ಸವ ದಿನ ಸಂವಿಧಾನ ಜಾಗೃತಿ ವಾಹನಕ್ಕೆ ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡಿದರು. ಅದರಲ್ಲಿ ಸಂವಿಧಾನದ ಬಗ್ಗೆ, ಡಾ.ಬಿ.ಆರ್.ಅಂಬೇಡ್ಕರ್‌ರವರ ಜೀವನದ ಬಗ್ಗೆ ಎಲ್ಲ ಜನರಲ್ಲೂ ಅರಿವು ಮೂಡಿಸುವಂತದ್ದು, ಇದು ರಾಷ್ಟ್ರೀಯ ಹಬ್ಬ. ಇದು ಯಾವುದೇ ಜಾತಿ, ಧರ್ಮ, ಸಮುದಾಯಕ್ಕೆ ಸೀಮಿತವಲ್ಲ. ಸಂವಿಧಾನ ನಮ್ಮೆಲ್ಲರ ರಕ್ಷಕವಚ. ಸರ್ವರಿಗೂ ಸಮಾನತೆ ಇರುವ ಸಂವಿಧಾನ ಬಗ್ಗೆ ಮಾತನಾಡುವುದರಿಂದ



ಒಳಿತಾಗುವುದಿಲ್ಲ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಪ್ರೀತಿ, ಭಾತೃತ್ವದಿಂದ ಒಂದು ಸಮಾಜ ನಿರ್ಮಾಣ ಮಾಡಬೇಕು. ಯಾವುದೇ ದ್ವೇಶ, ಅಸೂಯೆ, ಬೇರೆಬೇರೆ ರೀತಿ ಗುಂಪುಗಾರಿಕೆ ಮಾಡದೆ ಸಮಾನತೆಯಿಂದ ಬದುಕಬೇಕು. ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಜಾಥ ಕಾರ್ಯಕ್ರಮ ತುಂಬಾ ಯಶ್ವಸಿಯಾಗಿದೆ. ಜಾಥಾಯು ಫೆ. 25ಕ್ಕೆ ಮುಕ್ತಾಯವಾಗಬೇಕು. ಆದರೂ ಕೂಡ ತುಂಬಾ ಚೆನ್ನಾಗಿ ನಡೆಯುತ್ತಿರುವುದದಿಂದ ಮಾ. 7ರವರಗೆ ವಿಸ್ತರಿಸಲಾಗಿದೆ ಎಂದರು.

ಜಿಲ್ಲಾ ಚಿತ್ರಕಲಾವಿದರ ಸಂಘ, ಡಾ.ಬಿ.ಆರ್. ಅಂಬೇಡ್ಕರ್ ಸಂಘಗಳ ಒಕ್ಕೂಟ, ಪವನ್ ಸೇವಾ ಟ್ರಸ್ಟ್ ವತಿಯಿಂದ ಸಂವಿಧಾನ ಜಾಗೃತಿ ಜಾಥಾ ಅಂಗವಾಗಿ ರಾಷ್ಟ್ರಮಟ್ಟದ ಚಿತ್ರಕಲಾ ಶಿಬಿರವನ್ನು ಅಯೋಜಿಸಿ ಸಂವಿಧಾನಕ್ಕೆ ಸಂಬಂಧಪಟ್ಟ ಚಿತ್ರಗಳನ್ನು ಮೂಡಿಸಿ ವಸ್ತುವಸ್ತುಪ್ರದರ್ಶನ ಅಯೋಜನೆ ಮಾಡುತ್ತಿರುವುದು ಒಂದು ಒಳ್ಳೆಯ ಕಾರ್ಯಕ್ರಮವಾಗಿದೆ. ಕಲಾವಿದರು ಕಲೆಯನ್ನು ಜೀವನ ಭಾಗವಾಗಿ ಮಾಡಬೇಕು ಎಂದರು.

ಸಂವಿಧಾನ ಪುಸ್ತಕ ಓದಿದ್ದರೆ ಬದುಕು ಕಟ್ಟಿಕೊಳ್ಳಬಹುದು : ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನ ಮಾತನಾಡಿ, ರಾಜ್ಯದ 31 ಜಿಲ್ಲೆಗಳ ಪೈಕಿಯಲ್ಲಿ ನಮ್ಮ ಜಿಲ್ಲೆಯಲ್ಲಿ ಸಂವಿಧಾನ ಜಾಗೃತಿ ಬಹಳ ಯಶ್ವಸಿಯಾಗಿ ನಡೆಯುತ್ತಿದೆ. ರಾಜ್ಯದಲ್ಲಿ 3ನೇ ಸ್ಥಾನ ಪಡೆದಿದೆ. ಜಾಥಾದಲ್ಲಿ 3 ಲಕ್ಷ ಜನರು ಸ್ವಯಂಪೇರಿತವಾಗಿ ಭಾಗವಹಿಸಿದ್ದಾರೆ. ಸಂವಿಧಾನ ಪುಸ್ತಕ ಓದಿದ್ದರೆ ಬದುಕು ಕಟ್ಟಿಕೊಳ್ಳಬಹುದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೂ ಅನುಕೂಲವಾಗುತ್ತದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಸಿ.ಕೆ.ಮಂಜುನಾಥ್ ಮಾತನಾಡಿ, ಸಂವಿಧಾನ ಜಾಗೃತಿ ಜಾಥಾ ನಡೆಯುತ್ತಿರುವ ರಾಜ್ಯ ಸರ್ಕಾರಕ್ಕೆ ಅಭಿನಂದನೆ ಸಲ್ಲಿಸುತ್ತೇನೆ,. ಕಾರಣ ಎಲ್ಲರೂ ಸಂವಿಧಾನದ ಪೀಠಿಕೆಯನ್ನು ಸರಿಯಾಗಿ ಅರ್ಥಮಾಡಿಕೊಂಡಲ್ಲಿ ಈ ಸಂವಿಧಾನವನ್ನು ಅಧ್ಯಯನ ಮಾಡಿದಂತಾಗುತ್ತದೆ. ಅ ರೀತಿಯಾಗಿ ಅಂಬೇಡ್ಕರ್ ರವರು ಸಂವಿಧಾನ ಪೀಠಿಕೆಯನ್ನು ರಚಿಸಿದ್ದಾರೆ. ಇದರಿಂದ ದೇಶದಲ್ಲಿ ಸಹಬಾಳ್ವೆ, ಭಾತೃತ್ವ ಬೆಳೆಯುತ್ತದೆ ಸಾಮಾಜಿಕ, ಆರ್ಥಿಕ ಸಮಾನತೆ ಬರುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಶಿಕ್ಷಕಿ ಎಸ್. ಇಂದಿರಾ, ಪ್ರಗತಿಪರ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಸಿ.ಎಂ. ಕೃಷ್ಣಮೂರ್ತಿ ಮಾತನಾಡಿದರು. ಪುಟಾಣಿ ಚಾರಿತ್ರ್ಯ ಸಂವಿಧಾನ ಪೀಠಿಕೆ ಭೋದಿಸಿ ಗಮನ ಸೆಳೆದಳು.

# ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿ ಸ್ವಾಗತ

**ಚಾಮರಾಜನಗರ:** ಗುಂಡ್ಲುಪೇಟೆ ತಾಲೂಕಿನ ಕೋಟೆಕೆರೆ, ಹೊರೆಯಾಲ ಗ್ರಾಮದಲ್ಲಿ ಸಂವಿಧಾನ ಜಾಗೃತಿ ಜಾಥಾ ಅದ್ದೂರಿಯಾಗಿ ನಡೆಯಿತು.

ಕೋಟೆಕೆರೆಯಲ್ಲಿ ಸಂವಿಧಾನ ಜಾಗೃತಿ ಜಾಥಾದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್‌ರವರ ಪುತ್ಥಳಿಗೆ ಬೃಹತ್ ಹೂವಿನ ಹಾರಗಳನ್ನು ಹಾಕಿ ಪು?ಪಾರ್ಚನೆ ನೆರವೇರಿಸಿ ಬರಮಾಡಿಕೊಳ್ಳಲಾಯಿತು. ಬ್ಯಾಂಡ್‌ಸೆಟ್, ಸತ್ತಿಗೆ ಸೂರಪಾನಿ, ಡೊಳ್ಳು ಕುಣಿತ, ಕಂಸಾಳೆ, ತಮಟೆ ಕಲಾವಿದರು ಮೆರವಣಿಗೆಯಲ್ಲಿ ಪಾಲ್ಗೊಂಡರು. ಅಲಂಕೃತಗೊಂಡ ಆಟೋ, ಎತ್ತಿನಗಾಡಿಗಳು ವಿಶೇಷ ಮೆರಗು ತಂದವು. ಸಂವಿಧಾನ ನೀಡಿರುವ ಹಕ್ಕು ಆಶಯಗಳ ಕುರಿತ ಫಲಕಗಳನ್ನು ಶಾಲಾ ಮಕ್ಕಳು ಪ್ರದರ್ಶಿಸಿದರು. ಪುಸ್ತಕ ಜೋಳಿಗೆಗೆ ಅಮೂಲ್ಯ ಪುಸ್ತಕಗಳನ್ನು ನೀಡಲಾಯಿತು. ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಮಂಜುಳಾ, ಉಪಾಧ್ಯಕ್ಷರಾದ ರವೀಶ್, ಇತರೆ ಸದಸ್ಯರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ನೋಡಲ್ ಅಧಿಕಾರಿ ಮಧುಸೂದನ್, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಮಂಜುನಾಥ್, ಮುಖಂಡರಾದ ಸುಭಾ?, ಕಾಳಿಂಗ ಸಿದ್ದಾರ್ಥ್, ಮುತ್ತಣ್ಣ, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು. ಸಹ ಶಿಕ್ಷಕರಾದ ವಿದ್ಯಾರಾಣಿ ಸಂವಿಧಾನ ಕುರಿತು ಉಪನ್ಯಾಸ ನೀಡಿದರು. ಹೊರೆಯಾಲ ಗ್ರಾಮಕ್ಕೆ ಆಗಮಿಸಿದ



ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿ ಸ್ವಾಗತ ನೀಡಲಾಯಿತು. ಹೊರೆಯಾಲ ಗೇಟಿನಿಂದ ಬೈಕ್ ರ್‍ಯಾಲಿ ನಡೆಸಲಾಯಿತು. ಡಾ.ಬಿ.ಆರ್ ಅಂಬೇಡ್ಕರ್ ರವರ ಪುತ್ಥಳಿಗೆ ಪು?ಪಾರ್ಚನೆ ನೆರವೇರಿಸಲಾಯಿತು. ವಿವಿಧ ಕಲಾತಂಡಗಳು ಸಂಭ್ರಮದಿಂದ ಮೆರವಣಿಗೆಗೆ ಮೆರಗು ನೀಡಿದವು. ಬಳಿಕ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಲೀಲಾವತಿ, ಉಪಾಧ್ಯಕ್ಷರಾದ ಚೆನ್ನಮ್ಮ, ಇತರೆ ಸದಸ್ಯರು, ನೋಡಲ್ ಅಧಿಕಾರಿಯಾಗಿರುವ ಶಿಶು ಅಭಿವೃದ್ಧಿ ಅಧಿಕಾರಿಗಳಾದ ಹೇಮಾವತಿ, ಹೊರೆಯಾಲ ಗೋಪಾಲ್, ಸುಭಾ? ಮಾಡ್ರಳ್ಳಿ, ಪ್ರಾಧ್ಯಾಪಕರಾದ ರಾಜು, ಸಾಹಿತಿ ಕಾಳಿಂಗ ಸಿದ್ದಾರ್ಥ್, ಮುತ್ತಣ್ಣ, ಹೊರೆಯಾಲ ನಾಗರಾಜು, ಪಂಚಾಯತಿ ಅಭಿವೃದ್ಧಿ ಅಧಿಕಾರಿ ಶಾಂತರಾಜು, ಸಹ ಶಿಕ್ಷಕರಾದ ಮೋಹನ್, ವಿವಿಧ ಸಂಘಟನೆಗಳ ಪ್ರತಿನಿಧಿಗಳು, ಮುಖಂಡರು ಉಪಸ್ಥಿತರಿದ್ದರು.

## ಕವನ ಸಂಕಲನ ಬಿಡುಗಡೆ ಮತ್ತು ವಿಶೇಷ ಉಪನ್ಯಾಸ

**ಮೈಸೂರು:** ಕರ್ನಾಟಕ ಸರ್ಕಾರ ಶಾಲಾ ಶಿಕ್ಷಣ (ಪದವಿ ಪೂರ್ವ) ಇಲಾಖೆ ಮೈಸೂರುಜಿಲ್ಲಾ ಪದವಿಪೂರ್ವ ಕಾಲೇಜು ಕನ್ನಡ ಉಪನ್ಯಾಸಕರ ವೇದಿಕೆ ವತಿಯಿಂದ ಫೆ.24ರ ಶನಿವಾರ ಮಧ್ಯಾಹ್ನ 3-30ಕ್ಕೆ ನಂಜುಮಳಿಗೆ ಹತ್ತಿರವಿರುವ ಗೋಪಾಲಸ್ವಾಮಿ ಶಿಶು ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಕವಿ ಡಾ.ಸಂತೋಷ್ ಚೊಕ್ಕಾಡಿ ಅವರ ''ಅರ್ಥವಿದೆಯೆ ವಿದಾಯಕ್ಕೆ'' ಕವನ ಸಂಕಲನ ಬಿಡುಗಡೆ ಮತ್ತು ವಿಶೇಷ ಉಪನ್ಯಾಸವನ್ನು ಏರ್ಪಡಿಸಲಾಗಿದೆ. ಕೃತಿ ಬಿಡುಗಡೆಯನ್ನು ಕವಿ ವಿಮರ್ಶಕ ಖ್ಯಾತ ಅಂಕಣಕಾರರಾದ ಬಾಲಸುಬ್ರಮಣ್ಯಕಂಜರ್ಪಣೆ ಮಾಡಲಿದ್ದಾರೆ. ಅಧ್ಯಕ್ಷತೆಯನ್ನು ಲೇಖಕರಾದ ವಿಕ್ರಂ ಚದುರಂಗ ವಹಿಸಲಿದ್ದಾರೆ. ಕೃತಿಯನ್ನು ಕುರಿತು ಮಹಾರಾಜ ಕಾಲೇಜು ಕನ್ನಡ ಪ್ರಾಧ್ಯಾಪಕರಾದ ಡಾ.ವಿಜಯಲಕ್ಷ್ಮಿ ಮಾತನಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಗೋಪಾಲಸ್ವಾಮಿ ಶಿಕ್ಷಣ ಸಂಸ್ಥೆಯ ಕರೆಸ್ಪಾಂಡೆಂಟ್ ಎನ್. ಆರ್.ಮಂಜುನಾಥ್, ಕವಿ ಡಾ.ಸಂತೋಷ್ ಚೊಕ್ಕಾಡಿ, ಕನ್ನಡ ಉಪನ್ಯಾಸಕ ವೇದಿಕೆಯ ಅಧ್ಯಕ್ಷರಾದ ಡಾ.ನೀ.ಗೂ.ರಮೇಶ್ ಉಪಸ್ಥಿತರಿರುತ್ತಾರೆ.

## ಬೃಹತ್ ಉದ್ಯೋಗಮೇಳ

**ಮಂಡ್ಯ:** ಬೆಂಗಳೂರು ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮ ವತಿಯಿಂದ ಫೆಬ್ರವರಿ 26 ಮತ್ತು 27 ರಂದು ಬೆಳಿಗ್ಗೆ 9 ಗಂಟೆಗೆ ಬೃಹತ್ ಉದ್ಯೋಗ ಮೇಳವನ್ನು ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದೆ. ಜಿಲ್ಲೆಯ ನಿರುದ್ಯೋಗಿ ವಿದ್ಯಾವಂತ ಅಭ್ಯರ್ಥಿಗಳು ಭಾಗವಹಿಸಬೇಕು ಎಂದು ಮಂಡ್ಯ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಅವರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಮಂಡ್ಯ:** ಮೆಟ್ರಿಕ್ ನಂತರದ ಕೋರ್ಸ್ ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೂಲಕ ನೀಡಲಾಗುತ್ತಿರುವ ಮೆಟ್ರಿಕ್ ನಂತರದ (ವೃತ್ತಿಪರ ಪದವಿ ಮತ್ತು ಸ್ನಾತಕೋತ್ತರ ಪದವಿ ಕೋರ್ಸಿನ ವಿದಾರ್ಥಿಗಳಿಗೆ) ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಹೊಸ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಫೆಬ್ರವರಿ 29 ರಂದು ಕೊನೆಯ ದಿನಾಂಕವಾಗಿರುತ್ತದೆ ಎಂದು ಮಂಡ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ವ್ಯತ್ಯಯ

**ಮಂಡ್ಯ:** ಮಂಡ್ಯ ವಿದ್ಯುತ್ ವಿತರಣಾ ಕೇಂದ್ರ ಮತ್ತು ಚಿಕ್ಕಮಂಡ್ಯ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ಕಾರ್ಯನಿರ್ವಾಹಣೆ ಹಮ್ಮಿಕೊಂಡಿರುವುದರಿಂದ ಫೆಬ್ರವರಿ 24 ರಂದು ಬೆಳಿಗ್ಗೆ 09 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್‌ನಲ್ಲಿ ಅಡಚಣೆ ಉಂಟಾಗಲಿದೆ. ನಗರ ಪ್ರದೇಶಗಳಾದ ಸುಭಾಷ್‌ನಗರ, ಅಶೋಕನಗರ, ವಿ.ವಿ. ರೋಡ್, ಹೊಸಹಳ್ಳಿ, ವಿನಾಯಕ ಬಡಾವಣೆ, ನೂರು ಅಡಿ ರೋಡ್, ನೆಹರು ನಗರ, ದ್ವಾರಕನಗರ, ಗಾಂಧಿನಗರ, ಓಉಔ'ಖ ಐಚಿಥಿಠಣಾ, ಶ್ರೀ ರಾಮನಗರ, ಕಾವೇರಿ ನಗರ 1 2 ನೇ ಹಂತ, ಚಂದ್ರದರ್ಶನ, ಚಾಮುಂಡೇಶ್ವರಿ ನಗರ, ಅನ್ನಪೂರ್ಣೇಶ್ವರಿ ನಗರ, ಶಂಕರನಗರ, ಇಂಡುವಾಳು, ಕಿರಗಂದೂರು, ಕಲ್ಲಹಳ್ಳಿ, ಕ್ಯಾತಂಗೆರೆ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಹಾಗೂ ಗ್ರಾಮಾಂತರ ಪ್ರದೇಶಗಳಾದ ಕಾರಸವಾಡಿ, ಮಮಗಲ, ಹನಿಯಂಬಾಡಿ, ಚೀರನಹಳ್ಳಿ, ಹೆಬ್ಬಕವಾಡಿ, ಕೊತ್ತತ್ತಿ, ಮೊತ್ತಹಳ್ಳಿ, ಬೇವಿನಹಳ್ಳಿ, ಹುಲ್ಲುಕೆರೆ, ಎ.ಹುಲಿಕೆರೆ, ಬಿ. ಹುಲಿಕೆರೆ ಮತ್ತು ಐ.ಪಿ ಮಾರ್ಗಗಳಲ್ಲಿ ವಿದ್ಯುತ್ ಅಡಚಣೆ ಉಂಟಾಗಲಿದೆ. ಚಿಕ್ಕ ಮಂಡ್ಯ ವಿದ್ಯುತ್ ಸವಿತರಣಾ ಕೇಂದ್ರದ ನಗರ ಪ್ರದೇಶಗಳಾದ ಶಂಕರಪುರ, ಜೈನ್ ಸ್ಟ್ರೀಟ್, ಬೀಡಿ ಕಾಲೋನಿ, ಜಬರ್ ಸರ್ಕಲ್, ವಿನಾಯಕಾನಂದ ಬಡಾವಣೆ ಹಾಗೂ ಗ್ರಾಮಾಂತರ ಪ್ರದೇಶಗಳಾದ ಗೋಪಾಲಪುರ, ಚಿಕ್ಕಮಂಡ್ಯ, ಸಾತನೂರು, ಕೊಮ್ಮೇರಹಳ್ಳಿ, ಹುಲಿವಾನ, ಕೆ. ಗೌಡಗೆರೆ, ಹೆಚ್. ಮಲಿಗೆರೆ, ಎಸ್.ಐ.ಕೋಡಿಹಳ್ಳಿ, ಹೆಚ್. ಕೋಡಿಹಳ್ಳಿ, ಸಂಪಹಳ್ಳಿ, ಗೊರವಾಲೆ, ಬಿ. ಹೊಸಹಳ್ಳಿ, ಬೀರಗೌಡನಹಳ್ಳಿ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುವುದರಿಂದ ಕಂಪನಿಯೊಂದಿಗೆ ಸಹಕರಿಸಬೇಕೆಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ಮಂಡ್ಯ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

**ಮಂಡ್ಯ:** 66/11 ಕೆ.ವಿ ಕೆ.ಐ.ಎ.ಡಿ.ಬಿ ವಿದ್ಯುತ್ ವಿತರಣಾ ಕೇಂದ್ರ ಮತ್ತು ತುಂಬಕೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಫೀಡರ್‌ಗಳ ಮಾರ್ಗಗಳಲ್ಲಿ ಬೃಹತ್ ಕಾಮಗಾರಿ ವತಿಯಿಂದ ತುರ್ತು ಕಾರ್ಯನಿರ್ವಹಣೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಫೀಡರ್‌ಗಳಿಗೆ ಒಳಪಡುವ ಪ್ರದೇಶಗಳಲ್ಲಿ ಫೆಬ್ರವರಿ 24 ರಂದು ವಿದ್ಯುತ್‌ನಲ್ಲಿ ಅಡಚಣೆ ಉಂಟಾಗಲಿದೆ. ಕೆ.ಐ.ಎ.ಡಿ.ಬಿ ವಿದ್ಯುತ್ ವಿತರಣಾ ಕೇಂದ್ರದ ನಗರ ಪ್ರದೇಶಗಳಾದ ಗುತ್ತಲು, ಫ್ಯಾಕ್ಟರಿ ವೃತ್ತ, ಕೈಗಾರಿಕ ಬಡಾವಣೆಗಳು, ಎಂ. ಸಿ. ರಸ್ತೆ, ತಾವರೆಗೆರೆ, ನೆಹರು ನಗರ, ಉದಯಗಿರಿ, ಸಾದತ್ ಮೊಹಲ್ಲ, ಚನ್ನಯ್ಯ ಬಡಾವಣೆ, ಸಿದ್ದಾರ್ಥ ಬಡಾವಣೆ, ಬೆಂಗಳೂರು ಮುಖ್ಯ ರಸ್ತೆಯ ಹೆಬ್ಬಾಳ ಹಾಗೂ ಗ್ರಾಮಾಂತರ ಪ್ರದೇಶಗಳಾದ ಶ್ರೀನಿವಾಸಪುರ ಗೇಟ್, ಹನಕೆರೆ ಐ.ಪಿ ವ್ಯಾಪ್ತಿ, ಬಸವನಪುರ ಐ.ಪಿ ವ್ಯಾಪ್ತಿ, ಬೂದನೂರು, ಭೂತನಹೊಸೂರು, ಚನ್ನಪ್ಪನದೊಡ್ಡಿ, ಹಂಬರಹಳ್ಳಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಅಡಚಣೆ ಉಂಟಾಗಲಿದೆ. ತುಂಬಕೆರೆ ವಿದ್ಯುತ್ ವಿತರಣಾ ಕೇಂದ್ರದ ಗ್ರಾಮಾಂತರ ಪ್ರದೇಶಗಳಾದ ಹೊಡಾಘಟ್ಟ, ಕೀಲಾರ, ಹನಕೆರೆ, ಹಳೆ ಬೂದನೂರು, ಹೊಸಬೂದನೂರು, ಈಚಗೆರೆ, ಹಂಬರಹಳ್ಳಿ, ಆಲಕೆರೆ, ನಲ್ಲಹಳ್ಳಿ, ಕಚ್ಚಿಗೆರೆ, ಶ್ರೀನಿವಾಸಪುರ ಗೇಟ್, ಹೊನಗಾನಹಳ್ಳಿಮಠ, ತುಂಬಕೆರೆ, ಚಾಮಲಾಪುರ, ಉಮ್ಮಡಹಳ್ಳಿ, ಬಸವನಪುರ ಹಾಗೂ ವಿದ್ಯುತ್ ಅಡಚಣೆ ಉಂಟಾಗಲಿದೆ ಎಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ಮಂಡ್ಯ ವಿಭಾಗದ ಅಭಿಯಂತರ ತಿಳಿಸಿದ್ದಾರೆ.

# ಜಾಗೃತಿ ಸಮಿತಿ ಸಭೆ ಕರೆಯದಿದ್ದರೆ ಪ್ರತಿಭಟನೆ ಎಚ್ಚರಿಕೆ

**ಚಾಮರಾಜನಗರ:** ಮ್ಯಾನುವಲ್ ಸ್ಕ್ಯಾವೆಂಜರ್ ಜಾಗೃತಿ ಸಮಿತಿ ಸಭೆಯನ್ನು ಸದ್ಯದಲ್ಲೇ ಕರೆಯದಿದ್ದರೆ ಜಿಲ್ಲಾಡಳಿತ ಭವನದ ಮುಂದೆ ಪ್ರತಿಭಟನೆ ನಡೆಸಿಬೇಕಾಗುತ್ತದೆ ಎಂದು ಸಫಾಯಿ ಕರ್ಮಚಾರಿ ಮೇಲುಸ್ತುವಾರಿ ಸಮಿತಿ ರಾಜ್ಯ ಸದಸ್ಯ ಡಿ.ಆರ್.ರಾಜು ಎಚ್ಚರಿಸಿದರು.

ಇಂದು ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕರೆಯಲಾಗಿದ್ದ ಜಿಲ್ಲಾ ಮಟ್ಟದ ಮ್ಯಾನುಯೆಲ್ ಸ್ಕ್ಯಾವೆಂಜಿಂಗ್ ನಿಷೇಧ ಮತ್ತು ಪುನರ್ವಸತಿ ಕಾಯ್ದೆ ಅನುಷ್ಠಾನ ಜಿಲ್ಲಾ ಜಾಗೃತಿ ಸಮಿತಿ ಸಭೆಯ ಮುಂದೂಡಿಕೆ ವಿರೋಧಿಸಿ ಜಿಲ್ಲಾಡಳಿತ ಭವನದ ಮಂಭಾಗದಲ್ಲಿ ಪ್ರತಿಭಟನೆಗೆ ಮುಂದಾದಾಗ ಸ್ಥಳಕ್ಕೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಬಿ.ಮಲ್ಲಿಕಾರ್ಜುನಯ್ಯ ಭೇಟಿ ನೀಡಿ ಕಾರಣಾಂತರಗಳಿಂದ ಇಂದಿನ ಸಭೆಯನ್ನು ಮುಂದೂಡಲಾಗಿದೆ. ಜಿಲ್ಲಾಧಿಕಾರಿಗಳೊಂದಿಗೆ ಮಾತನಾಡಿ, ಒಂದೆರಡು ದಿನಗಳಲ್ಲಿ ಸಭೆ ಕರೆಯುವುದಾಗಿ ಭರವಸೆ ನೀಡಿದರು.

ಮುಂದೂಡಿರುವ ಇಂದಿನ ಸಭೆಯನ್ನು ವಾರದೊಳಗೆ ಕರೆದು ಜಿಲ್ಲಾಧಿಕಾರಿಗಳ ಕಾರ್ಯಾಲಯ, ಜಿಲ್ಲಾ ನಗರ ಅಭಿವೃದ್ಧಿ ಕೋಶ, ನಗರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಖಾಲಿ ಇರುವ ಹುದ್ದೆಗೆ ಲೋಡರ್ಸ್ ಮತ್ತು ಕ್ಲೀನರ್ ಗಳನ್ನು ವಿಶೇಷವಾಗಿ ನೇಮಕಾತಿ ಮೂಲಕ ನೇಮಕ



ಮಾಡಲು ಫೆ. 7 ರಂದು ಅರ್ಜಿ ಆಹ್ವಾನಿಸಲಾಯಿತು. ಸರ್ಕಾರದ ಆದೇಶದನ್ವಯ ಶೀಘ್ರವಾಗಿ ನೇಮಕ ಮಾಡಬೇಕು. ಚಾಮರಾಜನಗರ ನಗರದ 9ನೇ ವಾರ್ಡ್ನ ಹಾಗೂ ಕೊಳ್ಳೇಗಾಲದ ಪೌರಕಾರ್ಮಿಕರ ಕಾಲೋನಿಯಲ್ಲಿ ವಾಸಕ್ಕೆ ಮನೆ ಇಲ್ಲದೆ ಮನೆ ನಿರ್ಮಾಣ ಮಾಡಿಕೊಡಬೇಕು. ಕೊಳ್ಳೇಗಾಲ ನಗರಸಭೆಯಲ್ಲಿ ಪೌರಕಾರ್ಮಿಕರುಗಳಾಗಿ ಕೆಲಸ ನಿರ್ವಹಿಸುತ್ತಿರುವರನ್ನು ಜೇಷ್ಠತೆಯ ಆಧಾರದ ಮೇಲೆ ನಾಲ್ಕು ಮಂದಿ ಮೇಸ್ತ್ರಿ ನೇಮಕ ಮಾಡಬೇಕು. ಜಿಲ್ಲೆಯ ಗ್ರಾಮ ಪಂಚಾಯಿತಿಯ ಪೌರಕಾರ್ಮಿಕರಿಗೆ ಸರ್ಕಾರಿ ಜಾಗಗಳನ್ನು ಗುರುತಿಸಿ ಮನೆ ನಿರ್ಮಿಸಿಕೊಡಬೇಕು. ಪೌರ ಕಾರ್ಮಿಕರ ಬೇಡಿಕೆಗಳನ್ನು ಈಡೇರಿಸಬೇಕು ಇಲ್ಲದಿದ್ದರೆ ಪ್ರತಿಭಟನೆ ಮಾಡಬೇಕು. ಎಂದು ರಾಜು ಎಚ್ಚರಿಸಿದರು.

ಕರ್ನಾಟಕ ರಾಜ್ಯ ಪೌರಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಆರ್ಮುಗಂ, ಪ್ರಧಾನ ಕಾರ್ಯದರ್ಶಿ ವೈ.ಕೆ.ಮೋಳೆ ಪಳನಿ, ಉಪಾಧ್ಯಕ್ಷ ಕೆ ಎನ್ ಪುರ ಕುಮಾರ್ , ಪ್ರಧಾನ ಕಾರ್ಯದರ್ಶಿ. ಆರ್ ನಾಗರಾಜು ನಗರ ಅಧ್ಯಕ್ಷ. ಸಿ ಕೆ ಮಹೇಶ್, ಮೇಗಲಹುಂಡಿ ಮಹಾದೇವ ಚಾಮರಾಜನಗರ ತಾಲೂಕ ಅಧ್ಯಕ್ಷ ಬಳಚವಾಡಿ ರಾಜು ಗುಂಡ್ಲುಪೇಟೆ ತಾಲೂಕು ಅಧ್ಯಕ್ಷ ಸಿ .ಪಿ .ಷಣ್ಮುಗಂ . ಹನೂರು ತಾಲೂಕ ಅಧ್ಯಕ್ಷ ಪಿ ಮಹೇಶ್,

# ಮದ್ದೂರು, ಯರಿಯೂರು ಗ್ರಾಪಂಗಳಲ್ಲಿ ಸಂವಿಧಾನ ಜಾಗೃತಿ ಜಾಥಾ ಯಶಸ್ವಿ

**ಚಾಮರಾಜನಗರ:** ಯಳಂದೂರು ತಾಲ್ಲೂಕಿನ ಮದ್ದೂರು ಮತ್ತು ಯರಿಯೂರು ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಇಂದು ಸಂವಿಧಾನ ಜಾಗೃತಿ ಜಾಥಾ ನಡೆಯಿತು. ಮದ್ದೂರಿನಲ್ಲಿ ಗ್ರಾಮಕ್ಕೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾಗೆ ಅದ್ದೂರಿ ಸ್ವಾಗತ ನೀಡಲಾಯಿತು. ಗ್ರಾಮ ಪಂಚಾಯತಿ ಅಧ್ಯಕ್ಷರಾದ ಭಾಗ್ಯಮ್ಮ, ಉಪಾಧ್ಯಕ್ಷರಾದ ವೆಂಕಟರಮಣ, ಇತರೆ ಸದಸ್ಯರು ಬಾಬಾಸಾಹೇಬ್ ಅಂಬೇಡ್ಕರ್ ರವರ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ ಜಾಥಾ ಬರಮಾಡಿಕೊಂಡರು.

ಗ್ರಾಮೀಣ ಕಲೆಯಾದ ದೊಣ್ಣೆ ವರಸೆಯನ್ನು ಗ್ರಾಮಸ್ಥರು ಪ್ರದರ್ಶಿಸಿದರು. ಮುಳ್ಳಿನ ಚಂಡು ಸುತ್ತುವುದು, ಬಾಕು, ಪಿಚ್ಚುಕ್ಕೊಳ್ಳಿ, ಕತ್ತಿವರಸೆ, ಪ್ರದರ್ಶನ ಮಾಡಿದರು. ಹುಲಿವೇಷ, ಮಂಗಳವಾದ್ಯ, ನಗಾರಿ, ತಮಟೆ, ಡೊಳ್ಳುಗಳ ನಾದದೊಂದಿಗೆ ಜಾಥಾ ಸಾಗಿತು. ಶಾಲಾ ವಿದ್ಯಾರ್ಥಿಗಳು ರಾ?ಟ್ರನಾಯಕರ ವೇ? ಭೂಷಣಗಳನ್ನು ಧರಿಸಿ ಗಮನ ಸೆಳೆದರು. ರಸ್ತೆ ಉದ್ದಕ್ಕೂ ಯುವಕರು ಮಾರಿಕುಣಿತ ಕುಣಿದು ಕುಪ್ಪಳಿಸಿದರು. ಶಾಲಾ ವಿದ್ಯಾರ್ಥಿಗಳು, ಅಂಗನವಾಡಿ, ಆಶಾ ಕಾರ್ಯಕರ್ತೆಯರು ಜಾಥಾದಲ್ಲಿ ಪಾಲ್ಗೊಂಡರು. ಗ್ರಾಮಗಳನ್ನು ತಳಿರು ತೋರಣಗಳಿಂದ ಅಲಂಕರಿಸಲಾಗಿತ್ತು. ವೇದಿಕೆ ಕಾರ್ಯಕ್ರಮದಲ್ಲಿ ಸಹಾಯಕ ಪ್ರಾಧ್ಯಾಪಕರಾದ ಲಿಖಿತ ಅವರು ಮಾತನಾಡಿ ಭಾರತ ಸಂವಿಧಾನ ಇತರೆ ರಾಷ್ಟ್ರಗಳ ಸಂವಿಧಾನಕ್ಕಿಂತ ವಿಶೇಷವಾಗಿದೆ. ನಮ್ಮ ಸಂವಿಧಾನ 395 ಮೂಲವಿಧಿಗಳನ್ನು ಒಳಗೊಂಡು ವಿಶ್ವದಲ್ಲಿಯೇ ಬೃಹತ್ ಸಂವಿಧಾನವಾಗಿದೆ. ಸರ್ವರು ಸಮಾನರಾಗಿ ಬಾಳಬೇಕೆಂಬ ಉದ್ದೇಶವನ್ನು ಸಂವಿಧಾನ ಇಟ್ಟುಕೊಂಡಿದೆ ಎಂದರು.

ರಾಜಕೀಯ ಸಾಮಾಜಿಕ ಮತ್ತು ಆರ್ಥಿಕ ಸಮಾನತೆಯನ್ನು ಕಾಣಬೇಕೆಂಬ ಕನಸನ್ನು ಅಂಬೇಡ್ಕರ್‌ರವರು ಹೊಂದಿದ್ದರು. ಸಂವಿಧಾನದ ಅರಿವು ಹೆಚ್ಚಾದ?ಟ್ಟು ಕೋಮುಗಲಭೆ, ಅನಿಷ್ಟ ಪದ್ಧತಿಗಳು ನಾಶಗೊಳ್ಳುತ್ತವೆ. ರಾಜ್ಯ ಸರ್ಕಾರ ನಾಡಿನ



ಜನರಿಗೆ ಸಂವಿಧಾನದ ಅರಿವು ಮೂಡಿಸಲು ಸಂವಿಧಾನ ಜಾಗೃತಿ ಮೂಡಿಸುವಂತಹ ಕಾರ್ಯಕ್ಕೆ ಮುಂದಾಗಿರುವುದು ಮೆಚ್ಚುಗೆಯ ವಿಷಯವಾಗಿದೆ ಎಂದು ಲಿಖಿತ ಅವರು ತಿಳಿಸಿದರು. ಯರಿಯೂರು ಗ್ರಾಮ ಪಂಚಾಯತಿಯಲ್ಲೂ ಸಂವಿಧಾನ ಜಾಗೃತಿ ಜಾಥಾಗೆ ಸಂಭ್ರಮದ ಸ್ವಾಗತ ದೊರೆಯಿತು. ಸತ್ತಿಗೆ ಸೂರಪನಿ, ಡೊಳ್ಳು, ತಮಟೆ, ಅಲಂಕೃತ ಎತ್ತಿನಗಾಡಿಗಳು ಮೆರವಣಿಗೆಯಲ್ಲಿ ಸಾಗಿದವು. ಹೆಣ್ಣು ಮಕ್ಕಳು ಕಳಶ ಹಿಡಿದು ಪಾಲ್ಗೊಂಡರು. ವೇದಿಕೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ದೊಡ್ಡಮ್ಮ ನಂಜುಂಡಸ್ವಾಮಿ ವಹಿಸಿದ್ದರು.



## ಬಿಎಸ್ಸೆ ಇಂಡಿಯಾವುಡ್ ಮೇಳದಲ್ಲಿ ಅದ್ಭುತ ಪ್ರದರ್ಶನ

ಮರಗೆಲಸ ಯಂತ್ರೋಪಕರಣಗಳ ತಯಾರಿಕೆಯಲ್ಲಿ ಮುಂಚೂಣಿಯಲ್ಲಿರುವ ಬಿಎಸ್ಸೆ, ನೆನ್ನೆ ಪ್ರಾರಂಭವಾದ ಜಾಗತಿಕ ಮರದ ಪ್ರದರ್ಶನಗಳಲ್ಲಿ ಒಂದಾದ ಇಂಡಿಯಾವುಡ್ 2024ನಲ್ಲಿ ತನ್ನ ಗಣ್ಯ ಉಪಸ್ಥಿತಿಯನ್ನು ಪ್ರದರ್ಶಿಸಿದೆ. ಫೆಬ್ರುವರಿ 26ರ ವರೆಗೆ ಬೆಂಗಳೂರಿನ ಇಂಟರ್ನ್ಯಾಷನಲ್ ಎಕ್ಸಿಬಿಷನ್ ಸೆಂಟರ್‌ನಲ್ಲಿ ಪ್ರದರ್ಶನ ನಡೆಯಲಿದೆ. ಮರಗೆಲಸ ತಂತ್ರಜ್ಞಾನದಲ್ಲಿ ಬಿಎಸ್ಸೆ ಅವರ ಇತ್ತೀಚಿನ ಪ್ರಗತಿಗಳು ಮತ್ತು ಉದ್ಯಮದ ಬೆಳವಣಿಗೆಗೆ ಅದರ ಬದ್ಧತೆಯನ್ನು ಪ್ರದರ್ಶಿಸಿದೆ ಮರಗೆಲಸ ವಲಯದಲ್ಲಿ ಶ್ರೀಮಂತ ಪರಂಪರೆಯೊಂದಿಗೆ, ಮರಗೆಲಸ ಉದ್ಯಮಕ್ಕೆ ವ್ಯಾಪಕ ಶ್ರೇಣಿಯ ಯಂತ್ರೋಪಕರಣಗಳು ಮತ್ತು ಯಾಂತ್ರೀಕೃತಗೊಂಡ ಪರಿಹಾರಗಳ ಸಮಗ್ರ ಶ್ರೇಣಿಯನ್ನು ಬಿಎಸ್ಸೆ ಒದಗಿಸುತ್ತದೆ. ಕಂಪನಿಯು ನಿರಂತರವಾಗಿ ಬದಲಾಗುತ್ತಿರುವ ಅಂತರರಾಷ್ಟ್ರೀಯ ಮಾರುಕಟ್ಟೆಗಳಲ್ಲಿ ಸ್ಪರ್ಧಿಸಲು ಮತ್ತು ಗ್ರಾಹಕರಿಗೆ ಸ್ಪಷ್ಟವಾದ ಪ್ರಯೋಜನಗಳನ್ನು ತರಲು ಇದು ಅನುವು ಮಾಡಿಕೊಡುತ್ತದೆ. ಈ ಆಧುನೀಕರಣವು ರಿಫ್ರೆಶ್ ಮಾಡಿದ ದೃಷ್ಟಿಗೋಚರ ಗುರುತನ್ನು ಹೊಂದಿದೆ, ಇದು ತನ್ನ ವಿಶಿಷ್ಟವಾದ ಉದ್ಯಮದ ಉಪಸ್ಥಿತಿಯನ್ನು ಉಳಿಸಿಕೊಂಡು ಸಮಕಾಲೀನ ಮೌಲ್ಯಗಳೊಂದಿಗೆ ಬಿಎಸ್ಸೆಯ ಜೋಡಣೆಯನ್ನು ಸಂಕೇತಿಸುತ್ತದೆ ಎಂದು ಬಿಎಸ್ಸೆ ಇಂಡಿಯಾದ ಸಿಇಒ ಸಯೀದ್ ಅಹ್ಮದ್ ಪ್ರಕಟಣೆಯಲ್ಲಿ ಹೇಳಿದ್ದಾರೆ.ಇಂಡಿಯಾವುಡ್ 2024 ರಲ್ಲಿ, ಬಿಎಸ್ಸೆ ತನ್ನ ಮರ, ಗಾಜು ಮತ್ತು ಕಲ್ಲಿನ ಗ್ರಾಹಕರಿಗೆ ಹೊಸ ವೈಶಿಷ್ಟ್ಯಗಳೊಂದಿಗೆ ತನ್ನ ಸೇವೆ ಮತ್ತು ನಿರ್ವಹಣೆ ಅಪ್ಲಿಕೇಶನ್ನ ಹೊಸ ಆವೃತ್ತಿಯನ್ನು ಪ್ರಾರಂಭಿಸುತ್ತಿದೆ, ಅಲಭ್ಯತೆಯನ್ನು ಕಡಿಮೆ ಮಾಡುವ ಮೂಲಕ ಮತ್ತು ಉತ್ಪಾದನಾ ಉತ್ಪಾದನೆಯನ್ನು ಸುಧಾರಿಸುವ ಮೂಲಕ ತಮ್ಮ ಯಂತ್ರಗಳನ್ನು ಅತ್ಯುತ್ತಮ ಕೆಲಸದ ಸ್ಥಿತಿಯಲ್ಲಿ ನಿರ್ವಹಿಸಲು ಅವರಿಗೆ ಸಹಾಯ ಮಾಡುತ್ತದೆ ಎಂದು ವಿವರಿಸಿದ್ದಾರೆ. ಬಿಎಸ್ಸೆ ಇಂಡಿಯಾ ವುಡ್ 2024ರ 4ನೇ ಹಾಲ್ನಲ್ಲಿ ಮಳಿಗೆಯನ್ನು ಹೊಂದಿದೆ.

## ಶಾವಿಗೆ ಉಪ್ಪಿಟ್ಟು

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಶಾವಿಗೆ - 1 ಕಪ್, ಚಿಕ್ಕದಾಗಿ ಕತ್ತರಿಸಿದ ಈರುಳ್ಳಿ 1, ಚಿಕ್ಕದಾಗಿ ಕತ್ತರಿಸಿದ ಟೊಮೆಟೊ, ಹಸಿರುಮೆಣಸಿನಕಾಯಿ 1-2, ಚಿಕ್ಕದಾಗಿ ಕತ್ತರಿಸಿದ ಶುಂಠಿ, ಕ್ಯಾರೆಟ್, ಬೀನ್ಸ್, ಬಟಾಣಿ ಕಾಲು ಕಪ್, ಎಣ್ಣೆ 2-4 ಚಮಚ, ಸಾಸಿವೆ 1 ಚಮಚ, ಉದ್ದಿನ ಬೇಳೆ, ಕಡಲೆ ಬೇಳೆ ತಲಾ 1 ಚಮಚ, ಕರಿಬೇವಿನ ಎಲೆ 8-10, ಕೊತ್ತೊಂಬರಿ ಸೊಪ್ಪು, ರುಚಿಗೆ ತಕ್ಕಷ್ಟು ಉಪ್ಪು

### ಮಾಡುವ ವಿಧಾನ

ಶಾವಿಗೆಯು ಗೋಲ್ಡನ್ ಬ್ರೌನ್ ಆಗುವವರೆಗೆ ಮಧ್ಯಮ ಉರಿಯಲ್ಲಿ ಹುರಿದುಕೊಳ್ಳಿ. ಒಂದು ದಪ್ಪ ತಳದ ಪಾತ್ರೆಯಲ್ಲಿ ನೀರು ಕಾಯಿಸಿ, ಅದಕ್ಕೆ ಹುರಿದ ಶ್ಯಾವಿಗೆ ಹಾಕಿ ಮತ್ತು ಚಿಟಿಕೆ ಉಪ್ಪು ಸೇರಿಸಿ. ಶ್ಯಾವಿಗೆ ಅರಳಲು ಬಿಡಿ. ನಂತರ ಅದರ ನೀರನ್ನು ತೆಗೆಯಿರಿ.ಒಂದು ಕಡಾಯಿ ತೆಗೆದುಕೊಂಡು ಅದಕ್ಕೆ ಎಣ್ಣೆ ಹಾಕಿ. ಎಣ್ಣೆ ಬಿಸಿಯಾದ ಬಳಿಕ ಅದಕ್ಕೆ ಸಾಸಿವೆ, ಕರಿಬೇವಿನ ಸೊಪ್ಪು ಹಾಕಿ.ಸಾಸಿವೆ ಸಿಡಿದ ನಂತರ ಅದಕ್ಕೆ ಉದ್ದಿನ ಬೇಳೆ, ಕಡಲೆ ಬೇಳೆ ಸೇರಿಸಿ ಹುರಿದುಕೊಳ್ಳಿ.ಕತ್ತರಿಸಿಟ್ಟ ಶುಂಠಿ ಮತ್ತು ಈರುಳ್ಳಿಯನ್ನು ಸೇರಿಸಿ, ಹುರಿದುಕೊಳ್ಳಿ.ಈರುಳ್ಳಿ ಗೋಲ್ಡನ್ ಬ್ರೌನ್ ಆದನಂತರ ಅದಕ್ಕೆ ಕತ್ತರಿಸಿಟ್ಟ ಟೊಮೆಟೊ ಸೇರಿಸಿ. ಅದು ಮೃದುವಾಗುವವರೆಗೆ ಹುರಿಯಿರಿ.ಈಗ ಕತ್ತರಿಸಿಟ್ಟ ಬೀನ್ಸ್, ಕ್ಯಾರೆಟ್ ಮತ್ತು ಬಟಾಣಿ ಹಾಕಿ. ಅದನ್ನು ಹುರಿಯಿರಿ.ಬೇಯಿಸಿಟ್ಟುಕೊಂಡ ಶ್ಯಾವಿಗೆ ಸೇರಿಸಿ. ಅದಕ್ಕೆ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ. ಕೊತ್ತಂಬರಿ ಸೊಪ್ಪಿನಿಂದ ಅಲಂಕರಿಸಿ.

## ಎಐಎಡಿಎಂಕೆ ಉಚ್ಚಾಟಿತ ಮುಖಂಡ ವಿರುದ್ಧ ನಟಿ ತ್ರಿಶಾ ಗರಂ



ಹಿರಿಯ ರಾಜಕಾರಣಿಗಾಗಿ ನಟಿ ತ್ರಿಶಾ ಅವರನ್ನು 25 ಲಕ್ಷ ರೂಪಾಯಿ ಕೊಟ್ಟು ರೆಸಾರ್ಟ್ಗೆ ಕರೆಯಿಸಿಕೊಂಡಿದ್ದೆವು ಎಂದು ಎಐಎಡಿಎಂಕೆ ಉಚ್ಚಾಟಿತ ಮುಖಂಡ ಎ.ವಿ.ರಾಜು ಹೇಳಿಕೆ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಇದೀಗ ನಟಿ ತ್ರಿಷಾ ಪ್ರತಿಕ್ರಿಯಿಸಿದ್ದು ಎ.ವಿ.ರಾಜುಗೆ ತಕ್ಕ ಪಾಠ ಕಲಿಸೋದಾಗಿ ಹೇಳಿದ್ದರು.

ಅಲ್ಲದೆ ಎ.ವಿ ರಾಜು ವಿರುದ್ಧ ಕಾನೂನು ಸಮರಕ್ಕೆ ನಟಿ ಮುಂದಾಗಿದ್ದಾರೆ. ನಟಿ ತ್ರಿಶಾ ಅವರು ಎ.ವಿ ರಾಜು ಅವರ ಕುರಿತ ನೋಟಿಸ್ ಅನ್ನು ನೇರವಾಗಿ ಸೋಷಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಎ.ವಿ ರಾಜು ತಮ್ಮ ವಿರುದ್ಧ ನೀಡಿರುವ ಅವಹೇಳನಕಾರಿ ಹೇಳಿಕೆ ನೀಡಿದ್ದು, ಪರಿಹಾರ ನೀಡುವಂತೆ ನೋಟಿಸ್ನಲ್ಲಿ ತಿಳಿಸಿದ್ದಾರೆ. ರಾಜು ಕೊಟ್ಟಿರುವ ಹೇಳಿಕೆಗಳಿಂದ ನಟಿ ತ್ರಿಶಾ ಮಾನಸಿಕವಾಗಿ ನೊಂದಿರುವುದಾಗಿ ಹೇಳಿದ್ದಾರೆ. ಅಲ್ಲದೇ, ಮಾಧ್ಯಮಗಳಲ್ಲಿ ಅವಹೇಳನಕಾರಿ ಕಾಮೆಂಟ್ಗಳನ್ನು ನೀಡದಂತೆ ಎಚ್ಚರಿಕೆ ನೀಡಿದ್ದಾರೆ.

ಈಗಾಗಲೇ ರಾಜು ಮಾಡಿರುವ ಹೇಳಿಕೆಗಳನ್ನು ಮುದ್ರಣ ಮಾಧ್ಯಮ, ಎಲೆಕ್ಟ್ರಾನಿಕ್ ಮಾಧ್ಯಮಗಳು ಹಾಗೂ ಸೋಶಿಯಲ್ ಮೀಡಿಯಾಗಳಿಂದ ಸಂಪೂರ್ಣ ಅಳಿಸಿ ಹಾಕಬೇಕು ಎಂದು ಹೇಳಿದ್ದಾರೆ. ಈ ನೋಟಿಸ್ ಸ್ವೀಕರಿಸಿದ 24 ಗಂಟೆಗಳ ಒಳಗೆ ನಟಿ ತ್ರಿಶಾಗೆ ಎ.ವಿ ರಾಜು ಮತ್ತೆ ಕ್ಷಮೆಯಾಚಿಸಬೇಕು. ಇಲ್ಲದೆ ಹೋದಲ್ಲಿ ಸಿವಿಲ್ ಮತ್ತು ಕ್ರಿಮಿನಲ್ ಕ್ರಮ ತೆಗೆದುಕೊಳ್ಳಲು ಸಿದ್ಧ ಎಂದು ತ್ರಿಶಾ ವಾರ್ನಿಂಗ್ ಕೊಟ್ಟಿದ್ದಾರೆ.



ರಾಜು ಹೇಳಿಕೆಗೆ ಭಾರೀ ಆಕ್ರೋಶ ವ್ಯಕ್ತವಾಗುತ್ತಿದ್ದಂತೆಯೇ ರಾಜು ಕ್ಷಮೆ ಕೇಳಿದ್ದಾರೆ. ತಮ್ಮ ಮಾತನ್ನು ತಪ್ಪಾಗಿ ಅರ್ಥೈಸಲಾಗಿದೆ ಎಂದಿದ್ದಾರೆ. ನಾನು ತ್ರಿಶಾ ರೀತಿಯ ನಟಿಯನ್ನು ಎಂದು ಹೇಳಿದ್ದು, ತ್ರಿಶಾ ಅವರನ್ನೇ ಅಂತ ಹೇಳಿಲ್ಲ. ಆದರೂ, ನಾನು ಕ್ಷಮೆ ಕೇಳುತ್ತೇನೆ. ಯಾರನ್ನೂ ನೋಯಿಸುವ ಉದ್ದೇಶ ತಮಗೆ ಇರಲಿಲ್ಲವೆಂದು ಹೇಳಿದ್ದಾರೆ.

## ದೃಷ್ಟಿದೋಷ ತಡೆಯಲು ವಾರ್ಷಿಕ ಕಣ್ಣಿನ ತಪಾಸಣೆ ಪ್ರಮುಖ ಪಾತ್ರ: ತಜ್ಞರು

### ಹೆಲ್ತ್ ಟಿಪ್ಸ್

ಪ್ರತಿ ವರ್ಷವೂ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳುವುದು ಕಣ್ಣಿನ ಸಮಸ್ಯೆ ಉಲ್ಬಣಗೊಳ್ಳುವುದಕ್ಕೂ ಮೊದಲೇ ಅವುಗಳನ್ನು ಪತ್ತೆ ಮಾಡಲು ಮತ್ತು ಸಮಯಕ್ಕೆ ಸರಿಯಾಗಿ ಚಿಕಿತ್ಸೆಯನ್ನು ನೀಡಲು ಸಹಾಯ ಮಾಡುತ್ತದೆ. ದೃಷ್ಟಿ ಸಮಸ್ಯೆಯನ್ನು ಮೊದಲೇ ಪತ್ತೆ ಮಾಡಿದಾಗ, ವ್ಯಕ್ತಿಗಳಿಗೆ ಅಗತ್ಯ ಆರೈಕೆ ಮತ್ತು ಬೆಂಬಲವನ್ನು ಒದಗಿಸಿ, ಸೂಕ್ತ ದೃಷ್ಟಿ ಆರೋಗ್ಯವನ್ನು ಒದಗಿಸಬಹುದು. ದೃಷ್ಟಿ ಸಮಸ್ಯೆ ಜಾಗೃತಿ ಮಾಸದ ಆಚರಣೆಯ ಭಾಗವಾಗಿ, ದೃಷ್ಟಿ ಸಮಸ್ಯೆಯನ್ನು ಮೊದಲೇ ಪತ್ತೆ ಮಾಡುವುದಕ್ಕೆ ಮತ್ತು ಚಿಕಿತ್ಸೆಯನನ್ನು ಸೂಕ್ತವಾಗಿ ನೀಡುವುದಕ್ಕೆ ಜನಸಾಮಾನ್ಯರು ಮತ್ತು ವೈದ್ಯಕೀಯ ವೃತ್ತಿಪರರಿಬ್ಬರಿಗೂ ಜಾಗೃತಿ ಮೂಡುವುದು ಅಗತ್ಯವಿದೆ ಎಂದು ಡಾ. ಅಗರ್ವಾಲ್ಸ್ ಐ ಹಾಸ್ಪಿಟಲ್ ಬನ್ನೇರಘಟ್ಟದಲ್ಲಿನ ಮಕ್ಕಳ ನೇತ್ರಶಾಸ್ತ್ರ ವಿಭಾಗದ ಕನ್ಸಲ್ಟಂಟ್ ಡಾ. ನಿಶಾಂತ್ ಅಭಿಪ್ರಾಯಪಟ್ಟಿದ್ದಾರೆ. ದೃಷ್ಟಿ ಸಮಸ್ಯೆ ಮತ್ತು ಅಂಧತ್ವವನ್ನು ಅರ್ಥ ಮಾಡಿಕೊಳ್ಳುವುದರ ಪ್ರಾಮುಖ್ಯತೆ ಮತ್ತು ಅದರ ಕಾರಣಗಳಿಗೆ ಅವರು ಒತ್ತು ನೀಡಿದರು. ಅಲ್ಲದೆ, ಮೊದಲೇ ಅದನ್ನು ಪತತೆ ಮಾಡುವುದರ ಪ್ರಾಮುಖ್ಯತೆಯನ್ನು ಹೈಲೈಟ್ ಮಾಡಿದರು. ವಿವಿಧ ಕಣ್ಣಿನ ರೋಗಗಳನ್ನು ಅರ್ಥ ಮಾಡಿಕೊಳ್ಳುವುದು, ಚಿಕಿತ್ಸೆ ನೀಡುವುದು ಮತ್ತು ತಡೆಯುವುದರಲ್ಲಿ ಆಗಿರುವ ಇತ್ತೀಚಿನ ಸುಧಾರಣೆಗಳನ್ನೂ ಹಾಗೂ ದೃಷ್ಟಿಯನ್ನು ಇನ್ನಷ್ಟು ಹೆಚ್ಚಿಸುವ ದೃಷ್ಟಿ ಸಲಕರಣೆಗಳ ಬಳಕೆಯ ಬಗ್ಗೆಯೂ ಡಾ. ನಿಶಾಂತ್ ವಿರಿಸಿದರು.ಅಂಧತ್ವ ಎಂದರೆ ದೃಷ್ಟಿ ಸಂಪೂರ್ಣ ಕುರುಡಾಗುವುದು ಅಥವಾ ತೀವ್ರ ದೃಷ್ಟಿ ಸಮಸ್ಯೆ ಇರುವುದು.

ಇನ್ನು ಲೋ ವಿಷನ್ ಎಂಬುದು ಚಿಕಿತ್ಸೆ ನೀಡಿದರೂ ದೃಷ್ಟಿ ಸಮಸ್ಯೆ ಸಂಪೂರ್ಣ ಪುನಃಪ್ರಾಪ್ತಿಯಾಗದೇ ಇರುವುದು ಎಂದಾಗಿದ್ದು, ಇದಕ್ಕೆ ಹಲವು ರೋಗಗಳು ಕಾರಣವಾಗುತ್ತವೆ. ಮ್ಯಾಕ್ಯುಲರ್ ಡೀಜನರೇಶನ್, ಗ್ಲುಕೋಮಾ, ಡಯಾಬೆಟಿಕ್ ರೆಟಿನೋಪತಿ, ರೆಟಿನಿಎಸ್ ಪಿಗ್ಮೆಂಟೋಸಾ, ಆಪ್ಟಿಕ್ ನರ ಹಾನಿ, ಆಲ್ಬಿನಿಸಮ್, ಕ್ಯಾಟರ್‍ಯಾಕ್ಟ್, ಕಾರ್ಟಿಕಲ್ ದೃಷ್ಟಿ ದೋಷ, ಕಾರ್ನಿಯಲ್ ಅರೆಪಾರದರ್ಶಕತೆ, ಟಾಕ್ಸೋಪ್ಲಾಸ್ಮಾ, ರೆಟಿನಾ ಡಿಟ್ಯಾಚ್ ಮೆಂಟ್ ಮತ್ತು ಆಂಬ್ಲಿಯೋಪಿಯಾ ಕಾರಣವಾಗುತ್ತವೆ. ಡಾ. ನಿಶಾಂತ್ ಹೇಳುವಂತೆ ''ಭಾರತದಲ್ಲಿ ಲಕ್ಷಾಂತರ ಜನರಿಗೆ ಅಂಧತ್ವ ಮತ್ತು ದೃಷ್ಟಿ ದೋಷ ಕಾಣಿಸಿಕೊಳ್ಳುತ್ತಿದ್ದು, ಸಾವಿರಾರು ಮಕ್ಕಳೂ ಇದರಿಂದ ಬಾಧಿತರಾಗುತ್ತಿದ್ದಾರೆ. ಹೀಗಾಗಿ, ಈ ನಿಟ್ಟಿನಲ್ಲಿ ಜಾಗೃತಿ ಮತ್ತು ಕ್ರಮ ತುರ್ತಾಗಿ ಅಗತ್ಯವಿದೆ. ದೃಷ್ಟಿ ಸಮಸ್ಯೆಯಿಂದಾಗಿ ವ್ಯಕ್ತಿಯ ವೃತ್ತಿ ಜೀವನಕ್ಕೆ ಅಡ್ಡಿ ಉಂಟಾಗುವುದಷ್ಟೇ ಅಲ್ಲ. ಇದು ದೈನಂದಿನ ಚಟುವಟಿಕೆಗಳಿಗೂ ಬಾಧಿಸುತ್ತದೆ. ಆದಾಗ್ಯೂ, ಸೂಕ್ತ ಸಲಕರಣೆ ಮತ್ತು ಬೆಂಬಲವಿದ್ದರೆ, ಕಡಿಮೆ ದೃಷ್ಟಿಯನ್ನು ಹೊಂದಿರುವ ವ್ಯಕ್ತಿಗೂ ಕೂಡಾ ಸವಾಲನ್ನು ಎದುರಿಸಬಹುದು ಮತ್ತು ಸ್ವತಂತ್ರವಾಗಿ ಬದುಕಬಹುದು. ಆರಂಭದಲ್ಲೇ ಚಿಕಿತ್ಸೆ ಪಡೆಯುವುದರಿಂದ ಸಂಕೀರ್ಣತೆ ಹೆಚ್ಚುವ ಅಪಾಯ ಕಡಿಮೆಯಾಗುವುದಷ್ಟೇ ಅಲ್ಲ, ಒಟ್ಟಾರೆ ಆರೋಗ್ಯ ಮತ್ತು ಜೀವನದ ಗುಣಮಟ್ಟದ ಮೇಲೂ ಪ್ರಭಾವ ಬೀರುತ್ತದೆ.'' ಕಡಿಮೆ ವಯಸ್ಸಿನಲ್ಲಿ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳುವ ಹವ್ಯಾಸವನ್ನು ಬೆಳೆಸಿಕೊಳ್ಳುವುದು ಉತ್ತಮ. ಮೊದಲೇ ಪತ್ತೆ ಮಾಡಿದರೆ ಬಹುತೇಕ ಎಲ್ಲ ಕಣ್ಣಿನ ಸಮಸ್ಯೆಗಳನ್ನು ಸರಿಪಡಿಸಬಹುದು. 3-5 ವರ್ಷಗಳ ಮಕ್ಕಳ ಕಣ್ಣುಗಳನ್ನು ತಪಾಸಣೆ ಮಾಡಿದರೆ, ಆಂಬ್ಲಿಯೋಪಿಯಾ (ಲೇಝಿ ಐ) ಅಥವಾ ಸ್ಟ್ರಾಬಿಸ್ಮಸ್ (ಮೆಳ್ಳೆಗಣ್ಣು) ಇತ್ಯಾದಿಯನ್ನು ಪತ್ತ ಮಾಡಬಹುದು.

## ಸಂಗೀತ ಉತ್ಸವ



ಶ್ರೀ ಶಾರದಾ ಸಂಗೀತ ಸಭಾ ಟ್ರಸ್ಟ್, 21ನೇ ವಾರ್ಷಿಕ ಸಂಗೀತ ಉತ್ಸವವನ್ನು ಹನುಮಂತನಗರದ ತ್ಯಾಗೀಶಾನಂದ ಹಾಲ್ನಲ್ಲಿ ಆಚರಿಸುತ್ತಿದೆ. ವಾರ್ಷಿಕ ಸಂಗೀತ ಉತ್ಸವ 2024 ಎಲ್ಲಾ ಮೂರು ದಿನಗಳಲ್ಲಿ 3 ಸಂಗೀತ ಕಚೇರಿಗಳನ್ನು ಹೊಂದಿರುತ್ತದೆ ಜೊತೆಗೆ ಸಂಗೀತ ಕ್ಷೇತ್ರದಲ್ಲಿ ಪ್ರಸಿದ್ಧ ವ್ಯಕ್ತಿಗಳನ್ನು ಗೌರವಿಸುತ್ತದೆ. 23 ಫೆ 24 6 ಕ್ಕೆ ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿ: ವಿದುಷಿ ಶ್ರೀಮತಿ ಆರ್. ಎ. ರಮಾಮಣಿ ಅವರಿಂದ ಗಾಯನ ವಿದುಷಿ ಶ್ರೀಮತಿ ನಳಿನಾ ಮೋಹನ್ ಪಿಟೀಲು, ವಿದ್ವಾನ್ ಶ್ರೀ ಅರ್ಜುನ್ ಕುಮಾರ್ ಮೃದಂಗ, ವಿದ್ವಾನ್ ಶ್ರೀ ರಂಗನಾಥ ಚಕ್ರವರ್ತಿ ಘಟ, ವಿದುಷಿ ರಮಾಮಣಿ ಅವರು ಐದನೇ ವಯಸ್ಸಿನಲ್ಲಿ ಶ್ರೀ ನಿವಾಸ್ ರಾಮಚಂದ್ರ ರಾವ್ ಅವರ ಮಾರ್ಗದರ್ಶನದಲ್ಲಿ ಕರ್ನಾಟಕ ಸಂಗೀತವನ್ನು ಕಲಿಯಲು ಪ್ರಾರಂಭಿಸಿದರು. ಅವರು ಬಳ್ಳಾರಿ ಬ್ರದರ್ಸ್, ಶ್ರೀ ಅನೂರ್ ರಾಮಕೃಷ್ಣ, ಸಂಗೀತ ಕಲಾನಿಧಿ ಆರ್.ಕೆ. ಶ್ರೀ ಕಂಠನ್ ಮತ್ತು ಸಂಗೀತ ಕಲಾನಿಧಿ ಪಾಲ್ಘಟ್ ಕೆ.ವಿ. ನಾರಾಯಣಸ್ವಾಮಿ ಅವರ ಮಾರ್ಗದರ್ಶನದಲ್ಲಿ ಸಂಗೀತವನ್ನು ಕಲಿತರು.

ಅವರು ಬೆಂಗಳೂರು ವಿಶ್ವವಿದ್ಯಾಲಯದಿಂದ ಸಂಗೀತದಲ್ಲಿ ಮಾಸ್ಟರ್ಸ್ ಪದವಿಯನ್ನು ಪಡೆದಿದ್ದಾರೆ. ಪ್ರಸಿದ್ಧ ಮೃದಂಗ ವಿದ್ವಾಂಸ ಟಿ.ಎ.ಎಸ್. ಮಣಿಯೊಡನೆ ವಿವಾಹಿತರಾಗಿದ್ದಾರೆ. ಮಣಿಯು ಅವರಿಗೆ ಮಾರ್ಗದರ್ಶಕರು ಮತ್ತು ಆಧ್ಯಾತ್ಮಿಕ ಗುರುಗಳಾಗಿದ್ದಾರೆ. ಅವರು ಹನ್ನೆರಡು ವರ್ಷದಲ್ಲಿ ತಮ್ಮ ಸೋದರಿ ಆರ್.ಎ. ಚಿಂಗಮಣಿಯೊಡನೆ ಸಂಗೀತ ಸಂದರ್ಶನಗಳಲ್ಲಿ ಪ್ರದರ್ಶನಗಳನ್ನು ಆರಂಭಿಸಿದರು ಮತ್ತು ಅದರಿಂದ ಹಿಂದಿರುಗಿದಿಲ್ಲ. ಅವರು ಶ್ರೇಷ್ಠ ಗಾಯಕರು, ಹೆಚ್ಚು ಹುಚ್ಚುಗೊಳಿಸುವ ಸಂಗೀತ ಕಲಾವಿದ, ಮಾತ್ರವಲ್ಲದೆ ಬೆಳಕಿನ ಸೃಷ್ಟಿಕಾರರು. ಅವರು ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ವಿದ್ವಾಂಸ ಲೇಟ್ ಎಂ.ಎಲ್. ವೀರಭದ್ರಯ್ಯ ಅವರಿಂದ ಮೃದಂಗ ವಿದ್ಯೆಯನ್ನು ವಿಶದಪಡಿಸಿದರು. ಅವರು ಜೈನ್ ವಿಶ್ವವಿದ್ಯಾನಿಲಯದಲ್ಲಿ ಸಂಗೀತದ ವ್ಯಾಖ್ಯಾನಕಾರರಾಗಿದ್ದರು. ಅವರು ಕರ್ನಾಟಕ ಪ್ರಕ್ಷಿಪದ ಮತ್ತು ಸಂಗೀತದ ಕಲೆಗಳ ಉಪನಿಲೆ ವಿದ್ಯಾರ್ಥಿಸಂಘದ ಉಪಾಧ್ಯಾಯರು.

ಅವರು ಕರ್ನಾಟಕ ಪರಿಚಲನ ಮತ್ತು ಸಂಗೀತ ಕಲೆಗಳ ಕಾಲೇಜಿನ ಉಪಾಧ್ಯಾಯಿಯಾಗಿದ್ದಾರೆ. ಸಂಗೀತ ಕ್ಷೇತ್ರದಲ್ಲಿ ತಮ್ಮ ಶ್ರೇಯಸ್ಸಿಗೆ ಅನೇಕ ಪ್ರಶಸ್ತಿಗಳನ್ನು ಸಹ ಪಡೆದಿದ್ದಾರೆ. 24 ಫೆ 24-6.00 ಕರ್ನಾಟಕ ಶಾಸ್ತ್ರೀಯ ಸಂಗೀತ ಕಛೇರಿ : ವಿದ್ವಾನ್ ಸಂಪಗೋಡು ಎಸ್.ವಿಘ್ನರಾಜ ಗಾಯನ ವಿದ್ವಾನ್ . ಬಿ.ಕೆ. ರಘು ಪಿಟೀಲು, ವಿದ್ವಾನ್ . ಬಿ.ಸಿ. ಮಂಜುನಾಥ್- ಮೃದಂಗ, ವಿದ್ವಾನ್. ಬಿ.ರಾಜಶೇಖರ್- ಮೋರ್ಸಿಂಗ್ ದಕ್ಷಿಣಾಮ್ನಾಯ ಶ್ರೀ ಶಾರದಾ ಪೀಠ ಶೃಂಗೇರಿಯ ಆಸ್ಥಾನ ವಿದ್ವಾನ್, ಗಾನ ಕಲಾಶ್ರೀ ಸಂಪಗೋಡು ಎಸ್ ವಿಘ್ನರಾಜ ಅವರು ಬಹುಮುಖ ಗಾಯಕ, ಫ್ಲೌಟಿಸ್ಟ್, ಸುಮುಖ ವೀಣೆ (ಮಾರ್ಪಡಿಸಿದ ಅಕೌಸ್ಟಿಕ್ ಸ್ಲೈಡ್ ಗಿಟಾರ್) ವಾದಕ, ಸಂಯೋಜಕ ಮತ್ತು ಶಿಕ್ಷಕ. ಸಂಪಗೋಡು ಎಸ್ ವಿಘ್ನರಾಜ ಅವರು ತಮ್ಮ ತಂದೆ ಸಂಗೀತ ವಾರಿಧಿ, ಗಾನಕಲಾ ಸುವರ್ಣ ದಿವಂಗತ ಶ್ರೀ ಡಿ ಎಸ್ ಸೂರ್ಯನಾರಾಯಣ ಭಟ್ ಮತ್ತು ವಿದ್ವಾನ್ ಶ್ರೀ ಡಿ ಎನ್ ಸುಬ್ರಹ್ಮಣ್ಯ ಭಟ್ ಅವರಿಂದ ಕರ್ನಾಟಕ ಗಾಯನವನ್ನು ಕಲಿತಿದ್ದಾರೆ. ವಿಘ್ನರಾಜ ಅವರು ತಮ್ಮ 15 ನೇ ವಯಸ್ಸಿನಲ್ಲಿ ಗಾಯನ ಏಕವ್ಯಕ್ತಿ ಸಂಗೀತ ಕಚೇರಿಗಳನ್ನು ನೀಡಲು ಪ್ರಾರಂಭಿಸಿದರು ಮತ್ತು ಕಳೆದಮೂರು ದಶಕಗಳಿಂದ ದಕ್ಷಿಣ ಭಾರತ ಮತ್ತು ವಿದೇಶಗಳಲ್ಲಿಯೂ ಸಹ ಪ್ರದರ್ಶನ ನೀಡುತ್ತಿದ್ದಾರೆ. ಸ್ವಯಂ ಕಲಿಸಿದ ಫ್ಲೌಟಿಸ್ಟ್ ಮತ್ತು ಸ್ವಯಂ ಕಲಿಸಿದ ಸ್ಲೈಡ್ ಗಿಟಾರ್ ವಾದಕ ವಿಘ್ನರಾಜ ಅವರು ಯುಎಸ್ಎ, ಆಸ್ಟ್ರೇಲಿಯಾ, ಮಲೇಷ್ಯಾ, ಸಿಂಗಾಪುರ್, ತೈವಾನ್ ಮತ್ತು ನ್ಯೂಜಿಲ್ಯಾಂಡ್ ದೇಶಗಳಲ್ಲಿ ಪ್ರಯಾಣಿಸಿದ್ದಾರೆ ಮತ್ತು ಪ್ರದರ್ಶನ ನೀಡಿದ್ದಾರೆ. ಸಂಪಗೋಡು ವಿಘ್ನರಾಜ ಬೆಂಗಳೂರು ಮೂಲದ ಸೂರ್ಯ ಗ್ಲೋಬಲ್ ಮ್ಯೂಸಿಕ್ ಅಕಾಡೆಮಿಯ ಸಂಸ್ಥಾಪಕ ನಿರ್ದೇಶಕರು. ವಿಧ್ವಾನ್ ಸಂಪಗೋಡು ಎಸ್ ವಿಘ್ನರಾಜ ಅವರಿಗೆ ಅನೇಕ ಬಿರುದು ಮತ್ತು ಪ್ರಶಸ್ತಿಗಳಿವೆ. 25 ಫೆ 24 - 6:00 ವೈಲಿನ್ ವೈಭವ 12 ಸಂಖ್ಯೆಯ ವೈಲಿನ್ ಸಂಗೀತ ಗುಂಪು, ವಿದ್ವಾಂಸರಾದ ಶ್ರೀ ಟಿ.ಎಸ್. ಕೃಷ್ಣಮೂರ್ತಿ ಹಾಗೂ ಅವರ ಶಿಷ್ಯರ ದ್ವಾರಾ ಸಂಚಾಲಿತವಾಗಿದೆ. ಅದಕ್ಕೆ ಪರಸ್ಪರ ಸಂಗೀತ ಬೆಂಬಲ ವಿದ್ವಾಂಸ ಶ್ರೀ ಅನೂರ್ ಅನಂತ ಕೃಷ್ಣ ಶರ್ಮ ಮತ್ತು ತಮ್ಮ ತಂಡದಿಂದ ಕೂಡಿರುತ್ತದೆ.ಗಾನ ಕಲಾ ಕೌಸ್ತುಭ ವಿದ್ವಾಂಸ ಟಿ.ಎಸ್. ಕೃಷ್ಣಮೂರ್ತಿ ಅವರು ಅಖಿಲ ಭಾರತೀಯ ರೇಡಿಯೋ ಮತ್ತು ದೂರದರ್ಶನದ ಗ್ರೇಡ್ ಕಲಾವಿದರು ಮತ್ತು ಭಾರತದ ಸರ್ಕಾರಕ್ಕೆ ಹಿರಿಯ ಶೋಧಕರು. ಅವರು ಕರ್ನಾಟಕ ಸಂಗೀತ (ವೈಲಿನ್ ಮತ್ತು ಶ್ರುತಿ) ಅದ್ಭುತಮತ್ತು ಪ್ರಖ್ಯಾತ ಶಿಕ್ಷಕರು ಮತ್ತು ಹಲವಾರು ನೃತ್ಯ ನಾಟಕಗಳು ಮತ್ತು ನೃತ್ಯ ಪ್ರತಿಯೋಗಿತಾದಲ್ಲಿ ಸಂಗೀತವನ್ನುಸಂಯೋಜಿಸಿದ್ದಾರೆ. ಅವರು ವಿಶ್ವದ ಪ್ರಮುಖ ಸಂಸ್ಥೆಗಳಿಂದ ಬಹುಮಾನಗಳು, ಪ್ರಶಸ್ತಿಗಳು ಮತ್ತು ಗೌರವಗಳನ್ನು ಪಡೆದಿದ್ದಾರೆ.

## ಹುಬ್ಬುಗಳ ಸೌಂದರ್ಯ

### ಬ್ಯೂಟಿ ಟಿಪ್ಸ್

ನಿಮ್ಮ ಮುಖದ ಸೌಂದರ್ಯದಲ್ಲಿ ಹುಬ್ಬುಗಳು ಕೂಡ ಪ್ರಮುಖ ಪಾತ್ರ ವಹಿಸುತ್ತವೆ. ದಪ್ಪವಾದ ಹುಬ್ಬುಗಳು ಮುಖದ ಸೌಂದರ್ಯವನ್ನು ಹೆಚ್ಚಿಸುವುದು ಮಾತ್ರವಲ್ಲದೆ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಈಗ ತೆಳುವಾದ ಹುಬ್ಬಿನ ಬದಲು ದಪ್ಪ ಹುಬ್ಬು ಬೇಕೆಂದು ಕೂದಲ ಕಸಿಗಾಗಿ ದುಬಾರಿ ಚಿಕಿತ್ಸೆಗಳನ್ನು ಮಾಡಿಸಿಕೊಳ್ಳುವವರು ಕೂಡ ಇದ್ದಾರೆ.ಹೆಚ್ಚು ಹಣವನ್ನು ಖರ್ಚು ಮಾಡದೆಯೇ ನೀವು ಮನೆಯಲ್ಲೇ ಇರುವ ವಸ್ತುಗಳನ್ನು ಬಳಸಿ ದಪ್ಪವಾದ ಹುಬ್ಬುಗಳನ್ನು ಪಡೆಯಬಹುದು. ಹರಳೆಣ್ಣೆಯಲ್ಲಿ ಕೊಬ್ಬಿನಾಮ್ಲ, ವಿಟಮಿನ್ ಮತ್ತು ಪ್ರೋಟೀನ್ಗಳು ಸಮೃದ್ಧವಾಗಿದೆ. ಇದು ಕೂದಲ ಕಿರುಚೀಲಗಳನ್ನು ಉತ್ತೇಜಿಸಲು, ದಪ್ಪ ಮತ್ತು ಗಾಢವಾದ ಹುಬ್ಬುಗಳ ಬೆಳವಣಿಗೆಯನ್ನು ಹೆಚ್ಚಿಸಲು ಸಹಾಯ ಮಾಡುತ್ತದೆ. ಹತ್ತಿ ಸ್ವ್ಯಾಬ್ ಬಳಸಿ ನೀವು ಪ್ರತಿ ರಾತ್ರಿ ನಿಮ್ಮ ಹುಬ್ಬುಗಳಿಗೆ ಸ್ವಲ್ಪ ಪ್ರಮಾಣದ ಹರಳೆಣ್ಣೆಯನ್ನು ಹಚ್ಚಿಕೊಳ್ಳಬಹುದು. ದಪ್ಪ ಹುಬ್ಬುಗಳನ್ನು ಪಡೆಯಲು ಇನ್ನೊಂದು ವಿಧಾನವೆಂದರೆ ಅವುಗಳಿಗೆ ಕೊಬ್ಬರಿ ಎಣ್ಣೆಯನ್ನು ಹಚ್ಚಿಕೊಳ್ಳಿ. ಲಾರಿಕ್ ಆಸಿಡ್ ಮತ್ತು ವಿಟಮಿನ್ಗಳನ್ನು ಒಳಗೊಂಡಂತೆ ಇದರ ಹೆಚ್ಚಿನ ಪೋಷಕಾಂಶವು ಕೂದಲು ಕಿರುಚೀಲಗಳನ್ನು ಪೋಷಿಸುತ್ತದೆ. ಹಾಗೇ, ಆರೋಗ್ಯಕರ ಕೂದಲಿನ ಬೆಳವಣಿಗೆಯನ್ನು ಹೆಚ್ಚಿಸುತ್ತದೆ. ನಿಮ್ಮ ಕೈಯಲ್ಲಿ ಬೆಚ್ಚಗಿನ ಕೊಬ್ಬರಿ ಎಣ್ಣೆಯ ಕೆಲವು ಹನಿಗಳನ್ನು ತೆಗೆದುಕೊಂಡು ಅದನ್ನು ನಿಮ್ಮ ಹುಬ್ಬುಗಳಿಗೆ ಹಚ್ಚಿಕೊಳ್ಳಿ. ಅಲೋವೆರಾ ಅದರ ಗುಣಪಡಿಸುವ ಗುಣಲಕ್ಷಣಗಳಿಗೆ ಹೆಸರುವಾಸಿಯಾಗಿದೆ. ಇದು ಹುಬ್ಬು ದಪ್ಪವಾಗಲು ಸಹ ಸಹಾಯ ಮಾಡುತ್ತದೆ. ಜೀವಸತ್ವಗಳು ಮತ್ತು ಖನಿಜಗಳಿಂದ ತುಂಬಿರುವ



ಅಲೋವೆರಾ ಕೂದಲು ಕಿರುಚೀಲಗಳನ್ನು ಪೋಷಿಸುತ್ತದೆ. ದಪ್ಪವಾದ ಹುಬ್ಬುಗಳ ಬೆಳವಣಿಗೆಗೆ ಕಾರಣವಾಗುತ್ತದೆ. ನೀವು ತಾಜಾ ಅಲೋವೆರಾ ಜೆಲ್ ಅನ್ನು ಹುಬ್ಬುಗಳಿಗೆ ಹಚ್ಚಬಹುದು. ಅದಾಗಿ 30 ನಿಮಿಷ ಬಿಟ್ಟು ನಂತರ ಹುಬ್ಬುಗಳನ್ನು ತೊಳೆಯಿರಿ.



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಾಲ ಮರುಪಾವತಿ, ದೇವತಾ ಕಾರ್ಯಗಳಿಗೆ ಖರ್ಚು, ಆರೋಗ್ಯದಲ್ಲಿ ಏರುಪೇರು, ಶತ್ರು ದಮನ.

**ವೃಷಭ:** ಆರ್ಥಿಕ ಅನುಕೂಲ, ಕುಟುಂಬದಿಂದ ಸಹಕಾರ, ಮಕ್ಕಳಿಂದ ಯೋಗ ಫಲಗಳು, ಆರೋಗ್ಯದಲ್ಲಿ ಚೇತರಿಕೆ, ಪರಿಹಾರ ಹಸಿರು ವಸ್ತ್ರದಾನ ಮಾಡಿ.

**ಮಿಥುನ:** ವ್ಯಾಪಾರ ವ್ಯವಹಾರದಲ್ಲಿ ನಷ್ಟ, ಉದ್ಯೋಗ ನಿಮಿತ್ತ ಪ್ರಯಾಣ, ತಾಯಿ ಆರೋಗ್ಯದಲ್ಲಿ ವ್ಯತ್ಯಾಸ, ಮಕ್ಕಳಿಗೋಸ್ಕರ ಖರ್ಚು.

**ಕಟಕ:** ಅಧಿಕ ಖರ್ಚು, ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ಬಂಧುಗಳಿಂದ ನಷ್ಟ, ಬುದ್ಧಿ ಚಂಚಲತೆ

**ಸಿಂಹ:** ಆರ್ಥಿಕ ಅನುಕೂಲ, ಕುಟುಂಬದಿಂದ ಸಹಕಾರ, ಬಂಧುಗಳಿಂದ ಅಂತರ, ಪ್ರಯಾಣದಲ್ಲಿ ಅಡೆತಡೆಗಳು

**ಕನ್ಯಾ:** ಸರ್ಕಾರಿ ಕೆಲಸ ಕಾರ್ಯಗಳಿಗೆ ಖರ್ಚು, ಅಧಿಕ ಒತ್ತಡ, ಮೇಲಧಿಕಾರಿಗಳಿಂದ ನಿಂದನೆ, ಆರ್ಥಿಕವಾಗಿ ಅನಾನುಕೂಲ

**ತುಲಾ:** ಉದ್ಯೋಗ ಬದಲಾವಣೆಯಿಂದ ಸಮಸ್ಯೆ, ಸರ್ಕಾರಿ ಕೆಲಸ ಕಾರ್ಯಗಳಿಗೆ ಖರ್ಚು, ತಂದೆ ಆರೋಗ್ಯದಲ್ಲಿ ವ್ಯತ್ಯಾಸ, ವಿದ್ಯಾಭ್ಯಾಸದಲ್ಲಿ ಹಿನ್ನಡೆ

**ವೃಶ್ಚಿಕ:** ಆಕಸ್ಮಿಕ ಧನಾಗಮನ, ಉತ್ತಮ ಪ್ರಶಂಸೆ, ಉದ್ಯೋಗದಲ್ಲಿ ಅನುಕೂಲ, ತಂದೆ ಮತ್ತು ತಾಯಿಯಿಂದ ಸಹಕಾರ

**ಧನಸ್ಸು:** ಆತ್ಮ ಸಂಕಟ, ತಂದೆಯಿಂದ ಅನುಕೂಲ, ಕೋರ್ಟ್ ಕೇಸ್‌ಗಳಲ್ಲಿ ಜಯ, ಸಂಗಾತಿ ಆರೋಗ್ಯದಲ್ಲಿ ವ್ಯತ್ಯಾಸ

**ಮಕರ:** ಸಾಲದ ಚಿಂತೆ, ಅಧಿಕ ಒತ್ತಡ, ಪ್ರಯಾಣದಲ್ಲಿ ಸಮಸ್ಯೆ, ಕೋರ್ಟ್ ಕೇಸ್‌ಗಳಲ್ಲಿ ಸೋಲು, ಉದ್ಯೋಗ ಬದಲಾವಣೆಯಿಂದ ನಷ್ಟ

**ಕುಂಭ:** ದಾಂಪತ್ಯದಲ್ಲಿ ಕಲಹ, ಪಾಲುದಾರಿಕೆಯಲ್ಲಿ ಸಮಸ್ಯೆ, ಮಕ್ಕಳೊಂದಿಗೆ ಕಲಹ, ಪ್ರೀತಿ ಪ್ರೇಮದಲ್ಲಿ ಹಿನ್ನಡೆ

**ಮೀನ:** ದಾಂಪತ್ಯದಲ್ಲಿ ಕಿರಿಕಿರಿ, ಸ್ನೇಹಿತರಿಂದ ಅಂತರ, ವ್ಯಾಪಾರ ವ್ಯವಹಾರದಲ್ಲಿ ಹಿನ್ನಡೆ, ಆರೋಗ್ಯದಲ್ಲಿ ವ್ಯತ್ಯಾಸ

## ವಿಶ್ವಶಾಂತಿ ಮತ್ತು ತಿಳುವಳಿಕೆಯ ದಿನ



ವಿಶ್ವ ಶಾಂತಿ ಮತ್ತು ತಿಳುವಳಿಕೆ ದಿನವನ್ನು ಪ್ರತಿ ವರ್ಷ ಫೆಬ್ರವರಿ 23 ರಂದು ಆಚರಿಸಲಾಗುತ್ತದೆ. ಈ ದಿನವು ವಾಸ್ತವವಾಗಿ ನಡೆದ ರೋಟರಿಯ ಮೊದಲ ಸಭೆಯ ಸ್ಮರಣಾರ್ಥವಾಗಿದೆ. ಉದ್ಯಮಿಗಳ ಈ ಸಭೆಯು ತಮ್ಮ ಹಿನ್ನೆಲೆಯನ್ನು ಲೆಕ್ಕಿಸದ ಜಾಗವನ್ನು ಗುರಿಯಾಗಿಟ್ಟುಕೊಂಡು ರೋಟರಿ ಇಂಟರ್ನ್ಯಾಷನಲ್ ರಚನೆಗೆ ಕಾರಣವಾದ ಘಟನೆಗಳ ಸರಣಿಯನ್ನು ಪ್ರಾರಂಭಿಸಿತು. ವಿಶ್ವಾದ್ಯಂತ ಮಾನವೀಯ ಸೇವೆ ಮತ್ತು ಶಾಂತಿ ಮತ್ತು ಸೌಹಾರ್ದತೆಗೆ ಮೀಸಲಾಗಿರುವ ಅಂತರರಾಷ್ಟ್ರೀಯ ಸಂಸ್ಥೆ, ರೋಟರಿ ಇಂಟರ್ನ್ಯಾಶನಲ್ ಯು.ಎಸ್.ನ ಚಿಕಾಗೋದಲ್ಲಿ ಪ್ರಾರಂಭವಾಯಿತು, ಮೊದಲ ಸಭೆಯ ದಿನಾಂಕವು ವಿಶ್ವ ತಿಳುವಳಿಕೆ ಮತ್ತು ಶಾಂತಿ ದಿನವಾಗಿದೆ, ಇದು ಫೆಬ್ರವರಿಯಲ್ಲಿ ವಿಶ್ವ ತಿಳುವಳಿಕೆ ತಿಂಗಳ ಆಚರಣೆಯ ಭಾಗವಾಗಿದೆ. . ವಿಶ್ವ ಶಾಂತಿ ಮತ್ತು ತಿಳುವಳಿಕೆ ದಿನವು ರೋಟರಿ ಇಂಟರ್ನ್ಯಾಷನಲ್ ರಚನೆಗೆ ಕಾರಣವಾದ ಮೊದಲ ಸಭೆಯನ್ನು ಸ್ಮರಿಸುತ್ತದೆ. ಅಟಾರ್ನಿ ಪಾಲ್ ಪಿ. ಹ್ಯಾರಿಸ್ ಅವರು ಚಿಕಾಗೋದಲ್ಲಿ ತಮ್ಮ ವ್ಯಾಪಾರ ಸ್ನೇಹಿತರ ಸಭೆಯನ್ನು ಕರೆದರು. ರಾಜಕೀಯ ಮತ್ತು ಧರ್ಮದ ಮಿತಿಯಿಲ್ಲದೆ ಉದ್ಯಮಿಗಳ ಸಹಭಾಗಿತ್ವವನ್ನು ಒಟ್ಟುಗೂಡಿಸುವ ಗುರಿಯನ್ನು ಅವರು ಹೊಂದಿದ್ದರು. ಆರಂಭದಲ್ಲಿ, ರೋಟರಿಯ ಸದಸ್ಯರು ಪರಸ್ಪರರ ಕಚೇರಿಗಳಲ್ಲಿ ಭೇಟಿಯಾದರು, ಗುಂಪು ತುಂಬಾ ದೊಡ್ಡದಾಗುವವರೆಗೆ ತನ್ನದೇ ಆದ ಸ್ಥಳಾವಕಾಶ ಬೇಕಾಗಿತ್ತು. ರೋಟರಿ ಕ್ಲಬ್ಗಳನ್ನು ನಂತರ ನಾಲ್ಕು ಇತರ ಅಮೇರಿಕನ್ ನಗರಗಳಲ್ಲಿ ಸ್ಥಾಪಿಸಲಾಯಿತು, ಮತ್ತು ಅಂತಿಮವಾಗಿ, ಗುಂಪು ಅಂತರಾಷ್ಟ್ರೀಯವಾಗಿ ಹರಡಿತು, ರೋಟರಿ ಕ್ಲಬ್ನಿಂದ ರೋಟರಿ ಕ್ಲಬ್ಗಳ ಇಂಟರ್ನ್ಯಾಷನಲ್ ಅಸೋಸಿಯೇಷನ್ಗೆ ಹೆಸರು ಬದಲಾವಣೆಗೆ ಕಾರಣವಾಯಿತು. ಸಮಯ ಕಳೆದಂತೆ, ಹೆಸರನ್ನು ಮತ್ತೆ ರೋಟರಿ ಅಂತರಾಷ್ಟ್ರೀಯ ಎಂದು ಬದಲಾಯಿಸಲಾಯಿತು. ವಿಶ್ವಸಂಸ್ಥೆಯ ಸಂಘಟನೆಯನ್ನು ಸ್ಥಾಪಿಸಿದಾಗಿನಿಂದ ಈ ಸಂಸ್ಥೆಯು ಯು.ಎನ್. ರೋಟರಿ ಇಂಟರ್ನ್ಯಾಶನಲ್ ಒಂದು ಸೇವಾ ಸಂಸ್ಥೆಯಾಗಿದ್ದು, ಉದ್ಯಮಿಗಳು ಮತ್ತು ವೃತ್ತಿಪರರನ್ನು ಒಟ್ಟುಗೂಡಿಸುತ್ತದೆ ಇದರಿಂದ ಅವರು ಮಾನವೀಯ ಸೇವೆಯನ್ನು ನೀಡಬಹುದು ಮತ್ತು ಜಗತ್ತಿನಲ್ಲಿ ಸೌಹಾರ್ದತೆ ಮತ್ತು ಶಾಂತಿಯ ಗುರಿಗಳತ್ತ ಕೆಲಸ ಮಾಡಬಹುದು.

ಸಂಜೆ ಮುಗಿಲು
ಶುಕ್ರವಾರ
23.2.2024



# ಗಲ್ಲಿ ಕ್ರಿಕೆಟ್ ಆಡಿದ ಸಚಿನ್ ತೆಂಡೂಲ್ಕರ್

**ನವದೆಹಲಿ:** ಭಾರತದ ಕ್ರಿಕೆಟ್ ದಂತಕತೆ ಸಚಿನ್ ತೆಂಡೂಲ್ಕರ್ ಅವರು ತಮ್ಮ ಮೊದಲ ಕಾಶ್ಮೀರ ಪ್ರವಾಸವನ್ನು ಆನಂದಿಸುತ್ತಿದ್ದಾರೆ, ಗುಲ್ಮಾರ್ಗ್ನ ಸುಂದರವಾದ ಪರಿಸರದ ನಡುವೆ ಸ್ಥಳೀಯರೊಂದಿಗೆ ಉತ್ಸಾಹಭರಿತ ಗಲ್ಲಿ ಕ್ರಿಕೆಟ್ ಆಡಿದ್ದಾರೆ.

ಜಮ್ಮು ಮತ್ತು ಕಾಶ್ಮೀರದ ಉರಿ ಸೆಕ್ಟರ್ನಲ್ಲಿ ನಿಯಂತ್ರಣ ರೇಖೆಯ ಅಂತಿಮ ಗಡಿಯನ್ನು ಗುರುತಿಸುವ ಅಮನ್ ಸೇತು ಸೇತುವೆಗೆ ಸಚಿನ್ ಭೇಟಿ ನೀಡಿದರು.ತಮ್ಮ ಒಂದು ಗಂಟೆಯ ಭೇಟಿಯ ಸಮಯದಲ್ಲಿ, ಸಚಿನ್ ಅಮನ್ ಸೇತುಗೆ ಹೊಂದಿಕೊಂಡಿರುವ ಕಮಾನ್ ಪೋಸ್ಟ್ನಲ್ಲಿ ಬೀಡುಬಿಟ್ಟಿರುವ ಸೈನಿಕರೊಂದಿಗೆ ಸಂಭಾಷಣೆಯಲ್ಲಿ ತೊಡಗಿದ್ದರು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಇದಕ್ಕೂ ಮುನ್ನ ಸಚಿನ್ ಸ್ಥಳೀಯ ಬ್ಯಾಟ್ ಫ್ಯಾಕ್ಟರಿಗೆ ಭೇಟಿ ನೀಡಿದ್ದರು, ಅಲ್ಲಿ ಅವರು ತಮ್ಮ ಸಹೋದರಿ ಉಡುಗೊರೆಯಾಗಿ ನೀಡಿದ ತಮ್ಮ ಮೊದಲ ಕಾಶ್ಮೀರ ವಿಲ್ಲೋ ಬ್ಯಾಟ್ ಅನ್ನು ನೆನಪಿಸಿಕೊಂಡರು.





# ಹಡಗು ಡಿಕ್ಕಿಯಾಗಿ ಕುಸಿದ ಸೇತುವೆ- ಬಸ್ ನದಿಗೆ ಉರುಳಿ ಇಬ್ಬರ ದುರ್ಮರಣ

**ಬೀಜಿಂಗ್:** ಕಂಟೈನರ್ ಹಡಗೊಂದು ಡಿಕ್ಕಿ ಹೊಡೆದ ಪರಿಣಾಮ ಸೇತುವೆಯ ಒಂದು ಭಾಗ ಕುಸಿದು ಬಿದ್ದ ಪರಿಣಾಮ ಇಬ್ಬರು ದುರ್ಮರಣಕ್ಕೀಡಾದ ಘಟನೆ ನಡೆದಿದೆ.

ಈ ಘಟನೆಯು ಚೀನಾದ ಹಾಂಗ್ ಕಾಂಗ್‌ನ ವಾಯುವ್ಯಕ್ಕೆ ಸುಮಾರು 90 ಕಿಲೋಮೀಟರ್ ದೂರದಲ್ಲಿರುವ ಗುವಾಂಗ್ ಝೌದಲ್ಲಿ ಸಂಭವಿಸಿದೆ. ಮುಂಜಾನೆ ಗುವಾಂಗ್‌ಝೌವಿನ ನನ್ಶಾ ಜಿಲ್ಲೆಯ ಲಿಕ್ಸಿನ್ಶಾ ಸೇತುವೆಗೆ ಖಾಲಿ ಕಂಟೈನರ್ ಹಡಗು ಡಿಕ್ಕಿ ಹೊಡೆದು ಸೇತುವೆಯ ಒಂದು ಭಾಗ ಕುಸಿದಿದೆ ಎಂದು ಹೇಳಲಾಗುತ್ತಿದೆ.ಘಟನೆಯ ವೇಳೆ ಇದೇ ಸೇತುವೆ ಮೇಲೆ ಬಸ್ಸೊಂದು ಚಲಿಸುತ್ತಿದ್ದು, ನದಿಗೆ ಉರುಳಿದೆ. ಪರಿಣಾಮ ಇಬ್ಬರು ಸಾವನ್ನಪ್ಪಿ, ಮೂವರು ನಾಪತ್ತೆಯಾಗಿದ್ದಾರೆ. ಇನ್ನು ಘಟನೆಯಲ್ಲಿ ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗಿದೆ. ಜೊತೆಗೆ ಅವಘಡದಿಂದಾಗಿ ಐದು ವಾಹನಗಳಿಗೂ ಹಾನಿಯಾಗಿದೆ. ಬೀಜಿಂಗ್ ಮಾಧ್ಯಮಗಳ ಪ್ರಕಾರ, ಅವಘಡಕ್ಕೆ ಸಂಬಂಧಿಸಿದಂತೆ ಹಡಗಿನ ಕ್ಯಾಪ್ಟನ್ನನ್ನು ಬಂಧಿಸಲಾಗಿದೆ. ಅಪಘಾತದ ಕಾರಣ ಮತ್ತು ಸಾವು-ನೋವುಗಳ ಸಂಖ್ಯೆ ಪ್ರಸ್ತುತ ತನಿಖೆಯಲ್ಲಿದೆ. ಕಂಟೈನರ್ ಸೇತುವೆಗೆ ಡಿಕ್ಕಿಯಾದ ಸಮಯದಲ್ಲಿ ಬಸ್ ಸೇತುವೆಯ ಮೇಲೆ ಹಾದು ಹೋಗುತ್ತಿದ್ದು, ನದಿಗೆ ಬಿದ್ದಿದೆ. ಹಡಗಿನಲ್ಲಿ ಎಷ್ಟು ಮಂದಿ ಇದ್ದರು ಎಂಬ ಬಗ್ಗೆ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ. ಸ್ಥಳದಲ್ಲಿ ರಕ್ಷಣಾ ಮತ್ತು ಪರಿಹಾರ ತಂಡಗಳು ಕಾರ್ಯನಿರ್ವಹಿಸುತ್ತಿವೆ.

**ಸಂಚಾರ ಸ್ಥಗಿತ:** ರಕ್ಷಣಾ ತಂಡಗಳು ಘಟನಾ ಸ್ಥಳದಲ್ಲಿವೆ. ಆದರೆ ಇತರ ಸಾವು-ನೋವುಗಳ ಸಂಖ್ಯೆ ಇನ್ನೂ ತಿಳಿದುಬಂದಿಲ್ಲ. ಘಟನೆಯ ನಂತರ ಸೇತುವೆಯಲ್ಲಿ ಸಂಚಾರಕ್ಕೆ ನಿರ್ಬಂಧ ಹೇರಲಾಗಿದೆ. ನಿವಾಸಿಗಳಿಗೆ ಪ್ರಯಾಣಿಸಲು ದೋಣಿ ವ್ಯವಸ್ಥೆ ಮಾಡಲಾಗಿದೆ ಎಂದು ವರದಿಯಾಗಿದೆ.

## ಎಕ್ಸ್ ಖಾತೆಗಳ ನಿರ್ಬಂಧಕ್ಕೆ ಕೇಂದ್ರ ಆದೇಶ: ಮಸ್ಕ್ ಅಸಮಾಧಾನ!

**ನವದೆಹಲಿ:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರೈತ ಸಂಘಟನೆಗಳು ನಡೆಸುತ್ತಿರುವ ಪ್ರತಿಭಟನೆ ಕುರಿತ ಪೋಸ್ಟ್‌ಗಳನ್ನು ಹಾಗೂ ಖಾತೆಗಳನ್ನು ನಿರ್ಬಂಧಿಸುವಂತೆ ಭಾರತ ಸರ್ಕಾರ ಎಲಾನ್ ಮಸ್ಕ್ ಒಡೆತನದ ಎಕ್ಸ್ ಸಂಸ್ಥೆಗೆ ಆದೇಶ ನೀಡಿದೆ. ಆದರೆ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಈ ಕ್ರಮವನ್ನು ಒಪ್ಪಿಕೊಳ್ಳುವುದಿಲ್ಲ ಎಂದು ಮಸ್ಕ್ ಒಡೆತನದ ಎಕ್ಸ್ ಪ್ರತಿಕ್ರಿಯೆ ನೀಡಿರುವುದಾಗಿ ವರದಿ ತಿಳಿಸಿದೆ. ಮತ್ತೊಂದೆಡೆ ರೈತರ ಪ್ರತಿಭಟನೆಗೆ ಸಂಬಂಧಿಸಿದ ಪೋಸ್ಟ್ ಮತ್ತು ಖಾತೆಗಳನ್ನು ಭಾರತದಲ್ಲಿ ಮಾತ್ರ ನಿರ್ಬಂಧಿಸುವುದಾಗಿ ಎಕ್ಸ್ ಸಂಸ್ಥೆ ಸಮ್ಮತಿ ಸೂಚಿಸಿದೆ. ಆದರೆ ಎಕ್ಸ್ ಸಂಸ್ಥೆಯ ಆರೋಪದ ಬಗ್ಗೆ ಕೇಂದ್ರ ಸರ್ಕಾರ ಇನ್ನಷ್ಟೇ ಪ್ರತಿಕ್ರಿಯೆ ನೀಡಬೇಕಾಗಿದೆ. ಕೆಲವೊಂದು ಖಾತೆಗಳನ್ನು ನಿರ್ಬಂಧಿಸುವಂತೆ ಭಾರತ ಸರ್ಕಾರ ಸೂಚನೆ ನೀಡಿರುವುದಾಗಿ ಸಾಮಾಜಿಕ ಜಾಲತಾಣ ಸಂಸ್ಥೆ ಎಕ್ಸ್ ಬಿಡುಗಡೆ ಮಾಡಿರುವ ಪ್ರಕಟನೆಯಲ್ಲಿ ತಿಳಿಸಿದೆ. ಐಟಿ ಕಾಯ್ದೆಯನ್ವಯ ಭಾರೀ ದಂಡ ಮತ್ತು ಶಿಕ್ಷೆಯ ಬಗ್ಗೆ ಉಲ್ಲೇಖಿಸಿ ಎಕ್ಸ್ ಸಂಸ್ಥೆ ಕೆಲವೊಂದು ಪೋಸ್ಟ್ ಮತ್ತು ಖಾತೆಗಳನ್ನು ನಿರ್ಬಂಧಿಸುವಂತೆ ಭಾರತ ಸರ್ಕಾರ ಆದೇಶ ನೀಡಿತ್ತು ಎಂದು ವರದಿ ವಿವರಿಸಿದೆ.



## ಮಾಜಿ ರಾಜ್ಯಪಾಲ ಸತ್ಯಪಾಲ್ ಮಲಿಕ್ ನಿವಾಸದ ಮೇಲೆ ತನಿಖಾ ದಳ ದಾಳಿ

**ನವದೆಹಲಿ:** ಜಮ್ಮು ಮತ್ತು ಕಾಶ್ಮೀರದ ಮಾಜಿ ರಾಜ್ಯಪಾಲ ಸತ್ಯಪಾಲ್ ಮಲಿಕ್ ಅವರ ನಿವಾಸ, ಕಚೇರಿ ಮೇಲೆ ಕೇಂದ್ರೀಯ ತನಿಖಾ ದಳ ದಾಳಿ ನಡೆಸಿದೆ. ಕಿರು ಜಲವಿದ್ಯುತ್ ಯೋಜನೆಯಲ್ಲಿ ಭಾರೀ ಭ್ರಷ್ಟಾಚಾರ ನಡೆದಿದೆ ಎಂಬ ಆರೋಪದ ಹಿನ್ನೆಲೆಯಲ್ಲಿ ಸಿಬಿಐ ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದೆ. ಸತ್ಯಪಾಲ್ ಮಲಿಕ್ ಅವರು ಆಗಸ್ಟ್ 2018 ರಿಂದ ಅಕ್ಟೋಬರ್ 2019 ರವರೆಗೆ ಹಿಂದಿನ ಜಮ್ಮು ಮತ್ತು ಕಾಶ್ಮೀರದ 10ನೇ ರಾಜ್ಯಪಾಲರಾಗಿ ಸೇವೆ ಸಲ್ಲಿಸಿದ್ದರು. ಕಳೆದ 3-4 ದಿನಗಳಿಂದ ನಾನು ಅನಾರೋಗ್ಯದಿಂದ ಬಳಲುತ್ತಿದ್ದು, ಆಸ್ಪತ್ರೆಗೆ ದಾಖಲಾಗಿದ್ದೇನೆ. ಇಷ್ಟೆಲ್ಲಾ ಆದರೂ ಸರ್ಕಾರಿ ಸಂಸ್ಥೆಗಳ ಮೂಲಕ ನನ್ನ ಮನೆ ಮೇಲೆ ದಾಳಿ ನಡೆಸಲಾಗಿದೆ. ನನ್ನ ಚಾಲಕ ಮತ್ತು ನನ್ನ ಸಹಾಯಕರ ಮೇಲೂ ದಾಳಿ ಮಾಡಿ ಅನಗತ್ಯವಾಗಿ ಕಿರುಕುಳ ನೀಡಲಾಗುತ್ತಿದೆ ಎಂದು ಮಲಿಕ್ ಸಾಮಾಜಿಕ ಜಾಲತಾಣದಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಕಿರು ಹೈಡ್ರೊ ಎಲೆಕ್ಟ್ರಿಕ್ ಪವರ್ ಪ್ರಾಜೆಕ್ಟ್ (ಎಚ್‌ಇಪಿ) ಯ ಅಂದಾಜು 2,200 ಕೋಟಿ ರೂಪಾಯಿ ಮೌಲ್ಯದ ಸಿವಿಲ್ ಕಾಮಗಾರಿಯ ಗುತ್ತಿಗೆಯನ್ನು 2019 ರಲ್ಲಿ ಖಾಸಗಿ ಕಂಪನಿಗೆ ನೀಡುವಲ್ಲಿ ಅವ್ಯವಹಾರ ನಡೆದಿದೆ. ಇ ಮಾರ್ಗಸೂಚಿಗಳನ್ನು ಅನುಸರಿಸದೇ ಗುತ್ತಿಗೆ ನೀಡಲಾಗಿದೆ ಎಂದು ಆರೋಪಿಸಲಾಗಿದೆ.



## ತಡೆಗೋಡೆಗೆ ಕಾರು ಡಿಕ್ಕಿ- ಶಾಸಕಿ ಲಾಸ್ಯ ನಂದಿತಾ ಮರಣ

**ಹೈದರಾಬಾದ್:** ತಡೆಗೋಡೆಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ಭಾರತ್ ರಾಷ್ಟ್ರ ಸಮಿತಿಯ ಶಾಸಕಿ ಜಿ ಲಾಸ್ಯ ನಂದಿತಾ (37) ದುರ್ಮರಣಕ್ಕೀಡಾಗಿದ್ದಾರೆ. ಈ ಘಟನೆ ಇಂದು ಬೆಳಗ್ಗೆ 6.30ರ ಸುಮಾರಿಗೆ ಹೈದರಾಬಾದ್‌ನ ಹೊರವಲಯದಲ್ಲಿರುವ ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯ ಪಟಂಚೇರು ಎಂಬಲ್ಲಿ ಸಂಭವಿಸಿದೆ. ನಂದಿತಾ ಅವರು ತಮ್ಮ ಎಸ್‌ಯುವಿ ಕಾರಿನಲ್ಲಿ ನಗರಕ್ಕೆ ವಾಪಸ್ಸಾಗುತ್ತಿದ್ದರು. ಈ ಸಂದರ್ಭದಲ್ಲಿ ಚಾಲಕನ ನಿಯಂತ್ರಣ ಕಳೆದುಕೊಂಡ ಕಾರು ಎಕ್ಸ್‌ಪ್ರೆಸ್‌ವೇಯ ಎಡಭಾಗದಲ್ಲಿರುವ ಲೋಹದ ತಡೆಗೋಡೆಗೆ ಡಿಕ್ಕಿ ಹೊಡೆದಿದೆ. ಪರಿಣಾಮ ಗಂಭೀರ ಗಾಯಗೊಂಡು ಶಾಸಕಿ ಸ್ಥಳದಲ್ಲಿಯೇ ಕೊನೆಯುಸಿರೆಳೆದಿದ್ದಾರೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ಘಟನೆಯಲ್ಲಿ ಗಂಭೀರ ಗಾಯಗೊಂಡಿರುವ ಕಾರು ಚಾಲಕನನ್ನು ಸಮೀಪದ ಪಟಂಚೇರು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಸ್ಥಿತಿ ಚಿಂತಾಜನಕವಾಗಿದೆ ಎನ್ನಲಾಗಿದೆ. ನಂದಿತಾ ಅವರು ಫೆಬ್ರವರಿ 13 ರಂದು ಬಿಆರ್‌ಎಸ್ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಕೆ ಚಂದ್ರಶೇಖರ್ ರಾವ್ ಅವರ ಸಾರ್ವಜನಿಕ ರ‍್ಯಾಲಿಯಲ್ಲಿ ಭಾಗವಹಿಸಿ ಹಿಂದಿರುಗುತ್ತಿದ್ದರು. ಈ ಸಂದರ್ಭದಲ್ಲಿ ಮರ್ರಿಗುಡ ಜಂಕ್ಷನ್‌ನಲ್ಲಿ ಇದೇ ರೀತಿಯ ರಸ್ತೆ ಅಪಘಾತದಲ್ಲಿ ಸಣ್ಣಪುಟ್ಟ ಗಾಯಗಳೊಂದಿಗೆ ಅವರು ಪಾರಾಗಿದ್ದರು. ಬಿಆರ್‌ಎಸ್‌ನ ಮಾಜಿ ಶಾಸಕ ದಿವಂಗತ ಜಿ ಸಾಯಣ್ಣ ಅವರ ಪುತ್ರಿಯಾಗಿರುವ ನಂದಿತಾ ಅವರು ಕಳೆದ ನವೆಂಬರ್‌ನಲ್ಲಿ ನಡೆದ ವಿಧಾನಸಭಾ ಚುನಾವಣೆಯಲ್ಲಿ ಸಿಕಂದರಾಬಾದ್ ಕಂಟೋನ್ಮೆಂಟ್ ಕ್ಷೇತ್ರದಿಂದ ಜಿ ವೆನ್ನೆಲ ಅವರನ್ನು ಸೋಲಿಸುವ ಮೂಲಕ ಅಧಿಕಾರದ ಗದ್ದುಗೆ ಏರಿದ್ದರು.



## ಭಾರತೀಯ ನೌಕಾಪಡೆಗೆ ಬ್ರಹ್ಮೋಸ್ ಸೇರ್ಪಡೆ




**ನವದೆಹಲಿ:** ಭಾರತದ ಸೇನೆಯನ್ನು ಆಧುನೀಕರಣಗೊಳಿಸಿ ಬಲಪಡಿಸುವ ಕಾರ್ಯದಲ್ಲಿ ತೊಡಗಿರುವ ಮೋದಿ ನೇತೃತ್ವದ ಕೇಂದ್ರ ಸರ್ಕಾರ ನೌಕಾಪಡೆಗಾಗಿ 200ಕ್ಕೂ ಅಧಿಕ ಬ್ರಹ್ಮೋಸ್ ಕ್ಷಿಪಣಿಗಳನ್ನು ಖರೀದಿಸಲು ಮುಂದಾಗಿದೆ. ಇದಕ್ಕೆ 19000 ಕೋಟಿ ರೂ. ಖರ್ಚಾಗಲಿದೆ. ಶಬ್ದಕ್ಕಿಂತ ಎರಡು ಪಟ್ಟು ವೇಗವಾಗಿ ಹಾರುವ ಈ ಕ್ಷಿಪಣಿಗಳು ಗುರಿಯನ್ನು ನಿಖರವಾಗಿ ಭೇದಿಸುವಲ್ಲಿ ಸಮರ್ಥವಾಗಿವೆ. ಇವುಗಳನ್ನು ಭಾರತ ಹಾಗು ರಷ್ಯಾದ ಮಿಲಿಟರಿ ಒಪ್ಪಂದದ ಅಡಿಯಲ್ಲಿ ನಿರ್ಮಿಸಲಾಗುತ್ತಿದ್ದು, ನೌಕಾಪಡೆಯ ಎಲ್ಲಾ ಯುದ್ಧನೌಕೆಗಳಲ್ಲಿ ಸೂಪರ್ಸಾನಿಕ್ ಬ್ರಹ್ಮೋಸ್ ಕ್ಷಿಪಣಿಗಳನ್ನು ನಿಯೋಜಿಸಲಾಗಿದೆ. ಇವುಗಳನ್ನು ಭೂಮಿ, ವಾಯು ಹಾಗು ಜಲಾಂತರ್ಗಾಮಿ ನೌಕೆಗಳಿಂದಲೂ ಹಾರಿಸಬಹುದು. ಪ್ರಸ್ತುತ ಕ್ಷಿಪಣಿಯ ಬಹುಪಾಲು ಭಾಗಗಳನ್ನು ಬ್ರಹ್ಮೋಸ್ ಏರೋಸ್ಪೇಸ್ ದೇಶದಲ್ಲೇ ತಯಾರಿಸುತ್ತಿದೆ. ಇವುಗಳ ಖರೀದಿಗೆ ಫಿಲಿಪೈನ್ಸ್ ಸಹಿ ಹಾಕಿದೆ.

# ಪ್ರಧಾನಿ ಮೋದಿ ವಿಶ್ವದ ಅತ್ಯಂತ ಜನಪ್ರಿಯ ನಾಯಕ: ಸಮೀಕ್ಷೆ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿ ಅವರು ಶೇಕಡಾ 78 ರಷ್ಟು ಅನುಮೋದನೆ ರೇಟಿಂಗ್ ನೊಂದಿಗೆ ವಿಶ್ವದ ಅತ್ಯಂತ ಜನಪ್ರಿಯ ನಾಯಕರಾಗಿ ಹೊರಹೊಮ್ಮಿದ್ದಾರೆ ಎಂದು ಮಾರ್ನಿಂಗ್ ಕನ್ಸಲ್ಟ್ ಸಮೀಕ್ಷೆ ತಿಳಿಸಿದೆ.ಜನವರಿ 30 ಮತ್ತು ಫೆಬ್ರವರಿ 5 ರ ನಡುವೆ ಸಂಗ್ರಹಿಸಿದ ಡೇಟಾವನ್ನು ಆಧರಿಸಿ ಅನುಮೋದನೆ ರೇಟಿಂಗ್ಗಳ ಬಗ್ಗೆ ಸಮೀಕ್ಷೆ ನಡೆಸಲಾಗಿದೆ. ಈ ದತ್ತಾಂಶವು ಸಮೀಕ್ಷೆ ನಡೆಸಿದ ಪ್ರತಿ ದೇಶದ ವಯಸ್ಕರಲ್ಲಿ ಏಳು ದಿನಗಳ ಚಲಿಸುವ ಅಭಿಪ್ರಾಯಗಳ ಸರಾಸರಿಯನ್ನು ಆಧರಿಸಿದೆ. ಸಮೀಕ್ಷೆಯಲ್ಲಿ ಪ್ರಧಾನಿ ಮೋದಿಯವರನ್ನು ಅನುಸರಿಸುವ ಇತರ ನಾಯಕರೆಂದರೆ ಮೆಕ್ಸಿಕೊದ ಆಂಡ್ರೆಸ್ ಮ್ಯಾನುಯೆಲ್ ಲೋಪೆಜ್ ಒಬ್ರಡಾರ್ 64% ಅನುಮೋದನೆ ರೇಟಿಂಗ್ನೊಂದಿಗೆ ಎರಡನೇ ಸ್ಥಾನ, ಸ್ವಿಟ್ಜರ್ಲೆಂಡ್ನ ಅಲೈನ್ ಬೆರ್ಸೆಟ್ 57% ರೇಟಿಂಗ್ನೊಂದಿಗೆ ಮೂರನೇ ಸ್ಥಾನದಲ್ಲಿದ್ದಾರೆ. ಪೋಲೆಂಡ್ನ ಡೊನಾಲ್ಡ್ ಟಸ್ಕ್ ನಾಲ್ಕನೇ ಸ್ಥಾನದಲ್ಲಿದ್ದಾರೆ (50%), ಬ್ರೆಜಿಲ್ ಅಧ್ಯಕ್ಷ ಲೂಯಿಜ್ ಇನಾಸಿಯೊ ಲುಲಾ ಡಿ ಸಿಲ್ವಾ 47% ರೇಟಿಂಗ್ ಹೊಂದಿದ್ದಾರೆ. ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಶೇ.45ರಷ್ಟು ಅನುಮೋದಿತ ರೇಟಿಂಗ್ ನೊಂದಿಗೆ ನಂತರದ ಸ್ಥಾನದಲ್ಲಿದ್ದಾರೆ. ಸಮೀಕ್ಷೆಯ ಫಲಿತಾಂಶಗಳು ಪಿಎಂ ಮೋದಿ 70% ಕ್ಕಿಂತ ಹೆಚ್ಚಿನ ಅನುಮೋದನೆ ರೇಟಿಂಗ್ ಪಡೆದ ಏಕೈಕ ನಾಯಕ ಎಂದು ತೋರಿಸುತ್ತದೆ, ಆದರೆ ನಾಲ್ಕು ನಾಯಕರನ್ನು ಹೊರತುಪಡಿಸಿ ಉಳಿದವರೆಲ್ಲರೂ 50% ಕ್ಕಿಂತ ಕಡಿಮೆ ಅನುಮೋದನೆಯನ್ನು ಪಡೆದಿದ್ದಾರೆ.



## ನೆಟ್‌ವರ್ಕ್ ವಿಸ್ತರಿಸಿದ ಮೆಟಲ್ ಬುಕ್

**ನವದೆಹಲಿ:** 2024- ಜಾಗತಿಕ ಲೋಹಗಳ ಪೂರೈಕೆ ಸರಪಳಿಯ ಡಿಜಿಟಲ್ ಪ್ಲಾಟ್ಫಾರ್ಮ್ ಆಗಿರುವ ಮೆಟಲ್ಬುಕ್, 2023ರ ಜೂನ್ ನಲ್ಲಿ 15 ಮಿಲಿಯನ್ ಫಂಡ್ ಸಂಗ್ರಹದ ಬಳಿಕ ಹೊಸ ವ್ಯಾಪಾರಗಳು, ಉತ್ಪನ್ನ ವಿಭಾಗಗಳು ಮತ್ತು ಬಳಕೆದಾರ ಸ್ನೇಹಿ, ಟೆಕ್-ಫಸ್ಟ್ ಆಪ್ ಬಿಡುಗಡೆಯನ್ನು ಘೋಷಿಸಿದೆ. ಈ ಫಂಡ್ ಸಂಗ್ರದ ನೇತೃತ್ವವನ್ನು ರೈಜೆಲ್ ಕ್ಯಾಪಿಟಲ್ ವಹಿಸಿದ್ದರು. ಎಫ್ ಜೆ ಲ್ಯಾಬ್ಸ್, ಹಾಗೆಯೇ ಅಸ್ತಿತ್ವದಲ್ಲಿರುವ ಹೂಡಿಕೆದಾರರು, ಆಕ್ಸಿಲರ್ ವೆಂಚರ್ಸ್, ಫೌಂಡಮೆಂಟಲ್, ಸ್ಟ್ರೈಡ್ ವೆಂಚರ್ಸ್, ಟ್ರಿಫೆಕ್ಟಾ ಕ್ಯಾಪಿಟಲ್ ಮತ್ತು ಇತರರು ಭಾಗಿಯಾಗಿದ್ದರು. 2021ರಲ್ಲಿ ಸ್ಥಾಪಿತವಾದ ಮೆಟಲ್ಬುಕ್, ಎಂಟರ್ಪ್ರೈಸ್ ಮತ್ತು ಎಸ್‌ಎಂಇ ಗ್ರಾಹಕರಿಗೆ ತಮ್ಮ ಲೋಹದ ಉತ್ಪಾದನೆ ಮತ್ತು ಸಂಪಾದನೆ ಚಕ್ರದ ಮೂಲಕ ಸಹಾಯ ಮಾಡುತ್ತದೆ. ಇದರಲ್ಲಿ ಖರೀದಿ, ಮಾರಾಟ, ಕಸ್ಟಮೈಸೇಷನ್, ಲಾಜಿಸ್ಟಿಕ್ಸ್, ಹಣಕಾಸು, ಇ-ಹರಾಜು, ಸ್ಕ್ರ್ಯಾಪ್ ಮರುಬಳಕೆ, ಕ್ರೆಡಿಟ್ ಮತ್ತು ಪ್ರಾಜೆಕ್ಟ್ ಮ್ಯಾನೇಜ್ಮೆಂಟ್ ಪರಿಹಾರಗಳು ಸೇರಿವೆ.



# ಸೋನಿಯಾಗೆ ಸ್ಮೃತಿ ಸಲಹೆ

**ನವದೆಹಲಿ:** ನಿಮ್ಮ ಮಗನನ್ನು ಹುಚ್ಚು ಹುಚ್ಚಾಗಿ ಮಾತಾಡದಂತೆ ನೋಡಿಕೊಳ್ಳಿ ಎಂದು ಸೋನಿಯಾಗೆ ಸ್ಮೃತಿ ಸಲಹೆ ನೀಡಿದ್ದಾರೆ. ಅಮೇಥಿಯಲ್ಲಿ ಮಂಗಳವಾರವೂ ಯಾತ್ರೆ ನಡೆಸಿದ್ದ ರಾಹುಲ್ ಗಾಂಧಿ, ರಾತ್ರಿಹೊತ್ತು ಮದ್ಯ ಸೇವಿಸುವವರಿಂದ ಉತ್ತರಪ್ರದೇಶ ಭವಿಷ್ಯ ನರ್ತನ ಮಾಡ್ತಿದೆ ಅಂತಾ ವಿಮರ್ಶೆ ಮಾಡಿದ್ರು.

ಅಷ್ಟೇ ಅಲ್ಲ ಮೋದಿ ಕ್ಷೇತ್ರ ವಾರಣಾಸಿಯಲ್ಲಿ ಹಾಡಹಗಲೇ ಕುಡಿದುಬಿದ್ದಿದ್ದ ವ್ಯಕ್ತಿಗಳನ್ನು ಕಂಡೆ ಎಂಬ ವಿವಾದಾತ್ಮಕ ಹೇಳಿಕೆ ನೀಡಿದ್ರು. ಇದಕ್ಕೆ ಕೇಂದ್ರ ಸಚಿವೆ ಸ್ಮೃತಿ ಇರಾನಿ ಕೌಂಟರ್ ನೀಡಿದ್ದಾರೆ. ರಾಹುಲ್ ಮಾತು ಕೇಳಿದ್ರೆ ಅವರ ಮನಸ್ಸಲ್ಲಿ ಎಷ್ಟು ವಿಷ ತುಂಬಿಕೊಂಡಿದೆ ಎನ್ನುವುದು ಗೊತ್ತಾಗ್ತಿದೆ. ತಮ್ಮ ಮಗನನ್ನು ಚೆನ್ನಾಗಿ ಬೆಳೆಸಲಾಗದಿದ್ರೆ ಹೋಯ್ತು.. ಕನಿಷ್ಠ ಹುಚ್ಚು ಹುಚ್ಚಾಗಿ ಮಾತಾಡದಂತೆ ನೋಡಿಕೊಳ್ಳಲಿ ಎಂದು ಸೋನಿಯಾ ಗಾಂಧಿಗೆ ಸ್ಮೃತಿ ಇರಾನಿ ಸಲಹೆ ನೀಡಿದ್ರು. ರಾಹುಲ್ ತಮ್ಮ ಮಾತಿಗೆ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.



# ಇಸ್ರೇಲ್‌ಗೆ ಯುನೈಟೆಡ್ ಏರ್‌ಲೈನ್ಸ್ ವಿಮಾನಯಾನ ಆರಂಭ

**ನ್ಯೂಯಾರ್ಕ್:** ಮುಂದಿನ ತಿಂಗಳಿಂದ ಇಸ್ರೇಲ್ಗೆ ವಿಮಾನಯಾನವನ್ನು ಪುನರಾರಂಭಿಸುವುದಾಗಿ ಅಮೆರಿಕದ ಪ್ರಮುಖ ವಿಮಾನಯಾನ ಸಂಸ್ಥೆ ಯುನೈಟೆಡ್ ಏರ್ ಲೈನ್ಸ್ ಘೋಷಿಸಿದೆ.

ಕಳೆದ ಅಕ್ಟೋಬರ್ ನಲ್ಲಿ ಇಸ್ರೇಲ್ -ಹಮಾಸ್ ಸಂಘರ್ಷ ಉಲ್ಬಣಿಸಿದ ಹಿನ್ನೆಲೆಯಲ್ಲಿ ಇಸ್ರೇಲ್ಗೆ ವಿಮಾನ ಸೇವೆಯನ್ನು ಅಮಾನತುಗೊಳಿಸಲಾಗಿತ್ತು.

ಮಾರ್ಚ್ 2 ಮತ್ತು 4ರಂದು ನ್ಯೂಜೆರ್ಸಿಯ ನೆವಾರ್ಕ್‌ನಿಂದ ಇಸ್ರೇಲ್ ರಾಜಧಾನಿ ಟೆಲ್‌ಅವೀವ್ಗೆ ನೇರ ವಿಮಾನ ಪ್ರಯಾಣ ಸೇವೆಗೆ ಚಾಲನೆ ದೊರಕಲಿದೆ. ಮಾರ್ಚ್ 6ರಿಂದ ದೈನಂದಿನ ವಿಮಾನಸೇವೆ ಆರಂಭಿಸುವ ವಿಶ್ವಾಸವಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅಮೆರಿಕದ ಮತ್ತೆರಡು ವಿಮಾನಯಾನ ಸಂಸ್ಥೆಗಳಾದ ಅಮೆರಿಕನ್ ಏರ್ಲೈನ್ಸ್ ಮತ್ತು ಡೆಲ್ಟಾ ಏರ್ಲೈನ್ಸ್ ಕೂಡಾ ಅಕ್ಟೋಬರ್ ನಿಂದ ಟೆಲ್‌ಅವೀವ್ಗೆ ವಿಮಾನಯಾನವನ್ನು ಅಮಾನತುಗೊಳಿಸಿದ್ದು ಮತ್ತೆ ಆರಂಭಿಸುವ ಬಗ್ಗೆ ಯಾವುದೇ ಹೇಳಿಕೆ ನೀಡಿಲ್ಲ. ಜರ್ಮನಿಯ ಲುಫ್ತಾನ್ಸಾ, ಆಸ್ಟ್ರಿಯನ್ ಏರ್ಲೈನ್ಸ್, ಏರ್‌ಫ್ರಾನ್ಸ್ ಮತ್ತು ಸ್ವಿಸ್ ಏರ್ಲೈನ್ಸ್‌ಗಳು ಜನವರಿಯಿಂದ ಟೆಲ್‌ಅವೀವ್ಗೆ ವಿಮಾನ ಯಾನವನ್ನು ಪುನರಾರಂಭಿಸಿವೆ. ಯುರೋಪ್ನ ಇತರ ವಿಮಾನಯಾನ ಸಂಸ್ಥೆಗಳೂ ಶೀಘ್ರವೇ ಟೆಲ್‌ಅವೀವ್ ವಿಮಾನಯಾನ ಪುನರಾರಂಭದ ಸುಳಿವು ನೀಡಿವೆ.




# ಬಿಬಿಸಿ ಇತಿಹಾಸದಲ್ಲೇ ಮೊದಲ ಭಾರತೀಯ ಮೂಲದ ಅಧ್ಯಕ್ಷರಾಗಿ ಸಮೀರ್ ಶಾ ಆಯ್ಕೆ

**ಲಂಡನ್:** ಬಿಬಿಸಿ ಇತಿಹಾಸದಲ್ಲಿ ಸಮೀರ್ ಶಾ ಅವರನ್ನು ಮೊದಲ ಭಾರತೀಯ ಮೂಲದ ಅಧ್ಯಕ್ಷರನ್ನಾಗಿ ಹೆಸರಿಸಿದೆ. ಭಾರತ ಸಂಜಾತ ಮಾಧ್ಯಮ ಕಾರ್ಯನಿರ್ವಾಹಕ ಡಾ.ಸಮೀರ್ ಶಾ ಅವರ ಆಯ್ಕೆಯನ್ನು ಈ ವಾರ ಕಿಂಗ್ ಚಾರ್ಲ್ಸ್ ಖಖಖ ಅನುಮೋದಿಸಲು ಪರಿಶೀಲನೆಯ ಹಂತಗಳನ್ನು ತೆರವುಗೊಳಿಸಿದ ನಂತರ ಹೊಸ ಬಿಬಿಸಿ ಅಧ್ಯಕ್ಷರಾಗಿ ಗುರುವಾರ ದೃಢಪಡಿಸಲಾಗಿದೆ.

40 ವರ್ಷಗಳ ಕಾಲ ಯುಕೆ ಪ್ರಸಾರದಲ್ಲಿ ಕೆಲಸ ಮಾಡಿದ ಶಾ ಅವರನ್ನು ಕಳೆದ ವರ್ಷ ಡಿಸೆಂಬರ್‌ನಲ್ಲಿ ಸರ್ಕಾರದ ಆದ್ಯತೆಯ ಅಭ್ಯರ್ಥಿಯಾಗಿ ಆಯ್ಕೆ ಮಾಡಲಾಯಿತು. ಹೌಸ್ ಆಫ್ ಕಾಮನ್ಸ್ ಮೀಡಿಯಾ ಕಲ್ಚರ್, ಮೀಡಿಯಾ ಮತ್ತು ಸ್ಪೋರ್ಟ್ ಸೆಲೆಕ್ಟ್ ಕಮಿಟಿಯ ಕ್ರಾಸ್-ಪಾರ್ಟಿ ಸಂಸದರು ನೇಮಕಾತಿ ಪೂರ್ವ ಪರಿಶೀಲನೆ ನಡೆಸಿದ್ದಾರೆ.

72 ವರ್ಷ ವಯಸ್ಸಿನ ಶಾ ಅವರು ಈಗ ಪ್ರತಿ ವರ್ಷಕ್ಕೆ 160,000 ಪೌಂಡ್ಗಳು ಮತ್ತು ನಾಲ್ಕು ವರ್ಷಗಳ ಅವಧಿಯ ಪಾತ್ರದಲ್ಲಿ ಸಾರ್ವಜನಿಕ ಪ್ರಸಾರಕರ ಮೊದಲ ಭಾರತೀಯ ಮೂಲದ ಅಧ್ಯಕ್ಷರಾಗಿ ಮಾರ್ಚ್ 4 ರಿಂದ ಮತ್ತು ಮಾರ್ಚ್ 2028 ರವರೆಗೆ ಕಾರ್ಯನಿರ್ವಹಿಸಲಿದ್ದಾರೆ.

ಟಿವಿ ನಿರ್ಮಾಣ ಮತ್ತು ಪತ್ರಿಕೋದ್ಯಮದಲ್ಲಿ 40 ವರ್ಷಗಳಿಗಿಂತ ಹೆಚ್ಚು ವೃತ್ತಿಜೀವನವನ್ನು ಹೊಂದಿರುವ ಡಾ. ಶಾ ಅವರು ಬಿಬಿಸಿ ಅಧ್ಯಕ್ಷ ಸ್ಥಾನಕ್ಕೆ ಅನುಭವ ಹೊಂದಿದ್ದಾರೆ'' ಎಂದು ಯುಕೆ ಸಂಸ್ಕೃತಿ ಕಾರ್ಯದರ್ಶಿ ಲೂಸಿ ಫ್ರೇಜರ್ ಅವರು ಆಯ್ಕೆಯನ್ನು ಘೋಷಿಸಿದ್ದಾರೆ.



# ಚಿನ್ನದ ಗಣಿ ಗುಡ್ಡ ಕುಸಿದು 30 ಮಂದಿ ಸಾವು

**ವೆನೆಜುವೆಲಾ:** ಚಿನ್ನದ ಆಸೆಗಾಗಿ ಗಣಿತೋಡಲು ಕಾರ್ಮಿಕರು ಹೋಗಿದ್ದು, ಈ ವೇಳೆ ಮಣ್ಣಿನ ಗೋಡೆ ಕುಸಿದು 30 ಜನ ಸಾವನ್ನಪ್ಪಿರುವ ಘಟನೆ ಕೇಂದ್ರ ವೆನೆಜುವೆಲಾದ ಬೊಲಿವರ್ ನಲ್ಲಿ ನಡೆದಿದೆ. ಅಕ್ರಮವಾಗಿ ಚಿನ್ನದ ಗಣಿಗಾರಿಕೆ ನಡೆಸಲಾಗುತ್ತಿತ್ತು. ನೂರಾರು ಕಾರ್ಮಿಕರು ಈ ಚಿನ್ನದ ಗಣಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದರು. ಈ ವೇಳೆ ಕಾರ್ಮಿಕರ ಮೇಲೆ ಮಣ್ಣಿನ ಗೋಡೆ ಕುಸಿದು ಬಿದ್ದಿದೆ. ಈಗಾಗಲೇ 23 ಮೃತದೇಹಗಳನ್ನು ಮಣ್ಣಿನಡಿಯಿಂದ ಹೊರತೆಗೆಯಲಾಗಿದೆ. ಈ ದುರಂತದ ದೃಶ್ಯವನ್ನು ನಾಗರಿಕ ರಕ್ಷಣೆಯ ಉಪ ಮಂತ್ರಿ ಕಾರ್ಲೋಸ್ ಪೆರೆಜ್ ಆಂಪ್ಯೂಡಾ ಅವರು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಬೃಹತ್ ಗಣಿಯಲ್ಲಿ ಕೆಲಸ ಮಾಡುತ್ತಿರುವ ವೇಳೆ ಜನರ ಮೇಲೆ ನಿಧಾನವಾಗಿ ಮಣ್ಣು ಕುಸಿಯುತ್ತಿದೆ. ಆಗ ಅಲ್ಲಿದ್ದ ಕಾರ್ಮಿಕರು ಜೀವ ಉಳಿಸಿಕೊಳ್ಳಲು ಅಲ್ಲಿಂದ ಓಡಿಹೋಗಿದ್ದಾರೆ. ಆದರೆ, ಕೆಲವರು ಮಣ್ಣಿನಡಿ ಸಿಲುಕಿ ಪ್ರಾಣಕಳೆದುಕೊಂಡಿದ್ದಾರೆ. ಒಟ್ಟಾರೆ ಈ ಗಣಿಯಲ್ಲಿ 200 ಜನರು ಕೆಲಸ ಮಾಡುತ್ತಿದ್ದರು ಎಂದು ಬೊಲಿವರ್ ರಾಜ್ಯದ ನಾಗರಿಕ ಭದ್ರತೆಯ ಕಾರ್ಯದರ್ಶಿ ಎಡ್ಗರ್ ಕೊಲಿನಾ ರೆಯೆಸ್ ಹೇಳಿದ್ದಾರೆ. ಬೊಲಿವರ್ ಪ್ರದೇಶವು ಚಿನ್ನ, ವಜ್ರಗಳು, ಕಬ್ಬಿಣ, ಬಾಕ್ಸೈಟ್, ಸ್ಫಟಿಕ ಶಿಲೆ ಮತ್ತು ಕೋಲ್ಟಾನ್ ಗಳಿಂದ ಸಮೃದ್ಧವಾಗಿದೆ. ಇಲ್ಲಿ ಗಣಿಗಳ ಹೊರತಾಗಿಯೂ ಅಕ್ರಮವಾಗಿ ನೈಸರ್ಗಿಕ ಸಂಪನ್ಮೂಲ ಹೊರತೆಗೆಯುವ ಉದ್ಯಮವೂ ಸಹ ನಡೆಯುತ್ತಿದೆ.



# ಇಸ್ರೇಲ್ ನ ವೈಮಾನಿಕ ದಾಳಿಗೆ ಒಂದೇ ಕುಟುಂಬದ 12 ಮಂದಿ ಬಲಿ

**ಇಸ್ರೇಲ್:** ಇಸ್ರೇಲ್ ಗಾಜಾದ ದಕ್ಷಿಣದಲ್ಲಿರುವ ರಫಾದ ಮೇಲೆ ಬಾಂಬ್ ದಾಳಿಯನ್ನು ತೀವ್ರಗೊಳಿಸಿದೆ. ವೈಮಾನಿಕ ದಾಳಿಯಲ್ಲಿ ಒಂದೇ ಕುಟುಂಬದ 12 ಜನರು ಮೃತಪಟ್ಟಿದ್ದಾರೆ ಎಂದು ಸ್ಥಳೀಯ ನಿವಾಸಿಗಳು ತಿಳಿಸಿದ್ದಾರೆ ಎಂದು ರಾಯಿಟರ್ಸ್ ಸುದ್ದಿಸಂಸ್ಥೆ ವರದಿ ಮಾಡಿದೆ. ಯುದ್ಧದಲ್ಲಿ ಇದುವರೆಗೂ 29,313 ಮಂದಿ ಮೃತಪಟ್ಟಿದ್ದಾರೆ ಎಂದು ಪ್ಯಾಲೆಸ್ಟೀನ್ ಆರೋಗ್ಯ ಸಚಿವಾಲಯ ಮಾಹಿತಿ ಹಂಚಿಕೊಂಡಿದೆ.ಹಮಾಸ್ ಬಂಡುಕೋರರು ದಕ್ಷಿಣ ಇಸ್ರೇಲ್ ಮೇಲೆ 2023ರ ಅಕ್ಟೋಬರ್ 7ರಂದು ದಾಳಿ ನಡೆಸಿದ್ದರು. ಅದಕ್ಕೆ ಪ್ರತಿಯಾಗಿ ಗಾಜಾ ಪಟ್ಟಿಯ ಮೇಲೆ ಇಸ್ರೇಲ್ ತೀವ್ರ ದಾಳಿ ನಡೆಸುತ್ತಿದೆ. ಗಾಜಾ ಸ್ಮಶಾನಭೂಮಿಯಾಗುತ್ತಿದೆ ಎಂದು ಕಳವಳ ವ್ಯಕ್ತಪಡಿಸಿರುವ ವಿಶ್ವಸಂಸ್ಥೆ ಹಾಗೂ ವಿವಿಧ ರಾಷ್ಟ್ರಗಳು, ಮಾನವೀಯ ಆಧಾರದಲ್ಲಿ ಗಾಜಾದಲ್ಲಿ ಕದನ ವಿರಾಮ ಘೋಷಣೆ ಮಾಡಬೇಕು ಎಂದು ಒತ್ತಾಯಿಸಿವೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# 'ನಮ್ ಗಣಿ ಬಿ.ಕಾಂ ಪಾಸ್' ಪಾರ್ಟ್2ಗೆ ಅಭಿಷೇಕ್ ಶೆಟ್ಟಿ ಸಿದ್ಧತೆ






ಸ್ಯಾಂಡಲ್‌ವುಡ್‌ಗೆ 'ನಮ್ ಗಣಿ ಬಿ.ಕಾಂ ಪಾಸ್' ಚಿತ್ರದ ಮೂಲಕ ನಟ-ಕಮ್ ನಿರ್ದೇಶಕನಾಗಿ ಅಭಿಷೇಕ್ ಶೆಟ್ಟಿ ಪಾದಾರ್ಪಣೆ ಮಾಡಿದ್ದರು. ಇದೀಗ ಈ ಚಿತ್ರದ ಪಾರ್ಟ್ 2ಗೆ ಭರ್ಜರಿ ಸಿದ್ಧತೆ ನಡೆಯುತ್ತಿದೆ. ಈ ಬಾರಿ ಅಭಿಷೇಕ್ ಶೆಟ್ಟಿಗೆ ಜೋಡಿಯಾಗುವ ಆ ನಾಯಕಿ ಯಾರು? ಎಂಬುದರ ಕಂಪ್ಲೀಟ್ ಡಿಟೈಲ್ಸ್ ಇಲ್ಲಿದೆ.

ಅಭಿಷೇಕ್ ಶೆಟ್ಟಿ ನಟನೆ ಮತ್ತು ನಿರ್ದೇಶನದಲ್ಲಿ ಮತ್ತೆ 'ನಮ್ ಗಣಿ ಬಿ.ಕಾಂ ಪಾಸ್' ಸಿನಿಮಾ ಬರುತ್ತಿದೆ. ಲವ್ ಸ್ಟೋರಿ ಜೊತೆ ಫನ್ ಎಂಟರ್‌ಟೈನ್ ಮೆಂಟ್ ಸಿನಿಮಾವಾಗಿದ್ದು, ಮೊದಲ ಭಾಗದ ಕಥೆಯೇ ಪಾರ್ಟ್ 2ನಲ್ಲಿ ಮುಂದುವರೆಯಲಿದೆ. ಸಾಕಷ್ಟು ಟ್ವಿಸ್ಟ್ ಈ ಚಿತ್ರದಲ್ಲಿ ಇರಲಿದೆ. ಇದೇ ಏಪ್ರಿಲ್‌ನಲ್ಲಿ ಚಿತ್ರದ ಶೂಟಿಂಗ್ ಶುರುವಾಗಿದೆ.

ಅಭಿಷೇಕ್ ಶೆಟ್ಟಿ ನಾಯಕಿಯಾಗಿ ಐಶಾನಿ ಶೆಟ್ಟಿ ನಟಿಸಿದ್ದರು. ಈಗ ಪಾರ್ಟ್ 2ಲ್ಲಿ ನಾಯಕಿಯಾಗಿ ಕರಾವಳಿ ನಟಿ ಕಾಣಿಸಿಕೊಳ್ತಾರಾ? ಅಥವಾ ಅವರ ಜಾಗಕ್ಕೆ ಹೊಸ ನಟಿಯ ಎಂಟ್ರಿಯಾಗುತ್ತಾ? ಕಾಯಬೇಕಿದೆ. ಅಭಿಷೇಕ್ ಹುಟ್ಟುಹಬ್ಬದಂದು ಚಿತ್ರದ ಫಸ್ಟ್ ಲುಕ್ ಜೊತೆಗೆ ಸಿನಿಮಾ ಬಗ್ಗೆ ಹೆಚ್ಚಿನ ಮಾಹಿತಿ ಸಿಗಲಿದೆ.

ಅನೀಶ್- ಮಿಲನಾ ನಾಗರಾಜ್ ಕಾಂಬಿನೇಷನ್ 'ಆರಾಮ್ ಅರವಿಂದ ಸ್ವಾಮಿ' ಚಿತ್ರಕ್ಕೆ ಅಭಿಷೇಕ್ ಆಕ್ಷನ್ ಕಟ್ ಹೇಳಿದ್ದಾರೆ. ಸದ್ಯದಲ್ಲೇ ಈ ಸಿನಿಮಾದ ರಿಲೀಸ್ ಬಗ್ಗೆ ಅಪ್‌ಡೇಟ್ ನೀಡಲಿದ್ದಾರೆ. ಇತ್ತೀಚೆಗೆ ತಮ್ಮ ಎಂಗೇಜ್‌ಮೆಂಟ್ ಬಗ್ಗೆ ಅಭಿಷೇಕ್ ಸಿಹಿಸುದ್ದಿ ನೀಡಿದ್ದರು. ಈ ಬೆನ್ನಲ್ಲೇ ಮುಂದಿನ ಸಿನಿಮಾ ಬಗ್ಗೆ ಮಾಹಿತಿ ನೀಡಿರೋದು ಅಭಿಮಾನಿಗಳಿಗೆ ಖುಷಿ ಕೊಟ್ಟಿದೆ.

# ಮತ್ತೊಂದು ಹಾಟ್ ಫೋಟೋಶೂಟ್‌ನಲ್ಲಿ ಯಶಿಕಾ



ಮೂರು ವರ್ಷಗಳ ಹಿಂದೆ ಭೀಕರ ಅಪಘಾತದಲ್ಲಿ ಗಾಯಗೊಂಡು ಅರ್ಧ ವರ್ಷ ಆಸ್ಪತ್ರೆಯಲ್ಲೇ ಕಳೆದಿದ್ದ ನಟಿ ಯಶಿಕಾ ಆನಂದ್, ಇದೀಗ ಸಂಪೂರ್ಣ ಚೇತರಿಸಿಕೊಂಡು ಮತ್ತೆ ಸಿನಿಮಾ ರಂಗದಲ್ಲಿ ಬ್ಯುಸಿಯಾಗಿದ್ದಾರೆ. 2021ರಲ್ಲಿ ನಡೆದ ಅಪಘಾತದಲ್ಲಿ ಅವರು ತೀವ್ರ ಗಾಯಗೊಂಡಿದ್ದರು. ಮತ್ತೆ ಬಣ್ಣದ ಪ್ರಪಂಚಕ್ಕೆ ಬರುವುದು ಅನುಮಾನ ಎಂದೇ ಹೇಳಲಾಗಿತ್ತು. ಆದರೆ, ಈಗ ಸಂಪೂರ್ಣ ಗುಣ ಮುಖರಾಗಿದ್ದಾರೆ. ಜೊತೆ ಹೊಸ ಫೋಟೋ ಶೂಟ್ ನಲ್ಲಿ ಪಾಲ್ಗೊಂಡು ಹಾಟ್ ಹಾಟ್ ಆಗಿ ಕಾಣಿಸಿಕೊಂಡಿದ್ದಾರೆ.

ಮಾಡೆಲಿಂಗ್ ಪ್ರಪಂಚದಿಂದ ಬಂದಿರುವ ಯಶಿಕಾ, ಕಾಲಿವುಡ್ ನಲ್ಲಿ 'ಇರುವಟ್ಟು ಅರಯಿಲ್ ಮುರಟ್ಟು ಕುತ್ತು' ಎಂಬ ಅಡಲ್ಟ್ ಕಾಮಿಡಿ ಸಿನಿಮಾದಲ್ಲಿ ನಟಿಸಿದರು. ಅಲ್ಲಿಂದ ಅವರ ವೃತ್ತಿ ಜೀವನವೇ ಬದಲಾಗಿ ಹೋಯಿತು. ಅಡಲ್ಟ್ ಕಾಮಿಡಿ ಸಿನಿಮಾದಲ್ಲಿ ನಟಿಸಿದ್ದರಿಂದ ಸಲೀಸಾಗಿ ಅವರಿಗೆ ಬಿಗ್ ಬಾಸ್ ಮನೆಗೆ ಹೋಗುವುದಕ್ಕೆ ನೆರವಾಯಿತು.

ಬಿಗ್‌ಬಾಸ್ ಮನೆಯೊಳಗೆ ಹೋಗುತ್ತಿದ್ದಂತೆಯೇ ಜನರಿಗೆ ಮತ್ತಷ್ಟು ಹತ್ತಿರವಾದ ಯಶಿಕಾ, ಅಲ್ಲಿ ತಮ್ಮ ಜೀವನದಲ್ಲಿ ನಡೆದ ಸಾಕಷ್ಟು ಘಟನೆಗಳನ್ನು ಹಂಚಿಕೊಂಡಿದ್ದರು. ಹಾಗಾಗಿ ಮತ್ತಷ್ಟು ಖ್ಯಾತಿ ಕೂಡ ಅವರ ಬೆನ್ನತ್ತಿ ಬಂತು. ಸಿನಿಮಾಗಳಲ್ಲಿ ನಟಿಸಲು ಆಫರ್ ಕೂಡ ಬಂದವು. ವಯಸ್ಕರ ಕಾಮಿಡಿ ಚಿತ್ರ ಮತ್ತು ಬಿಗ್ ಬಾಸ್ ಅವರಿಗೆ ಮತ್ತಷ್ಟು ಖ್ಯಾತಿ ತಂದುಕೊಟ್ಟವು.

ಇದೀಗ ಮತ್ತೊಂದು ಕಾರಣಕ್ಕಾಗಿ ಯಶಿಕಾ ಸುದ್ದಿಯಾಗಿದ್ದಾರೆ. ತಮಗಿಂತ 22 ವರ್ಷ ಹಿರಿಯ ನಟನ ಜೊತೆ ಡೇಟಿಂಗ್ ಮಾಡುತ್ತಿದ್ದಾರೆ ಎನ್ನುವ ವಿಚಾರ ಹರಿದಾಡುತ್ತಿದೆ. ಅದಕ್ಕೆ ಪೂರಕ ಎನ್ನುವಂತೆ ಆ ನಟನ ಜೊತೆಗೆ ಕಾರಿನಲ್ಲಿ ಸುತ್ತುವ ಮತ್ತು ಆತನೊಂದಿಗೆ ಕಿಸ್ ಮಾಡಿರುವ ಫೋಟೋಗಳು ವೈರಲ್ ಆಗಿವೆ. ಕಾಲಿವುಡ್ ಮಾಜಿ ನಟ, ಸೂಪರ್ ಸ್ಟಾರ್ ಅಜಿತ್ ಕುಮಾರ್ ಅವರ ಬಾಮೈದ ರಿಚರ್ಡ್ ರಿಷಿ ಜೊತೆ ಯಶಿಕಾ ಡೇಟಿಂಗ್ ಮಾಡುತ್ತಿದ್ದಾರೆ ಎಂದು ಹೇಳಲಾಗುತ್ತಿದೆ. ಯಶಿಕಾ ಜೊತೆಗಿನ ಫೋಟೋಗಳನ್ನು ಸ್ವತಃ ರಿಚರ್ಡ್ ರಿಷಿ ತಮ್ಮ ಇನ್ಸ್ಟಾದಲ್ಲಿ ಶೇರ್ ಮಾಡಿದ್ದಾರೆ. ಹಾಗಾಗಿ ವದಂತಿಯು ನಿಜವಿರಬಹುದು ಎಂದು ಹೇಳಲಾಗುತ್ತಿದೆ.

ಕೇವಲ 23ರ ವಯಸ್ಸಿನ ಯಶಿಕಾ ಆನಂದ್, 45 ವರ್ಷದ ರಿಚರ್ಡ್ ಜೊತೆ ಡೇಟಿಂಗ್ ಮಾಡುತ್ತಿರುವ ವಿಚಾರ ಕಾಲಿವುಡ್ ನ ಗಲ್ಲಿಗಲ್ಲಿಗಳಲ್ಲಿ ಮಾತಾಡಿಕೊಳ್ಳುವಂತಾಗಿದೆ. ಅಲ್ಲದೇ ಇಬ್ಬರೂ ಜೊತೆಗಿರುವ ಸಾಕಷ್ಟು ಫೋಟೋಗಳು ಸೋಷಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿವೆ. ಈ ಕುರಿತು ಸ್ವತಃ ಯಾಶಿಕಾ ಸ್ಪಷ್ಟನೆಯನ್ನು ನೀಡಿದ್ದಾರೆ.

ತಾನು ಯಾವುದೇ ವ್ಯಕ್ತಿಯನ್ನು ಪ್ರೀತಿಸುತ್ತಿಲ್ಲ ಮತ್ತು ಡೇಟ್ ಕೂಡ ಮಾಡುತ್ತಿಲ್ಲ. ಹರಿದಾಡುತ್ತಿರುವ ಫೋಟೋಗಳು ಮುಂದಿನ ಸಿನಿಮಾಗೆ ಸಂಬಂಧಿಸಿದವು ಆಗಿವೆ. ಈ ಸಿನಿಮಾವನ್ನು ವಿನಯ್ ಭಾರದ್ವಾಜ್ ನಿರ್ದೇಶನ ಮಾಡುತ್ತಿದ್ದಾರೆ. ರಿಚರ್ಡ್ ಆ ಸಿನಿಮಾದಲ್ಲಿ ನಟಿಸಿದ್ದಾರೆ. ಮಾಧ್ಯಮಗಳಲ್ಲಿ ಬರುತ್ತಿರುವ ಸುದ್ದಿ ಸುಳ್ಳು ಎಂದಿದ್ದಾರೆ ಯಶಿಕಾ.

ಸಿಲಾ ನೋಡಿಗಲ್ ಹೆಸರಿನ ತಮಿಳು ಸಿನಿಮಾದಲ್ಲಿ ರಿಚರ್ಡ್ ಕೂಡ ನಟಿಸುತ್ತಿದ್ದಾರಂತೆ. ಆ ಸಿನಿಮಾದ ಫೋಟೋಗಳು ಅವು. ಯಾರೋ ಈ ರೀತಿಯಲ್ಲಿ ಸುದ್ದಿ ಹಬ್ಬಿಸಿದ್ದಾರೆ. ಬಾಲ ಕಲಾವಿದರಾಗಿ ಸಿನಿಮಾ ರಂಗಕ್ಕೆ ಎಂಟ್ರಿ ಕೊಟ್ಟ ರಿಚರ್ಡ್ ಅವರು ಸಾಕಷ್ಟು ಸಾಧನೆ ಮಾಡಿದ್ದಾರೆ. ಅವರನ್ನು ನಾನು ಸದಾ ಗೌರವಿಸುವೆ ಎಂದಿದ್ದಾರೆ ಯಶಿಕಾ.

ಯಶಿಕಾ ಆನಂದ್ ಬೋಲ್ಡ್ ಪಾತ್ರಗಳ ಮೂಲಕ ಗುರುತಿಸಿಕೊಂಡಿದ್ದಾರೆ. ಅವರ ಕಾಸ್ಟ್ಯೂಮ್ ಕೂಡ ಯಾವಾಗಲೂ ಬೋಲ್ಡ್ ಆಗಿಯೇ ಇರುತ್ತವೆ. ಹಾಗಾಗಿ ಆಗಾಗ್ಗೆ ಜನರು ಆಕೆಗೆ ತರ್ಲೆ ಪ್ರಶ್ನೆಗಳನ್ನು ಕೇಳುತ್ತಲೇ ಇರುತ್ತಾರೆ. ಯಾವುದೇ ಮುಜಗರವಿಲ್ಲದೇ ಯಶಿಕಾ ಕೂಡ ಅಷ್ಟೇ ಬೋಲ್ಡ್ ಆಗಿ ಉತ್ತರ ಕೊಡುತ್ತಿರುತ್ತಾರೆ.

# ಅಧಿಕ ಮೊತ್ತಕ್ಕೆ 'ಯುವ' ಚಿತ್ರದ ಆಡಿಯೋ ರೈಟ್ಸ್

ಕೆ.ಜಿ.ಎಫ್, ಕಾಂತಾರದಂತಹ ಯಶಸ್ವಿ ಚಿತ್ರಗಳನ್ನು ನಿರ್ಮಿಸಿ, ಕನ್ನಡ ಚಿತ್ರರಂಗದ ಕೀರ್ತಿಪತಾಕೆಯನ್ನು ವಿಶ್ವದಾದ್ಯಂತ ಹಾರಿಸಿದ ಹೊಂಬಾಳೆ ಫಿಲಂಸ್ ಮೂಲಕ ನಿರ್ಮಾಣವಾಗಿರುವ ಮತ್ತೊಂದು ಅದ್ದೂರಿ ಕನ್ನಡ ಚಿತ್ರ, ಯುವ. ದೊಡ್ಮನೆ ಮೊಮ್ಮಗ ಯುವ ರಾಜಕುಮಾರ್ ಈ ಚಿತ್ರದ ಮೂಲಕ ನಾಯಕರಾಗಿ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡುತ್ತಿದ್ದಾರೆ.

ಆರಂಭದಿಂದಲೂ ಸಾಕಷ್ಟು ನಿರೀಕ್ಷೆ ಹುಟ್ಟುಹಾಕಿರುವ ಈ ಚಿತ್ರವನ್ನು ಹೊಂಬಾಳೆ ಫಿಲಂಸ್ ಮೂಲಕ ವಿಜಯ ಕಿರಗಂದೂರ್ ಹಾಗೂ ಚೆಲುವೇಗೌಡ ಅವರು ನಿರ್ಮಾಣ ಮಾಡಿದ್ದಾರೆ. ಹೊಂಬಾಳೆ ಫಿಲಂಸ್ ಸಂಸ್ಥೆಯಿಂದಲೇ ನಿರ್ಮಾಣವಾಗಿದ್ದ ಪುನೀತ್ ರಾಜಕುಮಾರ್ ಅಭಿನಯದ ರಾಜಕುಮಾರ ಚಿತ್ರವನ್ನು ನಿರ್ದೇಶಿಸಿದ್ದ ಸಂತೋ?್ ಆನಂದರಾಮ್ ಈ ಚಿತ್ರವನ್ನು ನಿರ್ದೇಶಿಸಿದ್ದಾರೆ.



ಇತ್ತೀಚೆಗಷ್ಟೇ ಬಹು ನಿರೀಕ್ಷಿತ ಯುವ ಚಿತ್ರದ ಚಿತ್ರೀಕರಣ ಪೂರ್ಣವಾಗಿದ್ದು, ಮಾರ್ಚ್ 29 ರಂದು ತೆರೆ ಕಾಣಲಿದೆ. ಅಜನೀಶ್ ಲೋಕನಾಥ್ ಸಂಗೀತ ನೀಡಿರುವ ಸುಮಧುರ ಹಾಡುಗಳು ಯುವ ಚಿತ್ರದಲ್ಲಿದ್ದು, ಕನ್ನಡದ ಹೆಸರಾಂತ ಆಡಿಯೋ ಸಂಸ್ಥೆ ಆನಂದ್ ಆಡಿಯೋ ಬಾರಿ ಮೊತ್ತಕ್ಕೆ ಆಡಿಯೋ ಹಕ್ಕನ್ನು ಪಡೆದುಕೊಂಡಿದೆ. ಫಸ್ಟ್ ಲುಕ್ ಪೋಸ್ಟರ್ ನಿಂದ ಜನರ ಗಮನ ಸೆಳೆದಿರುವ ಯುವ ಚಿತ್ರದ ಹಾಡುಗಳು ಮಾರ್ಚ್ ಮೊದಲವಾರದಲ್ಲಿ ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ಟೀಸರ್ ಹಾಗೂ ಟ್ರೇಲರ್ ಸಹ ಸದ್ಯದಲ್ಲೇ ರಿಲೀಸ್ ಆಗಲಿದೆ.

ಯುವ ರಾಜಕುಮಾರ್ ಅವರ ಯುವ ಚಿತ್ರದ ಗೆಟಪ್ ಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. ಯುವ ರಾಜಕುಮಾರ್ ಅವರಿಗೆ ನಾಯಕಿಯಾಗಿ ಕಾಂತಾರ ಬೆಡಗಿ ಸಪ್ತಮಿ ಗೌಡ ನಟಿಸಿದ್ದಾರೆ. ಅಚ್ಯುತಕುಮಾರ್, ಸುಧಾರಾಣಿ, ಕಿಶೋರ್ ಮುಂತಾದವರು ಚಿತ್ರದ ತಾರಾಬಳಗದಲ್ಲಿದ್ದಾರೆ. ಶ್ರೀಶ ಕುದುವಳ್ಳಿ ಈ ಚಿತ್ರದ ಛಾಯಾಗ್ರಾಹಕರು.

# ಟಾಸ್ ಗೆದ್ದ ಇಂಗ್ಲೆಂಡ್ ಬ್ಯಾಟಿಂಗ್ ಆಯ್ಕೆ

ಭಾರತ ಹಾಗೂ ಇಂಗ್ಲೆಂಡ್ ನಡುವಣ ನಾಲ್ಕನೇ ಟೆಸ್ಟ್ ಪಂದ್ಯಕ್ಕೆ ಚಾಲನೆ ಸಿಕ್ಕಿದೆ. ರಾಂಚಿಯ ಜೆಎಸ್‌ಸಿಎ ಇಂಟರ್‌ನ್ಯಾಶನಲ್ ಸ್ಟೇಡಿಯಂನಲ್ಲಿ ಟಾಸ್ ಗೆದ್ದ ಇಂಗ್ಲೆಂಡ್ ನಾಯಕ ಬೆನ್ ಸ್ಟೋಕ್ಸ್ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದ್ದಾರೆ. ಉಭಯ ತಂಡಗಳಿಗೆ ಈ ಪಂದ್ಯ ಮುಖ್ಯವಾಗಿದೆ. ಸದ್ಯ ಐದು ಪಂದ್ಯಗಳ ಸರಣಿಯಲ್ಲಿ ಟೀಮ್ ಇಂಡಿಯಾ 2-1 ಮುನ್ನಡೆ ಸಾಧಿಸಿದೆ. ಹೀಗಾಗಿ ಈ ಟೆಸ್ಟ್ ಪಂದ್ಯವನ್ನು ಗೆದ್ದರೆ, ಭಾರತವು ಸರಣಿಯನ್ನು ವಶಪಡಿಸಿಕೊಳ್ಳಲಿದೆ. ಅತ್ತ ಇಂಗ್ಲೆಂಡ್ ಗೆ ಇದು ಮಾಡು ಇಲ್ಲವೇ ಮಡಿ ಪಂದ್ಯವಾಗಿದೆ.

ನಾಲ್ಕನೇ ಟೆಸ್ಟ್ ಪಂದ್ಯಕ್ಕೆ ಟೀಮ್ ಇಂಡಿಯಾದಲ್ಲಿ ಒಂದು ಬದಲಾವಣೆ ಮಾಡಲಾಗಿದೆ. ಅಂದುಕೊಂಡಂತೆ ಜಸ್ ಪ್ರಿತ್ ಬುಮ್ರಾ ಅವರಿಗೆ ವಿಶ್ರಾಂತಿ ನೀಡಲಾಗಿದೆ. ಇವರ ಬದಲು ಯುವ ವೇಗಿ ಆಕಾಶ್ ದೀಪ್ ಅಂತರಾಷ್ಟ್ರೀಯ ಕ್ರಿಕೆಟ್ ಗೆ ಪದಾರ್ಪಣೆ ಮಾಡಿದ್ದಾರೆ. ಉಳಿದಂತೆ ತಂಡದಲ್ಲಿ ಯಾವುದೇ ಬದಲಾವಣೆ ಮಾಡಿಲ್ಲ. ರಜತ್ ಪಾಟಿದರ್ ಮತ್ತೊಂದು ಅವಕಾಶ ಪಡೆದುಕೊಂಡಿದ್ದಾರೆ. ಸರ್ಫರಾಝ್ ಖಾನ್ ಮತ್ತು ಧ್ರುವ್ ಜೂರೆಲ್ ಕೂಡ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಇತ್ತ ಇಂಗ್ಲೆಂಡ್ ನಾಲ್ಕನೇ ಟೆಸ್ಟ್‌ಗೆ ಆಡುವ ಹನ್ನೊಂದರ ಬಳಗವನ್ನು ಗುರುವಾರವೇ ಘೋಷಿಸಿದೆ. ಆಂಗ್ಲರ ಪ್ಲೇಯಿಂಗ್ ಇಲೆವೆನ್ ನಲ್ಲಿ ಎರಡು ಬದಲಾವಣೆ ಮಾಡಲಾಗಿದೆ. ಮಾರ್ಕ್ ವುಡ್ ಮತ್ತು ರೆಹಾನ್ ಅಹ್ಮದ್ ಇಬ್ಬರಿಗೂ ಕೊಕ್ ನೀಡಲಾಗಿದೆ. ಒಲಿ ರಾಬಿನ್ಸನ್ ಮತ್ತು ಶೋಯೆಬ್ ಬಶೀರ್ ಅವರಿಗೆ ಸ್ಥಾನ ನೀಡಲಾಗಿದೆ. ಈ ಎರಡು ಬದಲಾವಣೆಯ ಹೊರತಾಗಿ ಇಂಗ್ಲೆಂಡ್ ತಂಡದ ಬ್ಯಾಟಿಂಗ್ ಲೈನಪ್ ನಲ್ಲಿ ಯಾವುದೇ ಚೇಂಜ್ ಮಾಡಲಾಗಿಲ್ಲ.




**ಭಾರತ ಪ್ಲೇಯಿಂಗ್ ಇಲೆವೆನ್:** ರೋಹಿತ್ ಶರ್ಮಾ (ನಾಯಕ), ಯಶಸ್ವಿ ಜೈಸ್ವಾಲ್, ಶುಭ್ ಮನ್ ಗಿಲ್, ರಜತ್ ಪಾಟಿದಾರ್, ಸರ್ಫರಾಝ್ ಖಾನ್, ರವೀಂದ್ರ ಜಡೇಜಾ, ಧ್ರುವ್ ಜುರೆಲ್ (ವಿಕೆಟ್ ಕೀಪರ್), ಆರ್. ಅಶ್ವಿನ್, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ಆಕಾಶ್ ದೀಪ್.

**ಇಂಗ್ಲೆಂಡ್ ಪ್ಲೇಯಿಂಗ್ ಇಲೆವೆನ್:** ಝಾಕ್ ಕ್ರಾಲಿ, ಬೆನ್ ಡಕೆಟ್, ಒಲೀ ಪೋಪ್, ಜೋ ರೂಟ್, ಜಾನಿ ಬೈರ್‌ಸ್ಟೋವ್, ಬೆನ್ ಸ್ಟೋಕ್ಸ್ (ನಾಯಕ), ಬೆನ್ ಫೋಕ್ಸ್ (ವಿಕೆಟ್ ಕೀಪರ್), ಟಾಮ್ ಹಾರ್ಟ್ಲೀ, ಒಲೀ ರಾಬಿನ್ಸನ್, ಜೇಮ್ಸ್ ಅಯಂಡರ್ಸನ್, ಶೋಯೆಬ್ ಬಶೀರ್.

# ಖಾಸಗಿ ಆಸ್ಪತ್ರೆಗಳ ಹೊರಗೆ ದರ ಪಟ್ಟಿ ಕಡ್ಡಾಯ

**ಬೆಂಗಳೂರು:** ಖಾಸಗಿ ಆಸ್ಪತ್ರೆಗಳ ಹೊರಭಾಗದಲ್ಲಿ ಇನ್ನು ದರಪಟ್ಟಿ ಪ್ರಕಟಿಸುವುದು ಕಡ್ಡಾಯ ಮಾಡಲಾಗುವುದು. ದರ ಪಟ್ಟಿ ಪ್ರಕಟಿಸದ ಆಸ್ಪತ್ರೆಗಳ ಪರವಾನಗಿ ರದ್ದುಗೊಳಿಸುವ ಬಗ್ಗೆ ಆಲೋಚಿಸಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಗುರುವಾರ ಹೇಳಿದರು. ಖಾಸಗಿ ಆಸ್ಪತ್ರೆಗಳಲ್ಲಿ ರೋಗಿಗಳಿಂದ ಸುಲಿಗೆ ಮಾಡಲಾಗುತ್ತಿದೆ ಎಂಬ ವಿಚಾರವಾಗಿ ಅನೇಕ ದೂರುಗಳು ಸಲ್ಲಿಕೆಯಾದ ಬೆನ್ನಲ್ಲೇ ಆರೋಗ್ಯ ಸಚಿವರು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ.

ಜ್ವರ, ಕೆಮ್ಮು, ನೆಗಡಿ ಎಂದು ಆಸ್ಪತ್ರೆಗಳಿಗೆ ಚಿಕಿತ್ಸೆಗೆ ತೆರಳಿದರೂ ಸಾವಿರಾರು ರೂಪಾಯಿ ಬಿಲ್ ವಸೂಲಿ ಮಾಡಲಾಗುತ್ತಿದೆ ಎಂದು ದೂರಿರುವ ಸಾರ್ವಜನಿಕರು ಆರೋಗ್ಯ ಸಚಿವರು ಹಾಗೂ ಸಿಎಂ ಸಿದ್ದರಾಮಯ್ಯಗೆ ಪತ್ರ ಬರೆದು ದೂರು ನೀಡಿದ್ದರು. ನೂರಾರು ದೂರುಗಳು ಸಚಿವರಿಗೆ ಬಂದಿದ್ದವು. ಇದರ ಬೆನ್ನಲ್ಲೇ ಆರೋಗ್ಯ ಇಲಾಖೆ ಎಚ್ಚೆತ್ತುಕೊಂಡಿದೆ.

**ಖಾಸಗಿ ಆಸ್ಪತ್ರೆಗಳಿಗೆ ಮೂಗುದಾರ:** ಖಾಸಗಿ ಆಸ್ಪತ್ರೆಗಳ ಸುಲಿಗೆ ನಿಯಂತ್ರಿಸಲು ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿರುವ ಆರೋಗ್ಯ ಇಲಾಖೆ, ಕೆಪಿಎಂಇ ಮುಖಾಂತರ ಅಂಗೀಕೃತವಾದ ಆಸ್ಪತ್ರೆಗಳು ಆವರಣದಲ್ಲಿ ಹಾಗೂ ಹೊರ ಭಾಗದಲ್ಲಿ ಚಿಕಿತ್ಸಾ ದರ ಪಟ್ಟಿಯನ್ನು ಅಳವಡಿಸಬೇಕು. ಯಾವ್ಯಾವ ಚಿಕಿತ್ಸೆಗಳಿಗೆ ಎಷ್ಟು ದರ ಎಂಬ ಪಟ್ಟಿಯನ್ನು ಅಳವಡಿಸಬೇಕು ಎಂದು ಸೂಚಿಸಿದೆ.



ಆದೇಶ ಪಾಲನೆ ಮಾಡದ ಖಾಸಗಿ ಆಸ್ಪತ್ರೆಗಳಿಗೆ ನೋಟಿಸ್ ನೀಡಿ ಸೀಜ್ ಮಾಡುವ ಬಗ್ಗೆಯೂ ಆರೋಗ್ಯ ಇಲಾಖೆ ಚಿಂತನೆ ನಡೆಸಿದೆ. ಈಗಾಗಲೇ ಯಾವ ಚಿಕಿತ್ಸೆಗೆ ಎಷ್ಟು ದರ ಎಂಬುದು ನಿಗದಿಯಾಗಿದೆ. ಅದರ ಬಗ್ಗೆ ಆಸ್ಪತ್ರೆಯ ಅವರಣದಲ್ಲಿ ಸಾರ್ವಜನಿಕರಿಗೆ ತೋರುವ ರೀತಿಯಲ್ಲಿ ಬೋರ್ಡ್ ಹಾಕಬೇಕು ಎಂದು ನಿರ್ದೇಶನ ನೀಡಲಾಗಿದೆ.

ಇದೀಗ ಆಸ್ಪತ್ರೆಗಳ ಹೊರಗೆ ಬೋರ್ಡ್ ಹಾಕುವ ಆದೇಶ ಅನುಷ್ಠಾನ ವಿಚಾರವಾಗಿ ಅಧಿಕಾರಿಗಳಿಗೆ ಆರೋಗ್ಯ ಇಲಾಖೆ ಖಡಕ್ ಸೂಚನೆ ನೀಡಿದೆ. ಪರಿಶೀಲನೆ ನಡೆಸಿ ವರದಿ ನೀಡುವಂತೆ ಆರೋಗ್ಯ ಸಚಿವರು ಸೂಚನೆ ನೀಡಿದ್ದಾರೆ.

**ಈ ಹಿಂದೆಯೂ ಎಚ್ಚರಿಕೆ ನೀಡಿದ್ದ ಆರೋಗ್ಯ ಸಚಿವರು:** ಕೊರೊನಾ ಸಾಂಕ್ರಾಮಿಕದ ಬಳಿಕ ಎಚ್ಚೆತ್ತುಕೊಂಡಿರುವ ಜನರು ಸಣ್ಣಪುಟ್ಟ ಆರೋಗ್ಯ ಸಮಸ್ಯೆಗಳಿಗೂ ಆಸ್ಪತ್ರೆಗಳಿಗೆ ತೆರಳುತ್ತಿದ್ದಾರೆ. ಇದನ್ನೇ ಬಂಡವಾಳ ಮಾಡಿಕೊಂಡಿರುವ ಖಾಸಗಿ ಆಸ್ಪತ್ರೆಗಳು ಚಿಕಿತ್ಸಾ ವೆಚ್ಚ ಸೇರಿದಂತೆ ಇತರೆ ಚಿಕಿತ್ಸಾ ವೆಚ್ಚಗಳನ್ನು ಏರಿಕೆ ಮಾಡಿ ಸುಲಿಗೆ ಮಾಡುತ್ತಿವೆ ಎಂಬ ದೂರುಗಳು ಈ ಹಿಂದೆಯೂ ಕೇಳಿಬಂದಿದ್ದವು. ಈ ವಿಚಾರವಾಗಿ 2023ರ ನವೆಂಬರ್‌ನಲ್ಲಿ ಎಚ್ಚರಿಕೆ ನೀಡಿದ್ದ ಆರೋಗ್ಯ ಸಚಿವರು, ಕೆಪಿಎಂಇ ಮುಖಾಂತರ ಅಂಗೀಕೃತಗೊಂಡ ಆಸ್ಪತ್ರೆಗಳು ಅವರಣದಲ್ಲಿ ಹಾಗೂ ಹೊರ ಭಾಗದಲ್ಲಿ ಚಿಕಿತ್ಸಾ ದರ ಪಟ್ಟಿಯನ್ನು ಅಳವಡಿಸಬೇಕು ಎಂದು ಸೂಚನೆ ನೀಡಿದ್ದರು.

# ಮಹಿಳಾ ಪ್ರೀಮಿಯರ್ ಲೀಗ್‌ಗೆ ಇಂದು ಚಾಲನೆ

ಎರಡನೇ ಆವೃತ್ತಿಯ ಬಹುನಿರೀಕ್ಷಿತ ಮಹಿಳಾ ಪ್ರೀಮಿಯರ್ ಲೀಗ್ ಟೂರ್ನಿಗೆ ಇಂದು ಚಾಲನೆ ಸಿಗಲಿದೆ. ಒಟ್ಟು 24 ದಿನಗಳ ಕಾಲ ನಡೆಯಲಿರುವ ಈ ಟೂರ್ನಿಯ ಮೊದಲ ಪಂದ್ಯದಲ್ಲಿ ಇಂದು ಹರ್ಮನ್ ಪ್ರಿತ್ ಕೌರ್ ನಾಯಕತ್ವದ ಮುಂಬೈ ಇಂಡಿಯನ್ಸ್ ಮತ್ತು ಮೆಗ್ ಲ್ಯಾನಿಂಗ್ ನೇತೃತ್ವದ ಡೆಲ್ಲಿ ಕ್ಯಾಪಿಟಲ್ಸ್ ಮಹಿಳಾ ತಂಡ ಮುಖಾಮುಖಿ ಆಗಲಿದೆ. ಬೆಂಗಳೂರಿನ ಎಂ. ಚಿನ್ನಸ್ವಾಮಿ ಸ್ಟೇಡಿಯಂ ಈ ಹೈವೋಲ್ಟೇಜ್ ಪಂದ್ಯಕ್ಕೆ ಸಾಕ್ಷಿಯಾಗಲಿದೆ. ಈ ಪಂದ್ಯ ಆರಂಭಕ್ಕೂ ಮುನ್ನ ಉದ್ಘಾಟನಾ ಸಮಾರಂಭ ಏರ್ಪಡಿಸಲಾಗಿದೆ. ಇದರಲ್ಲಿ ಶಾಹಿದ್ ಕಪೂರ್, ಶಾರುಖ್ ಖಾನ್ ಸೇರಿದಂತೆ ಅನೇಕ ಬಾಲಿವುಡ್ ತಾರೆಯರು ಅಭಿಮಾನಿಗಳನ್ನು ರಂಜಿಸಲಿದ್ದಾರೆ.

**ಮುಂಬೈ-ಡೆಲ್ಲಿ:** ಎರಡೂ ತಂಡಗಳಲ್ಲಿ ಸ್ಟಾರ್ ಆಟಗಾರ್ತಿಯರ ದಂಡೇ ಇದೆ. ಹೀಗಾಗಿ ಸಿಲಿಕಾನ್ ಸಿಟಿಯಲ್ಲಿ ಹೈವೋಲ್ಟೇಜ್ ಪಂದ್ಯ ಆಗುವುದು ಖಚಿತ. ಮುಂಬೈ ಇಂಡಿಯನ್ಸ್ ಮಹಿಳಾ ತಂಡದಲ್ಲಿ ಹೇಲಿ ಮ್ಯಾಥ್ಯೂಸ್, ಯಾಸ್ತಿಕಾ ಭಾಟಿಯಾ, ನಟಾಲಿ ಸ್ಕಿವರ್-ಬ್ರಂಟ್, ಹರ್ಮನ್‌ಪ್ರೀತ್ ಕೌರ್, ಅಮೆಲಿಯಾ ಕೆರ್, ಅಮನ್‌ಜೋತ್ ಕೌರ್, ಪೂಜಾ ವಸ್ತ್ರಾಕರ್ ಮಿಂಚಲು ತಯಾರಾಗಿದ್ದಾರೆ. ಅಂತೆಯೆ ಅತ್ತ ಡೆಲ್ಲಿ ಕ್ಯಾಪಿಟಲ್ಸ್ ಮಹಿಳಾ ತಂಡದಲ್ಲಿ ಸ್ಫೋಟಕ ಬ್ಯಾಟರ್ ಶಫಾಲಿ ವರ್ಮಾ, ಮೆಗ್ ಲ್ಯಾನಿಂಗ್, ಜೆಮಿಮಾ ರಾಡ್ರಿಗಸ್, ಮರಿಜಾನ್ನೆ ಕಪ್, ಆಲಿಸ್ ಕ್ಯಾಪ್ಸಿ, ಅನ್ನಾಬೆಲ್ ಸದರ್ಲ್ಯಾಂಡ್, ಶಿಖಾ ಪಾಂಡೆ, ತಾನಿಯಾ ಭಾಟಿಯಾ, ರಾಧಾ ಯಾದವ್, ಪೂನಮ್ ಯಾದವ್ ಹೀಗೆ ಅನುಭವಿಗಳಿಂದ ಕೂಡಿದೆ.




ಮಹಿಳಾ ಪ್ರೀಮಿಯರ್ ಲೀಗ್‌ನ ಮುಂಬೈ-ಡೆಲ್ಲಿ ನಡುವಣ ಮೊದಲ ಪಂದ್ಯ ಸಂಜೆ 7:30 ಕ್ಕೆ ಆರಂಭವಾಗಲಿದೆ. ಈ ಪಂದ್ಯವನ್ನು ಟಿವಿಯಲ್ಲಿ ಸ್ಪೋರ್ಟ್ಸ್ 18 ನೆಟ್‌ವರ್ಕ್ ಚಾನೆಲ್ ಗಳಲ್ಲಿ ವೀಕ್ಷಿಸಬಹುದು. ಅಲ್ಲದೆ ಮೊಬೈಲ್‌ನಲ್ಲಿ ಪಂದ್ಯಗಳನ್ನು ಜಿಯೋ ಸಿನಿಮಾ ಆಯಪ್‌ನಲ್ಲಿ ವೀಕ್ಷಿಸಬಹುದಾಗಿದೆ. ಸಂಜೆ ಸುಮಾರು 6.30ಕ್ಕೆ ಉದ್ಘಾಟನಾ ಸಮಾರಂಭ ನಡೆಯಲಿದೆ.

# ಮಂಡ್ಯ, ಹಾಸನ, ಕೋಲಾರ ಟಿಕೆಟ್ ಜೆಡಿಎಸ್‌ಗೆ ಫಿಕ್ಸ್

**ಮಂಡ್ಯ:** ರಾಜ್ಯದಲ್ಲಿ ಲೋಕಸಭಾ ಚುನಾವಣೆಯಲ್ಲಿ ಹೆಚ್ಚು ಸ್ಥಾನ ಗೆಲ್ಲಲು ಈಗಾಗಲೇ ಜೆಡಿಎಸ್ ರಂಗ ತಾಲೀಮು ಆರಂಭಿಸಿದೆ. ಆದರೆ ಕ್ಷೇತ್ರ ಹಂಚಿಕೆ ಮಾತ್ರ ಅಂತಿಮವಾಗಿಲ್ಲ ಹೀಗಾಗಿ ಮಾಜಿ ಸಿಎಂ ಹೆಚ್‌ಡಿ ಕುಮಾರಸ್ವಾಮಿ ದಿಢೀರ್ ದೆಹಲಿ ಪ್ರವಾಸ ಮಾಡಿದ್ದಾರೆ. ಕೇಂದ್ರ ಸಚಿವ ಅಮಿಶ್ ಶಾ ಅವರೊಂದಿಗೆ ಸುಮಾರು 20 ನಿಮಿಷಗಳ ಕಾಲ ಮಾತುಕತೆ ನಡೆಸಿ ಮಂಡ್ಯ ವಿಚಾರದಲ್ಲಿ ಮೇಲುಗೈ ಸಾಧಿಸಿದ್ದಾರೆ. ಮಂಡ್ಯ, ಹಾಸನ, ಕೋಲಾರ ಟಿಕೆಟ್ ಜೆಡಿಎಸ್‌ಗೆ ಫಿಕ್ಸ್. ತುಮಕೂರು, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ ಜಿಲ್ಲೆಯ ಬಗ್ಗೆ ಮತ್ತೊಮ್ಮೆ ಚರ್ಚೆ ಮಾಡೋಣಾ ಎಂದು ಹೈಕಮಾಂಡ್ ಹೆಚ್‌ಡಿಕೆಗೆ ಸಲಹೆ ನೀಡಿದ್ದಾರೆ.

ರಾಜ್ಯದಲ್ಲಿ ಈ ಬಾರಿ ಅತಿ ಹೆಚ್ಚು ಸ್ಥಾನ ಗೆದ್ದು ಮತ್ತೊಮ್ಮೆ ಪ್ರಧಾನಿ ಕೈ ಬಲಪಡಿಸಲು ಬಿಜೆಪಿ ಜೆಡಿಎಸ್ ಒಂದಾಗಿದೆ. ಜೆಡಿಎಸ್ ಎನ್‌ಡಿಎ ಭಾಗವಾಗಿ ನಾಲ್ಕು ತಿಂಗಳು ಕಳೆದರೂ ಬಿಜೆಪಿ ಮತ್ತು ಜೆಡಿಎಸ್ ನಡುವೆ ರಾಜ್ಯದಲ್ಲಿ ಕ್ಷೇತ್ರ ಹಂಚಿಕೆ ಅಂತಿಮವಾಗಿರಲಿಲ್ಲ. ಹೀಗಾಗಿ ಮಾಜಿ ಸಿಎಂ ಹೆಚ್.ಡಿ. ಕುಮಾರಸ್ವಾಮಿ ಪುತ್ರ ನಿಖಿಲ್ ಕುಮಾರಸ್ವಾಮಿ ಜೊತೆ ದಿಢೀರ್ ದೆಹಲಿಗೆ ತೆರಳಿದ್ದು ಕುಮಾರಸ್ವಾಮಿಯವರು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ 20 ನಿಮಿಷಗಳ ಕಾಲ ಚರ್ಚೆ ನಡೆಸಿದ್ದಾರೆ. ಈ ವೇಳೆ ರಾಜ್ಯದ ಸದ್ಯದ ರಾಜಕೀಯ ಸ್ಥಿತಿಗತಿ ಬಗ್ಗೆ ಮಾಹಿತಿ ನೀಡಿದ್ದಾರೆ.



ನಾವು ಎನ್‌ಡಿಎ ಮೈತ್ರಿಕೂಟ ಸೇರಿರೋದು ಕಾಂಗ್ರೆಸ್‌ನ ಸೋಲಿಸಬೇಕಂತಾ. ಆದರೆ ಮಂಡ್ಯ ಮತ್ತು ಹಾಸನದಲ್ಲಿ ನಿಮ್ಮ ಪಕ್ಷದ ಶಾಸಕರೇ ಭಿನ್ನಾಭಿಪ್ರಾಯ ವ್ಯಕ್ತಪಡಿಸ್ತಿದ್ದಾರೆ ಎಂದು ಹೆಚ್‌ಡಿ ಕುಮಾರಸ್ವಾಮಿ ಅವರು ಅಮಿತ್ ಶಾ ಬಲಿ ದೂರು ಹೇಳಿದ್ದಾರೆ. ಇನ್ನು ಮಂಡ್ಯ, ಹಾಸನ, ಕೋಲಾರ ಜೆಡಿಎಸ್‌ಗೆ ಫಿಕ್ಸ್. ತುಮಕೂರು, ಬೆಂಗಳೂರು ಗ್ರಾಮಾಂತರ, ಚಿಕ್ಕಬಳ್ಳಾಪುರ ಜಿಲ್ಲೆಯ ಬಗ್ಗೆ ಮತ್ತೊಮ್ಮೆ ಚರ್ಚೆ ಮಾಡೋಣಾ ಎಂದು ಹೈಕಮಾಂಡ್ ಹೆಚ್‌ಡಿಕೆಗೆ ತಿಳಿಸಿದ್ದಾರೆ. ರಾಜ್ಯ ನಾಯಕರೊಂದಿಗೆ ಚರ್ಚೆ ಮಾಡಿ ಉಳಿದ ಕ್ಷೇತ್ರಗಳ ಬಗ್ಗೆ ಫೈನಲ್ ಮಾಡೋಣಾ ಎಂದು ಅಮಿತ್ ಶಾ ಹೇಳಿದ್ದಾರೆ. ಹಾಸನ, ಮಂಡ್ಯ ಕ್ಷೇತ್ರದಲ್ಲಿ ಬಿಜೆಪಿ ನಾಯಕರು ಅನಗತ್ಯ ಹೇಳಿಕೆ ಕೊಡ್ತಿದ್ದಾರೆ ಇದರ ಬಗ್ಗೆ ಗಮನ ಹರಿಸುವಂತೆಯೂ ಚರ್ಚೆ ನಡೆದಿದೆ ಎಂದು ತಿಳಿದು ಬಂದಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com